

ಸುದ್ದಿಗಳ ಹೊನಲು

# ಸಂಜೆ ಮುಗಿಲು

ವೇಣು ಸಾರಥ್ಯದಲ್ಲಿ...


ಸಂಪುಟ: 22, ಸಂಚಿಕೆ: 210, ಪುಟಗಳು: 8, ಶನಿವಾರ, 10 ಮೇ 2025 RNI NO. KARKAN/2002/08054

epaper: www.sanjemugilu.com

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

₹3





ದಶಪ್ರಮತಿ ಮುದ್ರಣಾಲಯ

dashapramathi mudranalaya

PRE-PRESS PRINTERS

Contact: +91 9483589085 | e-mail: dashapramathimudranalaya@gmail.com

We Undertake Printing of Newspapers | Tabloids | Magazines




ಸುಭಾಷಿತ

'ಧರ್ಮ'ಕ್ಕೆ ತಲೆ ಬಾಗಬೇಕೇ ಹೊರತು 'ದುಷ್ಟ'ರಿಗಲ್ಲ. ಮಾನವೀಯತೆಗೆ ತಲೆಬಾಗಬೇಕೇ ಹೊರತು ಅವಿವೇಕಿಗಳಿಗಲ್ಲ.

## ಪಂಚಾಂಗ

(ಶನಿವಾರ 9 ಮೇ-2025)

- ಶ್ರೀ ವಿಶ್ವಾವಸನಾಮ ಸಂವತ್ಸರ
- ಉತ್ತರಾಯಣ, ವಸಂತ ಋತು
- ವೈಶಾಖ ಮಾಸ, ಶುಕ್ಲ ಪಕ್ಷ
- ತ್ರಯೋದಶಿ (ಸಾಯಂಕಾಲ 05:31) ನಂತರ ಚತುರ್ದಶಿ,
- ಚಿತ್ತಾ ನಕ್ಷತ್ರ
- ರಾಹುಕಾಲ: 09:09 ರಿಂದ 10:44
- ಗುಳಿಕಕಾಲ: 06:00 ರಿಂದ 07:34
- ಯಮಗಂಡಕಾಲ: 01:54 ರಿಂದ 03:29

## ಸಂಕ್ಷಿಪ್ತ ಸುದ್ದಿ

### ಭಾರತೀಯ ಸೇನೆ ಬೆಂಬಲಿಸಿ ರಾಷ್ಟ್ರವ್ಯಾಪಿ 'ಜೈ ಹಿಂದ್ ಯಾತ್ರೆ'ಗೆ ಕರೆ




**ನವದೆಹಲಿ:** ಭಾರತೀಯ ಸೇನೆಗೆ ಬೆಂಬಲವನ್ನು ವ್ಯಕ್ತಪಡಿಸಿ ರಾಷ್ಟ್ರವ್ಯಾಪಿ 'ಜೈ ಹಿಂದ್ ಯಾತ್ರೆ'ಗೆ ಕಾಂಗ್ರೆಸ್ ಕರೆ ಕೊಟ್ಟಿದೆ. ಪಹಲ್ಗಾಮ್ ಭಯೋತ್ಪಾದಕ ದಾಳಿಗೆ ಕೌಂಟರ್ ಆಗಿ ಪಾಕಿಸ್ತಾನದ ವಿರುದ್ಧ ಗಡಿಯಾಚೆಗಿನ ಪ್ರತೀಕಾರಕ್ಕಾಗಿ ಸರ್ಕಾರ ಮತ್ತು ಸಶಸ್ತ್ರ ಪಡೆಗಳನ್ನು ಕಾರ್ಯವನ್ನು ಕಾಂಗ್ರೆಸ್ ಶ್ಲಾಘಿಸಿದೆ. ದೇಶದ ಜನತೆ ಸರ್ಕಾರ ಮತ್ತು ಸಶಸ್ತ್ರ ಪಡೆಗಳ ಹಿಂದೆ ದೃಢವಾಗಿ ನಿಲ್ಲಬೇಕು. ಭಾರತದ ರಕ್ಷಣಾ ಪ್ರಯತ್ನಗಳನ್ನು ಬೆಂಬಲಿಸುವ ಸಲುವಾಗಿ ಏಕತೆ ಮತ್ತು ಒಗ್ಗಟ್ಟನ್ನು ಪ್ರದರ್ಶಿಸಬೇಕು ಎಂದು ಕಾಂಗ್ರೆಸ್ ತಿಳಿಸಿದೆ. ಪುಟ 2

### ಅಣ್ವಸ್ತ್ರ ನಿರ್ಧಾರ ಕೈಗೊಳ್ಳುವ ತುರ್ತು ಸಭೆ ಕರೆದ ಪ್ರಧಾನಿ



**ಇಸ್ಲಾಮಾಬಾದ್:** ಭಾರತದ ದಾಳಿಗೆ ತತ್ತರಿಸಿದ ಪಾಕಿಸ್ತಾನ ಈಗ ಪರಮಾಣು ಶಸ್ತ್ರಾಸ್ತ್ರ ಬಳಕೆಯ ಬಗ್ಗೆ ನಿರ್ಧಾರ ಕೈಗೊಳ್ಳುವ ಸಭೆಯನ್ನು ಕರೆದಿದೆ.

**» ಭಾರತದ ದಾಳಿಗೆ ಬೆಚ್ಚಿದ ಪಾಕ್**

ಪ್ರಧಾನಿ ಶೆಹಬಾಜ್ ಷರೀಫ್ ಅವರು National Command Authority ತುರ್ತು ಸಭೆಯನ್ನು ಕರೆದಿದ್ದಾರೆ. ಇದು ದೇಶದ ಪರಮಾಣು ಶಸ್ತ್ರಾಸ್ತ್ರಗಳ ನಿಯಂತ್ರಣ ಮತ್ತು ಕಾರ್ಯಾಚರಣೆಯ ಅಂತಿಮ ನಿರ್ಧಾರಗಳನ್ನು ತೆಗೆದುಕೊಳ್ಳುವ ಸಂಸ್ಥೆಯಾಗಿದೆ. ಯುದ್ಧದ ಸಂದರ್ಭದಲ್ಲಿ ಮಾತ್ರ ಈ ಸಭೆಯನ್ನು ಕರೆಯಲಾಗುತ್ತದೆ.

ಭಾರತ ಮತ್ತು ಪಾಕಿಸ್ತಾನ ಎರಡೂ ಪರಮಾಣು ಬಾಂಬ್ ಹೊಂದಿದೆ. ಭಾರತ ತಾನೂ ಯಾವತ್ತೂ ಮೊದಲು ಪರಮಾಣು ಅಸ್ತ್ರವನ್ನು ಪ್ರಯೋಗಿಸುವುದಿಲ್ಲ ಎಂದು ವಿಶ್ವಕ್ಕೆ ಹೇಳಿದೆ. ಪುಟ 2

## ಶಕ್ತಿಶಾಲಿ ಅಸ್ತ್ರಗಳಿಂದಲೇ ಪಾಕ್‌ಗೆ ಶತಕೋಟಿ ಲಾಸ್

# ದಿವಾಳಿಯತ್ತ ಭಿಕಾರಿಸ್ತಾನ

**ಭಾ**ರತದ ಆಪರೇಷನ್ ಸಿಂಧೂರ ಎಫೆಕ್ಟ್ ಪಾಕಿಸ್ತಾನದ ಆರ್ಥಿಕತೆಯ ಮೇಲೆ ತೀವ್ರ ಪರಿಣಾಮ ಬೀರಿದೆ. ಭಾರತ ನಡೆಸಿದ ವಾಯುದಾಳಿಗೆ ಪತರುಗುಟ್ಟಿಹೋಗಿರುವ ಪಾಕ್ ತಾನು ನಂಬಿದ್ದ ಶಕ್ತಿಶಾಲಿ ಅಸ್ತ್ರಗಳಿಂದಲೇ ಶತಕೋಟಿ ನಷ್ಟ ಅನುಭವಿಸಿದೆ. ಇದರಿಂದ ಪಾಕಿಸ್ತಾನದ ಆರ್ಥಿಕ ಸ್ಥಿತಿ ಈಗಾಗಲೇ ಅಧೋಗತಿ ತಲುಪಿದ್ದು, ದಿವಾಳಿಯ ಆಗುವ ಹಂತಕ್ಕೆ ತಲುಪಿದೆ.



ಭಾರತದ ವಿರುದ್ಧದ ಹೋರಾಟಕ್ಕೂ ಭಿಕ್ಷೆ ಬೇಡುವ ಪರಿಸ್ಥಿತಿಗೆ ತಲುಪಿದೆ. ಭಾರತದ ದಾಳಿಯಿಂದ ತನಗೆ ಭಾರೀ ನಷ್ಟವಾಗವಾಗಿದ್ದು ಸಾಲ ನೀಡುವಂತೆ ಅಂತಾರಾಷ್ಟ್ರೀಯ ಸಮುದಾಯದಲ್ಲಿ ಬೇಡಿಕೆ ಇಟ್ಟಿದೆ. ಪಾಕಿಸ್ತಾನದ ಆರ್ಥಿಕ ಇಲಾಖೆಯ ಆರ್ಥಿಕ ವ್ಯವಹಾರಗಳ ವಿಭಾಗದ ಸಾಮಾಜಿಕ ಜಾಲತಾಣ ಎಕ್ಸ್ ಖಾತೆಯಲ್ಲಿ ಸಾಲಕ್ಕಾಗಿ ಅಧಿಕೃತ ಮನವಿ ಮಾಡಿಕೊಂಡಿದೆ. ಇದು ವಿಶ್ವಮಟ್ಟದಲ್ಲಿ ಟೀಕೆಗೆ ಒಳಗಾಗುತ್ತಿದ್ದಂತೆ ವರಸೆ ಬದಲಿಸಿದ ಪಾಕ್ ತನ್ನ ಎಕ್ಸ್ ಖಾತೆ ಹ್ಯಾಕ್ ಆಗಿದೆ ಎಂದು ಹೇಳಿಕೊಂಡಿದೆ. ಇದಾದ ಬಳಿಕ ಭಾರತದ ಆಕ್ಷೇಪದ ನಡುವೆಯೂ ಅಂತಾರಾಷ್ಟ್ರೀಯ ಹಣಕಾಸು ನಿಧಿ 2 ಕಂತುಗಳಲ್ಲಿ 19 ಸಾವಿರ ಕೋಟಿ ಸಾಲ ಮಂಜೂರು ಮಾಡಿದೆ.

ಹೌದು.. ಜಮ್ಮು ಮತ್ತು ಕಾಶ್ಮೀರ, ಪಂಜಾಬ್ ಗಡಿ ಸೇರಿದಂತೆ ಭಾರತದ ಒಟ್ಟು 36 ಕಡೆ ಪಾಕಿಸ್ತಾನ ಭಾರತದ ಮೇಲೆ ದಾಳಿ ನಡೆಸಿತ್ತು. ಎರಡು ದಿನಗಳಲ್ಲಿ (ಮೇ 8, 9) 300-400 ಮಿಸೈಲ್‌ಗಳು, ಡ್ರೋನ್‌ಗಳಿಂದ ದಾಳಿ ನಡೆಸಿತ್ತು. ಈ ಎಲ್ಲ ದಾಳಿಗಳನ್ನ ಭಾರತ ವಿಫಲಗೊಳಿಸಿತು. ಜೊತೆಗೆ ಪಾಕಿಸ್ತಾನ ಮಿಲಿಟರಿಯಲ್ಲಿ ಶಕ್ತಿಶಾಲಿ ಅಸ್ತ್ರಗಳೆಂದು ಕರೆಯುತ್ತಿದ್ದ ಈ-16, ಎಈ-17, ಎ-10 ಮತ್ತು ಸಾಬ್-2000 ವಾಯುಗಾಮಿ ಮುನ್ನೆಚ್ಚರಿಕೆ ಮತ್ತು ನಿಯಂತ್ರಣ ವ್ಯವಸ್ಥೆ ವಿಮಾನವನ್ನು ಛಿದ್ರಗೊಳಿಸಿ, ಶತಕೋಟಿ ನಷ್ಟ ಉಂಟುಮಾಡಿತು. ಇದು ಮೊದಲೇ ಕುಸಿದಿರುವ ಪಾಕ್ ಆರ್ಥಿಕತೆಗೆ ಮತ್ತಷ್ಟು ಹೊಡೆತ ಕೊಟ್ಟಿದೆ.

**ಜೆಎಫ್-17 ವಿಶೇಷತೆ ಏನು? ಬೆಲೆ ಎಷ್ಟು?:** ಜೆಎಫ್-17 ಥಂಡರ್ ಪಾಕಿಸ್ತಾನ ಮತ್ತು ಚೀನಾದ ಸಹಭಾಗಿತ್ವದಲ್ಲಿ ನಿರ್ಮಿಸಲಾದ ಬಹುಪಯೋಗಿ ಯುದ್ಧ ವಿಮಾನ. ಇದನ್ನು ಪಾಕಿಸ್ತಾನ್ ಏರೋನಾಟಿಕಲ್ ಕಾಂಪ್ಲೆಕ್ಸ್ ಮತ್ತು ಚೆಂಗ್ಡು ಏರ್ ಕ್ರಾಫ್ಟ್ ಕಾರ್ಪೊರೇಷನ್ ಜಂಟಿಯಾಗಿ ಅಭಿವೃದ್ಧಿಪಡಿಸಿವೆ. 1990ರ ದಶಕದಲ್ಲಿ ಅಮೆರಿಕ ಪರಮಾಣು ಒಪ್ಪಂದದ ಬಳಿಕ ಪಾಕಿಸ್ತಾನಕ್ಕೆ ಎಫ್-16 ಪೂರೈಕೆ ನಿಲ್ಲಿಸಿತ್ತು. ಆಗ 1992ರಲ್ಲಿ ಚೀನಾ ಜೊತೆಗಿನ ಒಪ್ಪಂದಕ್ಕೆ ಪಾಕ್ ಸಹಿ ಹಾಕಿತು. ಬಳಿಕ 1995ರಲ್ಲಿ ಜೆಫ್-17 ಯುದ್ಧವಿಮಾನ ತಯಾರಿಸುವ ಯೋಜನೆ ಶುರುವಾಯಿತು. 2009ರಲ್ಲಿ ಮೊದಲ ಜೆಫ್-17 ಯುದ್ಧ ವಿಮಾನವನ್ನು ಪಾಕಿಸ್ತಾನ ವಾಯುಪಡೆಗೆ ಸೇರ್ಪಡೆಗೊಳಿಸಿತು. ಇದೀಗ ಪಾಕ್ ಬಳಿ 150ಕ್ಕೂ ಹೆಚ್ಚು ವಿಮಾನಗಳಿವೆ. ಇದು ಹಗುರ ಮತ್ತು ವೇಗದ ಫೈಟರ್ ಜೆಟ್ ಆಗಿದ್ದು, ಗರಿಷ್ಠ ತೂಕ 13,500 ಕೆಜಿಯಷ್ಟು ಇರಲಿದೆ. ಜೆಫ್-17 ಬೆಲೆ ಸುಮಾರು 15 ದಶಲಕ್ಷ ಡಾಲರ್ ಅಂದ್ರೆ, ಸುಮಾರು 120 ಕೋಟಿ ರೂ. ಇದೆ, ಇದರ ಬ್ಲಾಕ್-3 ರೂಪಾಂತರದ ಬೆಲೆ 25-30 ದಶಲಕ್ಷ ಡಾಲರ್‌ನಷ್ಟಿದೆ ಎಂದು ವರದಿಗಳು ತಿಳಿಸಿವೆ. ಪುಟ 2



## ಪಾಕ್‌ನ ನಾಲ್ಕು ವಾಯುನೆಲೆಗಳ ಮೇಲೆ ದಾಳಿ

**ಭಾ**ರತ ಮತ್ತು ಪಾಕಿಸ್ತಾನದ ನಡುವೆ ದಾಳಿ, ಪ್ರತಿದಾಳಿಗಳು ನಡೆಯುತ್ತಿದೆ. ಪಾಕಿಸ್ತಾನ ಉಗ್ರರು ಪಹಲ್ಗಾಮ್ ಮೇಲೆ ದಾಳಿ ನಡೆಸಿ ಭಾರತೀಯ ನಾಗರಿಕರನ್ನು ಹತ್ಯೆ ಮಾಡಿದ ನಂತರ ಪಾಕ್ ಹಾಗೂ ಭಾರತದ ನಡುವೆ ಭಾರೀ ಸಂಘರ್ಷಕ್ಕೆ ಕಾರಣವಾಗಿದೆ. ಭಾರತ ನಮ್ಮನ್ನು ಏನು ಮಾಡಲು ಸಾಧ್ಯವಿಲ್ಲ ಎಂದು ಅಹಂಕಾರ ಪಡುತ್ತಿದ್ದ ಪಾಕ್‌ಗೆ ಭಾರತದ ಸೇನೆ ತಕ್ಕ ಪಾಠ ಕಲಿಸಿದೆ. ಆಪರೇಷನ್ ಸಿಂದೂರ್ ಮೂಲಕ ಉಗ್ರರನ್ನು ಗುರಿಯಾಗಿಸಿ ಪಾಕ್ ಮೇಲೆ ಭಾರತ ಕಳೆದ ಎರಡು ಮೂರು ದಿನಗಳಿಂದ ದಾಳಿ ನಡೆಸಿದೆ. ಪಾಕ್ ಕೂಡ ಭಾರತದ ಅನೇಕ ಕಡೆ ದಾಳಿ ನಡೆಸಿದೆ.ಆದರೆ ಅದನ್ನು ಭಾರತದ ಸೈನ್ಯ ಹಿಮ್ಮೆಟ್ಟಿಸಿದೆ. ಇದೀಗ ಭಾರತ ಪಾಕ್‌ನ ನಾಲ್ಕು ವಾಯುನೆಲೆಗಳನ್ನುಗುರಿಯಾಗಿಸಿ ದಾಳಿ ನಡೆಸಿದೆ ಎಂದು ಮೂಲಗಳು ತಿಳಿಸಿದೆ.

ಶನಿವಾರ ಅಂದರೆ ಇಂದು ಮುಂಜಾನೆ, ಭಾರತ ಪಾಕಿಸ್ತಾನದ ಹಲವಾರು ಸ್ಥಳಗಳಲ್ಲಿ ದಾಳಿ ನಡೆಸಿದೆ. ಪಾಕಿಸ್ತಾನದ ಹಲವು ಕಡೆ ಸ್ಫೋಟಗಳ ಶಬ್ದಗಳು ಕೇಳಿಬಂದಿದೆ. ಪಾಕಿಸ್ತಾನವು ತನ್ನ ಮೂರು ವಾಯುನೆಲೆಗಳನ್ನು ಗುರಿಯಾಗಿಸಿಕೊಂಡಿದೆ ಎಂದು



ಹೇಳಿಕೊಂಡಿದೆ. ರಾಜಧಾನಿ ಇಸ್ಲಾಮಾಬಾದ್ ಬಳಿಯ ರಾವಲ್ಪಿಂಡಿಯ ಗ್ಯಾರಿಸನ್ ನಗರದಲ್ಲಿರುವ ನೂರ್ ಖಾನ್ ವಾಯುನೆಲೆ, ಚಕ್ವಾಲ್ ನಗರದ ಮುರಿಯ್ ವಾಯುನೆಲೆ ಮತ್ತು ಪೂರ್ವ ಪಂಜಾಬ್ ಪ್ರಾಂತ್ಯದ ಜಾಂಗ್ ಜಿಲ್ಲೆಯ ರಫಿಕಿ ವಾಯುನೆಲೆಗಳ ಮೇಲೆ ಭಾರತ ದಾಳಿಯನ್ನು ನಡೆಸಿದೆ ಎಂದು ಹೇಳಲಾಗಿದೆ.

ರಕ್ಷಣಾ ಮೂಲಗಳ ಪ್ರಕಾರ, ಸೇನೆಯು ಪಾಕಿಸ್ತಾನದ ಪೋಸ್ಟ್‌ಗಳು ಮತ್ತು ಭಯೋತ್ಪಾದಕ ಉಡಾವಣಾ ಪ್ಯಾಡ್‌ಗಳನ್ನು ನಾಶಪಡಿಸಿದೆ. ಈಗಾಗಲೇ ಭಾರತ ಶ್ರೀನಗರದಲ್ಲಿ ಆಕಾಶದೆತ್ತರಕ್ಕೆ ಚಿಮ್ಮುವ ಕ್ಷಿಪಣಿ ವ್ಯವಸ್ಥೆಗಳನ್ನು ಸಕ್ರಿಯಗೊಳಿಸಲಾಗಿದೆ ಎಂದು ಸೇನೆ ಹೇಳಿದೆ. ಎಲ್‌ಒಸಿಯಲ್ಲಿ ಭಾರೀ ಗುಂಡಿನ ಚಕಮಕಿ ನಡೆಯುತ್ತಿದೆ. ಪಾಕಿಸ್ತಾನವು ಭಾರತೀಯ ನಗರಗಳು ಮತ್ತು ಭದ್ರತಾ ತಾಣಗಳ ಮೇಲೆ ಗುರಿಯಾಗಿಸಿಕೊಂಡು ನಿರಂತರವಾಗಿ ದಾಳಿ ನಡೆಸುತ್ತಿದೆ. ಇದಕ್ಕೆ ಪ್ರತಿಯಾಗಿ ಭಾರತ ಪ್ರತಿದಾಳಿಯನ್ನು ನಡೆಸಿದೆ. ಶುಕ್ರವಾರ, ಪಾಕಿಸ್ತಾನವು ಜಮ್ಮು ಮತ್ತು ಕಾಶ್ಮೀರದಿಂದ ಗುಜರಾತ್ ವರೆಗಿನ ಗಡಿಯುದ್ದಕ್ಕೂ 26 ಸ್ಥಳಗಳನ್ನು ಗುರಿಯಾಗಿಸಲು ಸಶಸ್ತ್ರ ಡ್ರೋನ್‌ಗಳನ್ನು ಕಳಿಸಿದೆ. ಇನ್ನು ವಿಮಾನ ನಿಲ್ದಾಣಗಳು ಮತ್ತು ವಾಯುನೆಲೆಗಳು ಸೇರಿದಂತೆ ಪ್ರಮುಖ ನೆಲೆಗಳ ಮೇಲೆ ಎರಡನೇ ದಿನದ ರಾತ್ರಿಯೂ ದಾಳಿಯನ್ನು ನಡೆಸಿದೆ, ಆದರೆ ಭಾರತೀಯ ಪಡೆ ಅದನ್ನು ವಿಫಲಗೊಳಿಸಿದೆ ಎಂದು ರಕ್ಷಣಾ ಮೂಲಗಳು ತಿಳಿಸಿದೆ. ಪುಟ 2

## 48 ಗಂಟೆಗಳವರೆಗೆ ಪೆಟ್ರೋಲ್ ಪಂಪ್‌ಗಳು ಬಂದ್

**ಇಸ್ಲಾಮಾಬಾದ್:** ಭಾರತದ ದಾಳಿಯಿಂದ ದಿವಾಳಿಯತ್ತ ಸಾಗುತ್ತಿರುವ ಪಾಕಿಸ್ತಾನದಲ್ಲೀಗ ಇಂಧನ ಕೊರತೆ ಎದುರಾಗಿದೆ. ರಾಜಧಾನಿ ಇಸ್ಲಾಮಾಬಾದ್ ಆಡಳಿತ ಮುಂದಿನ 48 ಗಂಟೆಗಳ ಕಾಲ ಎಲ್ಲಾ ಪೆಟ್ರೋಲ್ ಪಂಪ್‌ಗಳನ್ನು ಸಂಪೂರ್ಣವಾಗಿ ಬಂದ್ ಮಾಡುವಂತೆ ಆದೇಶ ಹೊರಡಿಸಿದೆ.

ಇಸ್ಲಾಮಾಬಾದ್ ಆಡಳಿತ ಹೊರಡಿಸಿದ ಅಧಿಕೃತ ಸೂಚನೆಯಲ್ಲಿ ನಿಖರ



ಕಾರಣ ಉಲ್ಲೇಖಿಸದೇ, ಎಲ್ಲಾ ಪೆಟ್ರೋಲ್ ಪಂಪ್‌ಗಳನ್ನು ಕೂಡಲೇ ಮುಚ್ಚಬೇಕೆಂದು ಕಟ್ಟಾಜ್ಞೆ ಮಾಡಿದೆ. ಈ ಆದೇಶ ಶನಿವಾರ ಮುಂಜಾನೆ ಹೊರಡಿಸಿದ್ದು ತಡವಾಗಿ ಬೆಳಕಿಗೆ ಬಂದಿದೆ ಎಂದು ಪಾಕ್ ಮಾಧ್ಯಮಗಳು ವರದಿ ಮಾಡಿವೆ. ಇದರಿಂದ 48 ಗಂಟೆ ವರೆಗೆ ಇಸ್ಲಾಮಾಬಾದ್‌ನಲ್ಲಿ ಖಾಸಗಿ ವಾಹನಗಳು, ಸಾರ್ವಜನಿಕ ಸಾರಿಗೆ ಹಾಗೂ ವಾಣಿಜ್ಯ ವಾಹನಗಳಿಗೆ ಇಂಧನ ಲಭ್ಯವಾಗದೇ ಎಲ್ಲಾ ಆರ್ಥಿಕ ಚಟುವಟಿಕೆಗಳು ಸ್ಥಗಿತಗೊಂಡಿದೆ. ಜೊತೆಗೆ ಈ ಬೆಳವಣಿಗೆ ಪಾಕ್ ಸರ್ಕಾರಕ್ಕೆ ಭಾರೀ ನಷ್ಟ ತಂದೊಡ್ಡುತ್ತಿದೆ ಎಂದು ವರದಿಗಳು ಉಲ್ಲೇಖಿಸಿವೆ. ಪುಟ 2

## ಇಸ್ಲಾಮಾಬಾದ್, ರಾವಲ್ಪಿಂಡಿಯಲ್ಲಿ ಅಲ್ಲೋಲ ಕಲ್ಲೋಲ

**ನವದೆಹಲಿ/ಇಸ್ಲಾಮಾಬಾದ್:** ಭಾರತ ನಡೆಸಿದ ವಾಯು ದಾಳಿಗೆ ಪಾಕಿಸ್ತಾನದಲ್ಲಿ ಅಲ್ಲೋಲ ಕಲ್ಲೋಲವಾಗಿದೆ. ಭಾರತ ಪಾಕಿಸ್ತಾನದ ಹಲವು ವಾಯು ನೆಲೆಗಳ ಮೇಲೆ ದಾಳಿ ಮಾಡಿದೆ. ರಾಜಧಾನಿ ಇಸ್ಲಾಮಾಬಾದ್, ದೇಶದ ಮಿಲಿಟರಿ ಪ್ರಧಾನ ಕಚೇರಿಗೆ ಹೊಂದಿಕೊಂಡಿರುವ ರಾವಲ್ಪಿಂಡಿಯಲ್ಲಿರುವ ನೂರ್ ಖಾನ್ ವಾಯುನೆಲೆ ಸೇರಿದಂತೆ ಮೂರು ವಾಯುನೆಲೆಯ ಮೇಲೆ ಭಾರತ ದಾಳಿ ಮಾಡಿದ ಎಂದು ಪಾಕ್ ಸೇನೆ ಅಧಿಕೃತವಾಗಿ ತಿಳಿಸಿದೆ. ಪುಟ 2





## ದೆಹಲಿಗೆ ಬರುತ್ತಿದ್ದ ಪಾಕ್ ಬ್ಯಾಲಿಸ್ಟಿಕ್ ಮಿಸೈಲ್ ಹರ್ಯಾಣದಲ್ಲೇ ಛಿದ್ರ!

**ನವದೆಹಲಿ:** ಡ್ರೋನ್ ದಾಳಿ ನಡೆಸುತ್ತಿದ್ದ ಪಾಕಿಸ್ತಾನ ಈಗ ಭಾರತದ ವಿರುದ್ಧ ಖಂಡಾಂತರ ಕ್ಷಿಪಣಿಯನ್ನು ಪ್ರಯೋಗಿಸಿದೆ.

ದೆಹಲಿಯನ್ನು ಗುರಿಯಾಗಿಸಿ ಪಾಕಿಸ್ತಾನ ಫತಾಹ್-II ಉಡಾವಣೆ ಮಾಡಿತ್ತು. ಆದರೆ ಭಾರತ ಈ ಕ್ಷಿಪಣಿಯನ್ನು ಆಕಾಶದಲ್ಲೇ ಛಿದ್ರಗೊಳಿಸಿದೆ. ಹರ್ಯಾಣದ ಸಿರ್ಸಾದಲ್ಲಿ ಭಾರತ ಯಶಸ್ವಿಯಾಗಿ ಧ್ವಂಸಗೊಳಿಸಿದೆ.

ಪಾಕಿಸ್ತಾನದ ಫತಾಹ್-II ಅಲ್ಪ-ಶ್ರೇಣಿಯ ಬ್ಯಾಲಿಸ್ಟಿಕ್ ಕ್ಷಿಪಣಿಯಾಗಿದ್ದು ಅಂದಾಜು 400 ಕಿಲೋಮೀಟರ್ ದೂರವನ್ನು ಕ್ರಮಿಸುವ ಜೊತೆಗೆ 365-ಕಿಲೋಗ್ರಾಂಗಳಷ್ಟು ಸಿಡಿತಲೆಯನ್ನು ಹೊತ್ತುಕೊಂಡು ಹೋಗುವ ಸಾಮರ್ಥ್ಯ ಹೊಂದಿದೆ.

**ಏನಿದು ಬ್ಯಾಲಿಸ್ಟಿಕ್ ಕ್ಷಿಪಣಿ?:** ಚಲಿಸುವ ಪಥದ



ಆಧಾರದ ಮೇಲೆ ಕ್ಷಿಪಣಿಗಳನ್ನು ಬ್ಯಾಲಿಸ್ಟಿಕ್ ಮತ್ತು ಕ್ರೂಸ್ ಕ್ಷಿಪಣಿಗಳಾಗಿ ವಿಂಗಡಿಸಲಾಗುತ್ತದೆ. ಬ್ಯಾಲಿಸ್ಟಿಕ್ ಕ್ಷಿಪಣಿ ಭೂಮಿಯ ವಾತಾವರಣವನ್ನು ಬಿಟ್ಟು ಬಾಹ್ಯಾಕಾಶವನ್ನು ಪ್ರವೇಶಿಸಿ ನಂತರ ಭೂಮಿಗೆ ಅಪ್ಪಳಿಸುತ್ತದೆ. ಭಾರತದ ಅಗ್ನಿ, ಪೃಥ್ವಿ ಬ್ಯಾಲಿಸ್ಟಿಕ್ ಕ್ಷಿಪಣಿಗಳಾಗಿವೆ. ಪುಟ 2

## ಶ್ರೀನಗರ ಬಳಿ ಪಾಕಿಸ್ತಾನದ 2 ಫೈಟರ್ ಜೆಟ್ ಉಡೀಸ್

**ನವದೆಹಲಿ:** ಭಾರತ ಮತ್ತು ಪಾಕಿಸ್ತಾನ ನಡುವಣ ಉದ್ವಿಗ್ನ ಪರಿಸ್ಥಿತಿ ಮತ್ತಷ್ಟು ಬಿಗಡಾಯಿಸುತ್ತಿದೆ. ಇದೇ ಸಂದರ್ಭದಲ್ಲಿ ಭಾರತೀಯ ಸೇನಾ ಪಡೆ ಎರಡು ಪಾಕಿಸ್ತಾನಿ ಯುದ್ಧ ವಿಮಾನಗಳನ್ನು ಹೊಡೆದುರುಳಿಸಿದೆ ಎಂದು ವರದಿಯಾಗಿದೆ. ಪಾಕಿಸ್ತಾನದ 2 ಜೆಟ್ ಗಳನ್ನು ಶನಿವಾರ ಹೊಡೆದುರುಳಿಸಲಾಗಿದೆ ಎಂದು ಸರ್ಕಾರಿ ಮೂಲಗಳು ತಿಳಿಸಿರುವುದಾಗಿ ಸುದ್ದಿವಾಹಿನಿಯೊಂದು ವರದಿ ಮಾಡಿದೆ. ಮೂಲಗಳ ಪ್ರಕಾರ, 2 ಪಾಕಿಸ್ತಾನಿ ಜೆಟ್‌ಗಳನ್ನು ಶ್ರೀನಗರದ ಬಳಿ ಹೊಡೆದುರುಳಿಸಲಾಗಿದೆ.

ಶ್ರೀನಗರದ ಬುದ್ಗಾ-ಬಾರಾಮುಲ್ಲಾಪ್ರದೇಶದಲ್ಲಿ ಎರಡು



ಪಾಕಿಸ್ತಾನಿ ಜೆಟ್‌ಗಳನ್ನು ಭಾರತಯ ಸೇನೆ ಹೊಡೆದುರುಳಿಸಿದ್ದು, ಅವುಗಳಲ್ಲಿದ್ದ ಪೈಲಟ್‌ಗಳಿಗಾಗಿ ಶೋಧ ನಡೆಸಲಾಗುತ್ತಿದೆ. ಪುಟ 2

### ಅಸಿಮ್ ಮುನೀರ್‌ನಿಂದ ದೇಶ ನಾಶ

## ರೊಚ್ಚಿಗೆದ್ದ ಜನ

**ಇಸ್ಲಾಮಾಬಾದ್:** ಸೇನಾ ಮುಖ್ಯಸ್ಥ ಅಸಿಮ್ ಮುನೀರ್ ಪಾಕಿಸ್ತಾನದಲ್ಲಿ ಆಕ್ರೋಶ ಹೆಚ್ಚಾಗುತ್ತಿದೆ. ಅಸಿಮ್ ಮುನೀರ್‌ನಿಂದ ಪಾಕಿಸ್ತಾನ ನಾಶವಾಗುತ್ತಿದೆ ಎಂದು ಪಾಕ್ ಜನರು ಸಿಟ್ಟು ಹೊರಹಾಕುತ್ತಿದ್ದಾರೆ.

ಭಾರತ ತನ್ನ ಮೇಲೆ ದಾಳಿ ನಡೆಸಲು ಮುನೀರ್ ನಿರ್ಧಾರವೇ ಕಾರಣ ಎಂದು ಜನ ಪೋಸ್ಟ್ ಮಾಡುತ್ತಿದ್ದಾರೆ. ಒಂದು ವೇಳೆ ಇಮ್ರಾನ್ ಖಾನ್ ಈ ಸಂದರ್ಭದಲ್ಲಿ ಇದ್ದಿದ್ದರೆ ಎರಡೂ ದೇಶಗಳ ಮಧ್ಯೆ ಉತ್ತಮ ಸಂಬಂಧ ಇರುತ್ತಿತ್ತು. ಮುನೀರ್ ತನ್ನ ವೈಯಕ್ತಿಕ ಲಾಭಕ್ಕಾಗಿ ಭಾರತದ ವಿರುದ್ಧ ದಾಳಿ ನಡೆಸುತ್ತಿದ್ದಾನೆ. ಕೂಡಲೇ ಬಂಧನದಲ್ಲಿರುವ ಇಮ್ರಾನ್ ಖಾನ್ ಅವರನ್ನು ಬಿಡುಗಡೆ ಮಾಡಿ ಎಂದು ಜನರು ಆಗ್ರಹಿಸುತ್ತಿದ್ದಾರೆ.



ಪಹಲ್ಗಾಮ್ ದಾಳಿಗೂ ಮೊದಲು ಮುನೀರ್ ಕಾಶ್ಮೀರ ಪಾಕಿಸ್ತಾನದ ಕಂಠನಾಳ. ಅದನ್ನು ನಾವು ಪಡೆಯುತ್ತೇವೆ ಎಂದು ಪ್ರಚೋದನೆ ನೀಡಿದ್ದ.

2019 ರಲ್ಲಿ ಪುಲ್ವಾಮಾ ದಾಳಿಯ ನಂತರ ಭಾರತ ಬಾಲಾಕೋಟ್ ಮೇಲೆ ಏರ್‌ಸ್ಟ್ರೈಕ್ ಮಾಡಿತ್ತು. ಈ ಏರ್‌ಸ್ಟ್ರೈಕ್‌ಗ ಪ್ರತಿಯಾಗಿ ಪಾಕ್ ವಾಯುಸೇನೆಯ ವಿಮಾನಗಳ ಭಾರತದ ಮೇಲೆ ದಾಳಿ ಪುಟ 2

## ಪಾಕಿಸ್ತಾನಕ್ಕೆ ಕೈಕೊಟ್ಟು ಭಾರತದ ಕೈ ಹಿಡಿದ ಯುಎಇ

**ನವದೆಹಲಿ:**ಇಂಡೋ-ಪಾಕ್ ಯುದ್ಧ ಭೀತಿ ನಡುವೆ ಇತ್ತ ಭಾರತದಲ್ಲಿ ಇಂಡಿಯನ್ ಪ್ರೀಮಿಯರ್ ಲೀಗ್ ಸ್ಥಗಿತಗೊಂಡರೆ, ಅತ್ತ ಪಾಕಿಸ್ತಾನದಲ್ಲಿ ಪಾಕಿಸ್ತಾನ್ ಸೂಪರ್ ಲೀಗ್ ರದ್ದಾಗಿದೆ. ಇದರ ನಡುವೆ ಪಾಕ್ ಕ್ರಿಕೆಟ್ ಮಂಡಳಿ ಪಿಎಸ್‌ಎಲ್ ಟೂರ್ನಿಯನ್ನು ಪೂರ್ಣಗೊಳಿಸಲು ಪರ್ಯಾಯ ಆಯ್ಕೆಗಳತ್ತ ಮುಖ ಮಾಡಿತ್ತು. ಇದಕ್ಕಾಗಿಯೇ ಯುಎಇ ಕ್ರಿಕೆಟ್ ಬೋರ್ಡ್ ಜೊತೆ ಚರ್ಚಿಸಿದ್ದರು. ಅಲ್ಲದೆ ಪಿಎಸ್‌ಎಲ್‌ನ ಉಳಿದ ಪಂದ್ಯಗಳನ್ನು ದುಬೈನಲ್ಲಿ ಆಯೋಜಿಸಲು ಅನುಮತಿಯನ್ನು ಸಹ ಕೋರಿತ್ತು. ಆದರೆ ಯುಎಇ ಕ್ರಿಕೆಟ್ ಬೋರ್ಡ್ ಪಾಕಿಸ್ತಾನ್ ಕ್ರಿಕೆಟ್ ಮಂಡಳಿಯ ಕೋರಿಕೆಯನ್ನು ತಿರಸ್ಕರಿಸಿದೆ.

ಭಾರತ ಮತ್ತು ಪಾಕಿಸ್ತಾನ್ ನಡುವಣ ಅಪ್ರಸನ್ನ ಪರಿಸ್ಥಿತಿಯ ಕಾರಣ ಪಾಕಿಸ್ತಾನ್




ಸೂಪರ್ ಲೀಗ್ ಅನ್ನು ಯುಎಇನಲ್ಲಿ ಆಯೋಜಿಸಲು ನಿರಾಕರಿಸಿದೆ. ಹೀಗಾಗಿ 10ನೇ ಸೀಸನ್ ಪಿಎಸ್‌ಎಲ್ ಟೂರ್ನಿ ಅರ್ಧದಲ್ಲೇ ಮೊಟಕುಗೊಳ್ಳುವುದು ಖಚಿತವಾಗಿದೆ.

**ಯುಎಇನಲ್ಲಿ ಐಪಿಎಲ್?:** ಪಾಕಿಸ್ತಾನ್ ಸೂಪರ್ ಲೀಗ್‌ಗೆ ನಕಾರ ಎಂದಿರುವ ಯುಎಇ ಇದೀಗ ಭಾರತೀಯ ಕ್ರಿಕೆಟ್ ಮಂಡಳಿ ಜೊತೆ ಐಪಿಎಲ್ ಆಯೋಜನೆ ಬಗ್ಗೆ ಚರ್ಚಿಸಿದೆ ಎಂದು ವರದಿಯಾಗಿದೆ. ಪುಟ 2

# ಹುಳಿಯಾರು ಪದವಿ ಕಾಲೇಜಿನಲ್ಲಿ ಪೋಷಕ ಶಿಕ್ಷಕ ಸಭೆ

ಹುಳಿಯಾರು: ಹುಳಿಯಾರು–ಕೆಂಕೆರೆ ಬಿಎಂಎಸ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಗುರುವಾರ ಪೋಷಕ ಶಿಕ್ಷಕರ ಸಮಿತಿಯ ಸಭೆ ನಡೆಸಲಾಯಿತು.



ಪ್ರಾಂಶುಪಾಲರಾದ ಪ್ರೊ. ವೀರಣ್ಣ ಎಸ್.ಸಿ ಮಾತನಾಡಿ ಕಾಲೇಜಿನಲ್ಲಿರುವ ಸೌಲಭ್ಯಗಳು, ಕಾರ್ಯ ಚಟುವಟಿಕೆಗಳು, ಪಠ್ಯ ಮತ್ತು ಪಠ್ಯತರ ಚಟುವಟಿಕೆಗಳು, ವಿದ್ಯಾರ್ಥಿಗಳ ಸರ್ವತೋಮುಖ ಅಭಿವೃದ್ಧಿಗೆ ಸಹಕಾರಿ ಆಗಲು ಪೂರಕವಾಗಿದ್ದು, ಕಾಲೇಜು ವಿದ್ಯಾರ್ಥಿಗಳನ್ನು ಉತ್ತಮ ನಾಗರಿಕರನ್ನಾಗಿ ಮಾಡುವಲ್ಲಿ ವ್ಯಕ್ತಿತ್ವ ರೂಪಿಸುವಲ್ಲಿ ಪೂರಕವಾಗಿದೆ ಅಲ್ಲದೆ ನಮ್ಮ ಕಾಲೇಜಿಗೆ ಗ್ರಾಮೀಣ ಭಾಗದ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಬರುವುದರಿಂದ ಸ್ಪರ್ಧಾತ್ಮಕ ಜಗತ್ತಿನಲ್ಲಿ ಸಾಧನೆ ಮಾಡಲು ಪೂರಕವಾಗಿ ಪದವಿಯ ಶಿಕ್ಷಣ ಅತ್ಯಗತ್ಯವಾಗಿದ್ದು, ಆ ಶಿಕ್ಷಣ ನೀಡುವಲ್ಲಿ ನಮ್ಮ ಕಾಲೇಜು ಸದಾ ಮುಂಚೂಣಿಯಲ್ಲಿದೆ ಎಂದು ತಿಳಿಸಿದರು. ಸೆಮಿಸ್ಟರ್ ಫಲಿತಾಂಶವನ್ನು ಪೋಷಕರಿಗೆ ತಿಳಿಸುತ್ತಾ ಫಲಿತಾಂಶ ಸುಧಾರಣೆಗೆ ಉಪನ್ಯಾಸಕರು ಮತ್ತು ಪೋಷಕರ ಜವಾಬ್ದಾರಿಯ ಬಗ್ಗೆ ತಿಳಿಸಿದರು.

ದೈಹಿಕ ಶಿಕ್ಷಣ ನಿರ್ದೇಶಕರಾದ ಪ್ರೊಫೆಸರ್ ಯೋಗೇಶ್ ಬಿ ಅವರ ಮಾತನಾಡಿ ಪೋಷಕರು ಮಕ್ಕಳ ಕಲಿಕೆಯ ಬಗ್ಗೆ ನಿಗಾ ವಹಿಸುವುದರ ಮೂಲಕ ಅವರ ಫಲಿತಾಂಶ ಸುಧಾರಣೆಗೆ ಸಹಕರಿಸಬೇಕೆಂದು ತಿಳಿಸಿದರು. ಡಾ. ಸರಸ್ವತಿ ಕೆ ಬಿ ರವರು ಮೊದಲ ಸೆಮಿಸ್ಟರ್ ಪರೀಕ್ಷೆಯ ಫಲಿತಾಂಶವನ್ನು ವಿಶ್ಲೇಷಣೆ ಮಾಡುತ್ತಾ ಕಡಿಮೆ ಅಂಕಗಳು ಬರಲು ಇರುವ ಕಾರಣಗಳನ್ನು ಚರ್ಚಿಸಿದರು, ಪೋಷಕ ಶಿಕ್ಷಕ ಸಮಿತಿಯ ಸಂಚಾಲಕರಾದ ಪ್ರೊ ಧನಂಜಯ ಎನ್ ಮಾತನಾಡಿ ಪೋಷಕ ಶಿಕ್ಷಕ ಸಮಿತಿಯ ಕಾರ್ಯ ಚಟುವಟಿಕೆಗಳ ಬಗ್ಗೆ ತಿಳಿಸಿದರು.

ಪೋಷಕರು ಈ ಸಭೆಯಲ್ಲಿ ವಿದ್ಯಾರ್ಥಿಗಳ ಫಲಿತಾಂಶ ಸುಧಾರಣೆಗೆ ಕೈಗೊಳ್ಳಬೇಕಾದ ಕಾರ್ಯಗಳ ಬಗ್ಗೆ ಮತ್ತು ವಿದ್ಯಾರ್ಥಿಗಳು, ಪೋಷಕರು,ಉಪನ್ಯಾಸಕರ ಜವಾಬ್ದಾರಿಯ ಕುರಿತು ಚರ್ಚಿಸಿದರು. ಸ್ವಾಗತವನ್ನು ವರುಣ್‌ಕುಮಾರ್, ಪ್ರಾರ್ಥನೆಯನ್ನು ಜಯಲಕ್ಷ್ಮಿ ಜೆ.ಡಿ, ವಂದನಾರ್ಪಣೆಯನ್ನು ನಿರಂಜನ್‌ಮೂರ್ತಿ, ನಿರೂಪಣೆಯನ್ನು ವೇಣುಗೋಪಾಲ್ ಆರ್ ನೆರವೇರಿಸಿದರು.

# 26 ರಿಂದ ಜೂ.02 ವರೆಗೆ ಎಸ್ಸೆಸ್ಸೆಲ್ಸಿ ಪರೀಕ್ಷೆ–2

**ಬೆಂಗಳೂರು ಗ್ರಾಮಾಂತರ:** 2025 ನೇ ಸಾಲಿನ ಎಸ್ಸೆಸ್ಸೆಲ್ಸಿ ಪರೀಕ್ಷೆ–01 ರಲ್ಲಿ ಉತ್ತೀರ್ಣರಾಗದ ವಿದ್ಯಾರ್ಥಿಗಳಿಗೆ ಹಾಗೂ ಫಲಿತಾಂಶವನ್ನು ಉತ್ತಮ ಪಡಿಸಿಕೊಳ್ಳಲು ಬಯಸುವ ವಿದ್ಯಾರ್ಥಿಗಳಿಗೆ ಎಸ್ಸೆಸ್ಸೆಲ್ಸಿ ಪರೀಕ್ಷೆ–2 ಅನ್ನು ಮೇ 26 ರಿಂದ ಜೂನ್ 02 ರವರೆಗೆ ನಡೆಸಲಾಗುತ್ತಿದೆ. ಎಸ್ಸೆಸ್ಸೆಲ್ಸಿ ಪರೀಕ್ಷೆ–2 ಗೆ ನೊಂದಾಯಿಸಲು ಮೇ 10 ಕೊನೆಯ ದಿನವಾಗಿದ್ದು, ಪರೀಕ್ಷೆ–1ರಲ್ಲಿ ನೋಂದಾಯಿಸಿಕೊಂಡು ಪೂರ್ಣಗೊಳಿಸದ ವಿದ್ಯಾರ್ಥಿಗಳಿಗೆ ಹಾಗೂ ಪ್ರಪ್ರಥಮ ಬಾರಿಗೆ ಪರೀಕ್ಷೆಗೆ ನೋಂದಾಯಿಸಿಕೊಳ್ಳುವ ವಿದ್ಯಾರ್ಥಿಗಳಿಗೆ ಮಾತ್ರ ಪರೀಕ್ಷೆ–2ರಲ್ಲಿ ಶುಲ್ಕದಿಂದ ವಿನಾಯಿತಿ ನೀಡಲಾಗಿದೆ. ವಿದ್ಯಾರ್ಥಿಗಳು ಪರೀಕ್ಷೆ–1ರಲ್ಲಿ ನೊಂದಾಯಿಸಿಕೊಂಡು ಪರೀಕ್ಷೆಗೆ ಗೈರಾಗಿದ್ದವರು, ಪೂರ್ಣಗೊಳಿಸದೆ ಇರುವ ಮತ್ತು ಹಿಂದಿನ ಸಾಲಿನಲ್ಲಿ ಅನುತ್ತೀರ್ಣರಾದ ಹಾಗೂ ಫಲಿತಾಂಶವನ್ನು ಉತ್ತಮಗೊಳಿಸಿಕೊಳ್ಳಲು ಇದು ಸೂಕ್ತ ಸಮಯವಾಗಿದೆ. ವಿದ್ಯಾರ್ಥಿಗಳು, ಶಾಲಾ ಮುಖ್ಯೋಪಾಧ್ಯಾಯರು ಮಂಡಳಿಯ https://kseab.karnataka.gov.in ಜಾಲತಾಣದ ಮೂಲಕ ಲಾಗಿನ್ ಮಾಡಿಕೊಂಡು ಪರೀಕ್ಷೆ–2 ಕ್ಕೆ ನೋಂದಣಿ ಮಾಡಿಕೊಳ್ಳಬಹುದಾಗಿದೆ. ಪರೀಕ್ಷೆ–2 ರ ನೋಂದಣಿ ಮತ್ತು ಇತ್ಯಾದಿ ವಿಷಯಗಳ ಕುರಿತು ಸಹಾಯವಾಣಿ ಸಂಖ್ಯೆ 080–23310075 ಮತ್ತು 080–23310076 ಸಂಪರ್ಕಿಸಬಹುದು.

## ಬಿಳಿಗಿರಿರಂಗನ ಬೆಟ್ಟದ ಜಾತ್ರೆಗೆ ದ್ವಿಚಕ್ರ ವಾಹನಗಳ ನಿಷೇಧ

**ಚಾಮರಾಜನಗರ:** ಬಿಳಿಗಿರಿರಂಗನಬೆಟ್ಟದ ಬಿಳಿಗಿರಿರಂಗನಾಥಸ್ವಾಮಿಯ ಬ್ರಹ್ಮರಥೋತ್ಸವ, ದೊಡ್ಡ ಜಾತ್ರೆಗಾಗಿ ಬಿಳಿಗಿರಿರಂಗನಬೆಟ್ಟಕ್ಕೆ ದ್ವಿಚಕ್ರ ವಾಹನಗಳಲ್ಲಿ ತೆರಳುವುದನ್ನು ನಿರ್ಬಂಧಿಸಿ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಆದೇಶ ಹೊರಡಿಸಿದ್ದಾರೆ. ಬಿಳಿಗಿರಿರಂಗನ ಬೆಟ್ಟದಲ್ಲಿ ಮೇ 10 ರಂದು ಬಿಳಿಗಿರಿರಂಗನಾಥಸ್ವಾಮಿಯವರ ಬ್ರಹ್ಮರಥೋತ್ಸವ ಹಾಗೂ ದೊಡ್ಡಜಾತ್ರೆ ನಡೆಯಲಿದ್ದು, ಬೆಟ್ಟಕ್ಕೆ ಜಿಲ್ಲೆ, ಹೊರ ಜಿಲ್ಲೆಗಳಿಂದ ಲಕ್ಷಕ್ಕೂ ಹೆಚ್ಚು ಭಕ್ತರು ಸೇರುವ ಸಂಭವವಿದ್ದು ವಾಹನ ದಟ್ಟಣೆ ಹೆಚ್ಚಾಗಲಿದೆ. ಸದರಿ ರಸ್ತೆಯು ಅರಣ್ಯ ಪ್ರದೇಶ ಹಾಗೂ ಕಡಿದಾದ ತಿರುವುಗಳಿಂದ ಕೂಡಿದ್ದು ವಾಹನ ಸಂಚಾರದಲ್ಲಿ ದಟ್ಟಣೆ ಉಂಟಾಗಿ ಅಪಘಾತಗಳು ಸಂಭವಿಸುವ ಸಾಧ್ಯತೆ ಇರುವ ಕಾರಣ ಬಿಳಿಗಿರಿರಂಗನಬೆಟ್ಟಕ್ಕೆ ಚಾಮರಾಜನಗರ ತಾಲೂಕಿನ ಹೊಂಡರಬಾಳು ಅರಣ್ಯ ಚೆಕ್‌ಪೋಸ್ಟ್ ಹಾಗೂ ಯಳಂದೂರು ತಾಲೂಕಿನ ಗುಂಬಳ್ಳಿ ಅರಣ್ಯ ಚೆಕ್‌ಪೋಸ್ಟ್ ಮೂಲಕ ಮೇ 10 ರವರೆಗೆ ದ್ವಿಚಕ್ರ ವಾಹನಗಳಲ್ಲಿ ತೆರಳುವುದನ್ನು ತಾತ್ಕಲಿಕವಾಗಿ ನಿರ್ಬಂಧಿಸಲಾಗಿದೆ.

## 12 ರಂದು ಬುದ್ದ ಜಯಂತಿ: ಸತೀಶ್

**ರಾಮನಗರ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಶ್ರೀ ಭಗವಾನ್ ಬುದ್ದರ ಜಯಂತಿ ಕಾರ್ಯಕ್ರಮವನ್ನು ಇದೇ ಮೇ.12ರ ಸೋಮವಾರ ನಗರದ ಕಂದಾಯ ಭವನದ 3ನೇ ಮಹಡಿಯ ಕೊಠಡಿ ಸಂಖ್ಯೆ: 409ರಲ್ಲಿ ಆಯೋಜಿಸಲಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಕೆ. ಸತೀಶ್ ಅವರು ತಿಳಿಸಿದರು. ಅವರು ಮೇ. 08ರ ಗುರುವಾರ ನಗರದ ಕಂದಾಯ ಭವನದಲ್ಲಿರುವ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಯಲ್ಲಿ ಶ್ರೀ ಭಗವಾನ್ ಬುದ್ದರ ಜಯಂತಿ ಆಚರಣೆ ಸಂಬಂಧ ಆಯೋಜಿಸಲಾಗಿದ್ದ ಪೂರ್ವಭಾವಿ ಸಿದ್ಧತಾ ಸಭೆಯಲ್ಲಿ ಮಾತನಾಡಿದರು. ಜಯಂತಿಯಂದು ಶ್ರೀ ಭಗವಾನ್ ಬುದ್ಧರ ಭಾವಚಿತ್ರಕ್ಕೆ ಪು?ಪಾಲಂಕಾರ ನೆರವೇರಿಸಲಾಗುವುದು, ಸ್ಥಳದಲ್ಲಿ ಕುಡಿಯುವ ನೀರಿನ ವ್ಯವಸ್ಥೆ ಮಾಡಲಾಗುವುದು. ಕಾರ್ಯಕ್ರಮದಲ್ಲಿ ನುರಿತ ಉಪನ್ಯಾಸಕರಿಂದ ಉಪನ್ಯಾಸ ನೀಡಲು ಕ್ರಮ ವಹಿಸಲಾಗಿದೆ ಎಂದರು. ಸಭೆಯಲ್ಲಿ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು, ಸಮುದಾಯದ ಮುಖಂಡರು ಹಾಜರಿದ್ದರು.

## ಕೇಂದ್ರ ಪುರಸ್ಕೃತ ಯೋಜನೆಗಳ ಪ್ರಗತಿ ಪರಿಶೀಲನೆ

**ರಾಮನಗರ:** ಕೇಂದ್ರ ಗ್ರಾಮೀಣಾಭಿವೃದ್ಧಿ ಮಂತ್ರಾಲಯದ ಅಧೀನ ಕಾರ್ಯದರ್ಶಿಗಳಾದ ರಾಜೀವ್ ರಾಣಾ ಮತ್ತು ಹಿರಿಯ ಸಾಂಖ್ಯಿಕ ಅಧಿಕಾರಿಗಳಾದ ಮಹೇಶ್ ಗಹ್ಲಾವತ್ ಅವರನ್ನೊಳಗೊಂಡ ಡಿಓಆರ್‌ಡಿ ತಂಡ ಸೋಮವಾರ ಹಾಗೂ ಮಂಗಳವಾರ ರಾಮನಗರ ಜಿಲ್ಲೆಯ ಗುಡೇಮಾರನಹಳ್ಳಿ, ಮೋಟಗೊಂಡನಹಳ್ಳಿ, ನಾರಸಂದ್ರ ಹಾಗೂ ಲಕ್ಕೇನಹಳ್ಳಿ ಗ್ರಾಮ ಪಂಚಾಯಿತಿಗಳಿಗೆ ಭೇಟಿ ನೀಡಿ ಕೇಂದ್ರ ಪುರಸ್ಕೃತ ಯೋಜನೆಗಳ ಪ್ರಗತಿ ಪರಿಶೀಲನೆ ನಡೆಸಿದರು. ನಂತರ ಬುಧವಾರ ಚನ್ನಪಟ್ಟಣ ತಾಲ್ಲೂಕಿನ ನೀಲಸಂದ್ರ, ವಂದಾರಗುಪ್ಪೆ, ಚಕ್ಕೆರೆ ಗ್ರಾಮ ಪಂಚಾಯಿತಿಗಳಿಗೆ ಭೇಟಿ ನೀಡಿ ಮಹಾತ್ಮಗಾಂಧಿ ರಾಷ್ಟ್ರ ಉದ್ಯೋಗ ಖಾತರಿ ಯೋಜನೆ, ಎನ್‌ಆರ್‌ಎಲ್ ಎಂ, ಪಿಎಂಜಿಎಸ್‌ವೈ, ಹೌಸಿಂಗ್ ಪಿಂಚಣಿ ಮಾಸಾಶನ ಫಲಾನುಭವಿಗಳು ಹಾಗೂ ಯೋಜನೆಗೆ ಸಂಬಂಧಿಸಿದಂತೆ ದನದಕೊಟ್ಟಿಗೆ, ಅಂಗನವಾಡಿ ಕಟ್ಟಡ, ವಸತಿ, ಮನೆ, ಇತರೆ ಕಾಮಗಾರಿಗಳನ್ನು ಹಾಗೂ ಕಡತಗಳನ್ನು ಪರಿಶೀಲಿಸಿದರು. ಸ್ವ–ಸಹಾಯ ಸಂಘದ ಮಹಿಳೆಯರೊಂದಿಗೆ ಸಂವಾದ ನಡೆಸಿದರು ಹಾಗೂ ಗೊಂಬೆ ತಯಾರಿಕ ಘಟಕ ವೀಕ್ಷಿಸಿದರು. ಈ ವೇಳೆ ರಾಮನಗರ ತಾಲ್ಲೂಕು ಸಹಾಯಕ ನಿರ್ದೇಶಕರಾದ ರೂಪೇಶ್ ಕುಮಾರ್, ಗ್ರಾಮ ಪಂಚಾಯಿತಿ ಅಧ್ಯಕ್ಷರು, ಪಿ.ಡಿ.ಒ., ಗ್ರಾಮ ಪಂಚಾಯಿತಿ ಸಿಬ್ಬಂದಿ, ನರೇಗಾ, ಟಿ.ಸಿ. ಇಂಜಿನಿಯರ್, ಎಸ್‌ಬಿಎಂ, ಜಿಲ್ಲಾ ಸಮಾಲೋಚಕರು, ಎನ್ ಆರ್‌ಎಲ್‌ಎಂ ಸಿಬ್ಬಂದಿ ಮತ್ತು ಜಿಪಿಎಲ್‌ಎಫ್ ಮಹಿಳೆಯರು ಹಾಜರಿದ್ದರು.

## ಅರ್ಜಿ ಆಹ್ವಾನ

**ರಾಮನಗರ:** 2025–26ನೇ ಸಾಲಿನ ಶೈಕ್ಷಣಿಕ ಅವಧಿಗೆ ಕೈಮಗ್ಗ ಮತ್ತು ಜವಳಿ ತಂತ್ರಜ್ಞಾನದಲ್ಲಿ ಲ್ಯಾಟರಲ್ ಎಂಟ್ರಿ ಮುಖಾಂತರ ನೇರವಾಗಿ 02ನೇ ವರ್ಷದ ಡಿಪ್ಲೋಮಾ (ಡಿ.ಹೆಚ್.ಟಿ.ಟಿ.) ಕೋರ್ಸ್ ಪ್ರವೇಶಕ್ಕಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.ವ್ಯಾಸಾಂಗದ ಸಮಯದಲ್ಲಿ ಮಾರ್ಗಸೂಚಿಯ ಪ್ರಕಾರ ಪ್ರತಿ ವಿದ್ಯಾರ್ಥಿಗೆ ಪ್ರತಿ ತಿಂಗಳು 2,500 ರೂ.ಗಳ ಶಿಷ್ಯವೇತನ ನೀಡಲಾಗವುದು ಹಾಗೂ ಆಯ್ಕೆಯಾದ ಅಭ್ಯರ್ಥಿಗಳಿಗೆ ಆಯಾಯ ಐ.ಐ.ಹೆಚ್.ಟಿ. ನಿಯಮಾನುಸಾರ ವಸತಿ ನಿಲಯದ ಸೌಲಭ್ಯವನ್ನು ಕಲ್ಪಿಸಲಾಗುವುದು.ಅಭ್ಯರ್ಥಿಗಳು https://khtlgadag.ac.in/Lateralentryadmissionform.pdfಲಿಂಕ್ ಮೂಲಕ ಅರ್ಜಿಯನ್ನು ಡೌನ್‌ಲೋಡ್ ಮಾಡಿಕೊಂಡು ಪೂರ್ಣವಾಗಿ ಭರ್ತಿ ಮಾಡಿದ ಅರ್ಜಿಗಳನ್ನು ಅಗತ್ಯ ದಾಖಲಾತಿಗಳೊಂದಿಗೆ ಪ್ರಾಂಶುಪಾಲರು, ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ನರಸಾಪುರ, ಗದಗ–582102 ಇವರಿಗೆ ಮೇ 31ರೊಳಗೆ ಸಲ್ಲಿಸಬೇಕು. ತರಬೇತಿ ಪಡೆಯಲು ಇಚ್ಚಿಸುವ ಅಭ್ಯರ್ಥಿಗಳು ನಿಗದಿತ ನಮೂನೆ ಅರ್ಜಿ ಹಾಗೂ ಹೆಚ್ಚುವರಿ ಮಾಹಿತಿಗೆ ಸಹಾಯಕ ನಿರ್ದೇಶಕರ ಕಚೇರಿ, ಕೈಮಗ್ಗ ಮತ್ತು ಜವಳಿ ಇಲಾಖೆ, ಜಿಲ್ಲಾ ಪಂಚಾಯತ್ ಭವನ, ಮೊದಲನೆ ಮಹಡಿ, ರಾಮನಗರ ಈ ಕಚೇರಿಗೆ ಜೂನ್ 13ರೊಳಗೆ ಸಲ್ಲಿಸಬೇಕು.ಹೆಚ್ಚಿನ ಮಾಹಿತಿಗೆ ಸಹಾಯಕ ನಿರ್ದೇಶಕರ ಕಚೇರಿ, ಮೊದಲನೇ ಮಹಡಿ, ಜಿಲ್ಲಾ ಪಂಚಾಯತ್ ಭವನ, ರಾಮನಗರ. ಈ ಕಚೇರಿಯನ್ನು ಸಂಪರ್ಕಿಸುವಂತೆ ಕೈಮಗ್ಗ ಮತ್ತು ಜವಳಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮೀನು ಹಿಡಿಯುವುದು ನಿಷೇಧ

**ರಾಮನಗರ:** ಜಿಲ್ಲೆಯ ಚನ್ನಪಟ್ಟಣ ತಾಲ್ಲೂಕಿನ ಮೀನುಗಾರಿಕೆ ಇಲಾಖೆ ವ್ಯಾಪ್ತಿಯಲ್ಲಿ ಏತ–ನೀರಾವರಿ ಯೋಜನೆಯಡಿ ಬರುವ 29 ಕೆರೆ ಮತ್ತು 1 ಜಲಾಶಯವನ್ನು ನಿಯಮಾನುಸಾರ ವಿಲೇವಾರಿ ಮಾಡುವವರೆಗೂ ಈ ಕರೆಗಳಲ್ಲಿ/ಜಲಾಶಯದಲ್ಲಿ ಮೀನು ಹಿಡಿಯುವುದನ್ನು ನಿಷೇಧಿಸಲಾಗಿರುತ್ತದೆ ಎಂದು ಚನ್ನಪಟ್ಟಣ ತಾಲ್ಲೂಕಿನ ಮೀನುಗಾರಿಕೆ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಡಿಪ್ಲೋಮೊಗೆ ಅರ್ಜಿ ಆಹ್ವಾನ

**ಚಾಮರಾಜನಗರ:** ಚಾಮರಾಜನಗರ ಪಟ್ಟಣದ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿನಲ್ಲಿ 2025–26ನೇ ಸಾಲಿಗೆ ವಿವಿಧ ಎಂಜಿನಿಯರಿಂಗ್ ಕೋರ್ಸ್‌ಗಳ ಪ್ರಥಮ ಡಿಪ್ಲೋಮೊ ಪ್ರವೇಶಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ. ಮೆರಿಟ್ ಆಧಾರಿತ ಪ್ರವೇಶಾತಿ ನಡೆಯಲಿದ್ದು, ವ್ಯಾಸಂಗ ಮಾಡಲು ಇಚ್ಛಿಸುವ ಎಸ್.ಎಸ್.ಎಲ್.ಸಿ ಉತ್ತೀರ್ಣರಾದ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು. ಭರ್ತಿ ಮಾಡಿದ ಅರ್ಜಿಗಳನ್ನು ಖುದ್ದಾಗಿ ಮೇ 15ರ ಸಂಜೆ 5.30 ಗಂಟೆಯೊಳಗೆ ಸಲ್ಲಿಸಬೇಕು. ಮಾಹಿತಿಗೆ 9880451356 ಸಂಪರ್ಕಿಸುವಂತೆ ಪ್ರಕಟಣೆ ತಿಳಿಸಿದೆ.

## ನಾಳೆ ಲೋಕಸಿರಿ –105 ಕಾರ್ಯಕ್ರಮ

**ರಾಮನಗರ:** ಕರ್ನಾಟಕ ಜಾನಪದ ಪರಿ?ತ್ತು ಹಾಗೂ ಜಾನಪದ ಲೋಕದ ವತಿಯಿಂದ ರಾಮನಗರ ಜಾನಪದ ಲೋಕದಲ್ಲಿ ನಾಡೋಜ ಎಚ್.ಎಲ್. ನಾಗೇಗೌಡರ ನೆನಪಿನ 'ಲೋಕಸಿರಿ–105' ಕಾರ್ಯಕ್ರಮವನ್ನು ಮೇ 11ರ ಭಾನುವಾರ ಮಧ್ಯಾಹ್ನ 3 ಗಂಟೆಗೆ ಆಯೋಜಿಸಲಾಗಿದೆ. ಈ ಬಾರಿ ಲಂಬಾಣಿ ಗಾಯನ ಹಾಗೂ ಕುಣಿತ ಕಲಾವಿದರಾದ ರಮಾಬಾಯಿ ಅವರು ತಿಂಗಳ ಅತಿಥಿಯಾಗಿ ಭಾಗವಹಿಸಲಿದ್ದಾರೆ. ಕರ್ನಾಟಕ ಜಾನಪದ ಪರಿ?ತ್ತಿನ ಅಧ್ಯಕ್ಷರಾದ ಪ್ರೊ. ಹಿ.ಚಿ. ಬೋರಲಿಂಗಯ್ಯ ಅವರು ಅಧ್ಯಕ್ಷತೆ ವಹಿಸುವರು. ಕರ್ನಾಟಕ ಜಾನಪದ ಪರಿಷತ್ತಿನ ಆಡಳಿತ ಮಂಡಳಿಯ ಸದಸ್ಯರಾದ ಡಾ. ವೇಮಗಲ್ ನಾರಾಯಣ ಸ್ವಾಮಿ ಅವರು ಗೌರವ ಉಪಸ್ಥಿತಿ ವಹಿಸುವರು.

## ಹೇಮರೆಡ್ಡಿ ಮಲ್ಲಮ್ಮ ಜಯಂತಿ

ರಾಮನಗರ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಜಯಂತಿ ಕಾರ್ಯಕ್ರಮವನ್ನು ಮೇ 10ರ ಶನಿವಾರ ಬೆಳಿಗ್ಗೆ 10.30ಕ್ಕೆ ನಗರದ ಕಂದಾಯ ಭವನದ 3ನೇ ಮಹಡಿಯಲ್ಲಿರುವ ಕೊಠಡಿ ಸಂಖ್ಯೆ 409ರಲ್ಲಿ ಏರ್ಪಡಿಸಲಾಗಿದೆ. ಈ ಜಯಂತಿ ಕಾರ್ಯಕ್ರಮಕ್ಕೆ ಸಮುದಾಯದ ಮುಖಂಡರು, ಸಂಘ–ಸಂಸ್ಥೆಗಳ ಪದಾಧಿಕಾರಿಗಳು, ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸುವಂತೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 12ರಂದು ಶ್ರೀ ಭಗವಾನ್ ಬುದ್ಧರ ಜಯಂತಿ

**ರಾಮನಗರ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಶ್ರೀ ಭಗವಾನ್ ಬುದ್ದರ ಜಯಂತಿ ಕಾರ್ಯಕ್ರಮವನ್ನು ಮೇ 12ರ ಸೋಮವಾರ ಬೆಳಿಗ್ಗೆ 10.30ಕ್ಕೆ ನಗರದ ಕಂದಾಯ ಭವನದ 3ನೇ ಮಹಡಿಯಲ್ಲಿರುವ ಕೊಠಡಿ ಸಂಖ್ಯೆ 409ರಲ್ಲಿ ಏರ್ಪಡಿಸಲಾಗಿದೆ. ಈ ಜಯಂತಿ ಕಾರ್ಯಕ್ರಮಕ್ಕೆ ಸಮುದಾಯದ ಮುಖಂಡರು, ಸಂಘ–ಸಂಸ್ಥೆಗಳ ಪದಾಧಿಕಾರಿಗಳು, ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸುವಂತೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಧರ್ಮದ ದಿಕ್ಸೂಚಿ ಬಾಳಿಗೆ ಅಡಿಪಾಯ

## ಬಾಳೆಹೊನ್ನೂರು ಶ್ರೀರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಮತ

**ಚಿಕ್ಕಮಗಳೂರು:** ಮಾನವನ ಮನಸ್ಸು ಬುದ್ಧಿ ಮತ್ತು ಸದ್ವಿಚಾರಗಳು ಬೆಳೆದು ಬಂದಾಗ ಶ್ರೇಯಸ್ಸು ನಿಶ್ಚಿತ. ಆದರ್ಶ ಬದುಕಿಗೆ ಗುರು ಕಾರುಣ್ಯ ಧರ್ಮಶ್ರದ್ಧೆ ಅವಶ್ಯಕ. ಧರ್ಮದ ದಿಕ್ಸೂಚಿ ಮಾನವನ ಬಾಳಿನ ಭಾಗ್ಯೋದಯಕ್ಕೆ ಅಡಿಪಾಯ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಶುಕ್ರವಾರ ತಾಲೂಕಿನ ಮುಗುಳವಳ್ಳಿ ಗ್ರಾಮದಲ್ಲಿ ಶ್ರೀ ವೀರಭದ್ರೇಶ್ವರ ದೇವಾಲಯದ ಪ್ರವೇಶೋತ್ಸವ ಅಂಗವಾಗಿ ಜರುಗಿದ ಧರ್ಮ ಜಾಗೃತಿ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಆಧುನಿಕ ಜಗತ್ತಿನಲ್ಲಿ ಪ್ರಗತಿಪರ ವಿಚಾರಧಾರೆಗಳ ಹೆಸರಿನಲ್ಲಿ ಭಾರತೀಯ ಉತ್ಕೃಷ್ಟ ಸಂಸ್ಕೃತಿ ನಾಶಗೊಳ್ಳಬಾರದು. ಧರ್ಮ ಮತ್ತು ದೇಶ ಮನುಷ್ಯನ ಎರಡು ಕಣ್ಣು. ಧರ್ಮಶ್ರದ್ಧೆ ಸಾಮರಸ್ಯ ರಾಷ್ಟ್ರಾಭಿಮಾನ ಬೆಳೆಸುವ ಗುರಿ ಎಲ್ಲರದೂ ಆಗಬೇಕು. ರವಿಕಿರಣದಿಂದ ಪುಷ್ಪ ಅರಳುತ್ತದೆ. ಗುರು ಕರುಣ ಆತ್ಮವನ್ನು ಅರಳಿಸುತ್ತದೆ. ಶ್ರೀ ಜಗದ್ಗುರು ರೇಣುಕಾಚಾರ್ಯರ ಧಾರ್ಮಿಕ ಮತ್ತು ಸಾಮಾಜಿಕ ಚಿಂತನಗಳು ಸಕಲರ ಬಾಳಿಗೆ ಬೆಳಕು ತೋರುತ್ತವೆ. ಮುಗುಳವಳ್ಳಿ ಗ್ರಾಮದ ಸಕಲ ಸದ್ಭಕ್ತರ ಸಹಕಾರದಿಂದ ಭವ್ಯ ದಿವ್ಯ ಶ್ರೀ ವೀರಭದ್ರೇಶ್ವರ ದೇವಾಲಯ ನಿರ್ಮಿಸಿರುವುದು ಅತ್ಯಂತ ಸಂತೋಷ ಉಂಟು ಮಾಡುತ್ತದೆ. ಇದಕ್ಕಾಗಿ ಶ್ರಮಿಸಿದ ಎಲ್ಲ ಭಕ್ತರಿಗೆ ಶ್ರೀ ವೀರಭದ್ರೇಶ್ವರ ಸ್ವಾಮಿ ಶುಭವನ್ನು ಅನುಗ್ರಹಿಸಲೆಂದು ಶುಭ ಹಾರೈಸಿದರು.

ಹುಲಿಕೆರೆ ವಿರೂಪಾಕ್ಷಲಿಂಗ ಶಿವಾಚಾರ್ಯರು, ಶಂಕರದೇವರಮಠದ ಚಂದ್ರಶೇಖರ ಶಿವಾಚಾರ್ಯರು, ಬೇರುಗಂಡಿ ಮಠದ ರೇಣುಕ ಮಹಂತ ಶಿವಾಚಾರ್ಯರು ಪಾಲ್ಗೊಂಡು ನುಡಿ ನಮನ ಸಲ್ಲಿಸಿದರು. ಫಲಹಾರಸ್ವಾಮಿ ಮಠದ ಮುರುಘೇಂದ್ರ ಶಿವಾಚಾರ್ಯರು ನೇತೃತ್ವ ವಹಿಸಿದ್ದರು. ಮುಗುಳವಳ್ಳಿ ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ಶ್ರೀಮತಿ ಶೃತಿ ಉಮೇಶ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು. ಮುಖ್ಯ ಅತಿಥಿಗಳಾಗಿ



ಶಾಸಕರಾದ ಹೆಚ್.ಡಿ.ತಮ್ಮಯ್ಯ, ನಯನ ಮೋಟಮ್ಮ, ವಿ.ಪ.ಸದಸ್ಯರಾದ ಸಿ.ಟಿ.ರವಿ, ಎಸ್.ಎಲ್.ಭೋಜೇಗೌಡ, ಮಾಜಿ ಶಾಸಕ ಎಂ.ಪಿ.ಕುಮಾರಸ್ವಾಮಿ, ಮಾಜಿ ವಿ.ಪ. ಸದಸ್ಯೆ ಗಾಯಿತ್ರಿ ಶಾಂತೇಗೌಡ, ಅ.ಭಾ.ವೀ.ಮ.ಸಭಾ ಜಿಲ್ಲಾಧ್ಯಕ್ಷ ಹೆಚ್.ಎಂ.ಲೋಕೇಶ್, ಬಿ.ಎ.ಶಿವಶಂಕರ್, ಎಂ.ಎಸ್.ನಿರಂಜನ್, ಬಿ.ಹೆಚ್.ಹರೀಶ್, ಎ.ಎನ್. ಮಹೇಶ್, ಪ್ರೇಮಾ ಮಂಜುನಾಥ್, ಪುಷ್ಪಾ ಸೋಮಶೇಖರ್, ಎಂ.ಎಂ.ಪರಮೇಶ್ವರಪ್ಪ, ಹೆಚ್.ಸಿ.ಕಲ್ಕರುಡಪ್ಪ ಹಾಗೂ ದೇವಾಲಯ ಸಮಿತಿಯ ಸರ್ವ ಸದಸ್ಯರು ಪಾಲ್ಗೊಂಡಿದ್ದರು. ಮುಗುಳವಳ್ಳಿ ಎಂ.ಎನ್. ರೇಣುಕ ಕುಮಾರ್ ಪ್ರಾಸ್ತಾವಿಕ ನುಡಿ ಸಲ್ಲಿಸಿದರು. ಚೈತ್ರಾ ವಸಂತಕುಮಾರ್ ಬಿನ್ನವತ್ತಳೆ ವಾಚಿಸಿದರು. ಕಾರ್ಯದರ್ಶಿ ಎಂ.ಸಿ.ರುದ್ರೇಶ್ ಸರ್ವರನ್ನು ಸ್ವಾಗತಿಸಿದರು. ಎಂ.ಕೆ. ಗಿರಿಜೇಶ ಮತ್ತು ಅಭಿನಯ ಪಶುಕುಮಾರ್ ನಿರೂಪಿಸಿದರು. ಬಿಂದು ಗಿರೀಶ್ ವಂದಿಸಿದರು.

ಸಮಾರಂಭಕ್ಕೂ ಮುನ್ನ ಭವ್ಯ ಮೆರವಣಿಗೆ ಮೂಲಕ ಶ್ರೀ ರಂಭಾಪುರಿ ಜಗದ್ಗುರುಗಳವರನ್ನು ಬರಮಾಡಿಕೊಂಡರು. ನಂತರ ಲೋಕಕಲ್ಯಾಣಾರ್ಥವಾಗಿ ಶ್ರೀ ರಂಭಾಪುರಿ ಜಗದ್ಗುರುಗಳು ಇಷ್ಟಲಿಂಗ ಮಹಾಪೂಜೆ ನೆರವೇರಿಸಿ ಭಕ್ತ ಸಂಕುಲಕ್ಕೆ ಶುಭ ಹಾರೈಸಿದರು.

# ಜಿ.ಟಿ.ಟಿ.ಸಿ ಕೇಂದ್ರದಲ್ಲಿ ವಿವಿಧ ಕೋರ್ಸ್‌ಗಳಿಗೆ ಅರ್ಜಿ ಆಹ್ವಾನ

**ಬೆಂಗಳೂರು ಗ್ರಾಮಾಂತರ:**2025–26ನೇ ಸಾಲಿನಲ್ಲಿ ಡಿಪ್ಲೊಮಾ ಹಾಗೂ ಇಂಟಿಗ್ರೇಟೆಡ್ ಬಿ.ಇ ಪ್ರೋಗ್ರಾಂ ಕೋರ್ಸ್ ಗಳ ಪ್ರವೇಶಾತಿಗಾಗಿ 10ನೇ ತರಗತಿ ಉತ್ತೀರ್ಣರಾದ ಅರ್ಹ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

**ಲಭ್ಯವಿರುವ ಕೋರ್ಸ್ ಗಳು ಬಿ.ಇ ಪ್ರೋಗ್ರಾಂ ಕೋರ್ಸ್:** ಇಂಟಿಗ್ರೇಟೆಡ್ ಬಿ.ಇ ಇನ್ ಅಡ್ವಾನ್ಸ್ಡ್ ಮ್ಯಾನಿಫಾಕ್ಚರಿಂಗ್, ಇಂಟಿಗ್ರೇಟೆಡ್ ಬಿ.ಇ ಇನ್ ಅಡ್ವಾನ್ಸ್ಡ್ ಮೆಕಟ್ರಾನಿಕ್ಸ್, ಇಂಟಿಗ್ರೇಟೆಡ್ ಬಿ.ಇ ಇನ್ ರ್ಟಿಫಿಶಿಯಲ್ ಇಂಟಲಿಜೆನ್ಸ್ ಅಂಡ್ ಮಷಿನ್ ಲರ್ನಿಂಗ್.

**ಡಿಪ್ಲೊಮಾ ಕೋರ್ಸ್ ಗಳು**: ಡಿಪ್ಲೊಮಾ ಇನ್ ಟೂಲ್ ಮತ್ತು ಡೈ ಮೇಕಿಂಗ್ನಲ್ಲಿ (ಡಿ.ಟಿ.ಡಿ.ಎಂ), ಡಿಪ್ಲೊಮಾ ಇನ್ ಮೆಕಾಟ್ರಾನಿಕ್ಸ್ (ಡಿ.ಎಂ.ಸಿ.ಎಚ್), ಡಿಪ್ಲೊಮಾ ಇನ್ ಎಲೆಕ್ಟ್ರಿಕಲ್ ಮತ್ತು ಎಲೆಕ್ಟ್ರಾನಿಕ್ಸ್ ಎಂಜಿನಿಯರಿಂಗ್ (ಡಿ.ಇ.ಇ.ಇ), ಕೃತಕ ಬುದ್ಧಿಮತ್ತೆ ಮತ್ತು ಯಂತ್ರ ಕಲಿಕೆಯಲ್ಲಿ ಡಿಪ್ಲೊಮಾ (ಡಿ.ಎ.ಐ ಮತ್ತು ಎಂ.ಎಲ್)

ಎಸ್ಸೆಸ್ಸೆಲ್ಸಿ ಉತ್ತೀರ್ಣರಾದ ಅರ್ಹ ಅಭ್ಯರ್ಥಿಗಳು ಜಿಟಿಟಿಸಿ ಕೇಂದ್ರದ ಅಧಿಕೃತ ಜಾಲತಾಣದ ಮೂಲಕ ಅರ್ಜಿ ಸಲ್ಲಿಸಬಹುದು ಅಥವಾ ದೇವನಹಳ್ಳಿ ತಾಲ್ಲೂಕಿನ ಚನ್ನರಾಯಪಟ್ಟಣದಲ್ಲಿರುವ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರ (ಜಿ.ಟಿ.ಟಿ.ಸಿ) ದಲ್ಲಿ ಮೇ 15 ರೊಳಗಾಗಿ ಅರ್ಜಿ ಸಲ್ಲಿಸಬಹುದು.

ಹಾಗೇಯೇ ವಿಶೇಷವಾಗಿ ದ್ವಿತೀಯ ಪಿಯುಸಿ(ವಿಜ್ಞಾನ) ಹಾಗೂ ಐ.ಟಿ.ಐ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ನೇರವಾಗಿ ದ್ವಿತೀಯ ವರ್ಷದ ಜಿ.ಟಿ.ಟಿ.ಸಿ ಡಿಪ್ಲೊಮಾಗೆ ದಾಖಲಾತಿ ಪಡೆಯಬಹುದು. ಪಠ್ಯಕ್ರಮವು ಶೇಕಡಾ 70 ರಷ್ಟು ಪ್ರಾಯೋಗಿಕ ಹಾಗೂ 30 ರಷ್ಟು ಸಿದ್ಧಾಂತವನ್ನು ಒಳಗೊಂಡಿರುತ್ತದೆ. ಜಿ.ಟಿ.ಟಿ.ಸಿ ಯು ಶಿಕ್ಷಣ ಕ್ಷೇತ್ರದಲ್ಲಿ ಕೈಗಾರಿಕ ಆಧಾರಿತ ಪಠ್ಯಕ್ರಮ, ನವೀನ ಯಂತ್ರೋಪಕರಣಗಳ ತರಬೇತಿ, ಕೈಗಾರಿಕ ತರಬೇತಿ (ಇಂಟರ್ನ್‌ಶಿಪ್), ಜಾಗತಿಕ ಪ್ರಮಾಣೀಕರಣ ಹಾಗೂ ಶೇಕಡಾ 100ರಷ್ಟು ಉದ್ಯೋಗ ಸಹಾಯವನ್ನು ಒದಗಿಸಲಾಗುತ್ತದೆ. ವಿದೇಶದಲ್ಲಿ ಹೆಚ್ಚಿನ ಬೇಡಿಕೆಯಿರುವುದರಿಂದ ಜಾಗತಿಕ ಮಟ್ಟದಲ್ಲಿ ಸ್ಪರ್ಧಿಸಲು ಜರ್ಮನ್ ಮತ್ತು ಜಪಾನೀಸ್ ಭಾಷೆಯನ್ನು ಕೂಡ ಕಲಿಸಲಾಗುತ್ತದೆ. ಹೆಚ್ಚಿನ ಮಾಹಿತಿಗಾಗಿ 080–26607666/80507582240/8123866007/96862668737/9980956422 ಸಂಪರ್ಕಿಸಿ ಹಾಗೂ ಜಿ.ಟಿ.ಟಿ.ಸಿ ಯ ಅಧಿಕೃತ ಜಾಲತಾಣ gttc.karnataka.gov.in ಮತ್ತು ಇಮೇಲ್ ವಿಳಾಸ gttcdevanahalli@gmail.com ಗೆ ಸಂಪರ್ಕಿಸಬಹುದಾಗಿದೆ ಎಂದು ಜಿಟಿಟಿಸಿ ದೇವನಹಳ್ಳಿಯ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅತಿಥಿ ಶಿಕ್ಷಕ ಹಾಗೂ ಉಪನ್ಯಾಸಕರ ಹುದ್ದೆಗೆ ಅರ್ಜಿ

**ಬೆಂಗಳೂರು ಗ್ರಾಮಾಂತರ:** 2025–26ನೇ ಜಿಲ್ಲೆಯ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆಗಳು ಮತ್ತು ಮೌಲಾನಾ ಆಜಾದ್ ಮಾದರಿ ಶಾಲೆಗಳಲ್ಲಿ ಖಾಲಿ ಇರುವ ಒಟ್ಟು 36 ಅತಿಥಿ ಉಪನ್ಯಾಸಕರು ಹಾಗೂ ಶಿಕ್ಷಕರ ಹುದ್ದೆಗಳಿಗೆ ಗೌರವಧನ ಆಧಾರದ ಮೇಲೆ ಅರ್ಜಿ ಆಹ್ವಾನಿಸಲಾಗಿದೆ. ಅತಿಥಿ ಶಿಕ್ಷಕ ಹಾಗೂ ಅತಿಥಿ ಉಪನ್ಯಾಸಕರ ಹುದ್ದೆಗೆ ಬಿಎ, ಬಿಎಸ್ಸಿ, ಬಿ.ಎಸ್.ಸಿ, ಬಿ.ಸಿ.ಎ ಮತ್ತು ಎಂ.ಎ, ಎಂ.ಎಸ್.ಸಿ ಹಾಗೂ ಬಿ.ಎಡ್ ಸೇರಿ ಸಂಬಂಧಪಟ್ಟ ವಿಷಯವಾರು ವಿದ್ಯಾರ್ಹತೆ ಹೊಂದಿರಬೇಕು.

ಹುದ್ದೆಗಳು ಖಾಲಿಯಿರುವ ಶಾಲೆಗಳ ಪಟ್ಟಿ ಡಾ. ಎ.ಪಿ.ಜೆ ಅಬ್ದುಲ್ ಕಲಾಂ ವಸತಿ ಶಾಲೆ,(1 ರಿಂದ 10ನೇ ತರಗತಿ ಸಿ.ಬಿ.ಎಸ್.ಇ) ಹಾಗೂ (ಪದವಿ ಪೂರ್ವ ರಾಜ್ಯ ಪಠ್ಯಕ್ರಮ ಪಿ.ಸಿ.ಎಂ.ಬಿ) ಗಿಡ್ಡಪ್ಪನಹಳ್ಳಿ, ಹೊಸಕೋಟೆ ತಾಲ್ಲೂಕು. ಮೊರಾರ್ಜಿ ದೇಸಾಯಿ ವಸತಿ ಶಾಲೆ, (1 ರಿಂದ 10ನೇ ತರಗತಿ ಸಿ.ಬಿ.ಎಸ್.ಇ) ಹಾಗೂ (ಪದವಿ ಪೂರ್ವ ರಾಜ್ಯ ಪಠ್ಯಕ್ರಮ ಪಿ.ಸಿ.ಎಂ.ಬಿ) ದೇವನಾಯಕನಹಳ್ಳಿ, ದೇವನಹಳ್ಳಿ ತಾಲ್ಲೂಕು. ಮೌಲಾನಾ ಆಜಾದ್ ಮಾದರಿ ಶಾಲೆ, ವಿಜಯಪುರ,ದೇವನಹಳ್ಳಿ ತಾಲ್ಲೂಕು. ಮೌಲಾನಾ ಆಜಾದ್ ಮಾದರಿ ಶಾಲೆ, ಮುತ್ತೂರು, ದೊಡ್ಡಬಳ್ಳಾಪುರ ತಾಲ್ಲೂಕು. ಮೌಲಾನಾ ಆಜಾದ್ ಮಾದರಿ ಶಾಲೆ, ಇಸ್ಲಾಂಪುರ, ನೆಲಮಂಗಲ ತಾಲ್ಲೂಕು.

ಮೇಲ್ಕಂಡ ಅತಿಥಿ ಉಪನ್ಯಾಸಕರು ಹಾಗೂ ಶಿಕ್ಷಕರ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಅಧಿಕೃತ ಜಾಲತಾಣವಾದ https://dom.karnataka.gov.in ಅಥವಾ ನೇರವಾಗಿ ಸಂಬಂಧಪಟ್ಟ ಜಿಲ್ಲಾ ಕಛೇರಿ, ಅಲ್ಪಸಂಖ್ಯಾತ ಕಲ್ಯಾಣ ಇಲಾಖೆ,ಬೆಂಗಳೂರು ಗ್ರಾಮಾಂತರ ಜಿಲ್ಲೆ, ಕೊಠಡಿ ಸಂಖ್ಯೆ:216, 2ನೇ ಮಹಡಿ ಜಿಲ್ಲಾಡಳಿತ ಭವನದಲ್ಲಿ ತಮ್ಮ ದಾಖಲೆಗಳೊಂದಿಗೆ ಕೊನೆಯ ದಿನಾಂಕ ಮೇ 19 ರ ಒಳಗಾಗಿ ಕಛೇರಿ ಸಮಯದಲ್ಲಿ ಅರ್ಜಿ ಸಲ್ಲಿಸಬಹುದು.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಲ್ಪಸಂಖ್ಯಾತ ಕಲ್ಯಾಣ ಇಲಾಖೆ, ಬೆಂಗಳೂರು ಗ್ರಾಮಾಂತರ ಜಿಲ್ಲೆ,ದೂರವಾಣಿ ಸಂಖ್ಯೆ:080–29787455 ಗೆ ಸಂಪರ್ಕಿಸಬಹುದಾಗಿದೆ ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಎಸ್.ಎಸ್.ಎಲ್.ಸಿ ಪರೀಕ್ಷೆ–2ಕ್ಕೆ ನೋಂದಾಯಿಸಿಕೊಳ್ಳಲು ಮನವಿ

**ಚಾಮರಾಜನಗರ:** 2025ರ ಎಸ್.ಎಸ್.ಎಲ್.ಸಿ ಪರೀಕ್ಷೆ–1ಕ್ಕೆ ಹಾಜರಾಗಿ ಅನುತ್ತೀರ್ಣಗೊಂಡ ಹಾಗೂ ಪರೀಕ್ಷೆ–1ರಲ್ಲಿ ತೇರ್ಗಡೆಗೊಂಡು ಫಲಿತಾಂಶ ಉತ್ತಮ ಪಡಿಸಿಕೊಳ್ಳಲು ಬಯಸುವ ವಿದ್ಯಾರ್ಥಿಗಳು ಎಸ್.ಎಸ್.ಎಲ್.ಸಿ ಪರೀಕ್ಷೆ–2ಕ್ಕೆ ನೋಂದಾಯಿಸಿಕೊಳ್ಳಲು ಮೇ 10 ಕಡೆಯ ದಿನವಾಗಿದ್ದು, ವಿದ್ಯಾರ್ಥಿಗಳು ಈ ಬಗ್ಗೆ ಗಮನಹರಿಸುವಂತೆ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ತಿಳಿಸಿದ್ದಾರೆ.

2025ರ ಪರೀಕ್ಷೆ–1ರಲ್ಲಿ ಅನುತ್ತೀರ್ಣಗೊಂಡ ವಿದ್ಯಾರ್ಥಿಗಳು ಪರೀಕ್ಷೆ–2ಕ್ಕೆ ನೋಂದಾಯಿಸಿಕೊಳ್ಳಲು ಮೇ 10 ಅಂತಿಮ ದಿನವಾಗಿದೆ. ಅನುತ್ತೀರ್ಣಗೊಂಡ ಎಲ್ಲಾ ವಿದ್ಯಾರ್ಥಿಗಳು ನಿಗಧಿತ ಕಾಲಮಿತಿಯೊಳಗೆ ನೋಂದಣಿ ಮಾಡಿಕೊಳ್ಳಲು ವಿದ್ಯಾರ್ಥಿಗಳು, ಪೋ?ಕರು ಮತ್ತು ಶಾಲಾ ಮುಖ್ಯೋಪಾಧ್ಯಾಯರು ಆದ್ಯ ಗಮನ ನೀಡಬೇಕು.

ಎಸ್.ಎಸ್.ಎಲ್.ಸಿ ಪರೀಕ್ಷೆ–1 ರಲ್ಲಿ ಅನುತ್ತೀರ್ಣಗೊಂಡ ಶಾಲಾ ಅಭ್ಯರ್ಥಿಗಳು ಪರೀಕ್ಷೆ–2ಕ್ಕೆ ನೋಂದಣಿಯಾಗಲು ಶುಲ್ಕ ವಿನಾಯಿತಿ ಇರುತ್ತದೆ. ಪರೀಕ್ಷೆ–1ರಲ್ಲಿ ತೇರ್ಗಡೆಯಾದ ವಿದ್ಯಾರ್ಥಿಗಳು ಫಲಿತಾಂಶ ಉತ್ತಮಪಡಿಸಿಕೊಳ್ಳಲು ಬಯಸಿದ್ದಲ್ಲಿ ಪರೀಕ್ಷೆ–2ಕ್ಕೆ ನಿಗದಿತ ಶುಲ್ಕ ಪಾವತಿ ಮಾಡಿ ನೋಂದಾಯಿಸಿಕೊಳ್ಳಬಹುದಾಗಿದೆ.

ಪರೀಕ್ಷೆ–2ಕ್ಕೆ ಹಾಜರಾಗುವ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಪ್ರೌಢಶಾಲೆಗಳಲ್ಲಿ ವಿಶೇ? ತರಗತಿಗಳನ್ನು ನಡೆಸಲಾಗುತ್ತಿದೆ. ಪರೀಕ್ಷೆ–2ಕ್ಕೆ ಹಾಜರಾಗುತ್ತಿರುವ ಅನುತ್ತೀರ್ಣ ವಿದ್ಯಾರ್ಥಿಗಳು ಹಾಗೂ ಫಲಿತಾಂಶ ಉತ್ತಮ ಪಡಿಸಿಕೊಳ್ಳಲು ಬಯಸುವ ವಿದ್ಯಾರ್ಥಿಗಳು ವಿಶೇ? ತರಗತಿಗೆ ಹಾಜರಾಗಿ ಇದರ ಸದುಪಯೋಗ ಪಡೆದುಕೊಳ್ಳಬಹುದು.

ಶಾಲೆಯಿಂದ ದೂರವಿರುವ ಗ್ರಾಮಗಳ ವಿದ್ಯಾರ್ಥಿಗಳು ಸಮೀಪದ ವಸತಿ ನಿಲಯಗಳಲ್ಲಿ ವಾಸ್ತವ್ಯ ಮಾಡಲು ಊಟ ಮತ್ತು ವಸತಿಗೆ ಅಗತ್ಯ ಕ್ರಮ ವಹಿಸಲಾಗಿದೆ. ವಿದ್ಯಾರ್ಥಿಗಳು ಈ ಎಲ್ಲಾ ಸೌಲಭ್ಯಗಳನ್ನು ಸದ್ಬಳಕೆ ಮಾಡಿಕೊಳ್ಳಬೇಕು. ಎಸ್.ಎಸ್.ಎಲ್.ಸಿ ಪರೀಕ್ಷೆ–2ರ ಪರೀಕ್ಷೆಗಳು ಮೇ 26 ರಿಂದ ಜೂನ್ 2 ರವರೆಗೆ ನಡೆಯಲಿದೆ ಎಂದು ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಉಪನ್ಯಾಸಕರು, ಶಿಕ್ಷಕರ ನೇಮಕಕ್ಕೆ ಅರ್ಜಿ ಆಹ್ವಾನ

**ಚಾಮರಾಜನಗರ:** 2025–26ನೇ ಸಾಲಿನಲ್ಲಿ ಚಾಮರಾಜನಗರ ಜಿಲ್ಲೆಯ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಅಧೀನದ ವಸತಿ ಶಾಲೆಯಲ್ಲಿ ಖಾಲಿ ಇರುವ ಉಪನ್ಯಾಸಕರು, ಶಿಕ್ಷಕರ ಹುದ್ದೆಗಳಿಗೆ ಅತಿಥಿ ಉಪನ್ಯಾಸಕರು, ಶಿಕ್ಷಕರನ್ನು ನೇಮಕಾತಿ ಮಾಡಿಕೊಳ್ಳಲು ಅರ್ಜಿ ಆಹ್ವಾನಿಸಲಾಗಿದೆ.

ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ನೇರ ನೇಮಕಾತಿ, ಬಡ್ತಿ, ವರ್ಗಾವಣೆ ಮೂಲಕ ಹುದ್ದೆ ಭರ್ತಿ ಮಾಡುವವರೆಗೆ ಅಥವಾ ಪ್ರಸಕ್ತ ಶೈಕ್ಷಣಿಕ ಸಾಲಿನ ಅಂತ್ಯದವರಗೆ ಇವುಗಳಲ್ಲಿ ಯಾವುದು ಮೊದಲೋ ಅಲ್ಲಿಯವರಗೆ ನೇಮಕಾತಿ ಮಾಡಿಕೊಳ್ಳಲಾಗುತ್ತದೆ. ಗುಂಡ್ಲುಪೇಟೆ ಪಟ್ಟಣದಲ್ಲಿರುವ ಡಾ.ಎ.ಪಿ.ಜೆ ಅಬ್ದುಲ್ ಕಲಾಂ ವಸತಿ ಶಾಲೆಯಲ್ಲಿರುವ ಆಂಗ್ಲಭಾಷಾ ಉಪನ್ಯಾಸಕರ ಹುದ್ದೆಗೆ ಅಂಗೀಕೃತ ವಿಶ್ವವಿದ್ಯಾಲಯದಿಂದ ಆಂಗ್ಲ ಭಾಷೆ ಅಥವಾ ಆಂಗ್ಲ ಭಾಷಾ ಸಾಹಿತ್ಯದಲ್ಲಿ ಸ್ನಾತಕೋತ್ತರ ಪದವಿ ಪಡೆದಿರಬೇಕು ಹಾಗೂ ಸಾಮಾನ್ಯ ಆಂಗ್ಲ ಭಾಷೆಯ ಟೀಚಿಂಗ್ ಮೇಥಡ್ ನಲ್ಲಿ ಬಿ.ಎಡ್ ಪದವಿ ಹೊಂದಿರಬೇಕು. ಭೌತಶಾಸ್ತ್ರ ಉಪನ್ಯಾಸಕರ ಹುದ್ದೆಗೆ ಅಂಗೀಕೃತ ವಿಶ್ವವಿದ್ಯಾಲಯದಿಂದ ಭೌತಶಾಸ್ತ್ರ, ವಿಷಯದಲ್ಲಿ ಸ್ನಾತಕೋತ್ತರ ಪದವಿ ಪಡೆದಿರಬೇಕು ಮತ್ತು ಸಾಮಾನ್ಯ ವಿಜ್ಞಾನ ಟೀಚಿಂಗ್ ಮೆಥಡ್ ನಲ್ಲಿ ಬಿ.ಎಡ್ ಪದವಿ ಹೊಂದಿರಬೇಕು. ಗಣಿತಶಾಸ್ತ್ರ ಉಪನ್ಯಾಸಕರ ಹುದ್ದೆಗೆ ಅಂಗೀಕೃತ ವಿಶ್ವವಿದ್ಯಾಲಯದಿಂದ ಗಣಿತಶಾಸ್ತ್ರ ಅಥವಾ ಅಪ್ಲೈಡ್ ಗಣಿತಶಾಸ್ತ್ರ, ವಿಷಯದಲ್ಲಿ ಸ್ನಾತಕೋತ್ತರ ಪದವಿ ಪಡೆದಿರಬೇಕು ಮತ್ತು ಸಾಮಾನ್ಯ ವಿಜ್ಞಾನ ಟೀಚಿಂಗ್ ಮೆಥಡ್ ನಲ್ಲಿ ಬಿ.ಎಡ್ ಪದವಿ ಹೊಂದಿರಬೇಕು. ಜೀವಶಾಸ್ತ್ರ ಉಪನ್ಯಾಸಕರ ಹುದ್ದೆಗೆ ಅಂಗೀಕೃತ ವಿಶ್ವವಿದ್ಯಾಲಯದಿಂದ ಸಸ್ಯಶಾಸ್ತ್ರ, ಪ್ರಾಣಿಶಾಸ್ತ್ರ ಅಥವಾ ಅಪ್ಲೈಡ್ ಸಸ್ಯಶಾಸ್ತ್ರ ಅಥವಾ ಅಪ್ಲೈಡ್ ಪ್ರಾಣಿಶಾಸ್ತ್ರ ವಿಷಯದಲ್ಲಿ ಸ್ನಾತಕೋತ್ತರ ಪದವಿ ಪಡೆದಿರಬೇಕು ಮತ್ತು ಸಾಮಾನ್ಯ ವಿಜ್ಞಾನ ಟೀಚಿಂಗ್ ಮೆಥಡ್ ನಲ್ಲಿ ಬಿ.ಎಡ್ ಪದವಿ ಹೊಂದಿರಬೇಕು. ಸಮಾಜ ವಿಜ್ಞಾನ (ಸಿ.ಬಿ.ಎಸ್.ಇ ಪಠ್ಯಕ್ರಮ) ಉಪನ್ಯಾಸಕರ ಹುದ್ದೆಗೆ ಅಂಗೀಕೃತ ವಿಶ್ವವಿದ್ಯಾಲಯದಿಂದ ಇತಿಹಾಸ, ಅರ್ಥಶಾಸ್ತ್ರ, ರಾಜ್ಯಶಾಸ್ತ್ರ, ಭೂಗೋಳಶಾಸ್ತ್ರ ಮತ್ತು ಸಮಾಜಶಾಸ್ತ್ರ, ಐದು ವಿಷಯಗಳಲ್ಲಿ ಮೂರು ವಿಷಯಗಳನ್ನು ಐಚ್ಛಿಕವಾಗಿ ವಿಷಯಗಳನ್ನಾಗಿ ತೆಗೆದುಕೊಂಡು ಪದವಿ ಪಡೆದಿರಬೇಕು ಹಾಗೂ ಬಿ.ಎಡ್ ಪದವಿ ಹೊಂದಿರಬೇಕು. ಸಾಮಾನ್ಯ ವಿಜ್ಞಾನ (ಸಿ.ಬಿ.ಎಸ್.ಇ. ಪಠ್ಯಕ್ರಮ) ಉಪನ್ಯಾಸಕರ ಹುದ್ದೆಗೆ ಅಂಗೀಕೃತ ವಿಶ್ವವಿದ್ಯಾಲಯದಿಂದ ರಸಾಯನಶಾಸ್ತ್ರ, ಸಸ್ಯಶಾಸ್ತ್ರ ಮತ್ತು ಪ್ರಾಣಿಶಾಸ್ತ್ರ ಮೂರು ವಿಷಯಗಳನ್ನು ಐಚ್ಛಿಕವಾಗಿ ವಿಷಯಗಳನ್ನಾಗಿ ತೆಗೆದುಕೊಂಡು ಪದವಿ ಪಡೆದಿರಬೇಕು ಮತ್ತು ಬಿ.ಎಡ್ ಪದವಿ ಹೊಂದಿರಬೇಕು. ದೈಹಿಕ ಶಿಕ್ಷಕರ ಉಪನ್ಯಾಸಕರ ಹುದ್ದೆಗೆ ಅಂಗೀಕೃತ ವಿಶ್ವವಿದ್ಯಾಲಯದಿಂದ ಯಾವುದಾದರೂ ಪದವಿ ಪಡೆದಿರಬೇಕು ಮತ್ತು ಬ್ಯಾಚುಲರ್ ಆಫ್ ಡಿಗ್ರಿ ಇನ್ ಫಿಸಿಕಲ್ ಎಜುಕೇಷನ್ (ಬಿ.ಪಿ.ಎಡ್) ಪದವಿ ಹೊಂದಿರಬೇಕು. ಚಾಮರಾಜನಗರ ಪಟ್ಟಣದಲ್ಲಿರುವ ಮೌಲಾನಾ ಆಜಾದ್ ಮಾದರಿ ಶಾಲೆಯ ಆಂಗ್ಲ ಭಾ?ಾ ಶಿಕ್ಷಕರ ಹುದ್ದೆಗೆ ಅಂಗೀಕೃತ ವಿಶ್ವವಿದ್ಯಾಲಯದಿಂದ ಆಂಗ್ಲ ಭಾಷೆಯನ್ನು ಮುಖ್ಯ ಐಚ್ಛಿಕ ವಿಷಯವಾಗಿ ತೆಗೆದುಕೊಂಡು ಕಲಾ ವಿಭಾಗದಲ್ಲಿ ಪದವಿ ಹೊಂದಿರಬೇಕು. ಒಂದು ವೇಳೆ ಪದವಿ ಮಟ್ಟದಲ್ಲಿ ಆಂಗ್ಲ ಭಾಷೆಯನ್ನು ಐಚ್ಛಿಕ ವಿಷಯವಾಗಿ ಅಧ್ಯಯನ ಮಾಡದಿದ್ದರೆ, ಆಂಗ್ಲ ಭಾಷೆಯಲ್ಲಿ ಸ್ನಾತಕೋತ್ತರ ಪದವಿ ಪಡೆದಿರಬೇಕು ಮತ್ತು ಬಿ.ಎಡ್ ಪದವಿ ಹೊಂದಿರಬೇಕು. ಹಿಂದಿ ಭಾಷಾ ಶಿಕ್ಷಕರ ಹುದ್ದೆಗೆ ಅಂಗೀಕೃತ ವಿಶ್ವವಿದ್ಯಾಲಯದಿಂದ ಹಿಂದಿ ಭಾಷೆಯಲ್ಲಿ ಸ್ನಾತಕೋತ್ತರ ಪದವಿ ಪಡೆದಿರಬೇಕು ಮತ್ತು ಹಿಂದಿ ಭಾಷೆ ಟೀಚಿಂಗ್ ಮೇಥಡ್ ನಲ್ಲಿ ಬಿ.ಎಡ್ ಪದವಿ ಹೊಂದಿರಬೇಕು. ದೈಹಿಕ ಶಿಕ್ಷಕರ ಹುದ್ದೆಗೆ ಅಂಗೀಕೃತ ವಿಶ್ವವಿದ್ಯಾಲಯದಿಂದ ಯಾವುದಾದರೂ ಪದವಿ ಪಡೆದಿರಬೇಕು ಹಾಗೂ ಬ್ಯಾಚುಲರ್ ಆಫ್ ಡಿಗ್ರಿ ಇನ್ ಫಿಸಿಕಲ್ ಎಜುಕೇಷನ್ (ಬಿ.ಪಿ.ಎಡ್) ಪದವಿ ಹೊಂದಿರಬೇಕು. ಆಯ್ಕೆಯಾದ ಅತಿಥಿ ಉಪನ್ಯಾಕರು, ಶಿಕ್ಷಕರಿಗೆ ಸರ್ಕಾರದ ಆದೇಶದಂತೆ ನಿಗದಿಪಡಿಸಿರುವ ಗೌರವ ಸಂಭಾವನೆಯನ್ನು ನೀಡಲಾಗುವುದು. ಅತಿಥಿ ಉಪನ್ಯಾಕರು, ಶಿಕ್ಷಕರ ನೇಮಕ ಖಾಯಂ ನೇಮಕವಾಗಿರುವುದಿಲ್ಲ. ಸದರಿ ಹುದ್ದೆಗೆ ನೇರ ನೇಮಕಾತಿ, ಬಡ್ತಿ, ವರ್ಗಾವಣೆ ಮುಖಾಂತರ ಖಾಯಂ ಉಪನ್ಯಾಸಕರು, ಶಿಕ್ಷಕರು ಸ್ಥಳ ನಿಯುಕ್ತಿಗೊಂಡಲ್ಲಿ ಸದರಿ ಅತಿಥಿ ಶಿಕ್ಷಕರನ್ನು ಕರ್ತವ್ಯದಿಂದ ಬಿಡುಗಡೆಗೊಳಿಸಲಾಗುವುದು. ಅರ್ಜಿಗಳನ್ನು ವೆಬ್ ಸೈಟ್ https://dom.karnataka.gov.in ಹಾಗೂ ಚಾಮರಾಜನಗರದ ಜಿಲ್ಲಾಡಳಿತ ಭವನದ ಮಲ್ಟಿಪರ್ಪಸ್ ಹಾಲ್ ನಲ್ಲಿರುವ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಕಚೇರಿಯಲ್ಲಿ ಪಡೆದು ಮೇ 19ರೊಳಗೆ ಸಲ್ಲಿಸಬೇಕು.

## ಗ್ರಾಮೀಣ ಕುಡಿಯುವ ನೀರು & ನೈರ್ಮಲ್ಯ ಇಲಾಖೆ

ಕಾರ್ಯಪಾಲಕ ಅಭಿಯಂತರರ ಕಛೇರಿ,
ಜಿಲ್ಲಾಡಳಿತ ಭವನ, ಚಪ್ಪರದಕಲ್ಲು (ಬೀರಸಂದ್ರ), ದೇವನಹಳ್ಳಿ ತಾಲ್ಲೂಕು,
ಬೆಂಗಳೂರು ಗ್ರಾಮಾಂತರ. ದೂರವಾಣಿ : 080–2978 7463,
ಇ–ಮೇಲ್ : eerdwsd.bngr1@gmail.com

ಸಂಖ್ಯೆ : ಕಾ.ಅ./ಗ್ರಾ.ಕು.ನೀ.ನೈ.ವಿ./ಬೆಂ.ಗ್ರಾ./ವಾಹನ/ಟೆಂಡರ್/2025–26/66
ದಿನಾಂಕ : 08–05–2025

**ಅಲ್ಪಾವಧಿ ಟೆಂಡರ್ ಪ್ರಕಟಣೆ**
**ಸಂಖ್ಯೆ : 01, 02/2025-26 ದಿನಾಂಕ : 08-05-2025**

(ಕೆ.ಪಿ.ಪಿ. ಪೋರ್ಟಲ್ ಮೂಲಕ)

ಕರ್ನಾಟಕ ರಾಜ್ಯದ ರಾಜ್ಯಪಾಲರ ಪರವಾಗಿ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ, ಬೆಂಗಳೂರು (ಗ್ರಾ.) ಜಿಲ್ಲಾ ವ್ಯಾಪ್ತಿಯಲ್ಲಿ ಬರುವ ದೇವನಹಳ್ಳಿ, ದೊಡ್ಡಬಳ್ಳಾಪುರ, ಹೊಸಕೋಟೆ ಮತ್ತು ನೆಲಮಂಗಲ ಉಪ–ವಿಭಾಗಕ್ಕೆ ಪ್ರತ್ಯೇಕವಾಗಿ (ಹವಾ ನಿಯಂತ್ರಣ ರಹಿತ NON-AC) ಅಧಿಕೃತ ಸರ್ಕಾರಿ ಕೆಲಸಕ್ಕಾಗಿ ಒಂದು ವರ್ಷದ ಅವಧಿಗೆ ಹೊರಗುತ್ತಿಗೆ ಆಧಾರದ ಮೇಲೆ **ಚಾಲಕ ಸಹಿತ ವಾಹನಗಳನ್ನು ಒದಗಿಸಲು ಹಾಗೂ ಜಲಧಾರೆ ಯೋಜನೆಯಡಿ ಕೊಳವೆ ಬಾವಿ ಕೊರೆದು, ಪಂಪು ಮೋಟಾರ್ ಹಾಗೂ ಪೈಪ್‌ಲೈನ್ ಅಳವಡಿಸುವ ಕಾಮಗಾರಿಗೆ** ಕೆ.ಪಿ.ಪಿ. ಪೋರ್ಟಲ್ ಮುಖಾಂತರ ಏಕ ಲಕೋಟೆ ಪದ್ಧತಿಯಲ್ಲಿ ಟೆಂಡರ್‌ನ್ನು ಆಹ್ವಾನಿಸಲಾಗಿದೆ. ಕೆ.ಪಿ.ಪಿ. ಪೋರ್ಟಲ್‌ನಲ್ಲಿ ನೊಂದಾಯಿಸಲ್ಪಟ್ಟ ವಾಹನ ಸರಬರಾಜುದಾರರು / ಟ್ರಾವೆಲ್ಸ್ ಏಜೆನ್ಸಿಗಳು ಹಾಗೂ ಗುತ್ತಿಗೆದಾರರು **ಇಲಾಖಾ ವೆಬ್‌ಸೈಟ್ : https://www.kpp portal** ಮೂಲಕ ಅರ್ಜಿಗಳನ್ನು ಸಲ್ಲಿಸಬಹುದು.

1) ಟೆಂಡರ್ ದಾಖಲಾತಿಗಳನ್ನು ಪೋರ್ಟಲ್‌ನಿಂದ ಡೌನ್‌ಲೋಡ್ ಮಾಡಿ ಕೊಳ್ಳುವ ದಿನಾಂಕ : 08–05–2025 ರ ಸಂಜೆ 4.00 ಘಂಟೆ ನಂತರ, 2) ಭರ್ತಿ ಮಾಡಿದ ಟೆಂಡರ್‌ನ್ನು ಸಲ್ಲಿಸಲು ಕೊನೆಯ ದಿನಾಂಕ : 16–05–2025 ರ ಸಂಜೆ 4.00 ಘಂಟೆವರೆಗೆ, 3) ಟೆಂಡರ್‌ನ್ನು ತೆರೆಯುವ ದಿನಾಂಕ : 17–05–2025 ರ ಸಂಜೆ 4.30 ಘಂಟೆ ನಂತರ.

ಸಹಿ/– ಕಾರ್ಯಪಾಲಕ ಅಭಿಯಂತರರು,
ಗ್ರಾಮೀಣ ಕುಡಿಯುವ ನೀರು & ನೈರ್ಮಲ್ಯ ವಿಭಾಗ,
ಬೆಂಗಳೂರು ಗ್ರಾಮಾಂತರ.

ವಾಸಾಸಂಇ/ಬೆಂಗ್ರಾಜಿ/ಮಣಿಪಾಲ್/553/2025–26

## 'ಓಪನ್ ಹೌಸ್' ಕಾರ್ಯಕ್ರಮ

**ಮೈಸೂರು:** ಕೇಂದ್ರೀಯ ಪೆಟ್ರೋಕೆಮಿಕಲ್ಸ್ ಇಂಜಿನಿಯರಿಂಗ್ ಮತ್ತು ತಂತ್ರಜ್ಞಾನ ಸಂಸ್ಥೆ(ಸಿಪೆಟ್) ಕೌಶಲ್ಯ ಮತ್ತು ತಾಂತ್ರಿಕ ತರಬೇತಿ ಕೇಂದ್ರ, ವತಿಯಿಂದ ಸಿಪೆಟ್ ಸಂಸ್ಥೆಯು ಭಾರತ ರಸಾಯನ ಪೆಟ್ರೋರಸಾಯನ ಮತ್ತು ರಸಗೊಬ್ಬರ ಸಚಿವಾಲಯದ ಸ್ವಾಯತ್ತ ಸಂಸ್ಥೆಯಾಗಿದೆ. ಸಂಸ್ಥೆಯು ದೇಶದ ಪಾಲಿಮರ್/ಪೆಟ್ರೋಕೆಮಿಕಲ್ಸ್/ ಪ್ಲಾಸ್ಟಿಕ್ಸ್ ಉದ್ಯಮ ಕ್ಷೇತ್ರಕ್ಕೆ ಅಗತ್ಯವಾದ ಮಾನವ ಸಂಪನ್ಮೂಲಕ್ಕೆ ತಾಂತ್ರಿಕ ಶಿಕ್ಷಣ ಹಾಗೂ ಬೆಂಬಲ ನೀಡುವ ಉದ್ದೇಶದೊಂದಿಗೆ ಸೆಂಟ್ರಲ್ ಇನ್ಸ್ಟಿಟ್ಯೂಟ್ ಆಫ್ ಪೆಟ್ರೋಕೆಮಿಕಲ್ಸ್ ಅಂಡ್ ಟೆಕ್ನಾಲಜಿ(ಸಿಪೆಟ್) ಕಾರ್ಯ ನಿರ್ವಹಿಸುತ್ತದೆ ಮತ್ತು ಅಱಕಇಖಿ ಕರ್ನಾಟಕದ ವಿದ್ಯಾರ್ಥಿಗಳು ಪಾಲಿಮರ್ ಕೈಗಾರಿಕಾ ವಲಯದಲ್ಲಿ ಉದ್ಯಮಿಗಳಾಗಿ ಜಾಗತಿಕವಾಗಿ ಗುರುತಿಸಲ್ಪಟ್ಟಿದ್ದಾರೆ. ಮೇ 09 ರಿಂದ 11 ರವರೆಗೆ ಸಿಪೆಟ್ ಸಂಸ್ಥೆಯಲ್ಲಿ ಬೆಳಗ್ಗೆ 10 ರಿಂದ ಸಂಜೆ 6 ರವರೆಗೆ ''ಓಪನ್ ಹೌಸ್'' ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ವಿದ್ಯಾರ್ಥಿಗಳು, ಸಾರ್ವಜನಿಕರು ಸಂಸ್ಥೆಗೆ ಭೇಟಿ ನೀಡಿ ಸಿಪೆಟ್ ನಲ್ಲಿ ಲಭ್ಯವಿರುವ ಶಿಕ್ಷಣ ಸೌಲಭ್ಯ ಮತ್ತು ಉದ್ಯೋಗಾವಕಾಶಗಳ ಕುರಿತು ಮಾಹಿತಿಯನ್ನು ಪಡೆದುಕೊಳ್ಳಬಹುದು. ಹೆಚ್ಚಿನ ಮಾಹಿತಿಗಾಗಿ ದೂ.ಸಂ: 9480253024/ 9791431827 ಅನ್ನು ಸಂಪರ್ಕಿಸಬಹುದು ಎಂದು ಸಿಪೆಟ್ ಮೈಸೂರು ಕಾಲೇಜಿನ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬುದ್ಧ ಪೂರ್ಣಿಮೆಯ ಪ್ರಯುಕ್ತ ಮಾಂಸ ಮಾರಾಟ ನಿಷೇಧ

**ಮೈಸೂರು:** ಮೇ 12 ರಂದು ಬುದ್ಧ ಪೂರ್ಣಿಮೆಯ ಪ್ರಯುಕ್ತ ಮಹಾನಗರ ಪಾಲಿಕೆಗೆ ಸೇರಿದ ಕುರಿ,ಮೇಕೆಗಳ ಕಸಾಯಿಖಾನೆ ಮತ್ತು ಇತರೆ ಎಲ್ಲಾ ಮಾಂಸದ ಅಂಗಡಿಗಳನ್ನು ಮುಚ್ಚಬೇಕು ಹಾಗೂ ಈ ದಿನ(ಕುರಿ/ಮೇಕೆ, ಕೋಳಿ ಮಾಂಸ, ಹಂದಿ ಮಾಂಸ ಮತ್ತು ಮೀನು) ವ್ಯಾಪಾರವನ್ನು ಮೈಸೂರು ನಗರದಲ್ಲಿ ಕಡ್ಡಾಯವಾಗಿ ನಿಷೇಧಿಸಲಾಗಿರುತ್ತದೆ ಎಂದು ಮೈಸೂರು ಮಹಾನಗರ ಪಾಲಿಕೆಯ ಪಾಲಿಕೆ ಆರೋಗ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪ್ರೌಢ ಶಾಲಾ ಶಿಕಕರ ಜೇಷತಾ ಪಟ್ಟಿ ಪ್ರಕಟ:ಆಕ್ಷೇಪಣೆಗಳ ಅಹ್ವಾನ

**ಮೈಸೂರು:** ಹೆಚ್.ಡಿ. ಕೋಟೆ ತಾಲ್ಲೂಕಿನ ಶಾಲಾ ಶಿಕ್ಷಣ ಇಲಾಖೆಯ ಸರ್ಕಾರಿ ಪ್ರೌಢಶಾಲಾ ಸಹಶಿಕ್ಷಕರ ವೃಂದದ ಶಿಕ್ಷಕರುಗಳಿಗೆ ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನ್ಯಾಸಕರ ಹುದ್ದೆಗೆ ಬಡ್ತಿ ನೀಡುವ ಸಂಬಂಧ ಸ್ನಾತಕೋತ್ತರ ವಿದ್ಯಾರ್ಹತೆ ಹೊಂದಿರುವ ಶಿಕ್ಷಕರ ತಾತ್ಕಾಲಿಕ ಸೇವಾ ಜೇಷ್ಠತಾ ಪಟ್ಟಿಯನ್ನು ಇಲಾಖಾ ಅಧಿಕೃತ ವೆಬ್‌ಸೆಟ್ ನಲ್ಲಿ ಪ್ರಕಟಿಸಲಾಗಿದೆ. ಜೇಷ್ಠತಾ ಪಟ್ಟಿಯಲ್ಲಿ ಶಿಕ್ಷಕರು ತಮ್ಮ ಹೆಸರು, ಜೇಷ್ಟತಾ ಕ್ರಮಾಂಕ ಹಾಗೂ ಅದರಲ್ಲಿನ ಮಾಹಿತಿಗಳು ಸರಿ ಇದಿಯಾ ಎಂದು ಸಂಪೂರ್ಣ ಡೇಟಾ ಮತ್ತು ಅಪೂರ್ಣ ಡೇಟಾ ಎರಡರಲ್ಲೂ ಕಡ್ಡಾಯವಾಗಿ ಪರಿಶೀಲಿಸಿಕೊಂಡು ಆಕ್ಷೇಪಣೆಗಳೇನಾದರೂ ಇದ್ದಲ್ಲಿ ಆಕ್ಷೇಪಣಾ ನಮೂನೆ ಸಹಿತ ಪೂರಕ ದಾಖಲೆಗಳೊಂದಿಗೆ ಮೇ 08 ರೊಳಗೆ ಹೆಚ್.ಡಿ. ಕೋಟೆ ತಾಲ್ಲೂಕಿನ ಶಾಲಾ ಶಿಕ್ಷಣ ಇಲಾಖೆಯ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿಗೆ ಸಲ್ಲಿಸಬೇಕೆಂದು ಹೆಚ್.ಡಿ.ಕೋಟೆಯ ಶಾಲಾ ಶಿಕ್ಷಣ ಇಲಾಖೆಯ ಕ್ಷೇತ್ರ ಶಿಕ್ಷಣಾಧಿಕಾರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

**ಮೈಸೂರು:** ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಾರ್ಯಾಲಯದ ವತಿಯಿಂದ ಜಿಲ್ಲೆಯಲ್ಲಿ ಮಾನಸಿಕ ಆರೋಗ್ಯದಿಂದ ಬಳಲುತ್ತಿರುವ ನಿರಾಶ್ರಿತರಿಗೆ ಉತ್ತಮ ಮಾನಸಿಕ ಆರೋಗ್ಯ ಸೇವೆಗಳನ್ನು ಸರ್ಕಾರೇತರ ಸಂಸ್ಥೆಗಳು ತಮ್ಮ ಸ್ವಂತ ಖರ್ಚಿನಲ್ಲಿ ಅಗತ್ಯ ಮೂಲಭೂತ ಸೌಲಭ್ಯಗಳೊಂದಿಗೆ ಪುನರ್ವಸತಿಯನ್ನು ಜಿಲ್ಲಾ ಆಸ್ಪತ್ರೆ ಒದಗಿಸುವ ಬಗ್ಗೆ ಆಸಕ್ತ ಸರ್ಕಾರೇತರ ಸಂಸ್ಥೆಗಳ ಸಹಯೋಗದೊಂದಿಗೆ ಒಡಂಬಡಿಕೆ ಮಾಡಿಕೊಳ್ಳಲು ನಿಯಮಾನುಸಾರ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಮೇ 28 ಕೊನೆಯ ದಿನಾಂಕವಾಗಿದ್ದು, ಹೆಚ್ಚಿನ ಮಾಹಿತಿಯನ್ನು ವೆಬ್‌ಸೈಟ್ ಮೂಲಕ ಪಡೆದುಕೊಳ್ಳಬಹುದಾಗಿದೆ ಎಂದು ಮೈಸೂರು ಜಿಲ್ಲೆಯ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಾಳೆ ಚಾಮರಾಜನಗರ ಪಟ್ಟಣ ಸೇರಿ ವಿವಿಧೆಡೆ ವಿದ್ಯುತ್ ವ್ಯತ್ಯಯ

**ಚಾಮರಾಜನಗರ:** ಕರ್ನಾಟಕ ವಿದ್ಯುತ್ ಪ್ರಸರಣ ನಿಗಮದಿಂದ ಚಾಮರಾಜನಗರ ಉಪವಿಭಾಗ ವ್ಯಾಪ್ತಿಯಲ್ಲಿ ಒಂದನೇ ತ್ರೈಮಾಸಿಕ ನಿರ್ವಹಣೆ ಕಾಮಗಾರಿಯನ್ನು ಮೇ 11 ರಂದು ಹಮ್ಮಿಕೊಂಡಿರುವುದರಿಂದ ಅಂದು ಬೆಳಿಗ್ಗೆ 9 ರಿಂದ ಸಂಜೆ 6 ಗಂಟೆಯವರೆಗೆ ವಿವಿಧೆಡೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ. ಚಾಮರಾಜನಗರ ಟೌನ್-1, ಕೋಡಿಮೋಳೆ, ರಾಮಸಮುದ್ರ, ಮಾದಾಪುರ, ಕಾಗಲವಾಡಿ, ಸೋಮವಾರಪೇಟೆ ಟೌನ್-2, ಹರದನಹಳ್ಳಿ, ಬೇಡರಪುರ, ಟಿ.ಕೆ ಮೋಳೆ, ಶಿವಪುರ, ಗೂಳಿಪುರ ಎನ್.ಜೆ.ವೈ ಹಾಗೂ ಸುತ್ತಮುತ್ತಲ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ. ಸಾರ್ವಜನಿಕರು ನಿಗಮದ ಜೊತೆ ಸಹಕರಿಸಬೇಕು. ವಿದ್ಯುತ್ ಸಂಬಂಧಿತ ದೂರು ಮತ್ತು ಸಹಾಯಕ್ಕಾಗಿ ಗ್ರಾಹಕರು ಉಚಿತ ದೂ.ಸಂ 1912 ಸಂಪರ್ಕಿಸುವಂತೆ ನಿಗಮದ ಕಾರ್ಯನಿರ್ವಾಹಕ ಎಂಜಿನಿಯರ್ ಪ್ರಕಟಣೆಯಲ್ಲಿ ಕೋರಿದ್ದಾರೆ.



# ವಿಜಯಪುರದಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಪುತ್ಥಳಿ ಅನಾವರಣ

**ವಿಜಯಪುರ:** ಪಟ್ಟಣದ ಬಸ್ ನಿಲ್ದಾಣದಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಪುತ್ತಳಿಯನ್ನು ಗುರುವಾರ ಅನಾವರಣಗೊಳಿಸಲಾಯಿತು. ಯುವ ಕಾಂಗ್ರೆಸ್ ಮುಖಂಡ ಭಾನುಚಂದರ್ ಅವರು, ಪ್ರತಿಷ್ಟಾಪಿಸಿದ್ದ ಪುತ್ತಳಿಗೆ ಕಾಂಗ್ರೆಸ್ ಮುಖಂಡ ಹಾಗೂ ದೇವನಹಳ್ಳಿ ಪುರಸಭೆಯ ಮಾಜಿ ಅಧ್ಯಕ್ಷ ಎಂ.ನಾರಾಯಣಸ್ವಾಮಿ ಅವರು, ಮಾಲಾರ್ಪಣೆ ಮಾಡುವ ಮೂಲಕ ಅನಾವರಣಗೊಳಿಸಿದರು.

ಈ ವೇಳೆ ಮಾತನಾಡಿದ ಅವರು, ಹಿಂದೂಗಳಿಗೆ ಭಗವದ್ಗೀತೆ, ಮುಸ್ಲಿಮರಿಗೆ ಕುರಾನ್, ಕ್ರೈಸ್ತರಿಗೆ ಬೈಬಲ್, ಹೀಗೆ ಅವರವರ ಧರ್ಮಾನುಸಾರವಾಗಿ ಧರ್ಮಗ್ರಂಥಗಳಿರಬಹುದು. ಆದರೆ, ಭಾರತ ದೇಶದ ಪ್ರಜೆಗಳಿಗೆ ಒಂದೇ ಒಂದು ಗ್ರಂಥವೇ ಅಂತಿಮ. ಅದು ಸಂವಿಧಾನ. ಡಾ.ಬಿ.ಆರ್.ಅಂಬೇಡ್ಕರ್ ಅವರು, ಅಸ್ಪೃಶ್ಯತೆಯ ಬೆಂಕಿಯಲ್ಲಿ ಬೆಂದರೂ, ಭಾರತ ದೇಶದ ಪ್ರಜೆಗಳೆಲ್ಲರೂ ಸಹೋದರರಂತೆ ಬಾಳಬೇಕು, ಅಸ್ಪೃಶ್ಯತೆಯ ಅಂಧಕಾರ ತೊಲಗಬೇಕು. ಶಿಕ್ಷಣವೆಂಬ ದೀಪದಿಂದ ಮಾತ್ರವೇ ಅದನ್ನು ತೊಲಗಿಸಲು ಸಾಧ್ಯ. ಜಾತಿ ಪದ್ಧತಿ ನಿರ್ಮೂಲನೆಯಾಗಬೇಕು. ರಾಜನು ಮಹಾರಾಣಿಯ ಗರ್ಭದಲ್ಲಿ ಜನಿಸುತ್ತಾನೆ. ಆದರೆ, ದೇಶವನ್ನಾಳುವ ನಾಯಕನು ಮತಪೆಟ್ಟಿಗೆಯಿಂದ ಹುಟ್ಟಬೇಕು ಎಂದು ಸಂಕಲ್ಪ ಮಾಡಿದ ಅಂಬೇಡ್ಕರ್ ಅವರು, ಕೇವಲ ಒಂದು ಸಮುದಾಯಕ್ಕೆ ನಾಯಕರಲ್ಲ. ದೇಶದ ಆಸ್ತಿ. ಅವರನ್ನು ಪ್ರಮುಖವಾದ ಸ್ಥಳಗಳಲ್ಲಿ ಪ್ರತಿಷ್ಟಾಪನೆ ಮಾಡುವ ಮೂಲಕ ಯುವಜನರಿಗೆ ಅವರ ಸಾಧನೆಗಳು, ಗುರಿಯ ಬಗ್ಗೆ ತಿಳಿಸಿಕೊಡುವಂತಹ ಕೆಲಸವಾಗಬೇಕು ಎಂದರು.

ಯುವಮುಖಂಡ ಭಾನುಚಂದರ್ ಮಾತನಾಡಿ, ದೇಶದಲ್ಲಿನ ಪ್ರತಿಯೊಬ್ಬ ವ್ಯಕ್ತಿ, ತನ್ನ ತಾಯಿಯ ಗರ್ಭದಲ್ಲಿರುವಾಗಲಿಂದ ಸತ್ತು ಮಣ್ಣಿಗೆ ಸೇರುವ ತನಕ ತನ್ನ ರಕ್ಷಣೆ ಮಾಡಿಕೊಳ್ಳಲೆಂದು ಕಾನೂನು ರಚಿಸಿರುವ ಅಗ್ರಗಣ್ಯ ನಾಯಕ, ದೇಶಭಕ್ತ ಡಾ.ಬಿ.ಆರ್.ಅಂಬೇಡ್ಕರ್ ಅವರ ಹೆಸರು ಚಿರಸ್ಥಾಯಿಯಾಗಿ ಉಳಿಯಬೇಕು. ಸಣ್ಣ ಮಕ್ಕಳಿಂದ ಹಿಡಿದು, ದೊಡ್ಡವರ ತನಕ, ಅವರನ್ನು ತಿಳಿದುಕೊಳ್ಳಬೇಕು. ವಿಶ್ವದಲ್ಲೆ ಅತ್ಯಂತ ಶ್ರೇಷ್ಟವಾದ ಸಂವಿಧಾನವನ್ನು ಭಾರತಕ್ಕೆ ನೀಡಿದ ಅವರು, ಪೂಜನೀಯರು. ಯುವಕರಿಗೆ, ವಿದ್ಯಾರ್ಥಿಗಳಿಗೆ ಇವರು ಪ್ರೇರಣೆಯಾಗಬೇಕು ಎಂದರು.

ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡಿ, ಪಟಾಕಿಗಳು ಸಿಡಿಸಿ, ಸಿಹಿ ಹಂಚಿಕೆ ಮಾಡಿ, ಸಂಭ್ರಮಿಸಿದರು.

ಮುಖಂಡರಾದ ನಾರಾಯಣಪ್ಪ, ಸುರೇಶ್, ವೆಂಕಟೇಶ್, ಮುನಿಯಪ್ಪ, ನರಸಿಂಹಮೂರ್ತಿ, ರಾಘವ, ತೇಜಾಶ್ರೀನಿವಾಸ್, ಚಂದ್ರು, ಆಜಾದ್, ರಾಜು, ವೆಂಕಟಸ್ವಾಮಿ, ದೇವರಾಜು, ಮುಂತಾದವರು ಹಾಜರಿದ್ದರು.



ವಕೀಲ ವೇಮಗಲ್ ನರೇಂದ್ರಬಾಬು ಸಲಹೆ

# ಭಯೋತ್ಪಾದನೆ ಮಟ್ಟಹಾಕಲು ಬೆಂಬಲಿಸಿ

**ಕೋಲಾರ:** ಭಯೋತ್ಪಾಧನೆ ವಿರುದ್ಧ ಮೋಧೀಜಿ ಸಾರಿರುವ ಯುದ್ಧಕ್ಕೆ ನಮ್ಮೆಲ್ಲರ ಬೆಂಬಲವೇ ಪ್ರೋತ್ಸಾಹ ಎಂದು ಹಿರಿಯ ವಕೀಲ ಹಾಗೂ ಆಲ್ ಇಂಡಿಯಾ ಅಡ್ವೋಕೇಟ್ಸ್ ಅಸೋಸಿಯೇಷನ್ ಜಿಲ್ಲಾ ಘಟಕ ಅಧ್ಯಕ್ಷ ವೇಮಗಲ್ ನರೇಂದ್ರಬಾಬು ಕರೆ ನೀಡಿದರು.

ಕೋಲಾರದ ಎಸ್‌ಪಿ ಮನೆಯ ಪಕ್ಕದಲ್ಲಿರುವ ವೇಮಗಲ್ ನರೇಂದ್ರಬಾಬು ಲಾ ಚೇಂಬರ್‌ನಲ್ಲಿ ದರ್ಗಾ ಇ ಹಜರತ್ ಸರ್ಗಿರೋ ಅಲಿ ಷಾ ಮ್ಯಾನೇಜ್‌ಮೆಂಟ್ ಟ್ರಸ್ಟ್ ವತಿಯಿಂದ ಮಾಡಿದ ಸನ್ಮಾನವನ್ನು ಸ್ವೀಕರಿಸಿ ಅವರು ಮಾತನಾಡಿದರು.

ಭಯೋತ್ಪಾಧನೆ ಜಾಗತಿಕ ಮಟ್ಟದಲ್ಲಿ ಕಾಡಿರುವ ತೀರಾ ಅನಿಷ್ಟ ಪಿಡುಗಾಗಿದೆ. ಭಯೋತ್ಪಾಧನೆಯಿಂದ ತಮ್ಮ ಸಿದ್ಧಾಂಥಗಳನ್ನು ಹೇರುವುದು ವೈಯುಕ್ತಿಕ ಹಕ್ಕುಗಳ ಧಮನವೇ ಆಗುತ್ತದೆ. ಪ್ರತಿಯೊಬ್ಬನಿಗೂ ತನ್ನ ಧರ್ಮ, ತನ್ನ ಭಾಷೆ, ತನ್ನ ಆಚಾರ-ಆಹಾರ, ಉಡುಗೆ-ವೃತ್ತಿ-ವಾಸಿಸುವ ವೈಯುಕ್ತಿಕ ಹಕ್ಕಿರುತ್ತದೆ. ಅವುಗಳನ್ನು ಪೋಷಿಸುವ ರಾಜ್ಯ ಕಲ್ಯಾಣ ರಾಜ್ಯವಾಗುವುದು. ಆದರೆ ಭಯ ಮೂಡಿಸಿ ತಮ್ಮ ಸಿದ್ಧಾಂಥಗಳನ್ನು ಹೇರುವುದು ಅತ್ಯಂತ ವಿಕೃತ, ಭೀಭತ್ಸ್ಯ ಕೃತ್ಯವಾಗುವುದು ಎಂದು ಅವರು ಖಂಡಿಸಿದರು.

ನಮ್ಮ ಪ್ರಧಾನಿ ಮೋಧೀಜಿ ಭಯೋತ್ಪಾಧನೆ ವಿರುದ್ಧ ತೆಗೆದುಕೊಂಡಿರುವ ಯುದ್ಧ ನಿರ್ಧಾರವು ಅತ್ಯಂತ ಪ್ರಬುದ್ಧ, ಪೂರ್ವಾಗಾಮಿ, ಆರೋಗ್ಯಕರವಾಗಿದೆ. ಇವು ಸಾರಿರುವ ಈ ಯುದ್ಧ ಕೇವಲ ಎರಡು ರಾಷ್ಟ್ರಗಳ ನಡುವೆ ಮಾತ್ರವಲ್ಲ. ಇಡೀ ಪ್ರಪಂಚದ ಭಯೋತ್ಪಾಧನೆ ವಿರುದ್ಧ ಯುದ್ಧವಾಗಿದೆ. ವಿಶ್ವಗುರು ಪಾತ್ರಕ್ಕೆ ಮೋಧೀಜಿ ಪಾತ್ರರು ಎಂಬುದಕ್ಕೆ ಇದೇ ಅತ್ಯುತ್ತಮ ಉಧಾಹಣೆಯೆನಿಸುತ್ತದೆ ಎಂದು ಶ್ಲಾಘಿಸಿದರು.



ಮೋಧೀಜಿ ಸಾರಿರುವ ಯುದ್ಧವು ಬಾಹ್ಯ ಹಾಗೂ ಆಂತರಿಕ ಎರಡೂ ಯುದ್ಧಗಳಿಗೆ ನೀಡಿರುವ ಅತ್ಯುತ್ತಮ ಉತ್ತರವಾಗಿದೆ. ಭಯೋತ್ಪಾಧನೆ ನಿವಾರಣೆಯಾದಲ್ಲಿ, ಇಲ್ಲವೇ ನಿಗ್ರಹವಾದಲ್ಲಿ, ನಮ್ಮ ರಾಷ್ಟ್ರದಲ್ಲಿದ್ದು ಭಯೋತ್ಪಾಧನೆಯತ್ತ ಒಲವು ಹೊಂದಿರುವವರು, ಪ್ರೋತ್ಸಾಹಿಸುವವರು ಅನ್ಯಗತಿಯಿಲ್ಲದೇ ನಮ್ಮ ದೇಶದ ಸ್ವಾಮಿತ್ವವನ್ನು ಒಪ್ಪಿಕೊಳ್ಳಲೇಬೇಕಾಗುವುದು ಎಂದರು.

ಪ್ರಪಂಚದಲ್ಲಿ ಭಯೋತ್ಪಾಧನೆ ಎದುರಿಸುತ್ತಿರುವ ಪ್ರತಿ ರಾಷ್ಟ್ರ ಈ ಸುಸಂದರ್ಭದಲ್ಲಿ ಮೋಧೀಜಿ ಜೊತೆ ಕೈಜೋಡಿಸುವುದು ನಿರೀಕ್ಷಿತ. ಇದರಿಂದ ಮಾನವ ಅಕ್ರಮ ಸಾಗಾಣಿಕೆ, ಮಾಧಕ ವಸ್ತು ಸಾಗಣೆ, ನಿರಾಶ್ರಿತರ ವಲಸೆ, ಖೋಟಾ ನೋಟು ವ್ಯವಹರಣೆ, ನಕಲಿ ಔಷಧ ವ್ಯವಹರಣೆ, ನೆಟ್ ಬ್ಯಾಂಕಿಂಗ್ ಮೋಸ, ಒತ್ತೆಯಾಗಿರಿಸುವಿಕೆ, ಅಕ್ರಮ ಗುಂಪುಗಾರಿಕೆ, ಲಂಚಗುಳಿತನ, ಕ್ಷುಲ್ಲಕ ರಾಜಕಾರಣ ಜಾಗತಿಕ ಮಟ್ಟದಲ್ಲಿಯೇ ನಿವಾರಣೆಯಾಗುವುದು ಎಂದು ಹೇಳಿದರು.

ಯುದ್ಧ ಎಂದ ಮೇಲೆ ಸಾವು-ನೋವು-ನಷ್ಟ ನಿರೀಕ್ಷಿತ. ಸಾಯಿಸುವುದು-ಸಾಯುವುದು ಎರಡರಲ್ಲೊಂದು ಸಂಭವಿಸುವುದು ನಿರೀಕ್ಷಿತ. ಆದರೆ ಈ ಯುದ್ಧದಿಂದ ಇಡೀ ಪ್ರಪಂಚದಲ್ಲಿ ನೆಲೆಸುವ ವಿಶ್ವಶಾಂತಿಯನ್ನು ನೆನೆಸಿಕೊಳ್ಳಿ. ಇದೊಂದು ಮೋಧೀಜಿ ಸಾರಿರುವ ಧರ್ಮಯುದ್ಧವಾಗಿದೆ. ಇದರಿಂದ ಕಲ್ಯಾಣರಾಜ್ಯ ನೆಲೆಸುವುದು ಎಂದು ಕರೆ ನೀಡಿದರು.

ಕೋಲಾರದ ಹೊರ ವಲಯದಲ್ಲಿರುವ ಸುಲ್ತಾನ್ ತಿಪ್ಪಸಂದ್ರ ಗ್ರಾಮದಲ್ಲಿ ತಮ್ಮ ಸಮಾದಿಯನ್ನು ನಿರ್ಮಿಸುವಂತೆ ತನ್ನ ಪ್ರಥಮ ಶಿಷ್ಯನಾದ ರೌನಕ್ ಅಲಿ ಷಾ ರವರಿಗೆ ಸೂಚಿಸಿ, ಅದಕ್ಕಾಗಿಯೇ 16 ಗುಂಟೆ ಜಮೀನನ್ನು ಧರ್ಮಗುರು ಜಮಾಲ್ ಷಾ ರವರು ಖರೀಧಿಸಿದ್ದರು. ಜಮೀನಿನಲ್ಲಿ ಜಮಾಲ್‌ಷಾ ಹಾಗೂ ರೌನಕ್ ಅಲಿ ಷಾ ಇಬ್ಬರೂ ಸೇರಿ ಆಲಂ ಕುಷಾಯಿ ನಿರ್ಮಿಸಿ ಧಾರ್ಮಿಕ ಕಾರ್ಯಕ್ರಮಗಳನ್ನು ಪ್ರತಿನಿತ್ಯ ನಡೆಸಿಕೊಂಡು ಬಂದಿದ್ದರು. ಇಲ್ಲಿಯೇ ಧರ್ಮಗುರು ಇರಲು ಒಂದು ಕೊಠಡಿಯನ್ನೂ ನಿರ್ಮಿಸಲಾಗಿತ್ತು. ಆಮಾಲ್ ಷಾ ನಿಧನಾನಂತರ ಅವರ ಆಶಯದಂತೆಯೇ ಇದೇ ಜಮೀನಿನಲ್ಲಿ ಅವರ ಸಮಾದಿಯನ್ನು, ದರ್ಗಾವನ್ನೂ ನಿರ್ಮಿಸಿ ಪ್ರತಿ ವರ್ಷ ಉರುಸ್ ಆಚರಿಸಿಕೊಂಡು ಬರಲಾಗಿತ್ತು.

ಆದರೆ ಜಮಾಲ್ ಷಾ ಖರೀಧಿಸಿದ್ದ ಜಮೀನು ತುಂಡು ಭೂಮಿ ಪರಭಾರೆ ನಿಷೇಧ ಕಾಯ್ದೆಯಡಿ ನೋಂಧಣಿಯಾಗಿರಲಿಲ್ಲ. ಇದನ್ನು ಕಂಡುಕೊಂಡ ಕೆಲವರು ಆ ಜಮೀನನ್ನು ಇತ್ತೀಚೆಗೆ ತಾವು ಖರೀಧಿಸಿದಂತೆ ನೋಂಧಾಯಿಸಿಕೊಂಡು ರೌನಕ್‌ಅಲಿಷಾ ದರ್ಗ ಪ್ರವೇಶಿಸದಂತೆಯೇ ನಿರ್ಬಂಧಕಾಜ್ಞೆ ಆದೇಶವನ್ನು ಪಡೆದುಕೊಂಡು ಧಾರ್ಮಿಕ ಚಟುವಟಿಕೆಗಳಿಗೆ ಅಡ್ಡಿಪಡಿಸಿದ್ದರು. ಈ ವಿರುದ್ಧ ರೌನಕ್ ಅಲಿ ಷಾ ರವರ ಮಗನಾದ ಷೇಕ್ ನವಾಜ್ ಪಾಷ ರವರು ಸಿವಿಲ್ ನ್ಯಾಯಾಲಯದಿಂದ ನಿರ್ಬಂಧಕಾಜ್ಞೆ ತಂದು ಈ ಬಾರಿಯ ರಂಜಾನ್ ಹಬ್ಬವನ್ನು ದರ್ಗಾರದಲ್ಲಿ ಆಚರಿಸಿದ್ದರು. ಹೀಗಾಗಿ ತಮ್ಮಪರ ವಕಾಲತ್ತು ವಹಿಸಿ ಸಿವಿಲ್ ನ್ಯಾಯಾಲಯದಿಂದ ನಿರ್ಬಂಧಕಾಜ್ಞೆ ಕೊಡಿಸಿದ ಹಿರಿಯ ವಕೀಲರ ವೇಮಗಲ್ ನರೇಂದ್ರಬಾಬು ರವರಿಗೆ ದರ್ಗಾ ಇ ಹಜರತ್ ಸರ್ಗಿರೋ ಅಲಿ ಷಾ ಮ್ಯಾನೇಜ್‌ಮೆಂಟ್ ಟ್ರಸ್ಟ್ ವತಿಯಿಂದ ಸನ್ಮಾನಿಸಲಾಯಿತು.

## ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಅನುತ್ತೀರ್ಣರಾಗಿರುವ ವಿದ್ಯಾರ್ಥಿಗಳಿಗೆ ವಿಶೇಷ ತರಬೇತಿ

**ವಿಜಯಪುರ:** ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಅನುತ್ತೀರ್ಣರಾಗಿರುವ ವಿದ್ಯಾರ್ಥಿಗಳು, ಪುನಃ ಪರೀಕ್ಷೆ ಬರೆದು ಉತ್ತೀರ್ಣರಾಗಲು ಸರಕಾರ ಅವಕಾಶ ಕಲ್ಪಿಸಿರುವ ಹಿನ್ನೆಲೆಯಲ್ಲಿ, ಪಟ್ಟಣದ ಸರಕಾರಿ ಪ್ರೌಢಶಾಲೆಗಳಲ್ಲಿ, ವಿದ್ಯಾರ್ಥಿಗಳನ್ನು ಪರೀಕ್ಷೆಗೆ ಸಜ್ಜುಗೊಳಿಸಲಾಗುತ್ತಿದೆ.

ಶಿಕ್ಷಣ ಇಲಾಖೆಯ ನಿರ್ದೇಶನದಂತೆ, ಅನುತ್ತೀರ್ಣರಾಗಿರುವ ವಿದ್ಯಾರ್ಥಿಗಳು ಎರಡು ಬಾರಿ ಪರೀಕ್ಷೆ ಬರೆಯಲು ಅವಕಾಶ ಇರುವ ಕಾರಣ, ಪುನಃ ವಿದ್ಯಾರ್ಥಿಗಳಿಂದ ಪರೀಕ್ಷೆಗೆ ನೋಂದಣಿ ಮಾಡಿಸಿ, ಅವರಿಗೆ ವಿಷಯವಾರು ಸಮಯವನ್ನು ನಿಗದಿಗೊಳಿಸಿಕೊಂಡು, ವಿಶೇಷ ತರಗತಿಗಳನ್ನು ನಡೆಸಲಾಗುತ್ತಿದೆ.

ಪಟ್ಟಣದ ಸರಕಾರಿ ಪದವಿ ಪೂರ್ವ ಕಾಲೇಜು ಪ್ರೌಢಶಾಲೆಯ ವಿಭಾಗ ಹಾಗೂ ಸರಕಾರಿ ಬಾಲಕಿಯರ ಪ್ರೌಢಶಾಲೆ, ಮೌಲಾನಾ ಆಜಾದ್ ಪ್ರೌಢಶಾಲೆಗಳಲ್ಲಿ ವಿದ್ಯಾರ್ಥಿಗಳಿಗೆ ವಿಶೇಷ ತರಬೇತಿ ನೀಡಲಾಗುತ್ತಿದೆ. ಶಿಕ್ಷಕರು ವಿದ್ಯಾರ್ಥಿಗಳ ಮನೆಗಳಿಗೆ ಭೇಟಿ ನೀಡಿ, ಪರೀಕ್ಷೆಗೆ ಮಾಡಿಕೊಳ್ಳುತ್ತಿರುವ ಸಿದ್ಧತೆಗಳ ಕುರಿತು ಪರಿಶೀಲನೆ ನಡೆಸಿ, ಪ್ರೋತ್ಸಾಹ ಮಾಡುತ್ತಿದ್ದಾರೆ.

ಉಪಪ್ರಾಂಶುಪಾಲ ಪಿ.ವೆಂಕಟೇಶ್ ಮಾತನಾಡಿ, ನಮ್ಮ ಶಾಲೆಯಲ್ಲಿ ಅನುತ್ತೀರ್ಣರಾಗಿರುವ ವಿದ್ಯಾರ್ಥಿಗಳು, ಉತ್ತೀರ್ಣರಾಗಿದ್ದರೂ, ಕೆಲವು ವಿಷಯಗಳಲ್ಲಿ ಕಡಿಮೆ ಅಂಕಗಳನ್ನು ಗಳಿಸಿಕೊಂಡಿರುವ ವಿದ್ಯಾರ್ಥಿಗಳಿಗೂ ವಿಶೇಷ ತರಗತಿಗಳನ್ನು ಮಾಡುತ್ತಿದ್ದೇವೆ. ನಮ್ಮ ಶ್ರಮಕ್ಕೆ ತಕ್ಕಂತೆ ಪೋಷಕರೂ ಸಹಾ ವಿದ್ಯಾರ್ಥಿಗಳಿಗೆ ಹೆಚ್ಚಿನ ಪ್ರೋತ್ಸಾಹ ನೀಡಿದರೆ, ಅವರು ಉತ್ತೀರ್ಣರಾಗುವುದರಲ್ಲಿ ಅನುಮಾನವಿಲ್ಲ. ಇಲಾಖೆ ಉಪನಿರ್ದೇಶಕರ ಮಾರ್ಗದರ್ಶನದಲ್ಲಿ ವಿದ್ಯಾರ್ಥಿಗಳಿಗೆ ವಿಶೇಷ ತರಗತಿಗಳೊಂದಿಗೆ ಕಿರುಪರೀಕ್ಷೆಗಳನ್ನು ನಡೆಸುತ್ತಿದ್ದೇವೆ ಎಂದರು.



## ವಿವಿಧ ಹುದ್ದೆಗಳಿಗೆ ನೇರ ಸಂದರ್ಶನ

**ಚಿಕ್ಕಬಳ್ಳಾಪುರ:** ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ಹಾಗೂ ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜು, ಚಿಕ್ಕಬಳ್ಳಾಪುರ ಇವರ ಸಹಯೋಗದಲ್ಲಿ ಜಿಲ್ಲೆಯ ಉದ್ಯೋಗಾಕಾಂಕ್ಷಿಗಳಿಗಾಗಿ ಉದ್ಯೋಗಾವಕಾಶವನ್ನು ಕಲ್ಪಿಸುವ ನಿಟ್ಟಿನಲ್ಲಿ ಮೇ 13 ರಂದು ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜಿನಲ್ಲಿ ವಿವಿಧ ಹುದ್ದೆಗಳಿಗೆ ನೇರ ಸಂದರ್ಶನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಜಿಲ್ಲೆಯ ವಿವಿಧ ಖಾಸಗಿ ಕಂಪನಿಗಳು ಉದ್ಯೋಗ ನೀಡಲು ಮುಂದೆ ಬಂದಿವೆ. ಆಸಕ್ತ ಅಭ್ಯರ್ಥಿಗಳು ಭಾಗವಹಿಸಬಹುದಾಗಿದೆ. ಅರ್ಹತೆ:- ಎಸ್.ಎಸ್.ಎಲ್.ಸಿ ಉತ್ತೀರ್ಣ ಅಥವಾ ಅನುತ್ತೀರ್ಣ, ಪಿ.ಯು.ಸಿ, ಪದವಿ, ಐ.ಟಿ.ಐ, ಡಿಪ್ಲೊಮೋ ಪಾಸಾದ ವಿದ್ಯಾರ್ಥಿಗಳು ನೇರವಾಗಿ ನೇರ ಸಂದರ್ಶನಕ್ಕೆ ಹಾಜರಾಗಬಹುದು. ಸ್ನಾತಕೋತ್ತರ ಮತ್ತು ಇಂಜಿನಿಯರಿಂಗ್ ಪದವಿ ಹೊರತುಪಡಿಸಿ 20 ರಿಂದ 35 ವರ್ಷ ಒಳಗಿರುವ ಅಭ್ಯರ್ಥಿಗಳು ಹಾಜರಾಗುವಾಗ 2 ಸೆಟ್ ಬಯೋಡಾಟ, ಅಂಕಪಟ್ಟಿ, ಆಧಾರ್ ಕಾರ್ಡ್, ಪಾನ್ ಕಾರ್ಡ್, ಬ್ಯಾಂಕ್ ಪಾಸ್ ಬುಕ್ ತರುವುದು ಕಡ್ಡಾಯವಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಮೊ: 9148542728, 8861734824 ಗೆ ಸಂಪರ್ಕಿಸಬಹುದೆಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಉದ್ಯೋಗಾಧಿಕಾರಿ ಎಂ. ಪ್ರಸಾದ್ ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹೇಮರೆಡ್ಡಿ ಮಲ್ಲಮ್ಮ ಜಯಂತಿ

**ಚಿಕ್ಕಬಳ್ಳಾಪುರ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಚಿಕ್ಕಬಳ್ಳಾಪುರ ಜಿಲ್ಲೆ ಇವರ ಸಂಯುಕ್ತಾಶ್ರಯದಲ್ಲಿ ಶ್ರೀ ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಜಯಂತಿಯನ್ನು ಮೇ 12 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಡಳಿತ ಭವನದ ಜಿಲ್ಲಾಧಿಕಾರಿಗಳ ಕಚೇರಿಯ 2ನೇ ಮಹಡಿ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರ ಡಿ.ಎಂ. ರವಿಕುಮಾರ್ ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮರದ ಕೊಂಬೆ ಮುರಿದುಬಿದ್ದು, ಬಾಲಕ ಸಾವು

**ವಿಜಯಪುರ:** ಪಟ್ಟಣದಿಂದ ದೇವನಹಳ್ಳಿಯ ಕಡೆಗೆ ಸಂಚರಿಸುವ ಮುಖ್ಯರಸ್ತೆಯಲ್ಲಿರುವ ಅಶೋಕ ನಗರದ ಕ್ರಾಸ್ ಬಳಿಯಲ್ಲಿ ಮಾವಿನ ಮರದ ಕೊಂಬೆಯೊಂದು ಮುರಿದು ಬಿದ್ದಿರುವ ಪರಿಣಾಮ, ದ್ವಿಚಕ್ರ ವಾಹನದಲ್ಲಿ ಸಾಗುತ್ತಿದ್ದ, ಆಂಧ್ರಮೂಲದ ಪೊದ್ದಟೂರಿನ ಮುರಳೀಕೃಷ್ಣ ಗಂಭೀರವಾಗಿ ಗಾಯಗೊಂಡಿದ್ದು, ಇವರ ಮಗ ವರುಣ್ (15) ಸ್ಥಳದಲ್ಲೆ ಸಾವನ್ನಪ್ಪಿರುವ ದುರ್ಘಟನೆ ಶುಕ್ರವಾರ ನಡೆದಿದೆ.



ವಿಜಯಪುರದ ಕಡೆಯಿಂದ ದೇವನಹಳ್ಳಿಯ ಕಡೆಗೆ ಹೊರಟಿರುವ ಸಮಯದಲ್ಲಿ ಮಾವಿನಮರದ ಕೊಂಬೆಯೊಂದು ಇದ್ದಕಿದ್ದಂತೆ ಮುರಿದು ಬಿದ್ದ ಪರಿಣಾಮ, ಮುರಳೀಕೃಷ್ಣ ಅವರ ತಲೆಗೆ ತೀವ್ರವಾದ ಪೆಟ್ಟು ಬಿದ್ದು, ರಕ್ತದ ಮಡುವಿನಲ್ಲಿ ಬಿದ್ದಿದ್ದರೆ, ದ್ವಿಚಕ್ರ ವಾಹನದ ಹಿಂದೆ ಕುಳಿತಿದ್ದ ಮಗ ವರುಣ್, ಅವರ ಕುತ್ತಿಗೆಗೆ ಬಲವಾಗಿ ಬಿದ್ದಿರುವ ಕಾರಣ, ಸ್ಥಳದಲ್ಲೆ ಸಾವನ್ನಪ್ಪಿದ್ದಾನೆ. ರಕ್ತದ ಮಡುವಿನಲ್ಲಿ ಕೊಂಬೆಯ ಕೆಳಗೆ ಬಿದ್ದಿದ್ದ ಮುರಳೀಕೃಷ್ಣ ಅವರು, ತಕ್ಷಣ, ಕಾರೊಂದರಲ್ಲಿ ಸಮುದಾಯ ಆರೋಗ್ಯ ಕೇಂದ್ರಕ್ಕೆ ಸಾಗಿಸಿದರು.

ಸಮುದಾಯ ಆರೋಗ್ಯ ಕೇಂದ್ರದಲ್ಲಿ ಪ್ರಥಮ ಚಿಕಿತ್ಸೆ ನೀಡಿದ ವೈದ್ಯರು, ಹೆಚ್ಚಿನ ಚಿಕಿತ್ಸೆಗಾಗಿ ಬೆಂಗಳೂರಿಗೆ ರವಾನೆ ಮಾಡಿದರು. ಆಸ್ಪತ್ರೆಗೆ ತರುವ ಮೊದಲೇ ವರುಣ್ ಮೃತಪಟ್ಟಿದ್ದಾರೆ ಎಂದು ವೈದ್ಯರು ಹೇಳಿದರು. ಮುಗಿಲು ಮುಟ್ಟಿದ ಆಕ್ರಂಧನ: ಆಂದ್ರದ ಪೊದ್ದಟೂರಿನಿಂದ 30 ವರ್ಷಗಳ ಹಿಂದೆ ವಿಜಯಪುರಕ್ಕೆ ಬಂದು ನೆಲೆಸಿದ್ದ ಮುರಳೀಕೃಷ್ಣ ಅವರ ಕುಟುಂಬದವರು, ಬಟ್ಟೆ ವ್ಯಾಪಾರ ಮಾಡಿಕೊಂಡು ಜೀವನ ಸಾಗಿಸುತ್ತಿದ್ದರು. ಮೃತ ವರುಣ್ ಎಸ್.ಎಸ್.ಎಲ್.ಸಿ ಪರೀಕ್ಷೆ ಬರೆದಿದ್ದ. ವರುಣ್ ಮೃತಪಟ್ಟಿದ್ದಾನೆ ಎನ್ನುವ ಸುದ್ದಿ ತಿಳಿಯುತ್ತಿದ್ದಂತೆ, ಕುಟುಂಬಸ್ಥರ ಆಕ್ರಂಧನ ಮುಗಿಲು ಮುಟ್ಟಿತ್ತು.

ಪಟ್ಟಣದಲ್ಲಿ 60 ಸಾವಿರಕ್ಕೂ ಹೆಚ್ಚು ಜನಸಂಖ್ಯೆ ಇದ್ದಾರೆ. ಇಲ್ಲಿರುವ ಸಮುದಾಯ ಆರೋಗ್ಯ ಕೇಂದ್ರದಲ್ಲಿ ತುರ್ತು ಚಿಕಿತ್ಸೆಗಾಗಿ ಬೇಕಾಗಿರುವ ಯಾವುದೇ ಸೌಕರ್ಯಗಳನ್ನು ಒದಗಿಸಿಲ್ಲ. ಇದರಿಂದ ಇಂತಹ ತುರ್ತು ಪರಿಸ್ಥಿತಿಯಲ್ಲಿ ವೈದ್ಯರೂ ಕೂಡಾ ಏನೂ ಮಾಡಲಾರದಂತಹ ಸ್ಥಿತಿಯಲ್ಲಿರಬೇಕಾಗಿದೆ. ಆಸ್ಪತ್ರೆಯಲ್ಲಿ ವೆಂಟಿಲೇಟರ್, ಆಕ್ಸಿಜನ್, ಸೇರಿದಂತೆ ಅಗತ್ಯ ಸೌಲಭ್ಯಗಳನ್ನು ಒದಗಿಸಿಕೊಡಬೇಕು ಎಂದು ಸ್ಥಳೀಯರು ಒತ್ತಾಯಿಸಿದ್ದಾರೆ.

# ಹಜ್ ಯಾತ್ರೆಗೆ ತೆರಳಿದ ಯಾತ್ರಾರ್ಥಿಗಳಿಗೆ ಶುಭ ಹಾರೈಸಿ, ಭಾರತ ದೇಶಕ್ಕಾಗಿ ಪ್ರಾರ್ಥಿಸುವಂತೆ ಸಚಿವ ಮನವಿ

**ವಿಜಯಪುರ:** ಪಟ್ಟಣದಿಂದ ಪವಿತ್ರ ಹಜ್ ಯಾತ್ರೆಗೆ ತೆರಳಿದ ಬೆಂಗಳೂರು ಗ್ರಾಮಾಂತರ ಜಿಲ್ಲಾ ಕಾಂಗ್ರೆಸ್ ಸಮಿತಿ ಅಲ್ಪಸಂಖ್ಯಾತರ ವಿಭಾಗದ ಅಧ್ಯಕ್ಷ ಗೌಸ್ ಖಾನ್ ಅವರ ತಮ್ಮ ಅಲ್ತಾಫ್ ಖಾನ್, ತಹರೀನ್ ಸಲ್ಮಾ, ಯಾಸ್ಮಿನ್ ತಾಜ್, ಸಿ.ಇಂತಿಯಾಜ್ ಅಹಮದ್, ಅವರನ್ನು ಹಜ್ ಭವನದಲ್ಲಿ ಪೌರಾಡಳಿತ ಹಾಗೂ ಹಜ್ ಸಚಿವ ರಹೀಂ ಖಾನ್, ರಾಜ್ಯ ಹಜ್ ಕಮಿಟಿ ಅಧ್ಯಕ್ಷ ಝುಲಿಖಾರ್ ಅಹ್ಮದ್ ಖಾನ್(ಟಿಪ್ಪು) ಅವರು ಮಾಲಾರ್ಪಣೆ ಮಾಡಿ ಶುಭಕೋರಿದರು.

ಈ ವೇಳೆ ಹಜ್ ಭವನದಲ್ಲಿ ಮಾತನಾಡಿದ ಸಚಿವ ರಹೀಂ ಖಾನ್ ಅವರು, ಬೆಂಗಳೂರು ಗ್ರಾಮಾಂತರ ಜಿಲ್ಲೆಯ ವಿಜಯಪುರದಿಂದ 18 ಮಂದಿ ಯಾತ್ರಾರ್ಥಿಗಳು, ಯಾತ್ರೆಗೆ ತೆರಳುತ್ತಿದ್ದಾರೆ. ಯಾತ್ರೆಗೆ ತೆರಳುತ್ತಿರುವ ಪ್ರತಿಯೊಬ್ಬರೂ ಭಾರತ ದೇಶಕ್ಕಾಗಿ ಪ್ರಾರ್ಥನೆ ಸಲ್ಲಿಸಬೇಕು. ನಾವು ಹುಟ್ಟಿ ಬೆಳೆದಿರುವ ಈ ಪವಿತ್ರವಾದ ಭೂಮಿಗೆ ಶತ್ರುರಾಷ್ಟ್ರ ಪಾಕಿಸ್ತಾನದಿಂದ ಯಾವುದೇ ಹಾನಿಯಾಗಬಾರದೆಂದು ಪ್ರಾರ್ಥನೆ ಸಲ್ಲಿಸುವಂತೆ ಮನವಿ ಮಾಡಿದರು.

ಭಾರತದಿಂದ ತಕ್ಕ ತಿರುಗೇಟು: ಪಾಕಿಸ್ತಾನದಲ್ಲಿ ಉಗ್ರರನ್ನು ಪೋಷಿಸುತ್ತಾ, ಪ್ರಪಂಚದಲ್ಲಿ ನಡೆದಿರುವ ವಿಧ್ವಂಸಕ ಕೃತ್ಯಗಳನ್ನು ನಡೆಸಿರುವ ಉಗ್ರರಿಗೆ ಬೆಂಬಲ ನೀಡುತ್ತಿರುವ ಪಾಕಿಸ್ತಾನದ ಮತ್ತೊಂದು ಮುಖವನ್ನು ನಮ್ಮ ದೇಶದ ಸೈನಿಕರು ವಿಶ್ವದೆದುರಿಗೆ ತೆರೆದಿಟ್ಟಿದ್ದಾರೆ. ಕಾಶ್ಮೀರದ ಪಹಲ್ಗಾಮ್ ನಲ್ಲಿ ಉಗ್ರರು ನಡೆಸಿರುವ ದಾಳಿಯ ಮೂಲಕ ಭಾರತವನ್ನು ಕೆಣಕಿರುವ ಪಾಕಿಸ್ತಾನದ ನೆಲಕ್ಕೆ ಹೋಗಿ, ಉಗ್ರರ ಅಡಗುತಾಣಗಳನ್ನು ಧ್ವಂಸಗೊಳಿಸುವ ಮೂಲಕ ನಮ್ಮ ದೇಶದ ತಾಕತ್ತನ್ನು ನಮ್ಮ ಸೈನಿಕರು ಸಾಬೀತು ಪಡಿಸಿದ್ದಾರೆ. ಪಾಕಿಸ್ತಾನ ಈಗಲೂ ಬುದ್ಧಿ ಕಲಿಯದಿದ್ದರೆ, ಮುಂದೊಂದು ದಿನ ತಕ್ಕ ಶಿಕ್ಷೆಯನ್ನು ಅನುಭವಿಸಲೇಬೇಕು ಎಂದು ಸಚಿವ ರಹೀಂಖಾನ್ ಹೇಳಿದರು.



ಬೆಂಗಳೂರು ಗ್ರಾಮಾಂತರ ಜಿಲ್ಲಾ ಕಾಂಗ್ರೆಸ್ ಸಮಿತಿ ಅಲ್ಪಸಂಖ್ಯಾತರ ವಿಭಾಗದ ಅಧ್ಯಕ್ಷ ಗೌಸ್ ಖಾನ್ ಮಾತನಾಡಿ, ದೇಶದಲ್ಲಿ ಹಿಂದೂ, ಮುಸ್ಲೀಂ ಎನ್ನುವ ಬೇಧಬಾವವಿಲ್ಲದೆ, ಸಹೋದರರಂತೆ ಬಾಳ್ವೆ ನಡೆಸುತ್ತಿರುವವರ ನಡುವೆ ಹುಳಿ ಹಿಂಡುವ ಕೆಲಸ ಮಾಡುತ್ತಿರುವ ಪಾಕಿಸ್ತಾನಕ್ಕೆ ತಕ್ಕ ಪಾಠ ಕಲಿಸಲಾಗುತ್ತಿದೆ. ದೇಶದ ಹೆಣ್ಣು ಮಕ್ಕಳ ಸಿಂಧೂರ ಅಳಿಸಲು ಕಾರಣರಾಗಿದ್ದ ಉಗ್ರರ ದೇಶಕ್ಕೆ ನುಗ್ಗಿ ಆಫರೇಷನ್ ಸಿಂಧೂರ ಹೆಸರಿನಲ್ಲಿ ಏರ್ ಸ್ಟ್ರೈಕ್ ಮಾಡಿರುವ ಹೆಣ್ಣು ಮಗಳ ಧೈರ್ಯವನ್ನು ನಾವೆಲ್ಲರೂ ಅಭಿನಂದಿಸುತ್ತೇವೆ. ವಿಶ್ವದಲ್ಲಿ ಉಗ್ರರೇ ಇಲ್ಲದಂತೆ ಸರ್ವ ನಾಶ ಮಾಡಬೇಕಿದೆ ಎಂದರು.

# ಜಗನ್ನಾಥ್, ಗೋಪಿನಾಥ್ ಗೆ ಜನವಿಜ್ಞಾನ ಪ್ರಶಸ್ತಿ

**ಕೋಲಾರ :** ಕರ್ನಾಟಕ ಜ್ಞಾನ ಜ್ಞಾನ ಸಮಿತಿ ಜನ ವಿಜ್ಞಾನ ಚಳುವಳಿಯಲ್ಲಿ ಕ್ರಿಯಾಶೀಲರಾಗಿ ತೊಡಗಿಸಿಕೊಂಡಿರುವ ಕಾರ್ಯಕರ್ತರಿಗೆ ಪ್ರತಿ ವರ್ಷ ಕೊಡಮಾಡುವ ಜನವಿಜ್ಞಾನ ಪ್ರಶಸ್ತಿಗೆ ಜಿಲ್ಲೆಯ ಕೆವಿ ಜಗನ್ನಾಥ್ ಗೋಪಿನಾಥ್ - ಭಾಜನರಾಗಿದ್ದಾರೆ . ಮೇ 10 ಹಾಗೂ 11 ರಂದು ಡಾ.ಎನ್.ಎಸ್. ಹರ್ಡೀ ಕರ್ ನ್ಯಾಷನಲ್ ಸೇವಾದಳ ಅಕಾಡೆಮಿ ಘಟಪ್ರಭಾದಲ್ಲಿ ಜಡೆಯಲಿರುವ ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿ ರಾಜ್ಯ ಸಮಾವೇಶ ಹಾಗೂ ಜನವಿಜ್ಞಾನ ಪ್ರಶಸ್ತಿ ಪ್ರಧಾನ ಸಮಾರಂಭದಲ್ಲಿ ಈ ಈ ಪ್ರಶಸ್ತಿಯನ್ನು ನೀಡಲಾಗುವುದು ಎಂದು ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿ ರಾಜ್ಯ ಉಪಾಧ್ಯಕ್ಷ ಜಿ ಶ್ರೀನಿವಾಸ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ . ಮೂಲತಃ ವಿಜ್ಞಾನ ಕ್ಷೇತ್ರದಲ್ಲಿ ತೊಡಗಿಸಿಕೊಂಡ ಕೊಂಡ ರಾಜನಹಳ್ಳಿ ಕೆ ವಿ ಜಗನ್ನಾಥ್, ಶ್ರೀನಿವಾಸಪುರದ ಸರ್ಕಾರಿ ಪದವಿಪೂರ್ವ ಕಾಲೇಜು ಉಪನ್ಯಾಸಕ ಗೋಪಿನಾಥ್ ರವರುಗಳು ಜನರಲ್ಲಿನ ಅಂದಶ್ರದ್ಧೆ ಮೌಲ್ಯಗಳನ್ನು ಹೋಗಲಾಡಿಸಲು ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿಯ ಮುಖಾಂತರ ಪವಾಡ ರಹಸ್ಯ ಬಯಲು ವೈಜ್ಞಾನಿಕ ಮನೋವೃತ್ತಿ ಹಾಗೂ ವಿವಿಧ ಕಾರ್ಯಕ್ರಮಗಳನ್ನು ಏರ್ಪಡಿಸಿ ಸಮಾಜದ ಜನರಲ್ಲಿ ವೈಜ್ಞಾನಿಕ ಮನೋಭಾವನೆಯನ್ನು ಜಾಗೃತಗೊಳಿಸಲು ಪ್ರಯತ್ನಿಸುತ್ತಿರುವ ಇವರಿಗೆ ರಾಜ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎಸ್. ಬೋಸರಾಜು ಪ್ರಶಸ್ತಿ ಪ್ರಧಾನ ಮಾಡಲಿದ್ದಾರೆ ಎಂದು ತಿಳಿಸಿ, ಇದು ಜಿಲ್ಲೆಗೆ ಹರ್ಷದಾಯಕ ವಿಚಾರ ಎಂದು ತಿಳಿಸಿದ್ದಾರೆ .

# ಪ್ರಥಮ ಪಿ.ಯು.ಸಿ ಪ್ರವೇಶಕ್ಕಾಗಿ ಅರ್ಜಿ ಆಹ್ವಾನ

**ಕೋಲಾರ:** ಪ್ರಸಕ್ತ ಸಾಲಿನಲ್ಲಿ ಡಾ. ಎ.ಪಿ.ಜೆ.ಅಬ್ದುಲ್ ಕಲಾಂ ಪದವಿ ಪೂರ್ವ ವಸತಿ ಕಾಲೇಜು ಗಾಜಲದಿನ್ನೆ, ಕೋಲಾರ, ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ಪದವಿ ಪೂರ್ವ ವಸತಿ ಕಾಲೇಜು ಬಾಳಸಂದ್ರ, ಮುಳಬಾಗಿಲು ಮತ್ತು ಮೌಲಾನ ಆಜಾದ್ ಪದವಿ ಪೂರ್ವ ಕಾಲೇಜು ಕೋಲಾರ ಇಲ್ಲಿನ ಪ್ರಥಮ ಪಿ.ಯು.ಸಿ ತರಗತಿಗೆ ಉಚಿತ ಪ್ರವೇಶಕ್ಕಾಗಿ ಸೇವಾಸಿಂಧು ಪೋರ್ಟಲ್‌ನಲ್ಲಿ ಅರ್ಜಿ ಆಹ್ವಾನಿಸಲಾಗಿದೆ. ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಲು ವಿದ್ಯಾರ್ಥಿಗಳು ರಾಜ್ಯದ ನಿವಾಸಿಯಾಗಿರಬೇಕು, ಕುಟುಂಬದ ವಾರ್ಷಿಕ ವರಮಾನವು ರೂ.2.50 ಲಕ್ಷಗಳಿಗೆ ಮೀರಬಾರದು, ಕರ್ನಾಟಕ ರಾಜ್ಯದ ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಅಥವಾ ಅಔಃಖಇ ಪಟ್ಟಿಯಲ್ಲಿರುವ ಬೋರ್ಡ್‌ಗಳಲ್ಲಿ ಉತ್ತೀರ್ಣರಾಗಿರುವ ವಿದ್ಯಾರ್ಥಿಗಳು ಪ್ರಥಮ ಪಿ.ಯು.ಸಿ.ಗೆ ದಾಖಲಾಗಲು ಅರ್ಹರಿರುತ್ತಾರೆ. ವಿಶೇಷಚೇತನ ವಿದ್ಯಾರ್ಥಿಗಳಿಗೆ ಪ್ರವೇಶಾತಿಯಲ್ಲಿ ಶೇ.4 ರಷ್ಟು ಸ್ಥಾನಗಳನ್ನು ಮೀಸಲಿರಿಸಿದೆ. ಕಾಲೇಜಿನಲ್ಲಿ ಮತೀಯ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ಶೇ.75 ರಷ್ಟು ಹಾಗೂ ಶೇ.25 ರಷ್ಟು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದವರ್ಗಗಳ ವಿದ್ಯಾರ್ಥಿಗಳಿಗೆ ಮೀಸಲಾತಿ ಮತ್ತು ಪ್ರತಿ ತರಗತಿಯಲ್ಲಿ ಹೆಣ್ಣು ಮಕ್ಕಳಿಗೆ ಶೇ.50% ಮೀಸಲಿರಿಸಲಾಗಿದೆ, ಪಠ್ಯಪುಸ್ತಕ, ಸಮವಸ್ತ್ರ, ವಸತಿ ಮತ್ತು ಲೇಖನ ಸಾಮಗ್ರಿಗಳನ್ನು ಉಚಿತವಾಗಿ ನೀಡಲಾಗುವುದು. ಆಸಕ್ತಿಯುಳ್ಳ ವಿದ್ಯಾರ್ಥಿಗಳು ಅರ್ಜಿಗಳನ್ನು ಸೇವಾಸಿಂಧು ಪೋರ್ಟಲ್ https://sevasindhuservices.karnataka.gov.in ನಲ್ಲಿ ಸೂಕ್ತ ದಾಖಲೆಗಳೊಂದಿಗೆ ಮೇ 17ರ ವರೆಗೆ ಆನ್‌ಲೈನ್ ಮೂಲಕ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ದೂರವಾಣಿ ಸಂಖ್ಯೆ: 08152-295257, ಡಾ. ಎ.ಪಿ.ಜೆ.ಅಬ್ದುಲ್ ಕಲಾಂ ವಸತಿ ಶಾಲೆ, ಗಾಜಲದಿನ್ನೆ ಕೋಲಾರ: 9686799165/9591205356, ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ, ಮುಳಬಾಗಿಲು: 9900393001/7892859599 ಜಿಲ್ಲಾ ಅಲ್ಪಸಂಖ್ಯಾತರ ಮಾಹಿತಿ ಕೇಂದ್ರ, ಕೋಲಾರ: 7760391781/9964944123 ಮತ್ತು ತಾಲ್ಲೂಕು ಅಲ್ಪಸಂಖ್ಯಾತರ ಮಾಹಿತಿ ಕೇಂದ್ರ, ಮುಳಬಾಗಿಲು: 7899266051/9590922711 ರವರನ್ನು ಸಂಪರ್ಕಿಸಬಹುದು.

ಸಂಜೆ ಮುಗಿಲು
ಶನಿವಾರ
10.5.2025



# ಚಾಮರಾಜನಗರ ವಿ.ವಿ ಅಂತರ ಕಾಲೇಜು ಕ್ರೀಡಾಕೂಟ ವಿಜೇತರು

**ಚಾಮರಾಜನಗರ:** ಚಾಮರಾಜನಗರ ವಿಶ್ವವಿದ್ಯಾನಿಲಯದ ವತಿಯಿಂದ ಆಯೋಜಿಸಲಾಗಿದ್ದ 2024–25ನೇ ಸಾಲಿನ ಕ್ರೀಡಾಕೂಟದಲ್ಲಿ ವಿಜೇತರಾದ ಕಾಲೇಜುಗಳ ವಿವರ ಇಂತಿದೆ.

ಮಹಿಳೆಯರ ವಿಭಾಗದ ಖೋ ಖೋ ಪಂದ್ಯದಲ್ಲಿ ಚಾಮರಾಜನಗರದ ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜು ಪ್ರಥಮ ಸ್ಥಾನ, ಕೊಳ್ಳೇಗಾಲದ ವಾಸವಿ ಪ್ರಥಮ ದರ್ಜೆ ಕಾಲೇಜು ದ್ವಿತೀಯ ಸ್ಥಾನ, ಚಾಮರಾಜನಗರದ ಜೆ.ಎಸ್.ಎಸ್ ಕಾಲೇಜು ತೃತೀಯ ಸ್ಥಾನ ಪಡೆದಿದೆ. ಥ್ರೋ ಬಾಲ್ ಪಂದ್ಯಾವಳಿಯಲ್ಲಿ ಕೊಳ್ಳೇಗಾಲದ ಶ್ರೀ ಮಹದೇಶ್ವರ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಪ್ರಥಮ ಸ್ಥಾನ, ಚಾಮರಾಜನಗರದ ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜು ದ್ವಿತೀಯ ಸ್ಥಾನ, ಕೊಳ್ಳೇಗಾಲ ಜೆ.ಎಸ್.ಎಸ್ ಕಾಲೇಜು ತೃತೀಯ ಸ್ಥಾನ ಪಡೆದುಕೊಂಡಿದೆ. ಬ್ಯಾಡ್ಮಿಂಟನ್ ಪಂದ್ಯಾದಲ್ಲಿ ಚಾಮರಾಜನಗರದ ಜೆ.ಎಸ್.ಎಸ್ ಕಾಲೇಜು ಪ್ರಥಮ ಸ್ಥಾನ, ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜು ದ್ವಿತೀಯ ಸ್ಥಾನ, ಯಳಂದೂರಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ತೃತೀಯ ಸ್ಥಾನ ಪಡೆದಿದೆ. ಕಬ್ಬಡ್ಡಿ ಪಂದ್ಯದಲ್ಲಿ ಕೊಳ್ಳೇಗಾಲ ಜೆ.ಎಸ್.ಎಸ್ ಕಾಲೇಜು ಪ್ರಥಮ ಸ್ಥಾನ, ಚಾಮರಾಜನಗರದ ಜೆ.ಎಸ್.ಎಸ್ ಕಾಲೇಜು ದ್ವಿತೀಯ ಸ್ಥಾನ, ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜು ತೃತಿಯ ಸ್ಥಾನ ಪಡೆದುಕೊಂಡಿದೆ. ಬಾಲ್ ಬ್ಯಾಡ್ಮಿಂಟನ್ ಪಂದ್ಯದಲ್ಲಿ ಕೊಳ್ಳೇಗಾಲದ ಜೆ.ಎಸ್.ಎಸ್ ಕಾಲೇಜು ಪ್ರಥಮ ಸ್ಥಾನ, ಚಾಮರಾಜನಗರದ ಜೆ.ಎಸ್.ಎಸ್ ಕಾಲೇಜು ದ್ವಿತೀಯ ಸ್ಥಾನ, ಕುದೇರು ಸರ್ಕಾರಿ ಪ್ರಥಮ ದರ್ಜೆ ಕಾಲೇಜು ತೃತೀಯ ಸ್ಥಾನ ಪಡೆದಿದೆ. ವಾಲಿಬಾಲ್ ಪಂದ್ಯಾವಳಿಯಲ್ಲಿ ಕೊಳ್ಳೇಗಾಲದ ಜೆ.ಎಸ್.ಎಸ್ ಕಾಲೇಜು ಪ್ರಥಮ ಸ್ಥಾನ, ವಾಸವಿ ಪ್ರಥಮ ದರ್ಜೆ ಕಾಲೇಜು ದ್ವಿತೀಯ ಸ್ಥಾನ, ಚಾಮರಾಜನಗರದ ಜೆ.ಎಸ್.ಎಸ್ ಕಾಲೇಜು ತೃತೀಯ ಸ್ಥಾನ ಪಡೆದುಕೊಂಡಿವೆ.

ಪುರುಷರ ವಿಭಾಗದ ಖೋ ಖೋ ಪಂದ್ಯಾವಳಿಯಲ್ಲಿ ಚಾಮರಾಜನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಪ್ರಥಮ ಸ್ಥಾನ, ಕೊಳ್ಳೇಗಾಲದ ಶ್ರೀ ಮಹದೇಶ್ವರ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ದ್ವಿತೀಯ ಸ್ಥಾನ, ಚಾಮರಾಜನಗರದ ಪಿ.ಜಿ ಸೆಂಟರ್ ಸುವರ್ಣ ಗಂಗೋತ್ರಿ ತೃತೀಯ ಸ್ಥಾನ ಪಡೆದುಕೊಂಡಿದೆ. ತ್ರೋಬಾಲ್ ಪಂದ್ಯದಲ್ಲಿ ಗುಂಡ್ಲುಪೇಟೆಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಪ್ರಥಮ ಸ್ಥಾನ, ಕೊಳ್ಳೇಗಾಲದ ಶ್ರೀ ಮಾದೇಶ್ವರ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ದ್ವಿತೀಯ ಸ್ಥಾನ, ಚಾಮರಾಜನಗರದ ಪಿ.ಜಿ ಸ್ಪೋರ್ಟ್ ಸೆಂಟರ್ ಸುವರ್ಣ ಗಂಗೋತ್ರಿ ತೃತಿಯ ಸ್ಥಾನ ಪಡೆದಿದೆ. ಕಬ್ಬಡ್ಡಿ ಪಂದ್ಯದಲ್ಲಿ ಚಾಮರಾಜನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಪ್ರಥಮ ಸ್ಥಾನ, ಯಳಂದೂರಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ದ್ವಿತೀಯ ಸ್ಥಾನ, ಕೊಳ್ಳೇಗಾಲದ ಶ್ರೀ ಮಾದೇಶ್ವರ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ತೃತೀಯ ಸ್ಥಾನ ಪಡೆದಿದೆ. ವಾಲಿಬಾಲ್ ಪಂದ್ಯಾವಳಿಯಲ್ಲಿ ಗುಂಡ್ಲುಪೇಟೆಯ ಸರ್ಕಾರಿ ಪಥಮ ದರ್ಜೆ ಕಾಲೇಜು ಪ್ರಥಮ ಸ್ಥಾನ, ಕೊಳ್ಳೇಗಾಲದ ಶ್ರೀ ಮಾದೇಶ್ವರ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ದ್ವಿತೀಯ ಸ್ಥಾನ, ಚಾಮರಾಜನಗರದ ಪಿ.ಜಿ ಸ್ಪೋರ್ಟ್ಸ್ ಸೆಂಟರ್ ಸುವರ್ಣ ಗಂಗೋತ್ರಿ ತೃತೀಯ ಸ್ಥಾನ ಪಡೆದುಕೊಂಡಿದೆ. ಬಾಲ್ ಬ್ಯಾಡ್ಮಿಂಟನ್ ಪಂದ್ಯದಲ್ಲಿ ಚಾಮರಾಜನಗರದ ಪಿ.ಜಿ ಸ್ಪೋರ್ಟ್ಸ್ ಸೆಂಟರ್ ಸುವರ್ಣ ಗಂಗೋತ್ರಿ ಪ್ರಥಮ ಸ್ಥಾನ, ಕುದೇರು ಸರ್ಕಾರಿ ಪ್ರಥಮ ದರ್ಜೆ ಕಾಲೇಜು ದ್ವಿತೀಯ ಸ್ಥಾನ, ಕೊಳ್ಳೇಗಾಲದ ಶ್ರೀ ಮಹದೇಶ್ವರ ಪ್ರಥಮ ದರ್ಜೆ ಕಾಲೇಜು ತೃತೀಯ ಸ್ಥಾನ ಪಡೆದಿದೆ. ಬ್ಯಾಡ್ಮಿಂಟನ್ ಪಂದ್ಯದಲ್ಲಿ ಚಾಮರಾಜನಗರದ ಪಿ.ಜಿ ಸ್ಪೋರ್ಟ್ಸ್ ಸೆಂಟರ್ ಸುವರ್ಣಗಂಗೋತ್ರಿ ಪ್ರಥಮ ಸ್ಥಾನ, ಕೊಳ್ಳೇಗಾಲದ ನಿಸರ್ಗ ಪ್ರಥಮ ದರ್ಜೆ ಕಾಲೇಜು ದ್ವಿತೀಯ ಸ್ಥಾನ, ವಾಸವಿ ಪ್ರಥಮ ದರ್ಜೆ ಕಾಲೇಜು ತೃತೀಯ ಸ್ಥಾನ ಪಡೆದುಕೊಂಡಿದೆ ಎಂದು ಚಾಮರಾಜನಗರ ವಿಶ್ವವಿದ್ಯಾಲಯ ದೈಹಿಕ ಶಿಕ್ಷಣ ವಿಭಾಗದ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕೆಕೆಜಿಬಿವಿ, ಕೆಜಿಬಿವಿ ವಸತಿ ಶಾಲೆಗಳ ಪ್ರವೇಶಕ್ಕೆ ಅರ್ಜಿ

**ಚಾಮರಾಜನಗರ:** 2025–26ನೇ ಸಾಲಿಗೆ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಕೆಜಿಬಿವಿ ವಸತಿ ಶಾಲೆ, ಕೆಕೆಜಿಬಿವಿ ವಸತಿ ಶಾಲೆಗಳ ಪ್ರವೇಶಕ್ಕಾಗಿ ಆನ್‌ಲೈನ್ ಹಾಗೂ ಆಫ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಜಿಲ್ಲೆಯಲ್ಲಿ ಹೆಣ್ಣು ಮಕ್ಕಳ ಶೈಕ್ಷಣಿಕ ಪ್ರಗತಿಗಾಗಿ ಹಾಗೂ ಗ್ರಾಮಾಂತರ ಮತ್ತು ನಗರ ಪ್ರದೇಶಗಳಲ್ಲಿ ಆರ್ಥಿಕವಾಗಿ ಹಿಂದುಳಿದ ವಿದ್ಯಾರ್ಥಿನಿಯರಿಗೆ ಶಿಕ್ಷಣವನ್ನು ಉಚಿತವಾಗಿ ಸರ್ಕಾರದ ವತಿಯಿಂದ ನೀಡಲಾಗುತ್ತಿದೆ. ಯಳಂದೂರು ತಾಲ್ಲೂಕಿನ ಕೆಜಿಬಿವಿ ಟೈಪ್–1 ವಸತಿ ಶಾಲೆಗೆ 6 ರಿಂದ 8ನೇ ತರಗತಿಗೆ ದಾಖಲಾತಿ ಮಾಡಿಕೊಳ್ಳಲಾಗುತ್ತಿದೆ. ಚಾಮರಾಜನಗರ ಪಟ್ಟಣ, ಗುಂಡ್ಲುಪೇಟೆ, ಕೊಳ್ಳೇಗಾಲ ಮತ್ತು ಯಳಂದೂರು ತಾಲ್ಲೂಕಿನ ಮೆಲ್ಲಹಳ್ಳಿಯ ಕೆಜಿಬಿವಿ ಟೈಪ್–4 ವಸತಿ ನಿಲಯಗಳಲ್ಲಿ 9 ರಿಂದ 12ನೇ ತರಗತಿಯ ವಿದ್ಯಾರ್ಥಿನಿಯರಿಗೆ ದಾಖಲಾತಿ ಮಾಡಿಕೊಳ್ಳಲಾಗುತ್ತಿದೆ. ಚಾಮರಾಜನಗರ, ಗುಂಡ್ಲುಪೇಟೆ ಮತ್ತು ಕೊಳ್ಳೇಗಾಲ ತಾಲ್ಲೂಕಿನ ಸಿಂಗಾನಲ್ಲೂರು ಕೆಕೆಜಿಬಿವಿ ವಸತಿ ನಿಲಯಗಳಿಗೆ 6 ರಿಂದ 10ನೇ ತರಗತಿಯ ವಿದ್ಯಾರ್ಥಿನಿಯರಿಗೆ ದಾಖಲಾತಿ ಮಾಡಿಕೊಳ್ಳಲಾಗುತ್ತಿದೆ.

ಸದರಿ ವಸತಿ ನಿಲಯಗಳ ವಿದ್ಯಾರ್ಥಿನಿಯರ ದಾಖಲಾತಿ ಪ್ರಕಾರ ಎಸ್.ಸಿ, ಎಸ್.ಟಿ, ಓ.ಬಿ.ಸಿ, ಮೈನಾರಿಟಿ ವರ್ಗಗಳಿಂದ ಶೇ.75ರಷ್ಟು ಮತ್ತು ಬಿ.ಪಿ.ಎಲ್ ವರ್ಗದಿಂದ ಶೇ.25ರಷ್ಟು ದಾಖಲಾತಿ ಮಾಡಿಕೊಳ್ಳಲಾಗುವುದು. ಬಡತನ ರೇಖೆಗಿಂತ ಕೆಳಗಿರುವ (ಬಿ.ಪಿ.ಎಲ್) ಕುಟುಂಬಗಳ ವಿದ್ಯಾರ್ಥಿನಿಯರನ್ನು ಗಣನೆಗೆ ತೆಗೆದುಕೊಂಡು ದಾಖಲು ಮಾಡಿಕೊಳ್ಳಲಾಗುವುದು. ಅನಾಥ ಮಕ್ಕಳು, ತಂದೆ ತಾಯಿ ಇಲ್ಲದ ಮಕ್ಕಳಿಗೆ ಆದ್ಯತೆ ನೀಡಲಾಗುವುದು. ಪ್ರತಿ ವಸತಿ ಶಾಲೆ ಅಥವಾ ನಿಲಯಕ್ಕೆ 100 ವಿದ್ಯಾರ್ಥಿನಿಯರ ದಾಖಲಾತಿಗೆ ಅವಕಾಶವಿರುತ್ತದೆ.

ವಸತಿ ಶಾಲೆಯಲ್ಲಿನ ವಿದ್ಯಾರ್ಥಿನಿಯರಿಗೆ ಶೈಕ್ಷಣಿಕ ಬೋಧನೆಯ ಜೊತೆಗೆ ವೃತ್ತಿಕೌಶಲ ತರಬೇತಿಯನ್ನು ನೀಡಲಾಗುವುದು. ಉಚಿತವಾಗಿ ಊಟ ಮತ್ತು ವಸತಿ ಸೌಲಭ್ಯವನ್ನು ಒದಗಿಸಲಾಗುವುದು. ನುರಿತ ವೈದ್ಯರಿಂದ ಪ್ರತಿ 3 ತಿಂಗಳಿಗೊಮ್ಮೆ ವೈದ್ಯಕೀಯ ತಪಾಸಣೆ ನಡೆಸಿ ಉಚಿತ ವೈದ್ಯಕೀಯ ಚಿಕಿತ್ಸೆ ನೀಡಲಾಗುವುದು. ವಿದ್ಯಾರ್ಥಿನಿಯರಿಗೆ ಪೌಷ್ಠಿಕಾಂಶವುಳ್ಳ ಆಹಾರ ನೀಡುವುದರ ಜೊತೆಗೆ ದೈನಂದಿನ ಬಳಕೆಯ ವಸ್ತುಗಳನ್ನು ಸಹ ಉಚಿತವಾಗಿ ನೀಡಲಾಗುತ್ತಿದೆ. ವಸತಿ ಶಾಲೆ ನಿಲಯಗಳಿಂದ ಆರ್ಥಿಕವಾಗಿ ಹಿಂದುಳಿದ ಹಾಗೂ ಗ್ರಾಮಾಂತರ ಪ್ರದೇಶದ ವಿದ್ಯಾರ್ಥಿನಿಯರಿಗೆ ಹೆಚ್ಚಿನ ಅನುಕೂಲವಾಗುತ್ತಿದೆ.

ಪ್ರಸ್ತುತ ಶೈಕ್ಷಣಿಕ ವರ್ಷದಲ್ಲಿ ಆಫ್‌ಲೈನ್ ಅಥವಾ ಆನ್ ಲೈನ್ ಮೂಲಕ ಅರ್ಜಿಗಳನ್ನು ಮೇ 25ರೊಳಗೆ ಸಲ್ಲಿಸಬೇಕು. ದಾಖಲಾಗಲು ಆಸಕ್ತಿ ಇರುವ ವಿದ್ಯಾರ್ಥಿನಿಯರು, ಪೋಷಕರು ಸಂಬಂಧಿಸಿದ ವಸತಿ ಶಾಲೆ, ವಸತಿ ನಿಲಯಗಳ ಮುಖ್ಯ ಶಿಕ್ಷಕರು, ತಾಲ್ಲೂಕು ಕ್ಷೇತ್ರ ಶಿಕ್ಷಣಾಧಿಕಾರಿಗಳು, ಕ್ಷೇತ್ರ ಸಂಪನ್ಮೂಲ ಸಮನ್ವಯಾಧಿಕಾರಿಗಳು, ಶಿಕ್ಷಣ ಸಂಯೋಜಕರು, ಬಿ.ಆರ್.ಪಿ ಮತ್ತು ಸಿ.ಆರ್.ಪಿ.ಯವರನ್ನು ಸಂಪರ್ಕಿಸಿ ಪ್ರವೇಶ ಪಡೆಯುವಂತೆ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಎಲ್ಲರೂ ಪರಿಸರ ಸ್ವಚ್ಛವಾಗಿಟ್ಟುಕೊಳ್ಳಿ

## ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್. ಚಿದಂಬರ ಸಲಹೆ



**ಚಾಮರಾಜನಗರ:** ಸದ್ಯದಲ್ಲಿಯೇ ಮಳೆಗಾಲ ಆರಂಭವಾಗುತ್ತಿದ್ದು, ಪ್ರತಿಯೊಬ್ಬರು ತಮ್ಮ ಸುತ್ತಮುತ್ತಲಿನ ಪರಿಸರವನ್ನು ಸ್ವಚ್ಛವಾಗಿಟ್ಟುಕೊಳ್ಳಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್. ಚಿದಂಬರ ಅವರು ತಿಳಿಸಿದರು.

ನಗರದ ಶ್ರೀ ಚಾಮರಾಜೇಶ್ವರ ದೇವಸ್ಥಾನದ ಮುಂಭಾಗದಲ್ಲಿಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿಗಳ ಕಚೇರಿ ಸಹಯೋಗದಲ್ಲಿ ವಿಶ್ವ ಮಲೇರಿಯಾ ದಿನಾಚರಣೆ ಅಂಗವಾಗಿ ಹಮ್ಮಿಕೊಳ್ಳಲಾಗಿದ್ದ ಜಾಥಾಗೆ ಚಾಲನೆ ನೀಡಿ ಅವರು ಮಾತನಾಡಿದರು.

ಮಳೆಗಾಲ ಹತ್ತಿರವಾಗುತ್ತಿರುವ ಹಿನ್ನೆಲೆಯಲ್ಲಿ ಮನೆಗಳ ಹೊರಭಾಗ, ಇತರೆ ಸ್ಥಳಗಳಲ್ಲಿ ನೀರು ನಿಂತು ಸೊಳ್ಳೆಗಳ ಆವಾಸಸ್ಥಾನವಾಗಲು ಅವಕಾಶವಾಗದಂತೆ ಎಚ್ಚರ ವಹಿಸಬೇಕು. ಮಲೇರಿಯಾ ಕಾಯಿಲೆಯು ಸೊಳ್ಳೆ ಕಚ್ಚುವುದರಿಂದ ಹರಡಲಿದ್ದು, ಇದರ ನಿರ್ಮೂಲನೆಗೆ ಪ್ರತಿಯೊಬ್ಬರು, ಪ್ರತಿಯೊಂದು ಸ್ಥಳವು ಸ್ವಚ್ಛತೆಯಿಂದ ಕೂಡಿರುವಂತೆ ನೋಡಿಕೊಳ್ಳ ಬೇಕಾಗಿರುವುದು ಅವಶ್ಯವಾಗಿದೆ ಎಂದರು.

ಅನಾಫಿಲಿಸ್ ಸೊಳ್ಳೆ ಮಳೆಗಾಲದಲ್ಲಿ ಹೆಚ್ಚಾಗಿ ಬೆಳೆಯುತ್ತದೆ. ಆದ್ದರಿಂದ ನಮ್ಮ ಸುತ್ತಮುತ್ತಲಿನ ಪರಿಸರದಲ್ಲಿ ನೀರು ನಿಲ್ಲದಂತೆ ಸ್ವಚ್ಛವಾಗಿಟ್ಟುಕೊಳ್ಳಬೇಕು. ಕೆರೆ, ಕಟ್ಟೆಗಳಿಗೆ ಲಾರ್ವಾಹಾರಿ ಮೀನುಗಳಾದ ಗ್ಯಾಂಬೂಷಿಯ ಹಾಗೂ ಗಪ್ಪಿ ಮೀನುಗಳನ್ನು ಬಿಡಬೇಕು. ಮಲೇರಿಯಾದಿಂದ ಉಂಟಾಗುವ ಚಳಿ, ಜ್ವರ, ಬೆವರುವ ಲಕ್ಷಣಗಳು ಕಂಡುಬಂದರೆ ಕೂಡಲೇ ಹತ್ತಿರದ ಆರೋಗ್ಯ ಕೇಂದ್ರ ಅಥವಾ ಆಸ್ಪತ್ರೆಗೆ ತೆರಳಿ ಚಿಕಿತ್ಸೆ ಪಡೆಯಬೇಕು. ಮಲೇರಿಯಾ ರೋಗವನ್ನು ಹೋಗಲಾಡಿಸಲು ಸೊಳ್ಳೆಗಳ ನಿಯಂತ್ರಣ ಮಾಡಬೇಕು ಎಂದು ತಿಳಿಸಿದರು.

ಮಲೇರಿಯಾ ನಿರ್ಮೂಲನೆ ಸಂಬಂಧ ಸಾರ್ವಜನಿಕರಿಗೆ ಜಾಗೃತಿ ಮೂಡಿಸಬೇಕು. ಸೊಳ್ಳೆಯಿಂದ ರಕ್ಷಣೆ ಪಡೆಯಲು ಸೊಳ್ಳೆ ಪರದೆ ಬಳಸಬೇಕು. ಸಂಜೆ ವೇಳೆ ಹೊರಗೆ ಓಡಾಡದಂತೆ ತಿಳಿಹೇಳಬೇಕು. ಆ ಮೂಲಕ ಮಲೇರಿಯಾ ಜೊತೆಗೆ ಡೆಂಗ್ಯೂ, ಚಿಕೂನ್ ಗುನ್ಯಾ ಕಾಯಿಲೆಗಳನ್ನು ತಡೆಗಟ್ಟಬಹುದು. ಮಲೇರಿಯಾ ಕಾಯಿಲೆ ಬಗ್ಗೆ ಪ್ರತಿಯೊಬ್ಬರು ಜಾಗೃತರಾಗಿ, ನೆರೆಹೊರೆಯವರಿಗೂ ತಿಳಿಸಬೇಕು ಎಂದು ಸಲಹೆ ನೀಡಿದರು.

ಜಿಲ್ಲಾ ಮಲೇರಿಯಾ ಅಧಿಕಾರಿ ಡಾ. ರಾಜೇಶ್‌ಕುಮಾರ್, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ದೊರೆಸ್ವಾಮಿ ನಾಯಕ್, ತಾಲೂಕು ಆರೋಗ್ಯಾಧಿಕಾರಿ ಡಾ. ಶ್ರೀನಿವಾಸ್, ಸರ್ಕಾರಿ ನರ್ಸಿಂಗ್ ಕಾಲೇಜಿನ ಉಪನ್ಯಾಸಕಿ ಪ್ರೇಮಾ, ಜೆಎಸ್‌ಎಸ್ ನರ್ಸಿಂಗ್ ಕಾಲೇಜಿನ ಕಮಲಾ, ಆರೋಗ್ಯ ಇಲಾಖೆಯ ದ್ವಾರಕೀಶ್, ಭಾಸ್ಕರ್, ನಾರಾಯಣಸ್ವಾಮಿ, ಇತರರು ಇದೇ ವೇಳೆ ಇದ್ದರು.

ಜಾಥಾದಲ್ಲಿ ನರ್ಸಿಂಗ್ ಕಾಲೇಜಿನ ವಿದ್ಯಾರ್ಥಿಗಳು ಜಾಗೃತಿ ಮೂಡಿಸುವ ನಾಮಫಲಕ (ಪ್ಲೇ ಕಾರ್ಡ್) ಹಿಡಿದು ಸಾಗಿ ಮಲೇರಿಯಾ ನಿರ್ಮೂಲನೆ ಘೋಷವಾಕ್ಯಗಳನ್ನು ಮೊಳಗಿಸಿದರು. ಚಾಮರಾಜೇಶ್ವರ ದೇವಸ್ಥಾನದಿಂದ ಆರಂಭಗೊಂಡ ಜಾಥಾ ಬಿ. ರಾಚಯ್ಯ ಜೋಡಿರಸ್ತೆ ಮೂಲಕ ಸಾಗಿ ಜಿಲ್ಲಾಡಳಿತ ಭವನದಲ್ಲಿ ಮುಕ್ತಾಯವಾಯಿತು.

# 12ರಂದು ಭಗವಾನ್ ಬುದ್ಧ ಜಯಂತಿ

**ಚಾಮರಾಜನಗರ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದೊಂದಿಗೆ 2569ನೇ ಬುದ್ಧ ಪೂರ್ಣಿಮೆ ಭಗವಾನ್ ಬುದ್ಧ ಜಯಂತಿ ಆಚರಣೆ ಕಾರ್ಯಕ್ರಮವನ್ನು ಮೇ 12ರಂದು ನಗರದಲ್ಲಿ ಹಮ್ಮಿಕೊಳ್ಳಲಾಗಿದೆ.

ಅಂದು ಬೆಳಿಗ್ಗೆ 9.30 ಗಂಟೆಗೆ ನಗರದ ಸಾರನಾಥ ಬೌದ್ಧವಿಹಾರದ ಬಳಿ ಮೆರವಣಿಗೆಗೆ ಚಾಲನೆ ದೊರೆಯಲಿದೆ. ಬೆಳಿಗ್ಗೆ 11.30 ಗಂಟೆಗೆ ಜಿಲ್ಲಾಡಳಿತ ಭವನದ ಆವರಣದಲ್ಲಿರುವ ಜೆ.ಹೆಚ್. ಪಟೇಲ್ ಸಭಾಂಗಣದಲ್ಲಿ ವೇದಿಕೆ ಕಾರ್ಯಕ್ರಮ ನಡೆಯಲಿದೆ.

ಟಿ. ನರಸೀಪುರದ ಲುಂಬಿಣಿ ಬೌದ್ಧವಿಹಾರದ ಭಂತೆ ಸಮಣಪಾಲ ಅವರು ದಿವ್ಯಸಾನಿಧ್ಯ ವಹಿಸುವರು. ಪಶುಸಂಗೋಪನೆ, ರೇಷ್ಮೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ. ವೆಂಕಟೇಶ್ ಅವರು ಕಾರ್ಯಕ್ರಮ ಉದ್ಘಾಟಿಸುವರು. ಎಂ.ಎಸ್.ಐ.ಎಲ್. ಅಧ್ಯಕ್ಷರು ಹಾಗೂ ಶಾಸಕರಾದ ಸಿ. ಪುಟ್ಟರಂಗಶೆಟ್ಟಿ ಅವರು ಅಧ್ಯಕ್ಷತೆ ವಹಿಸುವರು. ಲೋಕಸಭಾ ಸದಸ್ಯರಾದ ಸುನೀಲ್ ಬೋಸ್ ಅವರು ಘನ ಉಪಸ್ಥಿತಿ ವಹಿಸುವರು.

ಶಾಸಕರಾದ ಎ.ಆರ್. ಕೃಷ್ಣಮೂರ್ತಿ, ಹೆಚ್.ಎಂ. ಗಣೇಶ್ ಪ್ರಸಾದ್, ಎಂ.ಆರ್. ಮಂಜುನಾಥ್, ಡಾ. ಡಿ. ತಿಮ್ಮಯ್ಯ, ಸಿ.ಎನ್. ಮಂಜೇಗೌಡ, ಮಧು ಜಿ. ಮಾದೇಗೌಡ, ಕೆ. ವಿವೇಕಾನಂದ, ಕಾವೇರಿ ಜಲಾನಯನ ಯೋಜನೆ ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಪಿ.ಮರಿಸ್ವಾಮಿ, ನಗರಸಭೆ ಅಧ್ಯಕ್ಷರಾದ ಎಸ್. ಸುರೇಶ್, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾಧ್ಯಕ್ಷರಾದ ಹೆಚ್.ವಿ. ಚಂದ್ರು, ಚಾಮರಾಜನಗರ–ರಾಮಸಮುದ್ರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಮಹಮ್ಮದ್ ಅಸ್ಗರ್ ಮುನ್ನ, ನಗರಸಭೆ ಉಪಾಧ್ಯಕ್ಷರಾದ ಮಮತ ಅವರು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು. ನಗರದ ಸಾಹಿತಿ ಡಾ. ಬಿ.ಆರ್. ಕೃಷ್ಣಕುಮಾರ್ ಅವರು ಮುಖ್ಯ ಭಾಷಣ ಮಾಡುವರು ಎಂದು ಪ್ರಕಟಣೆ ತಿಳಿಸಿದೆ.

# ಗುತ್ತಿಗೆ ಆಧಾರಿತದ ವಿವಿಧ ವೈದ್ಯಾಧಿಕಾರಿಗಳ ಹುದ್ದೆಗಳ ನೇಮಕಕ್ಕೆ ನೇರ ಸಂದರ್ಶನ

**ಮೈಸೂರು:** ಮೈಸೂರು ಜಿಲ್ಲೆಯಲ್ಲಿನ ಸಾರ್ವಜನಿಕ ಆಸ್ಪತ್ರೆ, ಸಮುದಾಯ ಆರೋಗ್ಯ ಕೇಂದ್ರ, ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಖಾಲಿ ಇರುವಂತಹ ತಜ್ಞ ವೈದ್ಯಾಧಿಕಾರಿಗಳು, ತುರ್ತು ಚಿಕಿತ್ಸಾ ವೈದ್ಯಾಧಿಕಾರಿಗಳು, ಹಿರಿಯ ವೈದ್ಯಾಧಿಕಾರಿಗಳು ಮತ್ತು ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ಹುದ್ದೆಯನ್ನು ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಲು ಅರ್ಹ ಅಭ್ಯರ್ಥಿಗಳಿಂದ ನೇರ ಸಂದರ್ಶನಕ್ಕೆ ಅರ್ಜಿಯನ್ನು ಆಹ್ವಾನಿಸಲಾಗಿದೆ.

ಆಸಕ್ತ ಅಭ್ಯರ್ಥಿಗಳು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿ, ನಜರ್‌ಬಾದ್ ಇಲ್ಲಿ ಮೇ 12 ರಂದು ಬೆಳಗ್ಗೆ 10.30 ಗಂಟೆಗೆ ನೇರ ಸಂದರ್ಶನವನ್ನು ನಡೆಸಲಾಗುವುದು. ಅರ್ಹರು ತಮ್ಮ ಎಲ್ಲಾ ಧೃಡೀಕೃತ ದಾಖಲೆಗಳೊಂದಿಗೆ ನೇರ ಸಂದರ್ಶನಕ್ಕೆ ಹಾಜರಾಗುವಂತೆ ತಿಳಿಸಲಾಗಿದೆ.

ತುರ್ತು ಚಿಕಿತ್ಸಾ ವೈದ್ಯಾಧಿಕಾರಿಗಳು, ಹಿರಿಯ ವೈದ್ಯಾಧಿಕಾರಿಗಳು ಮತ್ತು ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ಹುದ್ದೆಗೆ ಎಂ.ಬಿ.ಬಿ.ಎಸ್. ತೇರ್ಗಡೆ(ಹೌಸ್‌ಮನ್ ಶಿಫ್ ಪೂರೈಸಿರಬೇಕು), ತಜ್ಞ ವೈದ್ಯಾಧಿಕಾರಿಗಳ ಹುದ್ದೆಗೆ ಎಂ.ಬಿ.ಬಿ.ಎಸ್. ಜೊತೆಗೆ ಸ್ನಾತಕೋತ್ತರ ( ಜನರಲ್ ಮೆಡಿಸಿನ್ ಪ್ರಸೂತಿ ಮತ್ತು ಸ್ತ್ರಿ ರೋಗ ತಜ್ಞರು ಹಾಗೂ ಅರವಳಿಕೆ ತಜ್ಞರು) ವಿದ್ಯಾರ್ಹತೆಯನ್ನು ಪಡೆದಿರಬೇಕು, ಮಾಸಿಕ ಸಂಚಿತ ವೇತನ, ಪ್ರೋತ್ಸಾಹಧನ ರೂ.60,000/– + 2000/– ನೀಡಲಾಗುತ್ತದೆ. 01. (ಜನರಲ್ ಮೆಡಿಸನ್ ಹುದ್ದೆಗೆ) ಪ್ರೋತ್ಸಾಹಧನ ರೂ.80,000/–(ಎಂಭತ್ತ ಸಾವಿರ) + 10,000/– ಹಾಗೂ 02. (ಪ್ರಸೂತಿ ಮತ್ತು ಸ್ತ್ರಿ ರೋಗ ತಜ್ಞರು ಹಾಗೂ ಅರವಳಿಕೆ ತಜ್ಞರು ಹುದ್ದೆಗೆ) ರೂ.1,40,000/– (ಒಂದು ಲಕ್ಷದ ನಲವತ್ತು ಸಾವಿರ) ಮಾಸಿಕ ಸಂಚಿತ ವೇತನ ಮಾತ್ರ ನೀಡಲಾಗುವುದು. ಈ ಎಲ್ಲ ಹುದ್ದೆಗಳಿಗೆ ಅನ್ವಯಿಸುವಂತೆ ಸಾ.ಅ:42 ವರ್ಷ ಹಿಂದುಳಿದ ವರ್ಗ: 45 ವರ್ಷ ಪ.ಜಾತಿ: ಪ.ಪಂಗಡ: 47 ವರ್ಷ ವಯೋಮಿತಿಯನ್ನು ಮೀರಿರಬಾರದು.

ತುರ್ತು ಚಿಕಿತ್ಸ್ತಾ ವೈದ್ಯಾಧಿಕಾರಿಗಳು, ಹಿರಿಯ ವೈದ್ಯಾಧಿಕಾರಿಗಳು ಮತ್ತು ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ಹುದ್ದೆಯಲ್ಲಿ 13 ಹುದ್ದೆಗಳು ತಜ್ಞ ವೈದ್ಯಾಧಿಕಾರಿಗಳ ಹುದ್ದೆಗಳಲ್ಲಿ 3 ಹುದ್ದೆಗಳು ಇರುತ್ತವೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಮತ್ತು ಸದಸ್ಯ ಕಾರ್ಯದರ್ಶಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಾನೂನು ಅರಿವು ಕಾರ್ಯಕ್ರಮ



**ರಾಮನಗರ:** ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ರಾಮನಗರ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಕಾರ್ಮಿಕ ಇಲಾಖೆ ಹಾಗೂ ಜಿಲ್ಲಾ ವಕೀಲರ ಸಂಘದ ವತಿಯಿಂದ ಅಂತರಾಷ್ಟ್ರೀಯ ಕಾರ್ಮಿಕ ದಿನ ಎನ್‌ಎಲ್‌ಎಸ್‌ಎ (ಅಸಂಘಟಿತ ವಲಯದ ಕಾರ್ಮಿಕರಿಗೆ ಕಾನೂನು ಸೇವೆಗಳು) ಯೋಜನೆ–215ರ ಪ್ರಯುಕ್ತ ಕಾನೂನು ಅರಿವು ಕಾರ್ಯಕ್ರಮವನ್ನು ಮೇ 9ರ ಶುಕ್ರವಾರ ರಾಮನಗರದ ಆದಿತ್ಯ ಬಿರ್ಲಾ ಫ್ಯಾಷನ್ ಅಂಡ್ ರೀಟೈಲರ್ ಲಿಮಿಟೆಡ್ ನಲ್ಲಿ ಆಯೋಜಿಸಲಾಗಿತ್ತು.

ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಸವಿತ ಪಿ.ಆರ್. ಅವರು ಕಾರ್ಯಕ್ರಮ ಉದ್ಘಾಟಿಸಿದರು.

ಆದಿತ್ಯ ಬಿರ್ಲಾ ಫ್ಯಾಷನ್ ಅಂಡ್ ರೀಟೈಲರ್ ಲಿಮಿಟೆಡ್‌ನ ಜನರಲ್ ಮ್ಯಾನೇಜರ್ ಜಗದೀಶ್, ಜಿಲ್ಲಾ ಕಾರ್ಮಿಕ ಅಧಿಕಾರಿ ನಾಗೇಂದ್ರ, ಎಚ್.ಆರ್., ಜಿಲ್ಲಾ ವಕೀಲರ ಸಂಘದ ಅಧ್ಯಕ್ಷರಾದ ಬಿ.ಎಂ. ಶ್ರೀವತ್ಸ, ಕಾರ್ಯದರ್ಶಿ ತಿಮ್ಮೇಗೌಡ, ಕಾರ್ಮಿಕ ನಿರೀಕ್ಷಕರಾದ ಪ್ರದೀಪ್ ಉಪಸ್ಥಿತರಿದ್ದರು.

## ತಾಂತ್ರಿಕ ಕೌಶಲ್ಯಾಭಿವೃದ್ಧಿ ತರಬೇತಿ

**ಮೈಸೂರು:** ಸರ್ಕಾರಿ ಉಪಕರಣಗಾರ ಮತ್ತು ತರಬೇತಿ ಕೇಂದ್ರ ವತಿಯಿಂದ ಕರ್ನಾಟಕ ಸರ್ಕಾರದ ಎಟಿಟಿ–ಎಸ್‌ಸಿಪಿ ಮತ್ತು ಟಿಎಸ್‌ಪಿ ಯೋಜನೆಯಡಿ ಕರ್ನಾಟಕ ರಾಜ್ಯದಲ್ಲಿ ವಾಸವಾಗಿರುವ ಪರಿಶಿಷ್ಠ ಜಾತಿ (ಖಅ) ಮತ್ತು ಪರಿಶಿಷ್ಟ ಪಂಗಡದ (ಖಖ) ಅರ್ಹ ಯುವಕ ಯುವತಿಯರಿಗೆ ಉದ್ಯೋಗ ಆಧಾರಿತ ಉಚಿತ ತಾಂತ್ರಿಕ ಕೌಶಲ್ಯಾಭಿವೃದ್ಧಿ ತರಬೇತಿಗೆ ಅರ್ಜಿ ಆಹ್ವಾನಿಸಲಾಗಿದೆ. ತರಬೇತಿ, ಅವಧಿ ಮತ್ತು ವಿದ್ಯಾರ್ಹತೆ: ಪೋಸ್ಟ್ ಡಿಪ್ಲೋಮೊ ಇನ್ ಟೂಲ್ ಡಿಸೈನ್ 1 ವರ್ಷ ಡಿಪ್ಲೋಮೋ/ಬಿ.ಇ (ಮೆಕ್ಯಾನಿಕಲ್ ಸ್ಟ್ರೀಮ್), ಟೂಲ್ ರೂಮ್ ಮೆಷಿನಿಸ್ಟ್ 1 ವರ್ಷ ಎಸ್.ಎಸ್.ಎಲ್.ಸಿ, ಟೂಲ್ ಡೈ ಮೇಕರ್ 1 ವರ್ಷ ಎಸ್.ಎಸ್.ಎಲ್.ಸಿ/ ಐ.ಟಿ.ಐ, ಸಿ.ಎನ್.ಸಿ ಟೆಕ್ನೋಲಜಿ ಸಿ,ಎಂ.ಎಂ 6 ತಿಂಗಳು ಐ.ಟಿ.ಐ/ ಡಿಪ್ಲೋಮೊ, ಸಿ.ಎನ್.ಸಿ ಪ್ರೋಗ್ರಾಮರ್–ವಿ.ಎಂ.ಸಿ ಟರ್ನಿಂಗ್ 4 ತಿಂಗಳು ಡಿಪ್ಲೋಮೊ/ಬಿ.ಇ, ಡಿಸೈನರ್ ಮೆಕ್ಯಾನಿಕಲ್ (ಕ್ಯಾಡ್–ಕ್ಯಾಮ್) 4 ತಿಂಗಳು ಡಿಪ್ಲೋಮೊ/ಬಿ.ಇ, ಎಲೆಕ್ಟ್ರಿಷಿಯನ್ (ಇಂಡಸ್ಟ್ರಿಯಲ್ ಡೊಮೆಸ್ಟಿಕ್) 4 ತಿಂಗಳು ಎಸ್.ಎಸ್.ಎಲ್.ಸಿ/ಐ.ಟಿ.ಐ, ಕನ್ವೆಂಷನಲ್ ಮೆಷಿನ್ ಕ್ವಾಲಿಟಿ ಇನ್ಸ್‌ಪೆಕ್ಟರ್ 4 ತಿಂಗಳು ಎಸ್.ಎಸ್.ಎಲ್.ಸಿ/ಐ.ಟಿ.ಐ, ಸಿ.ಎನ್.ಸಿ ಮೆಷಿನ್ ಆಪರೇಟರ್ (ಟರ್ನಿಂಗ್/ ಮಿಲ್ಲಿಂಗ್) 4 ತಿಂಗಳು ಎಸ್.ಎಸ್.ಎಲ್.ಸಿ/ಐ.ಟಿ.ಐ, ಪ್ರಾಡಕ್ಟ್ ಡಿಸೈನ್ ಇಂಜಿನಿಯರ್ ಕ್ಯಾಡ್–ಕ್ಯಾಮ್ 4 ತಿಂಗಳು ಡಿಪ್ಲೋಮೊ/ ಬಿ.ಇ, ಕ್ವಾಲಿಟಿ ಇನ್ಸ್‌ಪೆಕ್ಟರ್ 4 ತಿಂಗಳು ಐ.ಟಿ.ಐ/ ಡಿಪ್ಲೋಮೊ ವಿದ್ಯಾರ್ಹತೆಯನ್ನು ಹೊಂದಿರಬೇಕು. ನಿಗದಿತ ವಿದ್ಯಾರ್ಹತೆ ಮತ್ತು 16 ರಿಂದ 45 ವರ್ಷಗಳು ವಯೋಮಿತಿ ಹೊಂದಿರಬೇಕು, ಜಿ.ಟಿ.ಟಿ ಸಿ ಯಿಂದ ಪ್ರಮಾಣ ಪತ್ರ, ತರಬೇತಿ ಪಡೆದ ಅಭ್ಯರ್ಥಿಗಳಿಗೆ ಮಾಸಿಕ ರೂ. 2500/– ಸ್ಟೈಪಂಡ್ ನೀಡಲಾಗುತ್ತದೆ, ಉತ್ತಮ ಗುಣಮಟ್ಟದ ತರಬೇತಿ ಮತ್ತು 100% ಉದ್ಯೋಗ ಸಹಯೋಗ, ವಸತಿ ನಿಲಯದ ವ್ಯವಸ್ಥೆ, ಅರ್ಜಿ ಸಲ್ಲಿಸಲು ಮೇ 31 ಕೊನೆಯ ದಿನಾಂಕವಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಸಂ: 93 94 ಬೆಳಗೊಳ ಕೈಗಾರಿಕಾ ವಸಾಹತು, ಕೆ.ಆರ್.ಎಸ್ ರಸ್ತೆ ಮೈಸೂರು. ದೂ.ಸಂ: 9945442654, 9945349638 ನ್ನು ಸಂಪರ್ಕಿಸಬಹುದು ಎಂದು ಸಹ ಸಂಯೋಜಕರಾದ ವಿನಯ್.ಎಸ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪರೀಕ್ಷಾ ಕೇಂದ್ರಗಳ ಸುತ್ತಲೂ ನಿಷೇಧಾಜ್ಞೆ

**ಮೈಸೂರು:** ಮೇ 10 ರಿಂದ ಮೇ 24 ರವರೆಗೆ 2024 ನೇ ಸಾಲಿನ ದ್ವಿತೀಯ ಅಧಿವೇಶನದ ಇಲಾಖಾ ಪರೀಕ್ಷೆಗಳು ನಡೆಯಲಿದ್ದು, ಸದರಿ ಪರೀಕ್ಷಾ ಕೇಂದ್ರಗಳ ಸುತ್ತಲೂ 200 ಮೀಟರ್ ವ್ಯಾಪ್ತಿಯಲ್ಲಿ ಬೆಳಗ್ಗೆ 06 ಗಂಟೆಯಿಂದ ಸಂಜೆ 06 ಗಂಟೆಯವರೆಗೆ ಭಾರತೀಯ ನಾಗರೀಕ ಸುರಕ್ಷಾ ಸಂಹಿತೆ–2023ರ ಸೆಕ್ಷನ್ 163 ರೀತ್ಯಾ ಪ್ರದೇಶದ ಸುತ್ತಲೂ ನಿಷೇಧಾಜ್ಞೆಯನ್ನು ಜಾರಿ ಮಾಡಲಾಗಿದೆ.ಪರೀಕ್ಷಾ ಕೇಂದ್ರಗಳು: ಮಹಾರಾಣಿ ಸರ್ಕಾರಿ ಪದವಿ ಪೂರ್ವ ಕಾಲೇಜು(ಪ್ರೌಢಶಾಲಾ ವಿಭಾಗ) ಜೆಎಲ್‌ಬಿ ರಸ್ತೆ, ಸರ್ಕಾರಿ ಆದರ್ಶ ವಿದ್ಯಾಲಯ, ಜಾಕಿ ಕ್ವಾರ್ಟರ್ಸ್. ಈ ಪ್ರದೇಶಗಳಲ್ಲಿ ಪರೀಕ್ಷಾರ್ಥಿಗಳು ಹಾಗೂ ಪರೀಕ್ಷಾ ಸಿಬ್ಬಂದಿಗಳು ಹೊರತುಪಡಿಸಿ ಇತರೆ ಅನಧಿಕೃತ ವ್ಯಕ್ತಿಗಳು ಸಂಚಾರಿಸಬಾರದು ಮತ್ತು ಯಾರೂ ಆಕ್ಷೇಪಾರ್ಹ ವಸ್ತುಗಳನ್ನು ಒಯ್ಯಬಾರದು ಹಾಗೂ ಪರೀಕ್ಷಾ ಕೇಂದ್ರಗಳ ಸುತ್ತಮುತ್ತಲಿನ ಎಲ್ಲಾ ಕಾಪಿಯರ್ (ಜೆರಾಕ್ಸ್) ಅಂಗಡಿ/ ಬ್ರೌಸಿಂಗ್ ಸೆಂಟರ್‌ಗಳನ್ನು ಪರೀಕ್ಷಾ ಅವಧಿಯಲ್ಲಿ ಮುಚ್ಚುವಂತೆ ಆದೇಶಿಸಲಾಗಿದೆ ಎಂದು ನಗರ ಪೊಲೀಸ್ ಆಯುಕ್ತರಾದ ಸೀಮಾ ಲಾಟ್ಕರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿದ್ಯುತ್ ವ್ಯತ್ಯಯ

**ಮೈಸೂರು:** ಮೇ 09, 11, 13, 15, 17 ಮತ್ತು 19 ರಂದು 220/66/11 ಕೆವಿ ಕಡಕೊಳ, ವಾಜಮಂಗಲ ವಿದ್ಯುತ್ ಸ್ವೀಕರಣಾ ಕೇಂದ್ರ, ಹಾಗೂ 66/11ಕೆವಿ ಆಯರಹಳ್ಳಿ ವಿದ್ಯುತ್ ವಿತರಣಾ ಕೇಂದ್ರಗಳಲ್ಲಿ ಲಿಲೋ ಕಾಮಗಾರಿಯನ್ನು ಹಮ್ಮಿಕೊಳ್ಳಲಾಗಿರುವುದರಿಂದ ಚಿಕ್ಕೇಗೌಡನಹುಂಡಿ, ಹಡಜನ, ಟಿ.ಎಂ ಹುಂಡಿ, ಮಾರಶೆಟ್ಟಿಹಳ್ಳಿ, ದೇವಲಾಪುರ, ಕಿರಾಳು, ಜಂತಗಳ್ಳಿ, ಸಜ್ಜೆಹುಂಡಿ, ಮರಿಗೌಡನಹುಂಡಿ, ರಾಯನಹುಂಡಿ, ಬಸಳ್ಳಿಹುಂಡಿ, ಸೋಮೇಶ್ವರಪುರ, ಕುಂಬ್ರಹಳ್ಳಿ, ಕುಂಬ್ರಹಳ್ಳಿ ಮಠ, ಪ್ರಶಾಂತ್ ವಾಯು ಬಡಾವಣೆ, ಹದಿನಾರು, ಮಲ್ಲರಾಜನಹುಂಡಿ, ಕಡವೆಕಟ್ಟೆ ಕುಡಿಯುವ ನೀರಿನ ಸ್ಥಾವರ ಹಾಗೂ ಸುತ್ತ–ಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದ್ದು, ಸಾರ್ವಜನಿಕರು ಹಾಗೂ ಕೈಗಾರಿಕೋಧ್ಯಮಿಗಳು ಸಹಕರಿಸಬೇಕೆಂದು ಚಾ.ವಿ.ಸ.ನಿ.ನಿ.ಯ ನ.ರಾ.ಮೊಹಲ್ಲಾ ವಿಭಾಗದ ಕಾರ್ಯ ಮತ್ತು ಪಾಲನೆಯ ಕಾರ್ಯನಿರ್ವಾಹಕ ಇಂಜಿನಿಯರ್(ವಿ), ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮೈಸೂರು ಜಿಲ್ಲಾ ಪ್ರವಾಸ

**ಮೈಸೂರು:** ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಡಾ.ಪುರುಷೋತ್ತಮ ಬಿಳಿಮನೆ ಅವರು ಮೈಸೂರು ಜಿಲ್ಲಾ ಪ್ರವಾಸ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದಾರೆ. ಮೇ 16 ರಂದು ಬೆಳಗ್ಗೆ 10.30 ಗಂಟೆಗೆ ಭಾರತೀಯ ಭಾಷಾ ಸಂಸ್ಥಾನದಲ್ಲಿ ನಡೆಯುವ ಶಾಸ್ತ್ರೀಯ ಕನ್ನಡ ಅಧ್ಯಯನ ಕೇಂದ್ರದ ಸಭೆಯಲ್ಲಿ ಭಾಗವಹಿಸುವರು.

## ಎಸ್.ಎಸ್.ಎಲ್.ಸಿ ಪರೀಕ್ಷೆ–2: ನೋಂದಾಯಿಸಿಕೊಳ್ಳಲು ಸೂಚನೆ

**ರಾಮನಗರ:** 2025ರ ಎಸ್.ಎಸ್.ಎಲ್.ಸಿ ಪರೀಕ್ಷೆ–1 ರಲ್ಲಿ ಉತ್ತೀರ್ಣರಾಗದ ವಿದ್ಯಾರ್ಥಿಗಳಿಗೆ ಎಸ್ ಎಸ್ ಎಲ್ ಸಿ ಪರೀಕ್ಷೆ–2 ಇದೇ ಮೇ 26 ರಿಂದ ಜೂನ್ 2ರ ವರೆಗೆ ನಡೆಯಲಿದೆ. ಪ್ರಪ್ರಥಮ ಬಾರಿಗೆ ಪರೀಕ್ಷೆಗೆ ನೋಂದಣಿಯಾಗುವ ವಿದ್ಯಾರ್ಥಿಗಳಿಗೆ ಶುಲ್ಕ ಪಾವತಿಯಿಂದ ವಿನಾಯಿತಿ ನೀಡಲಾಗಿದೆ. ಪರೀಕ್ಷೆಗೆ ನೋಂದಾಯಿಸಿಕೊಳ್ಳಲು ಮೇ 10 ಅಂತಿಮ ದಿನವಾಗಿದ್ದು, ಇನ್ನು 3 ದಿನಗಳು ಬಾಕಿ ಇರುತ್ತದೆ. ಉತ್ತೀರ್ಣರಾಗದ ಎಲ್ಲಾ ವಿದ್ಯಾರ್ಥಿಗಳು ಪರೀಕ್ಷೆಗೆ ನೋಂದಾಯಿಸಿಕೊಳ್ಳುವಂತೆ ರಾಮನಗರ ಜಿಲ್ಲಾ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರು(ಆಡಳಿತ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬೆಲವತ್ತ ಡ್ಯಾಂ ಅಭಿವೃದ್ಧಿಗೂ ಶಾಸಕರು ಕ್ರಮವಹಿಸಲಿ : ಚಂದ್ರು

**ಚಾಮರಾಜನಗರ:** ತಾಲೂಕಿನ ಹೊಂಗನೂರು ಹಿರಿಕೆರೆ ಅಭಿವೃದ್ಧಿಗೆ ಕ್ರಮವಹಿಸಿ ದಂತೆ ಬೆಲವತ್ತ ಡ್ಯಾಂ ಅಭಿವೃ ದ್ಧಿಗೂ ಶಾಸಕರು ಕ್ರಮವಹಿಸುವ ಮೂಲಕ ಆ ಭಾಗದ ರೈತರಿಗೆ ಅನುಕೂಲ ಕಲ್ಪಿಸಿಕೊಡಬೇಕು ಎಂದು ಜಿಲ್ಲಾ ಗ್ಯಾರ0ಟಿ ಯೋಜನೆಗಳ ಅನುಷ್ಟಾನ ಪ್ರಾಧಿ ಕಾರದ ಅಧ್ಯಕ್ಷ ಎಚ್.ವಿ.ಚಂದ್ರು ಮನವಿ ಮಾಡಿದರು.

ಚಾಮರಾಜನಗರ ತಾಲ್ಲೂಕಿನ ಹೊ0ಗನೂರು ಹಿರಿಕೆರೆ ಅಭಿವೃದ್ಧಿಗೆ ಸಚಿವ ಸಂಪುಟ ಸಭೆ 14.5 ಕೋಟಿಗೆ ಮಂಜೂರಾತಿ ನೀಡಿರುವುದು ಸಂತಸದ ವಿಚಾರ. ಇದರಿಂದ ಈ ಭಾಗದ 732 ಎಕರೆ ಅಚ್ಚುಕಟ್ಟು ಪ್ರದೇಶಕ್ಕೆ ಅನುಕೂಲವಾಗಲಿದೆ ಎಂದು ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.

ಹಿರಿಕೆರೆ ಏತ ನೀರಾವರಿ ಯೋಜನೆ ಜಾರಿಗೆ ತರಲು 1998–99ರಲ್ಲಿ ಅ0ದಿನ ಶಾಸಕರಾಗಿದ್ದ ಎ.ಆರ್.ಕೃಷ್ಣಮೂರ್ತಿ ಅವರು ಬಹಳ ಶ್ರಮಿಸಿದ್ದ ರು. 1999ರಲ್ಲಿ ಅಂದಿನ ನೀರಾ ವರಿ ಸಚಿವರಾಗಿದ್ದ ಕೆ.ಎನ್. ನಾಗೇಗೌಡರು ಯೋಜನೆಗೆ ಭೂಮಿಪೂಜೆ ನೆರವೇರಿಸುತ್ತಾರೆ. 2012ರಲ್ಲಿ ನೀರಾವರಿ ಸಚಿವರಾಗಿದ್ದ ಬಸವರಾಜ ಬೊಮ್ಮಾಯಿ ಅವರು 3 ಮೋಟಾರ್ ಜೋಡಣೆ ಮಾಡಿ ಕೆರೆಗೆ ಪಂಪ್ ಮಾಡಲು ಚಾಲನೆ ನೀಡುತ್ತಾರೆ ಎಂದರು. ಎ.ಆರ್.ಕೃಷ್ಣಮೂರ್ತಿ ಅವರು ಶಾಸಕರಾದ ಬಳಿಕ ಅಧಿವೇಶನದಲ್ಲಿ ಹಿರಿಕೆರೆ ಅಭಿವೃದ್ಧಿ ಬಗ್ಗೆ ಗಮನ ಸೆಳೆಯುತ್ತಾರೆ. ಈ ವೇಳೆ ನೀರಾವರಿ ಸಚಿವರಾದ ಬೋಸರಾಜು ಅವರು 2024ರಲ್ಲಿ ಕೆರೆಗೆ ಭೇಟಿ ನೀಡಿ ಪರಿಶೀಲನೆ ಮಾಡಿ ಕೆರೆಯ ಸಮಗ್ರ ಅಭಿವೃದ್ಧಿಗೆ ಸೂಚನೆ ನೀಡುತ್ತಾರೆ ಎಂದು ತಿಳಿಸಿದರು. ಮಹದೇಶ್ವರಬೆಟ್ಟದಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ಕೆರೆಯ ಅಭಿವೃದ್ಧಿಗೆ 14.5 ಕೋಟಿ ಕ್ರಿಯಾ ಯೋಜನೆಗೆ ಅನುಮೋದನೆ ನೀಡಲಾಗಿದ್ದು ಇದಕ್ಕೆ ಕಾರಣಕರ್ತರಾದ ಸಿಎಂ, ಡಿಸಿಎಂ, ಹಿರಿಕೆರೆಯ ಎಡ, ಬಲದಂಡ ಕಾಲುವೆಗಳು ದುರಸ್ತಿಯಾಗಬೇಕು. ರಸ್ತೆ ಅಭಿವೃದ್ಧಿಯಾಗಬೇಕು. ಇದರೊಂದಿಗೆ ಬೆಲವತ್ತ ಡ್ಯಾಂ ಅಭಿವೃದ್ಧಿಗೂ ಶಾಸಕರು ಮುಂದಾಗಬೇಕು. ಡ್ಯಾಂ ಅಭಿವೃದ್ಧಿಯಾದರೆ 971 ಎಕರೆ ಅಚ್ಚುಕಟ್ಟು ಪ್ರದೇಶಕ್ಕೆ ಅನುಕೂಲವಾಗಲಿದೆ. ಅಲ್ಲದೇ ಹಿರಿಕೆರೆ, ಬೆಲವತ್ತ ಡ್ಯಾಂ ಪ್ರವಾಸಿ ತಾಣ ಮಾಡಲು ಕ್ರಮವಹಿಸಬೇಕು. ಯರಗಂಬಳ್ಳಿಯ ಎಲೆಕೆರೆ ಅಭಿವೃದ್ಧಿಗೂ ಕ್ರಮವಹಿಸಬೇಕು ಎಂದು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಹೊಂಗನೂರು ಗ್ರಾಪಂ ಅಧ್ಯಕ್ಷೆ ರೂಪಾ, ಉಪಾಧ್ಯಕ್ಷ ನವೀನ್, ಮಸಣಾಪುರ ಗ್ರಾಪಂ ಅಧ್ಯಕ್ಷ ರೇವಣ್ಣ, ಇರಸವಾಡಿ ಗ್ರಾಪಂ ಅಧ್ಯಕ್ಷ ವಸಂತ್ ಕುಮಾರ್ ಇದ್ದರು.

# ಅತಿಥಿ ಶಿಕ್ಷಕರ/ಉಪನ್ಯಾಸಕರ ಹುದ್ದೆಗಳಿಗೆ ಅರ್ಜಿ

**ಮೈಸೂರು:** ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಯಡಿ ಕಾರ್ಯನಿರ್ವಹಿಸುತ್ತಿರುವ ಮೌಲಾನಾ ಆಜಾದ್ ಮಾದರಿ ಶಾಲೆ/ಕಾಲೇಜು (ಆಂಗ್ಲ ಮಾಧ್ಯಮ)/ ಮೊರಾರ್ಜಿದೇಸಾಯಿ ವಸತಿ ಶಾಲೆ ಹಾಗೂ ಕಾಲೇಜುಗಳಲ್ಲಿ ಅತಿಥಿ ಶಿಕ್ಷಕರ/ಉಪನ್ಯಾಸಕರ ಹುದ್ದೆಗಳು ಖಾಲಿ ಇದ್ದು, ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಅಲ್ಪಸಂಖ್ಯಾತರ ಮಾರಾರ್ಜಿ ದೇಸಾಯಿ ವಸತಿ ಶಾಲೆ/ಕಾಲೇಜು,(ಆಂಗ್ಲ ಮಾಧ್ಯಮ)ಅನಿವಾಳು ಗ್ರಾಮ, ಪಿರಿಯಾಪಟ್ಟಣತಾಲ್ಲೂಕು, ಮೈಸೂರು ಜಿಲ್ಲೆ ಇಲ್ಲಿ ಶಾಲಾ ವಿಭಾಗದಲ್ಲಿ ಇಂಗ್ಲೀಷ್– 01,ಸಮಾಜ–01 ವಿಜ್ಞಾನ–01, ಗಣಿತ–01, ಗಣಕಯಂತ್ರ ಶಿಕ್ಷಕರು, ದೈಹಿಕ ಶಿಕ್ಷಕರು–01 ಹುದ್ದೆ ಖಾಲಿ ಇದ್ದು,BA, B.Ed (English) BA, B.Ed, B.Sc (PCM), B.Ed, BCA/MCA, B.P.Ed ವಿದ್ಯಾರ್ಹತೆಯನ್ನು ಹೊಂದಿರಬೇಕು. ಕಾಲೇಜು ವಿಭಾಗದಲ್ಲಿ ಕನ್ನಡ–01,ಇಂಗ್ಲೀಷ್, ವ್ಯವಹಾರ ಅಧ್ಯಯನ, ಲೆಕ್ಕಶಾಸ್ತ್ರ, ಅರ್ಥಶಾಸ್ತ್ರ, ಗಣಕಯಂತ್ರ ಶಿಕ್ಷಕರು, ಭೌತಶಾಸ್ತ್ರ, ರಸಾಯನಶಾಸ್ತ್ರ, ಜೀವಶಾಸ್ತ್ರ, ಗಣೀತಶಾಸ್ತ್ರ ಹುದ್ದೆ ಖಾಲಿ ಇದ್ದು, MA, B.Ed (Kannada),MA, B.Ed (English),M Com, B.Ed,M Com, B.Ed,MA, B.Ed,MCA/MSc(Computer Science), M.Sc, B.Ed, M.Sc, B.Ed, M.Sc, B.Ed, M.Sc, B.Ed ವಿದ್ಯಾರ್ಹತೆಯನ್ನು ಹೊಂದಿರಬೇಕು.

ಅಲ್ಪಸಂಖ್ಯಾತರ ಮಾರಾರ್ಜಿ ದೇಸಾಯಿ ವಸತಿ ಶಾಲೆ(ಆಂಗ್ಲ ಮಾಧ್ಯಮ)ತಿ.ನರಸೀಪುರ ತಾಲ್ಲೂಕು, ಮೈಸೂರು ಜಿಲ್ಲೆ ಇಲ್ಲಿ ಇಂಗ್ಲೀಷ್– 01, ಹಿಂದಿ–01,ಗಣಿತ–01,ಸಮಾಜ ವಿಜ್ಞಾನ–01 ಹುದ್ದೆ ಖಾಲಿ ಇದ್ದು, BA, B.Ed (English), BA, B.Ed (HINDI), B.Sc (PCM), B.Ed, BA, B.Edವಿದ್ಯಾರ್ಹತೆಯನ್ನು ಹೊಂದಿರಬೇಕು.

ಮೌಲಾನ ಆಜಾದ್ ಮಾದರಿಶಾಲೆ/ಕಾಲೇಜು, (ಆಂಗ್ಲ ಮಾಧ್ಯಮ) ಲಷ್ಕರ್ ಮೊಹಲ್ಲಾ, ಮೈಸೂರು. ಇಲ್ಲಿ ಶಾಲಾ ವಿಭಾಗದಲಿ ದೈಹಿಕ ಶಿಕ್ಷಕರು–01 ಹಿಂದಿ–01 ಹುದ್ದೆ ಖಾಲಿ ಇದ್ದು,B.P.Ed BA, B.Ed (HINDI)ವಿದ್ಯಾರ್ಹತೆಯನ್ನು ಹೊಂದಿರಬೇಕು. ಕಾಲೇಜು ವಿಭಾಗದಲ್ಲಿ ಕನ್ನಡ–01, ಇಂಗ್ಲೀಷ್, ಉರ್ದು, ಭೌತಶಾಸ್ತ್ರ, ರಸಾಯನಶಾಸ್ತ್ರ, ಜೀವಶಾಸ್ತ್ರ, ಗಣೀತಶಾಸ್ತ್ರ ಹುದ್ದೆ ಖಾಲಿ ಇದ್ದು, , MA, B.Ed (Kannada), MA, B.Ed (English), MA(Urdu), B.Ed, M.Sc, B.Ed, M.Sc, B.Ed, M.Sc, B.Ed, M.Sc, B.Ed ವಿದ್ಯಾರ್ಹತೆಯನ್ನು ಹೊಂದಿರಬೇಕು.

ಮೌಲಾನ ಆಜಾದ್ ಮಾದರಿ ಶಾಲೆ (ಆಂಗ್ಲ ಮಾಧ್ಯಮ) ರಾಜೇಂದ್ರ ನಗರ, ಮೈಸೂರು. ಇಲ್ಲಿ ಇಂಗ್ಲೀಷ್– 01 ಹಿಂದಿ ಶಿಕ್ಷಕರು–01, ದೈಹಿಕ ಶಿಕ್ಷಕರು–01 ಹುದ್ದೆ ಖಾಲಿ ಇದ್ದು, ಃ೦, ಃ.ಇಜ (ಇಟಿರಿಟು), ಃ೦, ಃ.ಇಜ (ಊಙಓಆಖ), ಃ.ಕ.ಇಜ ವಿದ್ಯಾರ್ಹತೆಯನ್ನು ಹೊಂದಿರಬೇಕು.

ಮೌಲಾನ ಆಜಾದ್ ಮಾದರಿ ಶಾಲೆ (ಆಂಗ್ಲ ಮಾಧ್ಯಮ) ಹುಣಸೂರು ಟೌನ್, ಮೈಸೂರು. ಇಲ್ಲಿ ಹಿಂದಿ– 01 ದೈಹಿಕ ಶಿಕ್ಷಕರು–01 ಹುದ್ದೆ ಖಾಲಿ ಇದ್ದು, BA, B.Ed (English), BA, B.Ed (HINDI), B.P.Ed ವಿದ್ಯಾರ್ಹತೆಯನ್ನು ಹೊಂದಿರಬೇಕು.

ಮೌಲಾನ ಆಜಾದ್ ಮಾದರಿ ಶಾಲೆ (ಆಂಗ್ಲ ಮಾಧ್ಯಮ) ಭರತ ನಗರ, ಮೈಸೂರು. ಇಲ್ಲಿ ಇಂಗ್ಲೀಷ್– 01, ಹಿಂದಿ ಶಿಕ್ಷಕರು–01 ಹುದ್ದೆ ಖಾಲಿ ಇದ್ದು, , BA, B.Ed (HINDI), B.P.Ed ವಿದ್ಯಾರ್ಹತೆಯನ್ನು ಹೊಂದಿರಬೇಕು.

ಮೌಲಾನ ಆಜಾದ್ ಮಾದರಿ ಶಾಲೆ (ಆಂಗ್ಲ ಮಾಧ್ಯಮ) ಹಲಗನಹಳ್ಳಿ, ಪಿರಿಯಾಪಟ್ಟಣ ಇಲ್ಲಿ ಕನ್ನಡ–01, ಇಂಗ್ಲೀಷ್– 01, ಹಿಂದಿ– 01, ಗಣಿತ–01 ಹುದ್ದೆ ಖಾಲಿ ಇದ್ದು,BA, B.Ed (English), BA, B.Ed (HINDI) ವಿದ್ಯಾರ್ಹತೆಯನ್ನು ಹೊಂದಿರಬೇಕು.

ಮೌಲಾನ ಆಜಾದ್ ಮಾದರಿ ಶಾಲೆ (ಆಂಗ್ಲ ಮಾಧ್ಯಮ) (ನೂತನ) ಕಲ್ಯಾಣಗಿರಿ, ಮೈಸೂರು. ಇಲ್ಲಿ ಕನ್ನಡ– 01, ಇಂಗ್ಲೀಷ್– 01, ಹಿಂದಿ– 01, ಗಣಿತ–01, ಸಮಾಜ ವಿಜ್ಞಾನ–01, ವಿಜ್ಞಾನ–01 ಹುದ್ದೆ ಖಾಲಿ ಇದ್ದು, BA, B.Ed (Kannada), BA, B.Ed (English), BA, B.Ed (HINDI), B.Sc (PCM), B.Ed ವಿದ್ಯಾರ್ಹತೆಯನ್ನು ಹೊಂದಿರಬೇಕು.

ಮೌಲಾನ ಆಜಾದ್ ಮಾದರಿ ಶಾಲೆ (ಆಂಗ್ಲ ಮಾಧ್ಯಮ) (ನೂತನ) ಗರ್ಗೇಶ್ವರಿಗ್ರಾಮ, ತಿ.ನರಸೀಪುರ ತಾಲ್ಲೂಕು ಇಲ್ಲಿ ಕನ್ನಡ– 01, ಇಂಗ್ಲೀಷ್– 01, ಹಿಂದಿ–01, ಗಣಿತ–01, ಸಮಾಜ ವಿಜ್ಞಾನ–01,ವಿಜ್ಞಾನ–01 , BA, B.Ed (Kannada), BA, B.Ed (English), BA, B.Ed (HINDI), B.Sc (PCM),B.Ed, BA, B.Ed, B.Sc, B.Ed ವಿದ್ಯಾರ್ಹತೆಯನ್ನು ಹೊಂದಿರಬೇಕು.

ಆಸಕ್ತ ಅರ್ಹ ಅಭ್ಯರ್ಥಿಗಳು ಮೇ. 19 ರೊಳಗೆ ಜಿಲ್ಲಾ ಕಛೇರಿಗೆ ಅಥವಾ ಸಂಬಂಧಪಟ್ಟ ಶಾಲೆಗಳಿಗೆ ಅಥವಾ ತಾಲ್ಲೂಕು ಮಾಹಿತಿ ಕೇಂದ್ರಗಳಿಗೆ ಭೇಟಿ ನೀಡಿ ಅರ್ಜಿ ಪಡೆದು ಸೂಕ್ತ ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸಬೇಕಾಗಿದ್ದು, ಅರ್ಜಿಯನ್ನು ವೆಬ್‌ಸೈಟ್ https://dom.karnataka.gov.in ಮೂಲಕ ಪಡೆಯಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಇಲಾಖೆಯ ಜಿಲ್ಲಾ ಅಧಿಕಾರಿಗಳ ಕಛೇರಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಮೌಲಾನ ಆಜಾದ್ ಭವನ, ಸಿ.ಎ:ನಂ–1 ಶೋಭ ಗಾರ್ಡನ್ ಪಕ್ಕ, ದಂಡಿನ ಮಾರಮ್ಮ ದೇವಸ್ಥಾನದ ಎದುರು, ಬೆಂಗಳೂರು–ಮೈಸೂರು ರಸ್ತೆ, ಮೈಸೂರು ಇಲ್ಲಿ ಸಂಪರ್ಕಿಸಬಹುದು ಹಾಗೂ ಮೈಸೂರು ದೂರವಾಣಿ ಸಂಖ್ಯೆ: 0821–2422088/8951087207/8762864253 ಮಾರಾರ್ಜಿ ದೇಸಾಯಿ ವಸತಿ ಶಾಲೆ ತಿ.ನರಸೀಪುರ 9741209826,ತಿ.ನರಸೀಪುರ ಮಾಹಿತಿಕೇಂದ್ರ 8277775750, ಹುಣಸೂರು ಮಾಹಿತಿ ಕೇಂದ್ರ. 9620750935, ಪಿರಿಯಾಪಟ್ಟಣ ಮಾಹಿತಿ ಕೇಂದ್ರ. 6362661474 ನ್ನು ಸಂಪರ್ಕಿಸಬಹುದು ಅಲ್ಪಸಂಖ್ಯಾತರ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಂಜೆ ಟಿಪ್ಸ್

## ಸ್ಯಾಮ್‌ಸಂಗ್‌ನ ಅಲ್ಟ್ರಾ-ಸ್ಲಿಮ್ ಫ್ಲ್ಯಾಗ್‌ಶಿಪ್ ಫೋನ್! ಲಾಂಚ್ ಡೇಟ್ ಫಿಕ್ಸ್

ಸ್ಯಾಮ್‌ಸಂಗ್ ಮೊಬೈಲ್ ಪ್ರಿಯರಿಗೆ ಸಿಹಿಸುದ್ದಿ. ಸ್ಯಾಮ್‌ಸಂಗ್‌ನ ಬಹುನಿರೀಕ್ಷಿತ ಅಲ್ಟ್ರಾ-ಸ್ಲಿಮ್ ಫ್ಲ್ಯಾಗ್‌ಶಿಪ್ ಫೋನ್ ಕೆಲವೇ ದಿನಗಳಲ್ಲಿ ಮಾರುಕಟ್ಟೆಗೆ ಬರಲಿದೆ. ಕಂಪನಿಯು ತನ್ನ ಅಧಿಕೃತ ಬಿಡುಗಡೆ ದಿನಾಂಕವನ್ನು ಘೋಷಿಸಿದೆ. ಆದರೆ ಅನ್‌ಪ್ಯಾಕ್ ಕಾರ್ಯಕ್ರಮವನ್ನು ಆಯೋಜಿಸಲಾಗಿಲ್ಲ. ಏಕೆಂದರೆ, ಕಂಪನಿಯು ಈ ಮೊಬೈಲ್‌ನ್ನು ಈಗಾಗಲೇ ಹಲವು ಸಂದರ್ಭಗಳಲ್ಲಿ ಪ್ರದರ್ಶಿಸಿದೆ. ಈಗ ಅದು ಯೂಟ್ಯೂಬ್‌ನಲ್ಲಿ ಬಿಡುಗಡೆಯಾಗಲಿದೆ. ಇದರ ಬೆಲೆ, ವೈಶಿಷ್ಟ್ಯಗಳು ಮತ್ತು ವಿಶೇಷತೆಗಳನ್ನು ನೋಡೋಣ ಬನ್ನಿ.

ಕಂಪನಿಯು ಈ ಸ್ಮಾರ್ಟ್‌ಫೋನ್ ಅನ್ನು ಮೇ 13ರಂದು ಬೆಳಗ್ಗೆ 9 ಗಂಟೆಗೆ ಏಖಖಿಕ್ಕೆ ಸ್ಯಾಮ್‌ಸಂಗ್‌ನ ಜಠಣಖಿಣಥಜ ಚಾನೆಲ್‌ನಲ್ಲಿ ಅಧಿಕೃತವಾಗಿ ಬಿಡುಗಡೆ ಮಾಡಲಿದೆ. ಅಂದರೆ ಭಾರತೀಯ ಕಾಲಮಾನದ ಪ್ರಕಾರ, ಮೇ 13ರಂದು ಬೆಳಗ್ಗೆ 5:30ಕ್ಕೆ ಲಾಂಚ್ ಆಗಲಿದೆ. ಕಂಪನಿಯು ಇದುವರೆಗೆ ತಯಾರಿಸಿದ ಅತ್ಯಂತ ತೆಳುವಾದ ಫೋನ್‌ಗಳಲ್ಲಿ ಇದೂ ಒಂದು. ಇದುವರೆಗಿನ ಅತ್ಯಂತ ತೆಳುವಾದ 'ಗ್ಯಾಲಕ್ಸಿ ಎಸ್' ಮಾದರಿಯಾಗಿದೆ. 'ಗ್ಯಾಲಕ್ಸಿ ಎಸ್' ಹೆಸರಿಗೆ ಅರ್ಹವಾದ ಉನ್ನತ-ಮಟ್ಟದ ಬಳಕೆದಾರ ಅನುಭವ ನೀಡಲು ಈ ಮೊಬೈಲ್ 'ಪ್ರೆಸಿಷನ್' ಎಂಜಿನಿಯರಿಂಗ್‌ನಲ್ಲಿ ಒಂದು ಪ್ರಮುಖ ಬೆಳವಣಿಗೆಯಾಗಿದೆ ಎಂದು ಕಂಪನಿ ಹೇಳುತ್ತಿದೆ.

'ಗ್ಯಾಲಕ್ಸಿ ಎಸ್ 25 ಎಡ್ಜ್' ಬಿಡುಗಡೆಯ ಸಮಯದಲ್ಲಿ ಕಂಪನಿಯು ಅದರ ವಿಶೇಷತೆಗಳು ಮತ್ತು ಆಯಾಮಗಳ ಬಗ್ಗೆ ನಿಖರವಾದ ವಿವರಗಳನ್ನು ಯೂಟ್ಯೂಬ್ ಸ್ಟ್ರೀಮ್‌ನಲ್ಲಿ ಒದಗಿಸಲಿದೆ. ಆದರೆ ಅದಕ್ಕಾಗಿ ನಾವು ಅಷ್ಟು ದಿನ ಕಾಯಬೇಕಾಗಿಲ್ಲ. ಏಕೆಂದರೆ, ಈ ಮುಂಬರುವ ಫೋನ್ ಬಗ್ಗೆ ಎಲ್ಲಾ ವಿವರಗಳು ಈಗಾಗಲೇ ಸೋರಿಕೆಯಾಗಿವೆ.

**ಸ್ಯಾಮ್‌ಸಂಗ್ ಗ್ಯಾಲಕ್ಸಿ ಖ25 ಎಡ್ಜ್ ವಿಶೇಷತೆ (ಸಂಭಾವ್ಯ):** ಡಿಸೈನ್:ಈ ಫೋನ್ ಪ್ರಭಾವಶಾಲಿ 5.85mmಸ್ಲಿಮ್ ಪ್ರೊಫೈಲ್ ಅನ್ನು ಹೊಂದಿದ್ದು, ಪರಿಚಿತ ಪ್ರೀಮಿಯಂ ಮೆಟಲ್‌ನಲ್ಲಿ ನಿರ್ಮಾಣವಾಗಿದೆ. ಇದರ ತೂಕ 163 ಗ್ರಾಂ ಇದೆ. ಡಿಸ್‌ಪ್ಲೇ:ಇದು 6.7-ಇಂಚಿನ AMOLED ಡಿಸ್‌ಪ್ಲೇಯನ್ನು 120Hz ರಿಫ್ರೆಶ್ ರೇಟ್‌ನೊಂದಿಗೆ ಹೊಂದಿದೆ.

## ಸಿಹಿ ಪೇಡ

### ಪಾಕ ಶಾಲೆ



### ಬೇಕಿರುವ ಸಾಮಗ್ರಿ

ಹಾಲಿನ ಪುಡಿ- 1 ಬಟ್ಟಲು, ಸಕ್ಕರೆ ಪುಡಿ- 3/4 ಬಚ್ಚಲು, ತುಪ್ಪ- 2 ಚಮಚ, ಹಾಲು - 1/2 ಬಟ್ಟಲು, ಏಲಕ್ಕಿ ಪುಡಿ- ಸ್ವಲ್ಪ

### ಮಾಡುವ ವಿಧಾನ

ಮೊದಲು ಒಂದು ಪ್ಯಾನ್ ನಲ್ಲಿ 1 ಚಮಚ ತುಪ್ಪ ಹಾಕಿ ಕರಗಿಸಿ ನಂತರ ಹಾಲು ಸಕ್ಕರೆ ಪುಡಿ ಹಾಕಿ. ಸಕ್ಕರೆ ಕರಗಿದ ಮೇಲೆ ಹಾಲಿನ ಪುಡಿ, ಏಲಕ್ಕಿ ಪುಡಿ ಉದುರಿಸಿ ಚೆನ್ನಾಗಿ ಗಂಟಾಗದ ಹಾಗೆ ಕೈಯಾಡಿಸಿ. ಮತ್ತೊಂದು ಚಮಚ ತುಪ್ಪ ಹಾಕಿ ತಳ ಬಿಡುವವರೆಗೂ ಮಿಶ್ರಣ ಮಾಡುತ್ತಲೇ ಇರಿ. ನಂತರ ಗ್ಯಾಸ್ ಆಫ್ ಮಾಡಿ ತಣ್ಣಗಾಗಲು ಬಿಡಿ. ಕೈಗೆ ತುಪ್ಪ ಸವರಿಕೊಂಡು ಚಿಕ್ಕ ಚಿಕ್ಕ ಉಂಡೆ ಮಾಡಿ ಪೇಡ ಬೇಕಾದ ಆಕಾರದಲ್ಲಿ ಸಿದ್ಧ ಪಡಿಸಿದರೆ ರುಚಿಯಾದ ಪೇಡ ಸವಿಯಲು ಸಿದ್ಧ.

## ನನ್ನ ಉಸಿರು ಇರೋ ತನಕ ಟರ್ಕಿಗೆ ಕಾಲಿಡಲ್ಲ: ಗಾಯಕ ವಿಶಾಲ್ ಮಿಶ್ರಾ



ಇತ್ತೀಚೆಗೆ ಭಾರತ ಮತ್ತು ಪಾಕಿಸ್ತಾನದ ನಡುವೆ ಸಾಕಷ್ಟು ಉದ್ವಿಗ್ನತೆ ಉಂಟಾಗಿದೆ. ಪಹಲ್ಗಾಮ್ ದಾಳಿಯ ನಂತರ, ಭಾರತೀಯ ಸೇನೆಯು 'ಆಪರೇಷನ್ ಸಿಂಧೂರ್' ಅಡಿಯಲ್ಲಿ ಪಾಕಿಸ್ತಾನ ಮತ್ತು ಪಾಕ್ ಆಕ್ರಮಿತ ಕಾಶ್ಮೀರದ (ಪಿಒಕೆ) ಒಂಬತ್ತು ಸ್ಥಳಗಳ ಮೇಲೆ ವಾಯುದಾಳಿ ನಡೆಸಿತು. ಈ ಕಾರ್ಯಾಚರಣೆಯಲ್ಲಿ, ಭಯೋತ್ಪಾದಕರ ಅನೇಕ ಬಂಕರ್‌ಗಳು ಮತ್ತು ಅಡಗುತಾಣಗಳು ನಾಶವಾದವು. ಈ ದಾಳಿಯಿಂದ ಕಂಗಾಲಾದ ಪಾಕಿಸ್ತಾನ, ಜಮ್ಮು ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ಡ್ರೋನ್ ದಾಳಿ ನಡೆಸಿತು. ಈ ದಾಳಿಗಳಲ್ಲಿ, ಜಮ್ಮು, ಸಾಂಬಾ ಮತ್ತು ಪಠಾಣ್‌ಕೋಟ್‌ನಂತಹ ಪ್ರದೇಶಗಳನ್ನು ಗುರಿಯಾಗಿಸಲಾಗಿತ್ತು.

ಆದಾಗ್ಯೂ, ಭಾರತದ ರಕ್ಷಣಾ ವ್ಯವಸ್ಥೆಯು ಪಾಕಿಸ್ತಾನದ ಈ ದುಷ್ಕೃತ್ಯದ ದಾಳಿಯನ್ನು ವಿಫಲಗೊಳಿಸಿತು. ಅಂದಿನಿಂದ ಎರಡೂ ದೇಶಗಳ ನಡುವೆ ನಿರಂತರ ಉದ್ವಿಗ್ನತೆ ಮತ್ತು ಯುದ್ಧ ನಡೆಯುತ್ತಿದೆ. ಈ ಮಧ್ಯೆ, ಪ್ರಸಿದ್ಧ ಬಾಲಿವುಡ್ ಗಾಯಕ ಮತ್ತು ಸಂಯೋಜಕ ವಿಶಾಲ್ ಮಿಶ್ರಾ ಮಹತ್ವದ ಹೇಳಿಕೆ ನೀಡಿದ್ದಾರೆ. ಶುಕ್ರವಾರ, ಅವರು ತಮ್ಮ ಸೋಶಿಯಲ್ ಮೀಡಿಯಾ ಖಾತೆಯನ್ನು ಒಂದು ಸ್ಟೋರಿಯನ್ನು ಪೋಸ್ಟ್ ಮಾಡಿದ್ದರು. ಇದೀಗ ಆ ಪೋಸ್ಟ್ ಹೆಚ್ಚು ವೈರಲ್ ಆಗುತ್ತಿದೆ.

ನಾನು ಮತ್ತೆಂದೂ ಟರ್ಕಿ ಮತ್ತು ಅಜೆರ್ಬೈಜಾನ್‌ಗೆ ಹೋಗುವುದಿಲ್ಲ. ಪ್ರವಾಸವಾಗಲಿ, ಸಿಂಗಿಂಗ್ ಶೋ ಆಗಲಿ. ಎಂದಿಗೂ! ಎಂದು ಬರೆದುಕೊಂಡಿದ್ದಾರೆ. ಟರ್ಕಿಯಲ್ಲಿ ತಯಾರಿಸಿದ ಡ್ರೋನ್‌ಗಳಿಂದ ಪಾಕಿಸ್ತಾನವು ಹಲವಾರು ಭಾರತೀಯ ಮಿಲಿಟರಿ ಮತ್ತು ನಾಗರಿಕ ಗುರಿಗಳ ಮೇಲೆ ದಾಳಿ ಮಾಡಿದೆ ಎಂಬ ಸುದ್ದಿ ಹೊರಬಂದ ಸಮಯದಲ್ಲಿ ವಿಶಾಲ್ ಅವರ ಹೇಳಿಕೆ ಹೊರಬಿದ್ದಿದೆ.

ಈ ಉದ್ವಿಗ್ನತೆಯ ನಂತರ, ಅನೇಕ ದೊಡ್ಡ ವ್ಯಕ್ತಿಗಳು ಮತ್ತು ಕಂಪನಿಗಳು ಭಾರತದ ಜನರು ಟರ್ಕಿ ಮತ್ತು ಅಜೆರ್ಬೈಜಾನ್‌ಗೆ ಹೋಗದಂತೆ ಮನವಿ ಮಾಡಿದ್ದಾರೆ. ಈಸ್ ಮೈ ಟ್ರಿಪ್ ಅಧ್ಯಕ್ಷ ನಿಶಾಂತ್ ಪಿಟ್ಟಿ ಕೂಡ 'ಪಾಕಿಸ್ತಾನವನ್ನು ಬೆಂಬಲಿಸುವ ದೇಶಗಳಿಗೆ ಹೋಗುವುದನ್ನು ತಪ್ಪಿಸಿ' ಎಂದು ಹೇಳಿಕೆ ನೀಡಿದ್ದಾರೆ.

ಪ್ರಸ್ತುತ ಪರಿಸ್ಥಿತಿಯನ್ನು ಗಮನಿಸಿದರೆ, ಟರ್ಕಿ ಮತ್ತು ಅಜೆರ್ಬೈಜಾನ್ ಪ್ರಯಾಣವನ್ನು ಮುಂದೂಡುವುದು ಉತ್ತಮ ಎಂದು ಹೇಳಿದ್ದಾರೆ. ಈ ವಿಷಯದ ಬಗ್ಗೆ ಟಿವಿ ನಟ ಕುಶಾಲ್ ಟಂಡನ್ ಕೂಡ ತಮ್ಮ ಅಭಿಪ್ರಾಯಗಳನ್ನು ವ್ಯಕ್ತಪಡಿಸಿದ್ದಾರೆ. ನನ್ನ ತಾಯಿ ಮತ್ತು ಸ್ನೇಹಿತರು ಮುಂದಿನ ತಿಂಗಳು ಟರ್ಕಿಗೆ ಭೇಟಿ ನೀಡಬೇಕಿತ್ತು ಆದರೆ ಈಗ ಅವರು ತಮ್ಮ ಪ್ರವಾಸವನ್ನು ರದ್ದುಗೊಳಿಸಿದ್ದಾರೆ. ಯಾವುದೇ ಮರುಪಾವತಿ ಇಲ್ಲದಿದ್ದರೂ ಸಹ ಈ ಪ್ರವಾಸವನ್ನು ರದ್ದುಗೊಳಿಸಿದ್ದಾರೆ. ಅವರಿಗೆ ಹೋಟೆಲ್ ಮತ್ತು ವಿಮಾನ ಬುಕಿಂಗ್ ಮಾಡಿರುವ ಹಣ ಮತ್ತೆ ಸಿಗುವುದಿಲ್ಲ ಎಂದು ಹೇಳಿದ್ದಾರೆ.

ಟರ್ಕಿಶ್ ಏರ್ಲೈನ್ಸ್ ವಿರುದ್ಧ ಸಾಮಾಜಿಕ ಮಾಧ್ಯಮಗಳಲ್ಲಿಯೂ ಪ್ರತಿಭಟನೆಗಳು ಆರಂಭವಾಗಿವೆ. ಅನೇಕ ಭಾರತೀಯ ಬಳಕೆದಾರರು ಟರ್ಕಿಶ್ ಏರ್ಲೈನ್ಸ್ ಅನ್ನು ನಿಷೇಧಿಸಬೇಕೆಂದು ಒತ್ತಾಯಿಸುತ್ತಿದ್ದಾರೆ. ಈ ದೇಶಗಳು ಪಾಕಿಸ್ತಾನವನ್ನು ಬೆಂಬಲಿಸುವವರೆಗೆ, ಭಾರತದ ಜನರು ಸಹ ಅವರ ಸೇವೆಗಳಿಂದ ದೂರವಿರಬೇಕು ಎಂದು ಜನರು ಹೇಳುತ್ತಿದ್ದಾರೆ. ಇದರಿಂದಾಗಿ ಟರ್ಕಿಶ್ ಏರ್ಲೈನ್ಸ್ ಸಾಕಷ್ಟು ಟೀಕೆಗಳನ್ನು ಎದುರಿಸುತ್ತಿದೆ.

## ಪರಮಾಣು ಯುದ್ಧವಾದರೆ ಜೀವ ಉಳಿಸಿಕೊಳ್ಳುವುದು ಹೇಗೆ

### ಹೆಲ್ತ್ ಟಿಪ್ಸ್



ಭಾರತ ಮತ್ತು ಪಾಕಿಸ್ತಾನ ನಡುವಿನ ಮಿಲಿಟರಿ ಉದ್ವಿಗ್ನತೆ ನಿರಂತರವಾಗಿ ಹೆಚ್ಚುತ್ತಿದೆ. ಪಾಕಿಸ್ತಾನ ಗುರುವಾರ ರಾತ್ರಿ, ಡ್ರೋನ್‌ಗಳು ಮತ್ತು ಕ್ಷಿಪಣಿಗಳಿಂದ ಭಾರತದ ಹಲವಾರು ನಗರಗಳ ಮೇಲೆ ದಾಳಿ ಮಾಡಲು ಪ್ರಯತ್ನಿಸಿತು. ಆದರೆ ಭಾರತದ ವಾಯು ರಕ್ಷಣಾ ಪಡೆಗಳು ಪಾಕಿಸ್ತಾನದ ಎಲ್ಲಾ ಯತ್ನಗಳನ್ನು ವಿಫಲಗೊಳಿಸಿದೆ. ಅಲ್ಲದೆ, ಪ್ರತೀಕಾರವಾಗಿ, ಅವರು ಪಾಕಿಸ್ತಾನದ ಹಲವು ನಗರಗಳ ಮೇಲೆ ಕ್ಷಿಪ್ರ ಕ್ಷಿಪಣಿ ದಾಳಿಗಳನ್ನು ನಡೆಸಿದೆ. ಈ ಯುದ್ಧದ ಸಂದರ್ಭಗಳಲ್ಲಿ, ಒಂದು ವೇಳೆ ಪರಮಾಣು ಯುದ್ಧವಾದರೆ ಏನಾಗಬಹುದು ಎನ್ನುವ ಚಿಂತೆ ಅನೇಕರನ್ನು ಕಾಡುತ್ತಿದೆ. ಒಂದು ವೇಳೆ ಪರಮಾಣು ಯುದ್ಧ ಸಂಭವಿಸಿದರೆ ನಮ್ಮನ್ನು ನಾವು ರಕ್ಷಿಸಿಕೊಳ್ಳಲು ಏನು ಮಾಡಬೇಕು ಎನ್ನುವ ಮಾಹಿತಿ ಇಲ್ಲಿದೆ. ತಜ್ಞರ ಪ್ರಕಾರ,ಪರಮಾಣು ದಾಳಿಯಸಂದರ್ಭದಲ್ಲಿ, ತೀವ್ರವಾದ ಶಾಖದೊಂದಿಗೆ ದೊಡ್ಡ ಸ್ಫೋಟವೂ ಉತ್ಪತ್ತಿಯಾಗುತ್ತದೆ. ಅಂತಹ ಪರಿಸ್ಥಿತಿಯಲ್ಲಿ, ಪರಮಾಣು ಸ್ಫೋಟದ ಮಿಂಚನ್ನು ತಪ್ಪಿಸಬೇಕು. ಅಪ್ಪಿ ತಪ್ಪಿಯೂ ಸ್ಫೋಟದ ಕಡೆಗೆ ನೇರವಾಗಿ ನೋಡಬಾರದು. ಯಾಕೆಂದರೆ ಸ್ಫೋಟವನ್ನು ನೇರವಾಗಿ ನೋಡುವುದರಿಂದ ಕುರುಡುತನದ ಅಪಾಯ ಉಂಟಾಗಬಹುದು.

ಸ್ಫೋಟದ ನಂತರ, ಸುಮಾರು 20 ನಿಮಿಷಗಳ ಕಾಲ ಸುರಕ್ಷಿತ ಆಶ್ರಯದಲ್ಲಿ ಆಶ್ರಯ ಪಡೆಯುವ ಮೂಲಕ ನಿಮ್ಮನ್ನು ಸುರಕ್ಷಿತವಾಗಿರಿಸಿಕೊಳ್ಳಿ. ಏಕೆಂದರೆ ಈ ಅವಧಿಯಲ್ಲಿ ಹೊರ ಹೊಮ್ಮುವ ವಿಕಿರಣ ಅತ್ಯಂತ ಅಪಾಯಕಾರಿಯಾಗಿರುತ್ತದೆ. ಇದಕ್ಕಾಗಿ, ದಾಳಿ ನಡೆದ ತಕ್ಷಣ, ಯಾವುದೇ ಸಮಯವನ್ನು ವ್ಯರ್ಥ ಮಾಡದೆ, ತಕ್ಷಣವೇ ಬಲವಾದ ಕಟ್ಟಡದ ಒಳಗೆ ಹೋಗಿ. ನೆಲಮಾಳಿಗೆ ಇದ್ದರೆ ತುಂಬಾ ಸೇಫ್. ಅಲ್ಲಿ ಯಾವುದೇ ಕಿಟಕಿ ಇರಬಾರದು. ಅಂಥಹ ಜಾಗಕ್ಕೆ ತೆರಳಿ ಒಳಗಿನಿಂದ ಸರಿಯಾಗಿ ಲಾಕ್ ಮಾಡಿಕೊಳ್ಳಿ. ನೀವು ಸುರಕ್ಷಿತ ಮನೆಯನ್ನು ತಲುಪಿದ ತಕ್ಷಣ, ಡಕ್ ಅಂಡ್ ಕವರ್ ತಂತ್ರವನ್ನು ಅಳವಡಿಸಿಕೊಳ್ಳಿ. ಮೇಜಿನಂತಹ ಗಟ್ಟಿಮುಟ್ಟಾದ ವಸ್ತುವಿನ ಕೆಳಗೆ ಬಾಗಿ ನಿಮ್ಮ ತಲೆ ಮತ್ತು ಕುತ್ತಿಗೆಯನ್ನು ಮುಚ್ಚಿಕೊಳ್ಳಿ. ಗಾಜು, ಕಿಟಕಿಗಳು ಮತ್ತು ಬಾಹ್ಯ ಗೋಡೆಗಳಿಂದ ದೂರವಿರಲು ಪ್ರಯತ್ನಿಸಿ. ಮನೆಯ ಕಿಟಕಿಗಳು, ಬಾಗಿಲುಗಳನ್ನು ಭದ್ರವಾಗಿ ಮುಚ್ಚಿಕೊಳ್ಳಿ. ಸಾಧ್ಯವಾದರೆ, ಅದನ್ನು ಟೇಪ್ ಮತ್ತು ಪ್ಲಾಸ್ಟಿಕ್ ಹಾಳೆಯಿಂದ ಮುಚ್ಚಿ.

## ಹಲ್ಲಿನ ಬಿಳಪು

### ಬ್ಯೂಟಿ ಟಿಪ್ಸ್



ಪ್ರಾಚೀನ ಆಯುರ್ವೇದ ಪದ್ಧತಿಯಲ್ಲಿ ಆಯಿಲ್ ಪುಲ್ಲಿಂಗ್ ಕ್ರಮವನ್ನು ಅನುಸರಿಸುತ್ತಾ ಬಂದಿದ್ದು, ಇದು ಹಲ್ಲಿನ ಆರೋಗ್ಯಕ್ಕೆ ಹೆಸರುವಾಸಿಯಾದ ಒಂದು ವಿಧಾನವಾಗಿದೆ. ಇದು ಬ್ಯಾಕ್ಟೀರಿಯಾವನ್ನು ತೆಗೆದುಹಾಕಲು ಮತ್ತು ಬಾಯಿಯ ನೈರ್ಮಲ್ಯವನ್ನು ಉತ್ತೇಜಿಸಲು ಇದು ಸಹಾಯಕಾರಿ. ನಮ್ಮ ಬಾಯಿಯಲ್ಲಿ ಎಣ್ಣೆಯನ್ನು ಹಾಕಿ ಹೊರಳಾಡಿಸುವ ಕ್ರಿಯೆಯನ್ನು ಈ ವಿಧಾನವು ಒಳಗೊಂಡಿರುತ್ತದೆ. ತೆಂಗಿನ ಎಣ್ಣೆಯು ಅದರ ಆಹ್ಲಾದಕರ ರುಚಿ ಮತ್ತು ಆಂಟಿ ಮೈಕ್ರೊಬಿಯಲ್ ಗುಣಲಕ್ಷಣಗಳಿಂದ ವಿಶೇಷವಾಗಿ ಜನಪ್ರಿಯವಾಗಿದೆ. ಒಂದು ಟೇಬಲ್ ಸ್ಪೂನ್ ತೆಂಗಿನ ಎಣ್ಣೆ ತೆಗೆದುಕೊಳ್ಳಬೇಕುಸುಮಾರು 15-20 ನಿಮಿಷಗಳ ಕಾಲ ಅದನ್ನು ನಿಮ್ಮ ಬಾಯಿಯ ಸುತ್ತಲೂ ಹೊರಳಾಡಿಸಿ ಎಣ್ಣೆಯನ್ನು ಉಗುಳುವುದು ಮತ್ತು ಬೆಚ್ಚಗಿನ ನೀರಿನಿಂದ ನಿಮ್ಮ ಬಾಯಿಯನ್ನು ತೊಳೆಯಿರಿ. ನಂತರ ಹಲ್ಲನ್ನು ಎಂದಿನಂತೆ ಉಜ್ಜಿ.

ಈ ಅಭ್ಯಾಸವು ಕೇವಲ ಹಲ್ಲಿನ ಹಳದಿ ಕಲೆಗಳನ್ನಷ್ಟೇ ಕಡಿಮೆ ಮಾಡುವುದಲ್ಲದೆ ಒಟ್ಟಾರೆ ಬಾಯಿಯ ಆರೋಗ್ಯವನ್ನು ಕಾಪಾಡುವಲ್ಲಿ ಸಹಾಯಕಾರಿ. ಅಡಿಗೆ ಸೋಡವು ಹಲ್ಲುಗಳನ್ನು ಬಿಳುಪುಗೊಳಿಸುವ ಗುಣ ಲಕ್ಷಣಗಳಿಗೆ ಹೆಸರುವಾಸಿಯಾಗಿದೆ. ಇದು ಹಲ್ಲಿನ ಮೇಲ್ಮೈ ಕಲೆಗಳನ್ನು ಪರಿಣಾಮಕಾರಿಯಾಗಿ ತೆಗೆದು ಹಾಕಲು ಸಹಾಯ ಮಾಡುವ ಪ್ರಬಲ ಪೇಸ್ಟ್ ಆಗಿ ಕಾರ್ಯ ನಿರ್ವಹಿಸುತ್ತದೆ. ಅಡಿಗೆ ಸೋಡಾ ಅದರ ಹಲ್ಲುಗಳನ್ನು ಬಿಳುಪುಗೊಳಿಸುವ ಗುಣಲಕ್ಷಣ ಗಳಿಗೆ ಹೆಸರುವಾಸಿಯಾಗಿದೆ. ಇದು ಮೇಲ್ಮೈ ಕಲೆಗಳನ್ನು ಪರಿಣಾಮ ಕಾರಿಯಾಗಿ ತೆಗೆದುಹಾಕಲು ಸಹಾಯ ಮಾಡುವ ಪ್ರಬಲವಾದ ಪೇಸ್ಟ್ ಅನ್ನು ರೂಪಿಸುತ್ತದೆ. ಒಂದು ಟೇಬಲ್ ಸ್ಪೂನ್ ಅಡುಗೆ ಸೋಡದ ಜೊತೆಗೆ ಎರಡು ಟೇಬಲ್ ಸ್ಪೂನ್ ಗಳಷ್ಟು ಹೈಡ್ರೋಜನ್ ಪೆರಾಕ್ಸೈಡ್ ಸೇರಿಸಿ ಪೇಸ್ಟ್ ತಯಾರಿಸಿ. ಈ ಪೇಸ್ಟ್ ಅನ್ನು ನಿಮ್ಮ ಹಲ್ಲುಗಳಿಗೆ ನಿಧಾನವಾಗಿ ಅನ್ವಯಿಸಿ ಎರಡು ನಿಮಿಷ ಬ್ರಶ್ ಮಾಡಿ. ನಂತರ ನೀರಿನಿಂದ ಬಾಯಿ ತೊಳೆಯಿರಿ. ದಂತ ಕವಚದ ಹಾನಿಯನ್ನು ತಪ್ಪಿಸಲು ಮತ್ತು ಹಲ್ಲಿನ ಬಿಳುಪು ಹೆಚ್ಚಾಗಲು ವಾರಕ್ಕೆ ಒಂದು ಅಥವಾ ಎರಡು ಬಾರಿ ಈ ಪರಿಹಾರವನ್ನು ಬಳಸಿ.

## ಹಾವು ಕಡಿತ ಭಯ ಬೇಡ, ಎಚ್ಚರದಿಂದಿರಿ



ಹಾವು ಕಚ್ಚಿದ ಸಂದರ್ಭಗಳಲ್ಲಿ ಯಾವುದೇ ವ್ಯಕ್ತಿಗಳು ಹೆದರಬಾರದು, ಆಂಬುಲೆನ್ಸ್ ಅಥವಾ ಇನ್ನಿತರ ವಾಹನದಲ್ಲಿ ಹಾವು ಕಡಿತಕ್ಕೆ ಒಳಗಾದ ವ್ಯಕ್ತಿಯನ್ನು ಸಮೀಪದ ಸರ್ಕಾರಿ ಆಸ್ಪತ್ರೆಗೆ ಕರೆದೊಯ್ಯಬೇಕೆಂದು ಜಿಲ್ಲಾಧಿಕಾರಿ ಪಿ.ಎನ್. ರವೀಂದ್ರ ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಇತ್ತೀಚಿಗೆ ನಡೆದ ಹಾವು ಕಡಿತ ನಿಯಂತ್ರಣ ಮತ್ತು ತಡೆಗಟ್ಟುವಿಕೆ ಕುರಿತ ಟಾಸ್ಕ್ ಫೋರ್ಸ್ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಹಾವು ಕಡಿತ ಎಂದರೆ ಹಾವಿನ ಕೋರೆ ಹಲ್ಲುಗಳು ಚರ್ಮವನ್ನು ಚುಚ್ಚುವುದರಿಂದ ಉಂಟಾಗುವ ಗಾಯವಾಗಿದೆ. ಹಾವು ಭೇಟೆಯನ್ನು ಹಿಡಿಯಲು ಅಥವಾ ತನ್ನನ್ನು ತಾನು ರಕ್ಷಿಸಿಕೊಳ್ಳಲು ಕಚ್ಚುತ್ತದೆ. ಹಾವಿನ ಕಡಿತವು ಗಾಯವನ್ನು ಉಂಟುಮಾಡಬಹುದು ಮತ್ತು ಕೆಲವು ಸಂದರ್ಭಗಳಲ್ಲಿ ಜೀವಕ್ಕೆ ಅಪಾಯವನ್ನು ಉಂಟುಮಾಡಬಹುದು ವಿಷಕಾರಿ ಅಲ್ಲದ ಹಾವು ಕಡಿತದಿಂದ ಸೌಮ್ಯವಾದ ಊತ, ಚರ್ಮದಲ್ಲಿ ಬದಲಾವಣೆಗಳು (ಕೆಂಪು ಅಥವಾ ನಿಮ್ಮ ನೈಸರ್ಗಿಕ ಚರ್ಮದ ಬಣ್ಣಕ್ಕಿಂತ ಗಾಢವಾದ ಬಣ್ಣ), ಕಚ್ಚಿದ ಸ್ಥಳದಲ್ಲಿ ರಕ್ತಸ್ರಾವವಾಗುವ ಲಕ್ಷಣಗಳು ಕಂಡುಬರುತ್ತದೆ. ವಿಷಪೂರಿತ ಹಾವು ಕಡಿತವು ಚರ್ಮದ ಮೇಲೆ ಕಚ್ಚಿದ ಗುರುತುಗಳಿಂದ ಉಂಟಾದ ಗಾಯಗಳು ಆಗುತ್ತವೆ, ಕಚ್ಚಿದ ಸ್ಥಳದಲ್ಲಿ ಅಥವಾ ನಿಮ್ಮ ಕೈಕಾಲು ಅಥವಾ ಕಚ್ಚಿದ ದೇಹದಾದ್ಯಂತ ನೋವು ಎಲ್ಲಾ ವಿಷಕಾರಿ ಹಾವು ಕಡಿತ ನೋವನ್ನು ಉಂಟುಮಾಡುವುದಿಲ್ಲ. ಚರ್ಮದ ಬಣ್ಣ ಬದಲಾಗುತ್ತದೆ, ಬೆವರುವುದು ಮತ್ತು ಜೊಲ್ಲು ಸುರಿಸುವಿಕೆ, ವಾಕರಿಕೆ ಮತ್ತು ವಾಂತಿ, ತಲೆ ನೋವು, ತಲೆ ತಿರುಗುವಿಕೆ ಮತ್ತು ದೃಷ್ಟಿ ಮಂದವಾಗುವಿಕೆ ಹಾಗೂ ನಿಲ್ಲದ ರಕ್ತಸ್ರಾವ (ಅಸಹಜ ರಕ್ತ ಹೆಪ್ಪುಗಟ್ಟುವಿಕೆ), ಕಡಿಮೆ ರಕ್ತದೊತ್ತಡ, ವೇಗವಾದ ಹೃದಯ ಬಡಿತ ಮತ್ತು ದುರ್ಬಲ ನಾಡಿ, ಉಸಿರಾಟದ ತೊಂದರೆ, ಮುಖ ಮತ್ತು ಕೈಕಾಲುಗಳಲ್ಲಿ ಸ್ನಾಯು ದೌರ್ಬಲ್ಯ ಅಥವಾ ಸೆಳೆತ ಮತ್ತು ಮರಗಟ್ಟುವಿಕೆ, ತೀವ್ರ ಊತ ಇಂತಹ ಲಕ್ಷಣಗಳಿಂದ ಕಂಡುಬರಬಹುದು ಎಂದು ತಿಳಿಸಿದರು.

**ಮಾಡಬೇಕಾದ ಕಾರ್ಯಗಳು:** ಹೆದರಬೇಡಿ, ಹಾವು ಕಡಿತಕ್ಕೆ ಒಳಗಾದ ವ್ಯಕ್ತಿಯನ್ನು ಸಮಾಧಾನವಾಗಿರಿಸಬೇಕು. ಹಾವಿನಿಂದ ನಿಧಾನವಾಗಿ ದೂರ ಸರಿಯಬೇಕು. ಹಾವು ಕಚ್ಚಿದ ದೇಹದ ಭಾಗವನ್ನು ಏನೂ ಮಾಡಬಾರದು. ಹಾವು ಕಚ್ಚಿದ ದೇಹದ ಭಾಗದಲ್ಲಿರುವ ಪಾದರಕ್ಷೆ, ಕಾಲುಂಗರ, ಬೆಲ್ಟ್, ಆಭರಣಗಳು, ವಾಚ್, ಬಿಗಿಯಾದ ಬಟ್ಟೆಗಳನ್ನು ಕಳಚಬೇಕು. ಹಾವು ಕಡಿತಕ್ಕೆ ಒಳಗಾದ ವ್ಯಕ್ತಿಯನ್ನು ಎಡಭಾಗಕ್ಕೆ ಮಲಗಿಸಬೇಕು. ಕಚ್ಚಿದ ಭಾಗವನ್ನು ಅಲುಗಾಡದಂತೆ ನೋಡಿಕೊಳ್ಳಬೇಕು. ತಕ್ಷಣವೇ ನೇರವಾಗಿ ಸಮೀಪದ ಆರೋಗ್ಯ ಕೇಂದ್ರಕ್ಕೆ ಕರೆದೊಯ್ಯಬೇಕೆಂದರು.

**ಮಾಡಬಾರದ ಕಾರ್ಯಗಳು:**
ಗಾಬರಿಯಾಗಬಾರದು. ರಕ್ತ ಬಂಧಕ ಪಟ್ಟಿ, ಬಿಗಿಯಾದ ಬಟ್ಟೆಯನ್ನು ಕಟ್ಟಬಾರದು. ಗಾಯವನ್ನು ಕೊಯ್ಯಬಾರದು ಹಾಗೂ ಏನನ್ನು ಹಚ್ಚಬಾರದು. ನಿಮ್ಮ ಬಾಯಿಯಿಂದ ವಿಷವನ್ನು ಹೀರಬಾರದು. ಹಾವು ಕಚ್ಚಿದ ವ್ಯಕ್ತಿಗೆ ಆಸ್ಪತ್ರೆಯಲ್ಲಿ ಚಿಕಿತ್ಸೆ ಕೊಡಿಸಿ, ನಾಟಿ ಮದ್ದು ಸೇರಿದಂತೆ ಇನ್ಯಾವುದೇ ಅಸುರಕ್ಷಿತ ಚಿಕಿತ್ಸಾ ಪದ್ಧತಿಗಳನ್ನು ಅವಲಂಬಿಸಬಾರದು. ಹಾವನ್ನು ಹಿಡಿಯುವ ಅಥವಾ ಕೊಲ್ಲುವ ಪ್ರಯತ್ನ ಮಾಡದಿರಿ, ಅಮೂಲ್ಯ ಸಮಯವನ್ನು ವ್ಯರ್ಥ ಮಾಡುತ್ತದೆ ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಮಹೇಶ್ ಕುಮಾರ್, ಜಿಲ್ಲಾ ಸರ್ವೇಕ್ಷಣಾಧಿಕಾರಿ ಕೃಷ್ಣಪ್ರಸಾದ್, ಜಿಲ್ಲಾ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿ ಡಾ. ಪ್ರಕಾಶ್ ಹಾಗೂ ಆರೋಗ್ಯ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿ ಇದ್ದರು.

## ತಮಿಳು ಚಿತ್ರದಲ್ಲಿ ಸೊಂಟ ಬಳುಕಿಸಿದ ತನಿಷಾ ಕುಪ್ಪಂಡ ಬೆಂಕಿ ಡ್ಯಾನ್ಸ್ ಎಂದ ಫ್ಯಾನ್ಸ್



'ಬಿಗ್ ಬಾಸ್ ಕನ್ನಡ 11'ರ ಖ್ಯಾತಿಯ ತನಿಷಾ ಕುಪ್ಪಂಡ ಅವರು ತಮಿಳು ಸಿನಿಮಾವೊಂದರಲ್ಲಿ ಸೊಂಟ ಬಳುಕಿಸಿದ್ದಾರೆ. ಮಾದಕವಾಗಿ ನಟಿ ಹೆಜ್ಜೆ ಹಾಕಿದ್ದಾರೆ. ಈ ಬಗ್ಗೆ ನಟಿ ಸಾಮಾಜಿಕ ಜಾಲತಾಣದಲ್ಲಿ ಅಪ್‌ಡೇಟ್ ಹಂಚಿಕೊಂಡಿದ್ದಾರೆ.

ಕನ್ನಡದ ಸಿನಿಮಾಗಳಲ್ಲಿ ತನಿಷಾ ಬ್ಯುಸಿಯಾಗಿದ್ದಾರೆ. ಇದರ ನಡುವೆ ತಮಿಳಿನಲ್ಲಿಯೂ ಕೆಲಸ ಮಾಡಿದ್ದಾರೆ. 'ಎನ್ ಕಾಥಲೇ' ಚಿತ್ರದ ರಾಸಾನಾ ಓತಾ ರೋಸಾ ಹಾಡಿನ ಮೇಕಿಂಗ್ ವಿಡಿಯೋವನ್ನು ನಟಿ ಶೇರ್ ಮಾಡಿದ್ದಾರೆ. ಈ ಹಾಡು ಈಗಾಗಲೇ ರಿಲೀಸ್ ಆಗಿ ಸದ್ದು ಮಾಡುತ್ತಿದೆ. ಆದರೆ ಈ ಡ್ಯಾನ್ಸ್ ಮಾಡಲು ತೆರೆಹಿಂದಿನ ತಯಾರಿ ಹೇಗಿತ್ತು ಎಂಬುದರ ಝಲಕ್ ಅನ್ನು ನಟಿ ಹಂಚಿಕೊಂಡಿದ್ದಾರೆ. ಮಾದಕವಾಗಿ ಹೆಜ್ಜೆ ಹಾಕಿರೋ ತನಿಷಾರನ್ನು ನೋಡಿ ಬೆಂಕಿ ಡ್ಯಾನ್ಸ್ ಎಂದು ಫ್ಯಾನ್ಸ್ ಕೊಂಡಾಡಿದ್ದಾರೆ.

ಅಂದಹಾಗೆ, ಕನ್ನಡದ 'ಪೆನ್‌ಡ್ರೈವ್' ಸಿನಿಮಾದಲ್ಲಿ ಮಾಲಾಶ್ರೀ ಜೊತೆ ತನಿಷಾ ನಟಿಸಿದ್ದಾರೆ. ಪೊಲೀಸ್ ಅಧಿಕಾರಿ ಪಾತ್ರಕ್ಕೆ ಬಣ್ಣ ಹಚ್ಚಿದ್ದಾರೆ. ಅವರೊಂದಿಗೆ ಕಿಶನ್ ಬಿಳಗಲಿ ಕೂಡ ನಟಿಸಿದ್ದಾರೆ.ಸಾಕಷ್ಟು ಸೀರಿಯಲ್ ಮತ್ತು ಸಿನಿಮಾಗಳಲ್ಲಿ ತನಿಷಾ ನಟಿಸಿದ್ದರೂ ಕೂಡ ಅವರಿಗೆ ಹೇಳಿಕೊಳ್ಳುವಂತಹ ಬ್ರೇಕ್ ಸಿಕ್ಕಿರಲಿಲ್ಲ. ಕಳೆದ ಸೀಸನ್ ಬಿಗ್ ಬಾಸ್ ಕನ್ನಡ 10ರಲ್ಲಿ ಸ್ಪರ್ಧಿಯಾಗಿ ಕಾಣಿಸಿಕೊಂಡ್ಮೇಲೆ ಅವರಿಗೆ ಜನಪ್ರಿಯತೆ ಹೆಚ್ಚಾಯಿತು. ಇದಷ್ಟೇ ಅಲ್ಲ, ನಟನೆಯ ಜೊತೆ ಹೋಟೆಲ್ ಉದ್ಯಮ, ಆಭರಣದ ಮಳಿಗೆ ಹಾಗೂ ನಿರ್ಮಾಣ ಸಂಸ್ಥೆ ಕೂಡ ಶುರು ಮಾಡಿದ್ದಾರೆ.

## ರಾಶಿ ಭವಿಷ್ಯ



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

**ಮೇಷ:** ವ್ಯಾಪಾರ ವ್ಯವಹಾರ ಕ್ಷೇತ್ರದಲ್ಲಿ ಅನುಕೂಲ. ಅಧಿಕ ಧನ ಸಂಪಾದನೆ. ರಿಯಲ್ ಎಸ್ಟೇಟ್ ಉದ್ಯೋಗಸ್ಥರಿಗೆ ಅನುಕೂಲ. ಮನೋವ್ಯಾಧಿ. ಅತಿಯಾದ ಕೋಪ ಸಂಕಟ.

**ವೃಷಭ:** ಧನ ನಷ್ಟ ಮಾನ ಅಪಮಾನಗಳಿಗೆ ಗುರಿಯಾಗುವಿರಿ. ಸಂಕಷ್ಟ ಮತ್ತು ಸಾಲದ ಸುಳಿಗೆ ಸಿಲುಕುವಿರಿ.

**ಮಿಥುನ:** ಸಾಲದ ಚಿಂತೆ. ನೆರೆಹೊರೆಯವರಿಂದ ಬಂಧುಗಳಿಂದ ಸಹೋದ್ಯೋಗಿಗಳಿಂದ ಸಾಲ ಬೇಡುವ ಸನ್ನಿವೇಶ. ಅನಾರೋಗ್ಯ ಸಮಸ್ಯೆ ಹೆಚ್ಚು

**ಕಟಕ:** ಮಕ್ಕಳಿಂದ ನಷ್ಟ. ನೆರೆಹೊರೆಯವರಿಂದ, ಬಾಡಿಗೆದಾರರಿಂದ ಸೇವಕರಿಂದ ಕಿರಿಕಿರಿ ಮತ್ತು ನಿದ್ರಾಭಂಗ. ಮಕ್ಕಳಿಗಾಗಿ ಅಥವಾ ಉದ್ಯೋಗನಿಮಿತ್ತ ದೂರ ಪ್ರಯಾಣ.

**ಸಿಂಹ:** ಧನಾಗಮನ ಮತ್ತು ಲಾಭ. ಕೆಲಸ ಕಾರ್ಯ ಕರ್ತವ್ಯಗಳಲ್ಲಿ ಜಯ. ಆರ್ಥಿಕ ನಷ್ಟ ಮತ್ತು ಮೋಸ

**ಕನ್ಯಾ:** ಆಕಸ್ಮಿಕ ಅವಘಡಗಳಿಂದ, ಆರೋಗ್ಯ ಸಮಸ್ಯೆಯಿಂದ ಆಸ್ಪತ್ರೆಗೆ ದಾಖಲಾಗುವ ಸಂದರ್ಭ. ಉದ್ಯೋಗ ಒತ್ತಡಗಳಿಂದ ನಿದ್ರಾಭಂಗ. ಸ್ನೇಹಿತರಿಂದ ಅಥವಾ ಸಹೋದರಿಯರಿಂದ ತೊಂದರೆ. ಕಾರ್ಯಕರ್ತವ್ಯಗಳ ಅಡೆತಡೆಯಿಂದ ದಾಂಪತ್ಯದಲ್ಲಿ ಸಮಸ್ಯೆ.

**ತುಲಾ:** ಸಂಗಾತಿಯಿಂದ ಧನಾಗಮನ ಮತ್ತು ಲಾಭ. ತಂದೆಯೊಡನೆ ಕಿರಿಕಿರಿ. ಅನಿರೀಕ್ಷಿತ ಘಟನೆಯಿಂದ ನಷ್ಟ ಮತ್ತು ಸಂಕಷ್ಟ.

**ವೃಶ್ಚಿಕ:** ಪ್ರಯಾಣದಿಂದ ಅನುಕೂಲ ಮತ್ತು ಲಾಭ. ಆಕಸ್ಮಿಕ ಧನಾಗಮನ. ಆರೋಗ್ಯದಲ್ಲಿ ವ್ಯತ್ಯಾಸ .

**ಧನಸ್ಸು:** ಬಡ್ಡಿ ವ್ಯವಹಾರಸ್ಥರಿಗೆ, ಧಾರ್ಮಿಕ ಕ್ಷೇತ್ರದಲ್ಲಿರುವವರಿಗೆ, ಚಿನ್ನ ವ್ಯವಹಾರಸ್ಥರಿಗೆ ಅನುಕೂಲ. ಅಧಿಕ ನಷ್ಟ ಹಾಗೂ ಉದ್ಯೋಗ ಸ್ಥಳದಲ್ಲಿ ಅಧಿಕ ಒತ್ತಡ. ಅನಿರೀಕ್ಷಿತ ತಪ್ಪು

**ಮಕರ:** ಪಿತ್ರಾರ್ಜಿತ ಆಸ್ತಿ ಮೇಲೆ ಸಾಲ. ಮಿತ್ರರಿಂದ ಆರ್ಥಿಕ ಸಹಾಯ. ಆರೋಗ್ಯದಲ್ಲಿ ವ್ಯತ್ಯಾಸ ಮತ್ತು ದಾಂಪತ್ಯದಲ್ಲಿ ಕಲಹ.

**ಕುಂಭ:** ಆರೋಗ್ಯದಲ್ಲಿ ಏರುಪೇರು. ಗಂಡು ಮಕ್ಕಳಿಂದ ಆಕಸ್ಮಿಕ ಧನಾಗಮನ. ಸಾಲಗಾರರಿಂದ ಶತ್ರುಗಳಿಂದ ತೊಂದರೆ ಮತ್ತು ಆಯುಷ್ಯಕ್ಕೆ ಕುತ್ತು.

**ಮೀನ:** ಸ್ಥಿರಾಸ್ತಿಯಿಂದ ಧನಾಗಮನ. ಆರ್ಥಿಕ ಸಂಕಷ್ಟಗಳು ಬಗೆಹರಿಯುವುದು. ಸೇವಾವೃತ್ತಿ ಉದ್ಯೋಗಗಳು ದೊರಕುವುದು. ಆರೋಗ್ಯ ಸಮಸ್ಯೆಗಳು ಬಾಧಿಸುವುದು.

## ವಿಶ್ವ ಲೂಪಸ್ ದಿನದ

ವಿಶ್ವ ಲೂಪಸ್ ದಿನವನ್ನು ವಾರ್ಷಿಕವಾಗಿ ಮೇ 10 ರಂದು ಆಚರಿಸಲಾಗುತ್ತದೆ. ಯಾದೃಚ್ಛಿಕ ಲಕ್ಷಣಗಳು ದುರ್ಬಲಗೊಳಿಸುವ, ದೀರ್ಘಕಾಲದ ಸ್ವಯಂ ನಿರೋಧಕ ಕಾಯಿಲೆ ಎಂದು ಒಪ್ಪಿಕೊಳ್ಳಲು ಸಹಾಯ ಮಾಡಲು ಇದನ್ನು ವಿನ್ಯಾಸಗೊಳಿಸಲಾಗಿದೆ. ಲೂಪಸ್ ಇನ್ನೂ ಒಂದು ಸಂಕೀರ್ಣ ಸ್ಥಿತಿಯಾಗಿಯೇ ಉಳಿದಿದೆ, ಇದನ್ನು ಸಾರ್ವಜನಿಕರು ಮತ್ತು ವೈದ್ಯಕೀಯ ವೃತ್ತಿಪರರು ಸಹ ಇನ್ನೂ ವ್ಯಾಪಕವಾಗಿ ತಪ್ಪಾಗಿ ಅರ್ಥೈಸಿಕೊಳ್ಳುತ್ತಾರೆ. ಲೂಪಸ್ ರೋಗನಿರ್ಣಯವು ಕಷ್ಟಕರವಾಗಿರುತ್ತದೆ ಏಕೆಂದರೆ ಲಕ್ಷಣಗಳು ಹೆಚ್ಚಾಗಿ ಇತರ ಕಾಯಿಲೆಗಳನ್ನು ಹೋಲುತ್ತವೆ. ಪ್ರಮುಖ ಲಕ್ಷಣವೆಂದರೆ ಮುಖದ ದದ್ದು, ಇದು ಸಾಮಾನ್ಯವಾಗಿ ಕೆನ್ನೆಗಳಾದ್ಯಂತ ಹರಡಿರುವ ಚಿಟ್ಟೆಯ ರೆಕ್ಕೆಗಳಂತೆ ಕಾಣುತ್ತದೆ. 2004 ರಲ್ಲಿ ಲೂಪಸ್ ಕೆನಡಾವು ವಿಶ್ವ ಲೂಪಸ್ ದಿನವನ್ನು ಸ್ಥಾಪಿಸಿತು, ಇದು ಬಳಲುತ್ತಿರುವ ವ್ಯಕ್ತಿಗಳು ಮತ್ತು ಅವರ ಕುಟುಂಬಗಳ ಮೇಲೆ ದುರಂತ ಪರಿಣಾಮ ಬೀರುವ ಕಡಿಮೆ ತಿಳಿದಿರುವ ಅಸ್ವಸ್ಥತೆಯ ಬಗ್ಗೆ ಜಾಗೃತಿ ಮೂಡಿಸಲು. ಇದನ್ನು 13 ರಾಷ್ಟ್ರಗಳ ಲೂಪಸ್ ಸಂಸ್ಥೆಗಳು ಆಯೋಜಿಸಿದ್ದವು, ಅವರು ತಮ್ಮ ಅಧಿಕಾರಿಗಳನ್ನು ಸಂಶೋಧನಾ ನಿಧಿಯನ್ನು ಹೆಚ್ಚಿಸಲು, ರೋಗಿಗಳ ಸೇವೆಗಳನ್ನು ಸುಧಾರಿಸಲು, ಹೆಚ್ಚಿನ ಘಟನೆಗಳ ದರಗಳನ್ನು ಸಂಗ್ರಹಿಸಲು ಮತ್ತು ಜಾಗೃತಿ ಮೂಡಿಸಲು ಒತ್ತಾಯಿಸಿದರು. ವಿಶ್ವ ಲೂಪಸ್ ದಿನದ ಉದ್ದೇಶವು ಪ್ರಪಂಚದಾದ್ಯಂತದ ವ್ಯಕ್ತಿಗಳ ಮೇಲೆ ಲೂಪಸ್ ಹೊಂದಿರುವ ಪ್ರಭಾವದ ಬಗ್ಗೆ ಗಮನ ಸೆಳೆಯುವುದು. ವಾರ್ಷಿಕ ಆಚರಣೆಯು ವರ್ಧಿತ ಆರೈಕೆ ಆರೋಗ್ಯ ಸೇವೆಗಳು, ಲೂಪಸ್‌ಗೆ ಈ ಪ್ರದೇಶದಲ್ಲಿ ಹೆಚ್ಚಿನ ಸಂಶೋಧನೆ ಮತ್ತು ಚಿಕಿತ್ಸೆ, ಲೂಪಸ್‌ನ ಹಿಂದಿನ ಆರೈಕೆ ಮತ್ತು ನಿರ್ವಹಣೆ ಮತ್ತು ಲೂಪಸ್‌ನ ಕುರಿತು ಉತ್ತಮ ಜಾಗತಿಕ ಸಾಂಕ್ರಾಮಿಕ ದತ್ತಾಂಶಗಳ ಅಗತ್ಯವನ್ನು ಒತ್ತಿಹೇಳುತ್ತದೆ. ಲೂಪಸ್ ರೋಗನಿರೋಧಕ ವ್ಯವಸ್ಥೆಯು ಅತಿಯಾಗಿ ಪ್ರತಿಕ್ರಿಯಿಸಲು ಕಾರಣವಾಗುತ್ತದೆ, ಆರೋಗ್ಯಕರ ಕೋಶಗಳ ಮೇಲೆ ದಾಳಿ ಮಾಡುವ ಪ್ರತಿಕಾಯಗಳನ್ನು ಉತ್ಪಾದಿಸುತ್ತದೆ, ಇದರ ಪರಿಣಾಮವಾಗಿ ನೋವು, ಉರಿಯೂತ ಮತ್ತು ದೇಹಕ್ಕೆ ಹಾನಿಯಾಗುತ್ತದೆ. ಲೂಪಸ್ ಜೀವಕ್ಕೆ ಅಪಾಯಕಾರಿಯಾಗಿದ್ದರೂ, ಈ ಸಮಯದಲ್ಲಿ ತಿಳಿದಿರುವ ಯಾವುದೇ ಚಿಕಿತ್ಸೆ ಇಲ್ಲ. ದುರದೃಷ್ಟವಶಾತ್, ಬಹುಪಾಲು ಜನರಿಗೆ ಲೂಪಸ್ ಬಗ್ಗೆ ತಿಳಿದಿಲ್ಲ, ಆಗಾಗ್ಗೆ ಇದನ್ನು ಸಂಧಿವಾತ ಎಂದು ತಪ್ಪಾಗಿ ಭಾವಿಸುತ್ತಾರೆ, ಇದು ಕಡಿಮೆ ಮಾರಕ ಕಾಯಿಲೆಯಾಗಿದೆ. ಇದು ಆರೋಗ್ಯಕರ ಕೋಶಗಳನ್ನು ಸಂಪೂರ್ಣವಾಗಿ ನಾಶಪಡಿಸುತ್ತದೆ. ಈ ಆಟೋಆಂಟಿಬಾಡಿಗಳು ದೇಹದಾದ್ಯಂತ ಕಿರಿಕಿರಿ, ನೋವು ಮತ್ತು ಅಂಗಾಂಶ ಗಾಯವನ್ನು ಉಂಟುಮಾಡುತ್ತವೆ.

# ಜಮ್ಮು ಗಡಿ ಜಿಲ್ಲೆಗಳಿಂದ ಸುಮಾರು 10,000 ನಿವಾಸಿಗಳು ಪರಿಹಾರ ಶಿಬಿರಕ್ಕೆ ಸ್ಥಳಾಂತರ

**ದೆಹಲಿ:** ಭಾರತ-ಪಾಕಿಸ್ತಾನದ ನಡುವೆ ಕ್ಷಣ ಕ್ಷಣಕ್ಕೂ ಉದ್ವಿಗ್ನತೆ ಹೆಚ್ಚಾಗುತ್ತಲೇ ಇದೆ. ನಿಯಂತ್ರಣ ರೇಖೆ (ಎಲ್‌ಒಸಿ) ಬಳಿ ಯುದ್ಧ ನೀತಿಯನ್ನು ಉಲ್ಲಂಗಿಸಿರುವ ಪಾಕಿಸ್ತಾನ ಗಡಿಯಾಚೆಗೆ ಹಲವು ಪ್ರದೇಶಗಳಲ್ಲಿ ಡ್ರೋನ್, ಕ್ಷಿಪಣಿ ಹಾಗೂ ಶೆಲ್ ದಾಳಿಗಳನ್ನು ಪ್ರಯತ್ನಿಸುತ್ತಲೇ ಇದೆ. ಪಾಕ್ ನಡೆಸಿದ ಭಾರೀ ಶೆಲ್ ದಾಳಿಯಿಂದಾಗಿ 18 ನಾಗರೀಕರು ಮೃತಪಟ್ಟಿದ್ದು, ಸುಮಾರು 60ಕ್ಕೂ ಹೆಚ್ಚು ಜನರು ಗಾಯಗೊಂಡಿದ್ದಾರೆ. ಇದಾದ ಬಳಿಕ ನಾಗರೀಕರ ಸುರಕ್ಷತೆ ಬಗ್ಗೆ ಕ್ರಮ ಕೈಗೊಳ್ಳಲಾಗಿದ್ದು ಜಮ್ಮುವಿನ ಐದು ಗಡಿ ಜಿಲ್ಲೆಗಳಿಂದ ಸುಮಾರು 10,000 ನಿವಾಸಿಗಳು ಪರಿಹಾರ ಶಿಬಿರಗಳಿಗೆ ಸ್ಥಳಾಂತರಿಸಲಾಗಿದೆ.

ಪಾಕಿಸ್ತಾನ ನಿರಂತರವಾಗಿ ನಡೆಸುತ್ತಿರುವ ದಾಳಿಯನ್ನು ಗಮನಿಸಿ, ರಾಜೌರಿ, ಪೂಂಚ್ ಭಾಗದಿಂದ ಸುಮಾರು 8-10 ಸಾವಿರ ಗಡಿ ನಿವಾಸಿಗಳನ್ನು ಸ್ಥಳಾಂತರಿಸಲಾಗಿದೆ.

ಐದು ಗಡಿ ಜಿಲ್ಲೆಗಳ ಸುಮಾರು ಹತ್ತು ಸಾವಿರ ಸ್ಥಳೀಯ ನಿವಾಸಿಗಳನ್ನು ಜಮ್ಮು, ರಾಜೌರಿ ಮತ್ತು ಸಾಂಬಾ ಜಿಲ್ಲೆಗಳ ಪರಿಹಾರ ಶಿಬಿರಗಳಿಗೆ ಸ್ಥಳಾಂತರಿಸಲಾಗಿದೆ. ಆಶ್ರಯ ಶಿಬಿರಗಳಲ್ಲಿರುವ ಎಲ್ಲರಿಗೂ ಆಹಾರ, ವೈದ್ಯಕೀಯ ಸೌಲಭ್ಯಗಳನ್ನು ಒದಗಿಸಲಾಗಿದ್ದು, ಸ್ಥಳಾಂತರ ಕಾರ್ಯ ಇನ್ನೂ ಪ್ರಗತಿಯಲ್ಲಿದೆ ಎಂದು ಜಮ್ಮು ಮತ್ತು ಕಾಶ್ಮೀರ ಸಚಿವ ಸತೀಶ್ ಶರ್ಮಾ ತಿಳಿಸಿರುವುದಾಗಿ ಶುಕ್ರವಾರ ಪಿಟಿಐ ಸುದ್ದಿಸಂಸ್ಥೆ ವರದಿ ಮಾಡಿದೆ. ಏಪ್ರಿಲ್ 22, 2025ರಂದು ಪಹಲ್ಗಾಮ್ ನಲ್ಲಿ ಭೀಕರ ಭಯೋತ್ಪಾದಕ ದಾಳಿಗೆ ತಕ್ಕ ಉತ್ತರ ನೀಡಿದ ಭಾರತೀಯ ಸೇನೆ ಪಾಕಿಸ್ತಾನ ಮತ್ತು ಪಿಒಕೆಯಲ್ಲಿ 'ಆಪರೇಷನ್ ಸಿಂಧೂರ್' ಅಡಿಯಲ್ಲಿ ಕ್ಷಿಪಣಿ ದಾಳಿಗಳನ್ನು ನಡೆಸಿ ಭಯೋತ್ಪಾದಕ ನೆಲೆಗಳನ್ನು ನಾಶಪಡಿಸಿತು. ಆ ಬಳಿಕ ಪಾಕಿಸ್ತಾನ ಎಲ್‌ಒಸಿ ಮತ್ತು ಅಂತರರಾಷ್ಟ್ರೀಯ ಗಡಿ ಭಾಗಗಳಲ್ಲಿ ಭಾರೀ ಫಿರಂಗಿ ದಾಳಿಯನು ನಡೆಸಿದೆ. ಇದರ ಪರಿಣಾಮವಾಗಿ ಪೂಂಚ್, ಮಂಕೋಟೆ, ಮೆಂಧರ್, ನೌಶೇರಾ, ಅಖ್ನೂರ್, ಆರ್‌ಎಸ್ ಪುರ, ಅರ್ನಿಯಾ, ಸಾಂಬಾ ಮತ್ತು ಕಥುವಾ ಮತ್ತು ಪಾಕಿಸ್ತಾನದ ಗಡಿಯಲ್ಲಿರುವ ಹಲವಾರು ಪ್ರದೇಶಗಳಲ್ಲಿ ಜೀವ ಮತ್ತು ಆಸ್ತಿಪಾಸ್ತಿಗಳಿಗೂ ವ್ಯಾಪಕ ಹಾನಿಯುಂಟಾಗಿದೆ.



# ಬಿಡುಗಡೆ ಮಾಡುವಂತೆ ಕೋರ್ಟ್ ಮೊರೆ ಹೋದ ಇಮ್ರಾನ್ ಖಾನ್

**ಇಸ್ಲಾಮಾಬಾದ್:** ಭಾರತ ಮತ್ತು ಪಾಕ್ ನಡುವಿನ ಉದ್ವಿಗ್ನ ಪರಿಸ್ಥಿತಿ ಹಿನ್ನೆಲೆಯಲ್ಲಿ ತಾನಿರುವ ಜೈಲಿನ ಮೇಲೆ ಕೂಡ ಡ್ರೋನ್ ದಾಳಿಯಾಗುವ ಸಾಧ್ಯತೆಗಳಿವೆ. ಹೀಗಾಗಿ ತನ್ನನ್ನು ಜೈಲಿನಿಂದ ಬಿಡುಗಡೆ ಮಾಡುವಂತೆ ಪಾಕಿಸ್ತಾನ ಮಾಜಿ ಪ್ರಧಾನಿ ಇಮ್ರಾನ್ ಖಾನ್ ಪಾಕಿಸ್ತಾನ ಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದಾರೆ. ಇಮ್ರಾನ್ ಖಾನ್ ಅವರ ಪಾಕಿಸ್ತಾನ್ ತೆಹ್ರೀಕ್-ಇ-ಇನ್ಸಾಫ್ ಪಕ್ಷದ ವಾಟ್ ಆಯಪ್ ಸಂದೇಶದಲ್ಲಿ, ಇಮ್ರಾನ್ ಖಾನ್ ಬಿಡುಗಡೆಗಾಗಿ ಖೈಬರ್ ಪಖ್ತುಂಖ್ವಾ ಮುಖ್ಯಮಂತ್ರಿ ಅಲಿ ಅಮೀನ್ ಗಂಡಾಪುರ್ ಇಸ್ಲಾಮಾಬಾದ್ ಹೈಕೋರ್ಟ್ ಮೊರೆ ಹೋಗಿದ್ದಾರೆ ಎಂದು ತಿಳಿಸಲಾಗಿದೆ. ಇಮ್ರಾನ್ ಖಾನ್ ರಾವಲ್ಪಿಂಡಿಯ ಅಡಿಯಾಲಾ ಜೈಲಿನಲ್ಲಿ ಬಂಧಿತರಾಗಿದ್ದಾರೆ. ಭಾರತದ ಜೊತೆಗೆ ಸದ್ಯದ ಯುದ್ಧ ಪರಿಸ್ಥಿತಿ ಹಿನ್ನೆಲೆಯಲ್ಲಿ ಈ ಮನವಿ ಮಾಡಲಾಗಿದ್ದು, ದೇಶದ ಸಾಮರಸ್ಯ ಮತ್ತು ಏಕತೆಗಾಗಿ ಹಾಗೂ ಅಡಿಯಾಲಾ ಜೈಲಿನ ಮೇಲೆ ಡ್ರೋನ್ ದಾಳಿಯಾಗುವ ಸಾಧ್ಯತೆ ಇದೆ. ತಕ್ಷಣಕ್ಕೆ ಇಮ್ರಾನ್ ಖಾನ್ ಅವರನ್ನು ಪೆರೋಲ್ ಮೇಲೆ ಬಿಡುಗಡೆ ಮಾಡುವಂತೆ ಕೋರಲಾಗಿದೆ. ಆದರೆ, ಕೋರ್ಟ್ ಈ ಅರ್ಜಿ ವಿಚಾರಣೆಗೆ ಇನ್ನು ದಿನವನ್ನು ನಿಗದಿ ಮಾಡಿಲ್ಲ. ಏ. 22ರಂದು ಪಹಲ್ಗಾಮ್ ಉಗ್ರರ ದಾಳಿಗೆ ಪ್ರತಿಯಾಗಿ, ಭಾರತ ಆಪರೇಷನ್ ಸಿಂಧೂರ ಕಾರ್ಯಾಚರಣೆ ನಡೆಸುವ ಮೂಲಕ ಪಾಕಿಸ್ತಾನ ಮತ್ತು ಪಾಕ್ ಆಕ್ರಮಿತ ಪ್ರದೇಶದಲ್ಲಿ ಉಗ್ರ ಚಟುವಟಿಕೆ ನಡೆಸುತ್ತಿರುವ ಜೈಶ್ ಎ ಮೊಹಮ್ಮದ್ ಭದ್ರಕೋಟೆಯಾದ ಬಹವಾಲ್ಪುರ್ ಹಾಗೂ ಲಷ್ಕರ್ ಎ ತೋಯ್ಬಾದ ಮುರಿಡ್ಕೆ ನೆಲೆಗಳು ಸೇರಿದಂತೆ 9 ಉಗ್ರರ ಅಡುಗುತಾಣಗಳ ಮೇಲೆ ದಾಳಿ ನಡೆಸಿದೆ.



# ಪಾಕಿಸ್ತಾನ ಶೆಲ್ ದಾಳಿಗೆ ರಾಜೌರಿ ಎಡಿಸಿ, ಮಗು ಸೇರಿ ಐವರು ಸಾವು



**ಜಮ್ಮು-ಕಾಶ್ಮೀರ:** ಶನಿವಾರ ಮುಂಜಾನೆ ರಾಜೌರಿ, ಪೂಂಚ್ ಮತ್ತು ಜಮ್ಮು ಜಿಲ್ಲೆಗಳಲ್ಲಿ ಪಾಕಿಸ್ತಾನ ನಡೆಸಿದ ಭಾರೀ ಶೆಲ್ ದಾಳಿಯಲ್ಲಿ ಹಿರಿಯ ಸರ್ಕಾರಿ ಅಧಿಕಾರಿ ಸೇರಿದಂತೆ ಐವರು ಸಾವನ್ನಪ್ಪಿದ್ದು, ಹಲವರು ಗಾಯಗೊಂಡಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಪಾಕಿಸ್ತಾನವು ನಿಯಂತ್ರಣ ರೇಖೆಯಾದ್ಯಂತ (ಎಲ್‌ಒಸಿ) ಕಳೆದ ರಾತ್ರಿಯಿಡೀ ಶೆಲ್ ದಾಳಿ ಮುಂದುವರೆಸಿದೆ. ರಾಜೌರಿ ಜಿಲ್ಲೆಯಲ್ಲಿ ಪಾಕಿಸ್ತಾನಿ ಶೆಲ್ ದಾಳಿಯಲ್ಲಿ ಹಿರಿಯ ಸರ್ಕಾರಿ ಅಧಿಕಾರಿಯೊಬ್ಬರು ಸಾವನ್ನಪ್ಪಿದ್ದಾರೆ ಮತ್ತು ಅವರ ಇಬ್ಬರು ಸಿಬ್ಬಂದಿ ತೀವ್ರವಾಗಿ ಗಾಯಗೊಂಡಿದ್ದಾರೆ. ಇನ್ನೊಂದೆಡೆ, ಪ್ರತ್ಯೇಕ ಶೆಲ್ ದಾಳಿಯಲ್ಲಿ ಮಗು ಸೇರಿದಂತೆ ಇಬ್ಬರು ನಾಗರಿಕರು ಮೃತಪಟ್ಟಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ರಾಜೌರಿ ಪಟ್ಟಣದಲ್ಲಿರುವ ನಿವಾಸಕ್ಕೆ ಫಿರಂಗಿ ಶೆಲ್ ಬಡಿದು ರಾಜೌರಿಯ ಹೆಚ್ಚುವರಿ ಉಪ ಆಯುಕ್ತ ರಾಜ್ ಕುಮಾರ್ ಥಾಪಾ ಮತ್ತು ಅವರ ಇಬ್ಬರು ಸಿಬ್ಬಂದಿ ಗಂಭೀರವಾಗಿ ಗಾಯಗೊಂಡಿದ್ದಾರೆ. ಚಿಕಿತ್ಸೆಗಾಗಿ ವೈದ್ಯಕೀಯ ಕಾಲೇಜಿಗೆ ಕರೆದೊಯ್ಯುವ ಮುನ್ನವೇ ಥಾಪಾ ಅಸುನೀಗಿದ್ದಾರೆ. ಅಲ್ಲದೆ, ಅವರ ಸಿಬ್ಬಂದಿಯ ಆರೋಗ್ಯ ಸ್ಥಿತಿಯೂ ಗಂಭೀರವಾಗಿದೆ. ಘಟನೆ ಬಗ್ಗೆ ಮುಖ್ಯಮಂತ್ರಿ ಒಮರ್ ಅಬ್ದುಲ್ಲಾ ತೀವ್ರ ದುಃಖ ವ್ಯಕ್ತಪಡಿಸಿದ್ದಾರೆ. ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಸಿಎಂ, ಅಧಿಕಾರಿಯ ಸಾವಿಗೆ ಮುಖ್ಯಮಂತ್ರಿ ಒಮರ್ ಅಬ್ದುಲ್ಲಾ ಅವರು ಸಂತಾಪ ಸೂಚಿಸಿದ್ದಾರೆ. ರಾಜೌರಿಯಿಂದ ಆಘಾತಕಾರಿ ಸುದ್ದಿ. ನಾವು ಜಮ್ಮು ಮತ್ತು ಕಾಶ್ಮೀರದ ಆಡಳಿತ ಸೇವೆಗಳ ಅಧಿಕಾರಿಯೊಬ್ಬರನ್ನು ಕಳೆದುಕೊಂಡಿದ್ದೇವೆ. ನಿನ್ನೆಯಷ್ಟೇ ಉಪ ಮುಖ್ಯಮಂತ್ರಿಯವರೊಂದಿಗೆ ಇದ್ದ ಅವರು ಜಿಲ್ಲೆಯಾದ್ಯಂತ ಪರಿಶೀಲನೆ ಕೈಗೊಂಡಿದ್ದರು. ನಾನು ಅಧ್ಯಕ್ಷತೆ ವಹಿಸಿದ್ದ ಆನ್‌ಲೈನ್ ಸಭೆಯಲ್ಲಿ ಭಾಗವಹಿಸಿದ್ದರು ಅವರ ಆತ್ಮಕ್ಕೆ ಶಾಂತಿ ಸಿಗಲಿ ಎಂದು ತಿಳಿಸಿದ್ದಾರೆ. ರಾಜೌರಿ ಪಟ್ಟಣದ ಕೈಗಾರಿಕಾ ಪ್ರದೇಶದ ಬಳಿ ಪಾಕಿಸ್ತಾನಿ ಶೆಲ್ ದಾಳಿಯಲ್ಲಿ ಎರಡು ವರ್ಷದ ಮಗು ಆಯಿಷಾ ನೂರ್ ಮತ್ತು ಮೊಹಮ್ಮದ್ ಶೋಹಿಬ್ (35) ಎಂಬ ಇಬ್ಬರು ಸಾವನ್ನಪ್ಪಿದ್ದಾರೆ ಮತ್ತು ಇತರ ಮೂವರು ಗಾಯಗೊಂಡಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

# ವಿಮಾನ ನಿಲ್ದಾಣಗಳು ಮೇ 15ರವರೆಗೆ ಬಂದ್

**ನವದೆಹಲಿ:** ಭಾರತ ಮತ್ತು ಪಾಕಿಸ್ತಾನದ ಮಧ್ಯದ ಸಂಘರ್ಷ ಮುಂದುವರಿದ ಹಿನ್ನೆಲೆ ಶ್ರೀನಗರ, ಅಮೃತಸರ ಸೇರಿದಂತೆ ದೇಶದ 32 ವಿಮಾನ ನಿಲ್ದಾಣಗಳನ್ನು ಮೇ 15ರವರೆಗೆ ಬಂದ್ ಮಾಡಲಾಗಿದೆ ಎಂದು ನಾಗರಿಕ ವಿಮಾನಯಾನ ನಿರ್ದೇಶನಾಲಯ ತಿಳಿಸಿದೆ.



ಭಾರತೀಯ ವಿಮಾನ ನಿಲ್ದಾಣ ಪ್ರಾಧಿಕಾರ (ಂಂಖ) ಮತ್ತು ಸಂಬಂಧಿತ ವಾಯುಯಾನ ಅಧಿಕಾರಿಗಳು ವಾಯುಪಡೆಯ ಸಿಬ್ಬಂದಿಗೆ (ಓಔಖಿಂಟ) ಸರಣಿ ನೋಟಿಸ್‌ಗಳನ್ನು ನೀಡಿದ್ದು, ಉತ್ತರ ಮತ್ತು ಪಶ್ಚಿಮ ಭಾರತದ 32 ವಿಮಾನ ನಿಲ್ದಾಣಗಳನ್ನು ತಾತ್ಕಾಲಿಕವಾಗಿ ಮುಚ್ಚುವುದಾಗಿ ಘೋಷಿಸಿದ್ದಾರೆ.

ಮೇ 9, 2025 ರಿಂದ ಮೇ 15 ರವರೆಗೆ ದೇಶದ 32 ವಿಮಾನ ನಿಲ್ದಾಣಗಳು ಬಂದ್ ಇರಲಿವೆ ಎಂದು ಆಉಅಂ ಪ್ರಕಟಣೆಯಲ್ಲಿ ತಿಳಿಸಿದೆ.

ಅಧಂಪುರ್, ಅಂಬಾಲ, ಅಮೃತಸರ, ಅವಂತಿಪುರ, ಬಟಿಂಡಾ, ಭುಜ್, ಬಿಕಾನೇರ್, ಚಂಡೀಗಢ, ಹಲ್ವಾರಾ, ಹಿಂದನ್,ಜಮ್ಮು, ಜೈಸಲ್ಮೇರ್, ಜಾಮ್ ನಗರ, ಜೋಧ್‌ಪುರ, ಕಾಂಡ್ಲಾ, ಕಾಂಗ್ರಾ (ಗಗ್ಗಲ್), ಕೇಶೋಡ್, ಕಿಶನ್‌ಗಢ, ಕುಲ್ಲು ಮನಾಲಿ (ಭುಂತರ್) ಲೇಹ್,ಲುಧಿಯಾನ, ಮುಂದ್ರಾ, ನಲಿಯಾ, ಪಠಾಣ್ ಕೋಟ್, ಪಟಿಯಾಲ, ಪೋರ್ಬಂದರ್, ರಾಜ್ ಕೋಟ್ (ಹಿರಾಸರ್), ಸರ್ಸಾವಾ, ಶಿಮ್ಲಾ, ಶ್ರೀನಗರ, ಥೋಯಿಸೆ ಮತ್ತು ಉತ್ತರಲೈ ವಿಮಾನ ನಿಲ್ದಾಣಗಳು ತಾತ್ಕಾಲಿಕವಾಗಿ ಕಾರ್ಯಾಚರಣೆ ಸ್ಥಗಿತಗೊಳಿಸಲಿವೆ ಎಂದು ನಾಗರಿಕ ವಿಮಾನಯಾನ ನಿರ್ದೇಶನಾಲಯ ತಿಳಿಸಿದೆ.

ಇದಕ್ಕೂ ಮೊದಲು, ಕನಿಷ್ಠ 24 ವಿಮಾನ ನಿಲ್ದಾಣಗಳನ್ನು ಮೇ 10ರವರೆಗೆ ಬಂದ್ ಮಾಡಲಾಗಿತ್ತು. ಹಾಗೆಯೇ ಕಾರ್ಯಾಚರಣೆ ಕಾರಣಗಳಿಂದ ದೆಹಲಿ ಮತ್ತು ಮುಂಬೈ ವಿಮಾನ ಮಾಹಿತಿ ಪ್ರದೇಶಗಳ 25 ವಿಭಾಗಗಳ ವಾಯು ಸಂಚಾರ ಸೇವೆ ಮಾರ್ಗಗಳ ತಾತ್ಕಾಲಿಕ ಸ್ಥಗಿತವನ್ನು ಮೇ 14ರವರೆಗೆ AAI ವಿಸ್ತರಿಸಿದೆ.

# ನೂತನ ಪೋಪ್ ಲಿಯೊ XIV ಆಯ್ಕೆ ಶುಭ ಕೋರಿದ ಪ್ರಧಾನಿ

**ನವದೆಹಲಿ/ವ್ಯಾಟಿಕನ್ ಸಿಟಿ:** ರೋಮನ್ ಕ್ಯಾಥೊಲಿಕ್ ಚರ್ಚ್‌ನ ನೂತನ ಪೋಪ್ ಆಗಿ ಆಯ್ಕೆಯಾದ 'ಲಿಯೊ XIV' ಅವರಿಗೆ ಭಾರತದ ನಾಗರಿಕರ ಪರವಾಗಿ ಪ್ರಧಾನಿ ನರೇಂದ್ರ ಮೋದಿ ಶುಕ್ರವಾರ ಶುಭಾಶಯ ಕೋರಿದ್ದಾರೆ.



ಪೋಪ್ ಲಿಯೋ 14 ಅವರಿಗೆ ಭಾರತದ ಜನತೆಯ ಪರವಾಗಿ ಹೃತ್ಪೂರ್ವಕ ಅಭಿನಂದನೆಗಳು ಮತ್ತು ಶುಭಾಶಯಗಳನ್ನು ತಿಳಿಸುತ್ತೇನೆ. ಶಾಂತಿ, ಸಾಮರಸ್ಯ, ಏಕತೆ ಮತ್ತು ಸೇವೆಯ ಆದರ್ಶಗಳನ್ನು ಮುನ್ನಡೆಸುವಲ್ಲಿ ಕ್ಯಾಥೊಲಿಕ್ ಚರ್ಚ್‌ನಲ್ಲಿನ ಅವರ ನಾಯಕತ್ವವು ಪ್ರಾಮುಖ್ಯತೆ ಹೊಂದಿದೆ ಎಂದು ಪ್ರಧಾನಿ ಎಕ್ಸ್ ಪೋಸ್ಟ್ ಮಾಡಿದ್ದಾರೆ.

ಅಮೆರಿಕದ 69 ವರ್ಷದ ಕಾರ್ಡಿನಲ್ ರಾಬರ್ಟ್ ಫ್ರಾನ್ಸಿಸ್ ಪ್ರೆವೋಸ್ಟ್ ಅವರನ್ನು ರೋಮನ್ ಕ್ಯಾಥೋಲಿಕ್ ಚರ್ಚ್‌ನ 267 ನೇ ಪೋಪ್ ಆಗಿ ಆಯ್ಕೆ ಮಾಡಲಾಗಿದೆ. ಅವರು ಇನ್ನು ಮುಂದೆ 'ಲಿಯೊ 14' ಎಂಬ ಹೆಸರಿನಿಂದ ಕರೆಸಿಕೊಳ್ಳಲಿದ್ದಾರೆ. ಕ್ಯಾಥೋಲಿಕ್ ಚರ್ಚ್‌ನ ಎರಡು ಸಾವಿರ ವರ್ಷಗಳ ಇತಿಹಾಸದಲ್ಲಿ ಅಮೆರಿಕದ ಬಿಷಪ್‌ವೊಬ್ಬರು ಈ ಉನ್ನತ ಹುದ್ದೆಯನ್ನು ಅಲಂಕರಿಸಿದ್ದು ಇದೇ ಮೊದಲು.

1955ರ ಸೆಪ್ಟೆಂಬರ್ 14ರಂದು ಚಿಕಾಗೊದಲ್ಲಿ ಜನಿಸಿದ ರಾಬರ್ಟ್ ಫ್ರಾನ್ಸಿಸ್ ಲೂಯಿಸ್ ಮಾರಿಯಸ್ ಪ್ರಿವೋಸ್ಟ್ ಮತ್ತು ಸ್ಪ್ಯಾನಿಷ್ ಮೂಲದ ಮಿಲ್ಡ್ರೆಡ್ ಮಾರ್ಟಿನೆಜ್ ದಂಪತಿಗೆ ಜನಿಸಿದರು. ಅವರು ಆಗಸ್ಟಿನಿಯನ್ ಫಾದರ್ಸ್‌ನ ಮೈನರ್ ಸೆಮಿನರಿಯಲ್ಲಿ ಮತ್ತು ನಂತರ ಪೆನ್ಸಿಲ್ವೇನಿಯಾದ ವಿಲ್ಲನೋವಾ ವಿಶ್ವವಿದ್ಯಾಲಯದಲ್ಲಿ ವಿದ್ಯಾಭ್ಯಾಸ ಮಾಡಿದ ಅವರು, 1977 ರಲ್ಲಿ ಗಣಿತದಲ್ಲಿ ಪದವಿ ಪಡೆದರು ಮತ್ತು ತತ್ವಶಾಸ್ತ್ರವನ್ನೂ ಸಹ ಇವರು ಅಭ್ಯಾಸ ಮಾಡಿದ್ದಾರೆ.

# ಭಾರತದ ವಿರೋಧದ ಮಧ್ಯೆಯೂ ಪಾಕ್‌ಗೆ ಸಾಲ ನೀಡಲು ಐಎಂಎಫ್ ಸಮ್ಮತಿ

**ನವದೆಹಲಿ:** ಗಡಿಯಾಚೆಗಿನ ಉದ್ವಿಗ್ನತೆ ಹೆಚ್ಚುತ್ತಿರುವ ಮಧ್ಯೆ, ಪಾಕಿಸ್ತಾನಕ್ಕೆ ಅಂತರಾಷ್ಟ್ರೀಯ ಹಣಕಾಸು ನಿಧಿ (ಐಎಂಎಫ್) ಹಣಕಾಸು ನೆರವು ನೀಡುವ ಬಗ್ಗೆ ಭಾರತ ಕಳವಳ ವ್ಯಕ್ತಪಡಿಸಿತ್ತು. ಆದರೂ ಕೂಡ ಪಾಕಿಸ್ತಾನಕ್ಕೆ ಐಎಂಎಫ್ 1 ಬಿಲಿಯನ್ ಯುಎಸ್‌ಡಿ ಡಾಲರ್ ಸಾಲ ನೀಡಲು ಅನುಮೋದನೆ ನೀಡಿದೆ. ವಿಸ್ತೃತ ನಿಧಿ ಸೌಲಭ್ಯದ ಅಡಿಯಲ್ಲಿ ಪಾಕಿಸ್ತಾನಕ್ಕೆ ಸಾಲ ನೀಡಲು ಶುಕ್ರವಾರ ಐಎಂಎಫ್ ಸಮ್ಮತಿಸಿದೆ. ತನ್ನ ಕಾರ್ಯನಿರ್ವಾಹಕ ಮಂಡಳಿಯ ವಿಸ್ತೃತ ನಿಧಿ ಸೌಲಭ್ಯ (ಇಈಈ) ವ್ಯವಸ್ಥೆಯ ಅಡಿಯಲ್ಲಿ ಪಾಕಿಸ್ತಾನದ ಆರ್ಥಿಕ ಸುಧಾರಣಾ ಕಾರ್ಯಕ್ರಮ ನವೀಕರಿಸಲು ನಿರ್ಧರಿಸಲಾಗಿದೆ ಎಂದು ವಾಷಿಂಗ್ಟನ್ ಮೂಲದ ಜಾಗತಿಕ ಸಾಲದಾತ ಐಎಂಎಫ್ ತಿಳಿಸಿದೆ. ಈ ನಿರ್ಧಾರವು ಸುಮಾರು 1 ಬಿಲಿಯನ್ USD (SDR 760 ಮಿಲಿಯನ್) ನಷ್ಟು ಸಾಲ ತಕ್ಷಣ ವಿತರಣೆಗೆ ಅವಕಾಶ ನೀಡುತ್ತದೆ. ಜೊತೆಗೆ ಇದು ಒಟ್ಟು ಸುಮಾರು 2.1 ಬಿಲಿಯನ್ USD (SDR 1.52 ಬಿಲಿಯನ್) ಸಾಲ ನೀಡಲು ಅವಕಾಶ ಇದೆ ಎಂದು ಸಂಸ್ಥೆ ತಿಳಿಸಿದೆ. ಐಎಂಎಫ್ ಸಾಲದ ರೂಪದಲ್ಲಿ ನೀಡುವ ಹಣಕಾಸು ನೆರವನ್ನು ಪಾಕಿಸ್ತಾನ ಗಡಿಯಾಚೆಗಿನ ಭಯೋತ್ಪಾದನೆಗೆ ಬಳಸಿಕೊಂಡು ದುರುಪಯೋಗ ಮಾಡಿಕೊಳ್ಳುತ್ತಿದೆ ಎಂದು ಭಾರತ ಕಳವಳ ವ್ಯಕ್ತಪಡಿಸಿತ್ತು. ಜೊತೆಗೆ ಪಾಕಿಸ್ತಾನಕ್ಕೆ 2.3 ಶತಕೋಟಿ ಯುಎಸ್ ಡಾಲರ್ ಹೊಸ ಸಾಲ ವಿಸ್ತರಿಸುವ ಐಎಂಎಫ್ ಪ್ರಸ್ತಾಪವನ್ನು ಭಾರತ ವಿರೋಧಿಸಿತ್ತು. ಪಾಕಿಸ್ತಾನಕ್ಕೆ ಸಾಲದ ರೂಪದಲ್ಲಿ ಹಣಕಾಸು ನೆರವು ಕಾರ್ಯಕ್ರಮವನ್ನು ಪರಿಶೀಲಿಸಲು ಶುಕ್ರವಾರ ಸಭೆ ಸೇರಿದ ಐಎಂಎಫ್ ಮಂಡಳಿಯಲ್ಲಿ ಭಾರತ ತನ್ನ ಪ್ರತಿಭಟನೆಯನ್ನು ದಾಖಲಿಸಿತ್ತು. ಆದರೂ ಕೂಡ ಐಎಂಎಫ್, ಪಾಕ್‌ಗೆ ಸಾಲ ನೀಡುವ ನಿರ್ಧಾರ ಕೈಗೊಂಡಿದೆ.

# ಇಸ್ಲಾಮಾಬಾದ್‌ನಲ್ಲಿ 48 ಗಂಟೆಗಳವರೆಗೆ ಪೆಟ್ರೋಲ್ ಪಂಪ್‌ಗಳು ಬಂದ್

**ಇಸ್ಲಾಮಾಬಾದ್:** ಭಾರತದ ದಾಳಿಯಿಂದ ದಿವಾಳಿಯತ್ತ ಸಾಗುತ್ತಿರುವ ಪಾಕಿಸ್ತಾನದಲ್ಲೀಗ ಇಂಧನ ಕೊರತೆ ಎದುರಾಗಿದೆ. ರಾಜಧಾನಿ ಇಸ್ಲಾಮಾಬಾದ್ ಆಡಳಿತ ಮುಂದಿನ 48 ಗಂಟೆಗಳ ಕಾಲ ಎಲ್ಲಾ ಪೆಟ್ರೋಲ್ ಪಂಪ್‌ಗಳನ್ನು ಸಂಪೂರ್ಣವಾಗಿ ಬಂದ್ ಮಾಡುವಂತೆ ಆದೇಶ ಹೊರಡಿಸಿದೆ. ಇಸ್ಲಾಮಾಬಾದ್ ಆಡಳಿತ ಹೊರಡಿಸಿದ ಅಧಿಕೃತ ಸೂಚನೆಯಲ್ಲಿ ನಿಖರ ಕಾರಣ ಉಲ್ಲೇಖಿಸದೇ, ಎಲ್ಲಾ ಪೆಟ್ರೋಲ್ ಪಂಪ್‌ಗಳನ್ನು ಕೂಡಲೇ ಮುಚ್ಚಬೇಕೆಂದು ಕಟ್ಟಾಜ್ಞೆ ಮಾಡಿದೆ. ಈ ಆದೇಶ ಶನಿವಾರ ಮುಂಜಾನೆ ಹೊರಡಿಸಿದ್ದು ತಡವಾಗಿ ಬೆಳಕಿಗೆ ಬಂದಿದೆ ಎಂದು ಪಾಕ್ ಮಾಧ್ಯಮಗಳು ವರದಿ ಮಾಡಿವೆ.ಇದರಿಂದ 48 ಗಂಟೆ ವರೆಗೆ ಇಸ್ಲಾಮಾಬಾದ್‌ನಲ್ಲಿ ಖಾಸಗಿ ವಾಹನಗಳು, ಸಾರ್ವಜನಿಕ ಸಾರಿಗೆ ಹಾಗೂ ವಾಣಿಜ್ಯ ವಾಹನಗಳಿಗೆ ಇಂಧನ ಲಭ್ಯವಾಗದೇ ಎಲ್ಲಾ ಆರ್ಥಿಕ ಚಟುವಟಿಕೆಗಳು ಸ್ಥಗಿತಗೊಂಡಿದೆ. ಜೊತೆಗೆ ಈ ಬೆಳವಣಿಗೆ ಪಾಕ್ ಸರ್ಕಾರಕ್ಕೆ ಭಾರೀ ನಷ್ಟ ತಂದೊಡ್ಡುತ್ತಿದೆ ಎಂದು ವರದಿಗಳು ಉಲ್ಲೇಖಿಸಿವೆ. ಭಾರತದ ಆಪರೇಷನ್ ಸಿಂಧೂರ ಎಫೆಕ್ಟ್ ಪಾಕಿಸ್ತಾನದ ಆರ್ಥಿಕತೆಯ ಮೇಲೆ ತೀವ್ರ ಪರಿಣಾಮ ಬೀರಿದೆ. ಭಾರತ ನಡೆಸಿದ ವಾಯುದಾಳಿಗೆ ಪತರುಗುಟ್ಟಿಹೋಗಿರುವ ಪಾಕ್ ತಾನು ನಂಬಿದ್ದ ಶಕ್ತಿಶಾಲಿ ಅಸ್ತ್ರಗಳಿಂದಲೇ ಶತಕೋಟಿ ನಷ್ಟ ಅನುಭವಿಸಿದೆ. ಇದರಿಂದ ಪಾಕಿಸ್ತಾನದ ಆರ್ಥಿಕ ಸ್ಥಿತಿ ಈಗಾಗಲೇ ಅಧೋಗತಿ ತಲುಪಿದ್ದು, ದಿವಾಳಿಯ ಆಗುವ ಹಂತಕ್ಕೆ ತಲುಪಿದೆ.

# ಪಾಕಿಸ್ತಾನಿಂದ ನಾಗರಿಕ ಪ್ರದೇಶದ ಮೇಲೆ ಶೆಲ್ ದಾಳಿ; ಆಡಳಿತಾಧಿಕಾರಿ ಬಲಿ

**ನವದೆಹಲಿ:** ಭಾರತ ಹಾಗೂ ಪಾಕಿಸ್ತಾನದ ನಡುವೆ ನಡೆಯುತ್ತಿರುವ ಘರ್ಷಣೆ ಜೋರಾಗಿದೆ. ಶುಕ್ರವಾರ ರಾತ್ರಿ ಪಾಕಿಸ್ತಾನವು ಜಮ್ಮು ಮತ್ತು ಕಾಶ್ಮೀರದ ನಾಗರಿಕ ಪ್ರದೇಶಗಳನ್ನು ಗುರಿಯಾಗಿಸಿಕೊಂಡು ನಿಯಂತ್ರಣ ರೇಖೆಯ ಉದ್ದಕ್ಕೂ ಶೆಲ್ ದಾಳಿಯನ್ನು ನಡೆಸಿದೆ. ಪರಿಣಾಮ ರಜೌರಿಯಲ್ಲಿ ಆಡಳಿತ ಸೇವಾ ಅಧಿಕಾರಿ ರಾಜ್ ಕುಮಾರ್ ತಪ್ಪಾ ಸೇರಿದಂತೆ ಸ್ಥಳೀಯರು ಮೃತಪಟ್ಟಿದ್ದಾರೆ. ಇಂದು ಬೆಳಿಗ್ಗೆ ಅವರ ನಿವಾಸದ ಮೇಲೆ ಶೆಲ್ ಬಿದ್ದಿದ್ದು, ನಂತರ ಅವರನ್ನು ಆಸ್ಪತ್ರೆಗೆ ಸಾಗಿಸಲಾಯಿತು, ಅಲ್ಲಿ ಅವರು ಸಾವನ್ನಪ್ಪಿದ್ದಾರೆ ಎಂದು ಘೋಷಿಸಲಾಯಿತು. ಕಾಶ್ಮೀರದ ಮುಖ್ಯಮಂತ್ರಿ ಒಮರ್ ಅಬ್ದುಲ್ಲಾ ಅಧಿಕಾರಿಯ ಸಾವಿಗೆ ದುಖಃ ವ್ಯಕ್ತಪಡಿಸಿದ್ದಾರೆ.



ಹತ್ಯೆಗೀಡಾದ ಅಧಿಕಾರಿ ರಾಜ್ ಕುಮಾರ್ ತಪ್ಪಾ ನಿನ್ನೆ ತಮ್ಮೊಂದಿಗೆ ಆನ್‌ಲೈನ್ ಸಭೆಯಲ್ಲಿ ಭಾಗವಹಿಸಿದ್ದರು ಮತ್ತು ಜಿಲ್ಲೆಯಲ್ಲಿ ಉಪ ಮುಖ್ಯಮಂತ್ರಿಯೊಂದಿಗೆ ಇದ್ದರು ಎಂದು ಅಬ್ದುಲ್ಲಾ ಹೇಳಿದರು. ನಾವು ಜಮ್ಮು ಮತ್ತು ಕಾಶ್ಮೀರ ಆಡಳಿತ ಸೇವೆಗಳ ಸಮರ್ಪಿತ ಅಧಿಕಾರಿಯನ್ನು ಕಳೆದುಕೊಂಡಿದ್ದೇವೆ. ನಿನ್ನೆಯಷ್ಟೇ ಅವರು ಜಿಲ್ಲೆಯಾದ್ಯಂತ ಉಪ ಮುಖ್ಯಮಂತ್ರಿಯೊಂದಿಗೆ ಇದ್ದರು ಮತ್ತು ನಾನು ಅಧ್ಯಕ್ಷತೆ ವಹಿಸಿದ್ದ ಆನ್‌ಲೈನ್ ಸಭೆಯಲ್ಲಿ ಭಾಗವಹಿಸಿದ್ದರು. ಇಂದು ರಾಜೌರಿ ಪಟ್ಟಣವನ್ನು ಗುರಿಯಾಗಿಸಿಕೊಂಡು ಪಾಕ್ ಶೆಲ್ ದಾಳಿ ನಡೆಸಿದಾಗ ಅಧಿಕಾರಿಯ ನಿವಾಸಕ್ಕೆ ಗುಂಡು ಹಾರಿಸಲಾಯಿತು. ನಮ್ಮ ಹೆಚ್ಚುವರಿ ಜಿಲ್ಲಾ ಅಭಿವೃದ್ಧಿ ಆಯುಕ್ತ ಶ್ರೀ ರಾಜ್ ಕುಮಾರ್ ಥಾಪ್ಪಾ ಮೃತಪಟ್ಟಿದ್ದಾರೆ. ಅವರ ಆತ್ಮಕ್ಕೆ ಶಾಂತಿ ಸಿಗಲಿ ಎಂದು ಮುಖ್ಯಮಂತ್ರಿ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ.

ಮೂಲಗಳ ಪ್ರಕಾರ, ರಾಜೌರಿಯಲ್ಲಿ ಪಾಕಿಸ್ತಾನ ನಡೆಸಿದ ಶೆಲ್ ದಾಳಿಯಲ್ಲಿ ಮೂವರು ನಾಗರಿಕರು ಸಾವನ್ನಪ್ಪಿದ್ದಾರೆ, ಇದರಲ್ಲಿ ಮೆಂಧರ್ ಮತ್ತು ಆರ್‌ಎಸ್ ಪುರದ ಒಬ್ಬರು ಸೇರಿದ್ದಾರೆ. ದಾಳಿಯಲ್ಲಿ ಹಲವರು ಗಾಯಗೊಂಡಿದ್ದಾರೆ.

ಪಾಕಿಸ್ತಾನವು ರಾಜೌರಿಯಲ್ಲಿ ವಸತಿ ಪ್ರದೇಶಗಳನ್ನು ಉದ್ದೇಶಪೂರ್ವಕವಾಗಿ ಗುರಿಯಾಗಿಸಿಕೊಂಡು ಅಂಗಡಿಗಳು ಮತ್ತು ಮನೆಗಳ ಜೊತೆಗೆ ಧಾರ್ಮಿಕ ಸ್ಥಳಗಳಿಗೆ ಹಾನಿ ಮಾಡಲು ಪ್ರಯತ್ನಿಸಿದೆ ಎಂದು ಸ್ಥಳೀಯ ಜನರು ಹೇಳಿದ್ದಾರೆ.

# ಸಿಇಟಿ ದಾಖಲೆ ಪರಿಶೀಲನೆ ಜಮ್ಮು ವಿದ್ಯಾರ್ಥಿಗಳಿಗೆ ವಿಶೇಷ ಅವಕಾಶ

**ಬೆಂಗಳೂರು:** ಗಡಿ ಭಾಗದಲ್ಲಿನ ಸೇನಾ ಉದ್ವಿಗ್ನತೆಯಿಂದ ಜಮ್ಮು ಮತ್ತು ಕಾಶ್ಮೀರದ ವಿದ್ಯಾರ್ಥಿಗಳಿಗೆ ಯುಜಿಸಿಇಟಿ-25 ಪ್ರವೇಶ ಸಲುವಾಗಿ ನಡೆಸುವ ಮೂಲ ದಾಖಲೆಗಳ ಪರಿಶೀಲನೆಗೆ ಮತ್ತೊಮ್ಮೆ ಅವಕಾಶ ನೀಡಲಾಗುವುದು. ಈ ವಿಷಯದಲ್ಲಿ ಆತಂಕ ಬೇಡ ಎಂದು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಕಾರ್ಯನಿರ್ವಾಹಕ ನಿರ್ದೇಶಕ ಹೆಚ್.ಪ್ರಸನ್ನ ತಿಳಿಸಿದ್ದಾರೆ.

ಪ್ರಸಕ್ತ ಸಾಲಿನ ಸಿಇಟಿ ಸಲುವಾಗಿ ಜಮ್ಮು ಕಾಶ್ಮೀರದ ಒಟ್ಟು 204 ಮಂದಿ ಪರೀಕ್ಷೆ ಬರೆದಿದ್ದು, ಅವರಲ್ಲಿ ಇದುವರೆಗೂ ಕೇವಲ 52 ಮಂದಿ ಮಾತ್ರ ದಾಖಲೆ ಪರಿಶೀಲನೆ ಮಾಡಿಸಿಕೊಂಡಿದ್ದಾರೆ ಎಂದು ಅವರು ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ.

ಗಡಿ ಭಾಗದಲ್ಲಿ ಪರಿಸ್ಥಿತಿಯ ಅರಿವು ಇರುವ ಕಾರಣಕ್ಕೆ ಅವರಿಗೆ ಮತ್ತೊಂದು ಅವಕಾಶ ನೀಡಲಾಗುವುದು. ಒಂದು ವೇಳೆ 10- 15 ದಿನಗಳ ನಂತರವೂ ಪರಿಸ್ಥಿತಿ ಸುಧಾರಿಸದೇ ಇದ್ದರೆ ವಿಡಿಯೋ ಸಂವಾದದ ಮೂಲಕವೇ ದಾಖಲೆಗಳ ಪರಿಶೀಲನೆ ಮಾಡಲಾಗುವುದು. ಒಟ್ಟಿನಲ್ಲಿ ವಿದ್ಯಾರ್ಥಿಗಳಿಗೆ ಅನಾನುಕೂಲ ಆಗದಂತೆ ನೋಡಿಕೊಳ್ಳಲಾಗುವುದು ಎಂದು ಅವರು ಸ್ಪಷ್ಟಪಡಿಸಿದ್ದಾರೆ.

ಈ ಕುರಿತು ಈ ಎಲ್ಲ ಅಭ್ಯರ್ಥಿಗಳಿಗೆ ಪ್ರತ್ಯೇಕ ಸಂದೇಶ ಕಳುಹಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

# ಕುಟುಂಬ ಸದಸ್ಯರ ಅಂತ್ಯಕ್ರಿಯೆಯಲ್ಲಿ ಕಾಣಿಸಿಕೊಂಡ ಭಯೋತ್ಪಾದಕ ಮಸೂದ್ ಅಜರ್

**ನವದೆಹಲಿ:** ಜೈಶ್-ಎ-ಮೊಹಮ್ಮದ್ ಉಗ್ರ ಸಂಘಟನೆಯ ಮುಖ್ಯಸ್ಥ ಮೌಲಾನಾ ಮಸೂದ್ ಅಜರ್ ಅಲ್ವಿ ಗುರುವಾರ ಬಹವಾಲ್ಪುರದ ತನ್ನ ಸೆಮಿನರಿಯಲ್ಲಿ ಭಾರತ ನಡೆಸಿದ ವೈಮಾನಿಕ ದಾಳಿಯಲ್ಲಿ ಮೃತಪಟ್ಟ ಕುಟುಂಬ ಸದಸ್ಯರ ಅಂತ್ಯಕ್ರಿಯೆಯಲ್ಲಿ ಸಂಕ್ಷಿಪ್ತವಾಗಿ ಕಾಣಿಸಿಕೊಂಡಿದ್ದಾನೆ ಎಂದು ಕಾರ್ಯಕ್ರಮದಲ್ಲಿ ಹಾಜರಿದ್ದ ಎರಡು ಮೂಲಗಳು ತಿಳಿಸಿವೆ.

ನಗರದಲ್ಲಿ ಪ್ರಧಾನ ಕಚೇರಿಯನ್ನು ಹೊಂದಿರುವ ಎಕ್ಸ್‌ಐ ಕಾರ್ಪ್ಸ್‌ನ ಕಮಾಂಡಿಂಗ್ ಅಧಿಕಾರಿ ಲೆಫ್ಟಿನೆಂಟ್ ಜನರಲ್ ಸಾಕಿಬ್ ಮೆಹಮೂದ್ ಮಲಿಕ್ ಮತ್ತು ಪಾಕಿಸ್ತಾನ ರೇಂಜರ್ಸ್‌ನ ಗಡಿ ಕಾವಲುಪಡೆಯ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

ಕೆಲವೇ ನಿಮಿಷಗಳಲ್ಲಿ ಸ್ಥಳದಿಂದ ಹೊರಡುವ ಮೊದಲು ಅಜರ್ ಸಂಕ್ಷಿಪ್ತ ಭಾಷಣ ಮಾಡಿದನು ಎಂದು ಎರಡೂ ಮೂಲಗಳು ತಿಳಿಸಿವೆ.

ಬಹವಾಲ್ಪುರದಲ್ಲಿ ಸಮಾಧಿ ಮಾಡಿದವರಲ್ಲಿ ಮಸೂದ್ ಅಜರ್ ಸಹೋದರ ಮತ್ತು ಜೈಶ್-ಎ-ಮೊಹಮ್ಮದ್ ಮಿಲಿಟರಿ ಮುಖ್ಯಸ್ಥ ಅಬ್ದುಲ್ ರವೂಫ್ ಅಜರ್ ಸೇರಿಲ್ಲ ಎಂದು ಪ್ರತ್ಯಕ್ಷದರ್ಶಿಗಳು ತಿಳಿಸಿದ್ದಾರೆ. ಯಾವುದೇ ಅಧಿಕೃತ ದೃಢೀಕರಣವಿಲ್ಲದಿದ್ದರೂ, ರವೂಫ್ ವಾಯು ದಾಳಿಯಲ್ಲಿ ಸಾವನ್ನಪ್ಪಿದ್ದಾನೆ ಎಂದು ಅನೇಕ ಮೂಲಗಳು ತಿಳಿಸಿವೆ. ಇಂಡಿಯನ್ ಏರ್ಲೈನ್ಸ್‌ನ ಐಸಿ-814 ವಿಮಾನ ಅಪಹರಣ ಮತ್ತು 2002ರಲ್ಲಿ ವಾಲ್ ಸ್ಟ್ರೀಟ್ ಜರ್ನಲ್‌ನಲ್ಲಿ ಕೆಲಸ ಮಾಡುತ್ತಿದ್ದ ಅಮೆರಿಕದ ಪತ್ರಕರ್ತ ಡೇನಿಯಲ್ ಪರ್ಲ್ ಅವರ ಭೀಕರ ಹತ್ಯೆಯಲ್ಲಿ ರವೂಫ್ ಭಾಗಿಯಾಗಿದ್ದಾನೆ ಎಂದು ಆರೋಪಿಸಲಾಗಿದೆ. ಮಸೂದ್ ಅಜರ್‌ನನ್ನು ಘೋಷಿತ ಅಪರಾಧಿ ಎಂದು ಘೋಷಿಸುವ ಪಾಕಿಸ್ತಾನದ ಅಧಿಕಾರಿಗಳ ಪ್ರಯತ್ನಕ್ಕೆ ಮುಂಚಿತವಾಗಿ ಮಸೂದ್ ಅಜರ್ ಅಫ್ಘಾನಿಸ್ತಾನಕ್ಕೆ ಪರಾರಿಯಾಗಿದ್ದಾನೆ ಎಂದು ವಿದೇಶಾಂಗ ಸಚಿವ ಬಿಲಾವಲ್ ಭುಟ್ಟೋ 2022 ರಲ್ಲಿ ಘೋಷಿಸಿದ್ದರು.



# ದೇಶದಲ್ಲಿ ಆಹಾರ ಧಾನ್ಯ, ಅಗತ್ಯ ವಸ್ತುಗಳ ಕೊರತೆ ಇಲ್ಲ: ಜೋಶಿ

**ನವದೆಹಲಿ:** ದೇಶದಲ್ಲಿ ಆಹಾರ ಧಾನ್ಯ ಮತ್ತು ಅಗತ್ಯ ವಸ್ತುಗಳ ದುಪ್ಪಟ್ಟು ದಾಸ್ತಾನಿದೆ. ಎಲ್ಲೂ ಕೂಡಾ ಕೊರತೆಯಿಲ್ಲ, ಜನಸಾಮಾನ್ಯರು, ವರ್ತಕರು ಯಾರೂ ಈ ಬಗ್ಗೆ ಚಿಂತಿತರಾಗಬೇಕಿಲ್ಲ ಎಂದು ಕೇಂದ್ರ, ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕ ವ್ಯವಹಾರಗಳ ಸಚಿವ ಪ್ರಲ್ಹಾದ್ ಜೋಶಿ ಸ್ಪಷ್ಟಪಡಿಸಿದ್ದಾರೆ.



ಅಕ್ಕಿ, ಗೋಧಿ, ಸಕ್ಕರೆ, ಕಡಲೆ, ತೊಗರಿ, ಮಸೂರ್, ಹೆಸರುಕಾಳು, ಖಾದ್ಯ ತೈಲ ಹೀಗೆ ಪ್ರತಿಯೊಂದೂ ಕೂಡ ಸಾಕಷ್ಟು ದಾಸ್ತಾನಿದೆ. ಆಹಾರ ಪದಾರ್ಥ ಕೊರತೆಯಿದೆ ಎನ್ನುವುದು ಕೇವಲ ಸುಳ್ಳು ವದಂತಿ. ಇದಕ್ಕೆ ಯಾರೂ ಕಿವಿಗೊಡಬಾರದು, ಭಯಭೀತರಾಗಬಾರದು ಹಾಗೂ ವರ್ತಕರೂ ಹೆಚ್ಚು ಹೆಚ್ಚು ಆಹಾರ ಧಾನ್ಯ ಮತ್ತು ಅಗತ್ಯ ವಸ್ತುಗಳ ಸಂಗ್ರಹಣೆ, ದಾಸ್ತಾನು ಮಾಡಿಟ್ಟುಕೊಳ್ಳಬಾರದು ಎಂದು ಸೂಚಿಸಿದ್ದಾರೆ.

ದೇಶದಲ್ಲಿ ಎಲ್ಲಿಯೂ ಆಹಾರ ಧಾನ್ಯ, ಅಗತ್ಯ ವಸ್ತುಗಳ ಕೊರತೆ ಇರುವುದಿಲ್ಲ. ಅಗತ್ಯಕ್ಕಿಂತ ಹೆಚ್ಚು ಆಹಾರ ಧಾನ್ಯ ಖರೀದಿಗೆ ಮಾರುಕಟ್ಟೆಗಳಲ್ಲಿ ಮುಗಿಬೀಳುವ ಅವಶ್ಯಕತೆಯಿಲ್ಲ ಎಂದ ಸಚಿವರು, ವಿನಾಕಾರಣ ಯಾರಾದರೂ ಸುಳ್ಳು ವದಂತಿ ಹರಡಲು ಯತ್ನಿಸಿದರೆ ಹಾಗೂ ವರ್ತಕರು ಹೆಚ್ಚು ಹೆಚ್ಚು ಸಂಗ್ರಹ ಮಾಡಿಟ್ಟುಕೊಂಡರೆ ಅಂಥವರ ವಿರುದ್ಧ ಮುಲಾಜಿಲ್ಲದೆ ಕಾನೂನು ಕ್ರಮ ಜರುಗಿಸಲಾಗುತ್ತದೆ ಎಂದು ಖಡಕ್ ಎಚ್ಚರಿಕೆ ನೀಡಿದ್ದಾರೆ.

ಆಹಾರ ಧಾನ್ಯ ಮತ್ತು ಅಗತ್ಯ ವಸ್ತುಗಳ ವ್ಯಾಪಾರದಲ್ಲಿ ತೊಡಗಿರುವ ವ್ಯಾಪಾರಿಗಳು, ಸಗಟು ವ್ಯಾಪಾರಿಗಳು, ಚಿಲ್ಲರೆ ವ್ಯಾಪಾರಿಗಳು ಅಥವಾ ವ್ಯಾಪಾರ ಸಂಸ್ಥೆಗಳು ಕಾನೂನು ಜಾರಿ ಸಂಸ್ಥೆಗಳೊಂದಿಗೆ ಸಹಕರಿಸುವಂತೆ ಕೇಂದ್ರ, ಸರ್ಕಾರ ನಿರ್ದೇಶನ ಸಹ ನೀಡಿದೆ ಎಂದಿದ್ದಾರೆ.

ದೇಶದಲ್ಲಿ ಎಲ್ಲೆಡೆಯೂ ದುಪ್ಪಟ್ಟು ಆಹಾರ ಧಾನ್ಯ ಮತ್ತು ಅಗತ್ಯ ವಸ್ತುಗಳ ಸಂಗ್ರವಿದೆ. ಸಾಕಷ್ಟು ದಾಸ್ತಾನಿದೆ. ಹಾಗಿದ್ದರೂ ಕೊರತೆಯಿದೆ ಎಂದು ಯಾರಾದರೂ ಅಪಪ್ರಚಾರ ಮಾಡಿದಲ್ಲಿ, ಸಂದೇಶಗಳನ್ನು ರವಾನಿಸಿದಲ್ಲಿ ಯಾರೂ ನಂಬಬಾರದು. ಅಗತ್ಯ ಮಾನದಂಡಗಳನ್ನು ಮೀರಿದ ಸಂದೇಶಗಳಿಗೆ ಗಮನ ಕೊಡಬೇಡಿ ಎಂದು ಸಚಿವ ಜೋಶಿ ತಿಳಿಸಿದ್ದಾರೆ.

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ಚಂದನ್ ಶೆಟ್ಟಿ ಜೊತೆ ಹಸೆಮಣೆ ಏರಿದ 'ಸೀತಾ ವಲ್ಲಭ' ನಟಿ ಸುಪ್ರೀತಾ



'ಸೀತಾ ವಲ್ಲಭ' ಸೀರಿಯಲ್ ನಟಿ ಸುಪ್ರೀತಾ ಸತ್ಯನಾರಾಯಣ್ ಬಹುಕಾಲದ ಗೆಳೆಯ ಚಂದನ್ ಶೆಟ್ಟಿ ಜೊತೆ ಹಸೆಮಣೆ ಏರಿದ್ದಾರೆ.

ಬೆಂಗಳೂರಿನಲ್ಲಿ ಅದ್ದೂರಿಯಾಗಿ ಚಂದನ್ ಶೆಟ್ಟಿ ಜೊತೆ ಸುಪ್ರೀತಾ ಮದುವೆಯಾಗಿದ್ದಾರೆ. ಕಳೆದ ನಾಲ್ಕೈದು ವರ್ಷಗಳಿಂದ ಚಂದನ್ ಅವರನ್ನು ನಟಿ ಪ್ರೀತಿಸುತ್ತಿದ್ದರು. ಗುರುಹಿರಿಯರ ಒಪ್ಪಿಗೆ ಪಡೆದು ಚಂದನ್ ಅವರೊಂದಿಗೆ ದಾಂಪತ್ಯ ಬದುಕಿಗೆ ಕಾಲಿಟ್ಟಿದ್ದಾರೆ ಸುಪ್ರೀತಾ. ಇವರ ಮದುವೆಗೆ ನೇಹಾ ಗೌಡ, ರಶ್ಮಿಕಾ ಪ್ರಭಾಕರ್, ಸುಜಾತಾ ಅಕ್ಷಯ್ ಸೇರಿದಂತೆ ಅನೇಕರು ಭಾಗಿಯಾಗಿದ್ದಾರೆ.

ಇತ್ತೀಚೆಗಷ್ಟೇ ಚಂದನ್ ಜೊತೆ ಎಂಗೇಜ್ ಮೆಂಟ್ ಮಾಡಿಕೊಳ್ಳುವ ಮೂಲಕ ಫ್ಯಾನ್ಸ್‌ಗೆ ಶುಭ ಸುದ್ದಿ ನೀಡಿದ್ದರು. ಮಾರ್ಚ್ 12ರಂದು ನಿಶ್ಚಿತಾರ್ಥ ಮಾಡಿಕೊಂಡಿದ್ದರು.

ಡಿಜಿಟಲ್ ಕ್ರಿಯೇಟರ್, ಸಾಫ್ಟ್‌ವೇರ್ ಉದ್ಯೋಗಿ ಚಂದನ್ ಶೆಟ್ಟಿ ಅವರನ್ನು ನಟಿ ಮದುವೆಯಾಗಿದ್ದಾರೆ. ಕೊಡಗು ಮೂಲದ ಚಂದನ್ ಈಗ ಬೆಂಗಳೂರಿನಲ್ಲಿ ನೆಲೆಸಿದ್ದಾರೆ.



# ವಿಜಯ್ ದೇವರಕೊಂಡಗೆ ಪ್ರೀತಿಯಿಂದ ವಿಜ್ಜು ಎಂದು ಕರೆದು ಬರ್ತ್ ಡೇ ವಿಶ್

ವಿಜಯ್ ದೇವರಕೊಂಡ ಅವರು ಮೇ 9ರಂದು 36ನೇ ವರ್ಷದ ಬರ್ತ್ ಡೇ ಆಚರಿಸಿಕೊಂಡರು. ಈ ವೇಳೆ ರಶ್ಮಿಕಾ ಮಂದಣ್ಣ ಅವರು ಸೋಶಿಯಲ್ ಮೀಡಿಯಾದಲ್ಲಿ ವಿಜಯ್ ಗೆ ಬರ್ತ್ ಡೇ ವಿಶ್ ತಿಳಿಸಿದ್ದಾರೆ. ಇಬ್ಬರೂ ಹಲವು ವರ್ಷಗಳಿಂದ ಡೇಟಿಂಗ್ ಮಾಡುತ್ತಿದ್ದಾರೆ ಎನ್ನಲಾಗಿದೆ. ಇತ್ತೀಚೆಗೆ ಅದು ಮತ್ತಷ್ಟು ಸ್ಪಷ್ಟ ಆಗುತ್ತಿದೆ. ಈಗ ವಿಜಯ್‌ಗೆ ಪ್ರೀತಿಯಿಂದ 'ವಿಜ್ಜು' ಎಂದು ಕರೆದಿದ್ದಾರೆ ರಶ್ಮಿಕಾ. ಅಲ್ಲದೆ ಪ್ರೀತಿಯಿಂದ ಶುಭಾಶಯ ತಿಳಿಸಿದ್ದಾರೆ.





'ನಾನು ಮತ್ತೆ ತಡವಾಗಿ ವಿಶ್ ಮಾಡಿದ್ದೇನೆ. ಆದರೆ, ಹುಟ್ಟುಹಬ್ಬದ ಶುಭಾಶಯಗಳು ವಿಜ್ಜು. ನಿಮ್ಮ ಮುಂದಿನ ದಿನಗಳಲ್ಲಿ ಪ್ರೀತಿ, ಸಂತೋಷ, ಆರೋಗ್ಯ, ಸಂಪತ್ತು, ಶಾಂತಿಯಿಂದ ಕೂಡಿರಲಿ ಎಂದು ನಾನು ಆಶಿಸುತ್ತೇನೆ' ಎಂದು ರಶ್ಮಿಕಾ ಮಂದಣ್ಣ ಅವರು ಹೇಳಿದ್ದಾರೆ. ಅವರ ಬರ್ತ್ ಡೇ ವಿಶ್ ವೈರಲ್ ಆಗಿದೆ. ಇದಕ್ಕೆ ವಿಜಯ್ ಪ್ರತಿಕ್ರಿಯಿಸಿದ್ದು, 'ನಿಮ್ಮ ಹಾರೈಕೆ ಈಡೇರಲಿ' ಎಂದಿದ್ದಾರೆ.

ರಶ್ಮಿಕಾ ಮಂದಣ್ಣ ಅವರು ಏಪ್ರಿಲ್ ನಲ್ಲಿ ಬರ್ತ್ ಡೇ ಆಚರಿಸಿಕೊಂಡರು. ಇದಕ್ಕಾಗಿ ಅವರು ಓಮನ್ ಗೆ ತೆರಳಿದ್ದರು. ಅಲ್ಲಿ ಅದ್ದೂರಿ ಬರ್ತ್ ಡೇ ಸೆಲೆಬ್ರೇಷನ್ ಮಾಡಿಕೊಂಡರು. ಈ ವೇಳೆ ಅವರ ಜೊತೆಗೆ ವಿಜಯ್ ದೇವರಕೊಂಡ ಅವರು ಕೂಡ ಇದ್ದರು ಎನ್ನಲಾಗಿದೆ. ಇಬ್ಬರೂ ಹಂಚಿಕೊಂಡಿರೋ ಫೋಟೋಗಳ ಬ್ಯಾಕ್ ಗ್ರೌಂಡ್ ಒಂದೇ ರೀತಿಯಲ್ಲಿ ಇದೆ. ಸದ್ಯ ವಿಜಯ್ ಬರ್ತ್ ಡೇನ ಇವರು ಮನೆಯಲ್ಲೇ ಆಚರಿಸಿಕೊಂಡರೇ ಎನ್ನುವ ಪ್ರಶ್ನೆ ಮೂಡಿದೆ.

ವಿಜಯ್ ದೇವರಕೊಂಡ ಅವರು 'ಕಿಂಗ್ ಡಮ್' ಹೆಸರಿನ ಸಿನಿಮಾದಲ್ಲಿ ನಟಿಸಿದ್ದಾರೆ. ಮೇ 30ರಂದು ಸಿನಿಮಾ ರಿಲೀಸ್ ಆಗಲಿದೆ. ಈ ಚಿತ್ರದ ಬಗ್ಗೆ ಅವರು ನಿರೀಕ್ಷೆ ಇಟ್ಟುಕೊಂಡಿದ್ದಾರೆ. ಇತ್ತೀಚೆಗೆ ಅವರ ನಟನೆಯ ಸಾಲು ಸಾಲು ಸಿನಿಮಾಗಳು ಸೋಲುತ್ತಿವೆ. ಅದು ಅವರನ್ನು ಮತ್ತಷ್ಟು ಚಿಂತೆಗೀಡು ಮಾಡಿದೆ.

ರಶ್ಮಿಕಾ ಸಿನಿಮಾ ವಿಚಾರಕ್ಕೆ ಬರೋದಾದರೆ ಅವರಿಗೆ ಇತ್ತೀಚೆಗೆ ಸಾಲು ಸಾಲು ಗೆಲುವು ಸಿಕ್ಕಿದೆ. 'ಅನಿಮಲ್', ಪುಷ್ಪ 2' ಹಾಗೂ 'ಛಾವಾ' ಚಿತ್ರದಿಂದ ಅವರು ಗೆಲುವು ಕಂಡಿದ್ದಾರೆ. ಅವರ ನಟನೆಯ 'ಸಿಕಂದರ್' ಚಿತ್ರ ಮಾತ್ರ ಸೋಲು ಕಂಡಿದೆ. ಈ ಸಿನಿಮಾಗೆ ಸಲ್ಮಾನ್ ಖಾನ್ ಹೀರೋ. ಅವರ ನಟನೆಯ 'ಕುಬೇರ' ಇದೇ ಜೂನ್ 20ರಂದು ಬಿಡುಗಡೆ ಹೊಂದಲಿದೆ. ಈ ಚಿತ್ರಕ್ಕೆ ಧನುಷ್ ಹೀರೋ.

# ತುಪ್ಪದ ಬೆಡಗಿಗೆ ಬೇಡಿಕೆ 7 ಸಿನಿಮಾಗಳಲ್ಲಿ ರಾಗಿಣಿ ಬ್ಯುಸಿ

ಡ್ರಗ್ಸ್ ಕೇಸ್‌ನಲ್ಲಿ ಸಿಲುಕಿ ಸಂಕಷ್ಟ ಅನುಭವಿಸಿದ್ದ ರಾಗಿಣಿ ದ್ವಿವೇದಿಗೆ ಮತ್ತೆ ಅದೃಷ್ಟ ಖುಲಾಯಿಸಿದೆ. ಸಾಲು ಸಾಲು ಸಿನಿಮಾಗಳಲ್ಲಿ ನಟಿ ಬ್ಯುಸಿಯಾಗಿದ್ದಾರೆ. ಈ ಮೂಲಕ ಅಭಿಮಾನಿಗಳಿಗೆ ಅವರು ಗುಡ್ ನ್ಯೂಸ್ ಕೊಟ್ಟಿದ್ದಾರೆ.

ಚಿತ್ರರಂಗದಲ್ಲಿ ರಾಗಿಣಿಗೆ ಬೇಡಿಕೆ ಹೆಚ್ಚಾಗಿದೆ. ಬಹುಭಾಷೆಗಳಲ್ಲಿ ನಟಿಸುತ್ತಾ ನಟಿ ಆಕ್ಟೀವ್ ಆಗಿದ್ದಾರೆ. ಧರ್ಮ ಕೀರ್ತಿರಾಜ್ ಜೊತೆ ಸಿಂಧೂರಿ ಚಿತ್ರ, ಸರ್ಕಾರಿ ನ್ಯಾಯ ಬೆಲೆ ಅಂಗಡಿ, ರಾಜವರ್ಧನ್ ಜೊತೆ 'ಜಾವಾ' ಚಿತ್ರದಲ್ಲಿ ನಟಿಸುತ್ತಿದ್ದು, ಇದಕ್ಕೆ ಚಕ್ರವರ್ತಿ ಚಂದ್ರಚೂಡ್ ನಿರ್ದೇಶನ ಮಾಡಲಿದ್ದಾರೆ.

ಮೋಹನ್ ಲಾಲ್ ಜೊತೆ 'ವೃಷಭ' ಸಿನಿಮಾ ಮಾಡ್ತಿದ್ದಾರೆ ರಾಗಿಣಿ. ಈ ಚಿತ್ರಕ್ಕೆ ಕನ್ನಡದ ನಿರ್ದೇಶಕ ನಂದ ಕಿಶೋರ್ ನಿರ್ದೇಶನ ಮಾಡಿದ್ದಾರೆ. ಇದರೊಂದಿಗೆ ಬಾಲಿವುಡ್ ಚಿತ್ರ ಮತ್ತು ತಮಿಳಿನಲ್ಲೊಂದು ಸಿನಿಮಾ ಮುಗಿಸಿ ಕೊಟ್ಟಿದ್ದಾರೆ.

'ಶ್ಲೋಕ್' ಎಂಬ ಸಂಸ್ಕೃತ ಚಿತ್ರದಲ್ಲಿಯೂ ನಟಿ ಪ್ರಮುಖ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ. ಮುಕ್ತಿಯನ್ನು ಹೊಂದುವ ಸನ್ಯಾಸಿನಿಯ ಪಾತ್ರದಲ್ಲಿ ಅವರು ನಟಿಸಿದ್ದಾರೆ. ಇದನ್ನು ಸ್ಮಶಾನದಲ್ಲಿ ಚಿತ್ರೀಕರಿಸಲಾಗಿದೆ. ಒಟ್ನಲ್ಲಿ ರಾಗಿಣಿ ಕಹಿ ಘಟನೆಯಿಂದ ಹೊರಬಂದು ಸಿನಿಮಾ ಮಾಡ್ತಿದ್ದಾರೆ. ಚಿತ್ರರಂಗದಲ್ಲಿ ಅವರಿಗೆ ಒಂದೊಳ್ಳೆಯ ಕಾಲ ಶುರುವಾಗಿದೆ. ಒಪ್ಪಿಕೊಂಡಿರುವ ಈ ಸಿನಿಮಾಗಳಿಂದ ಸಕ್ಸಸ್ ಸಿಗುತ್ತಾ? ಎಂದು ಕಾದುನೋಡಬೇಕಿದೆ.



# ಭಾರತ-ಪಾಕ್ ಉದ್ವಿಗ್ನತೆ ನಡುವೆ ಖಡಕ್ ಸೂಚನೆ ಕೊಟ್ಟ ಯಶ್



ಭಾರತ ಮತ್ತು ಪಾಕಿಸ್ತಾನದ ನಡುವೆ ಉದ್ವಿಗ್ನತೆ ಹೆಚ್ಚಿದ ಬೆನ್ನಲ್ಲೇ ಯಶ್ ಸೋಷಿಯಲ್ ಮೀಡಿಯಾದಲ್ಲಿ ಪೋಸ್ಟ್ ವೊಂದನ್ನು ಹಂಚಿಕೊಂಡಿದ್ದಾರೆ. ಭಾರತ ಮತ್ತು ಪಾಕ್ ನಡುವಿನ ಯುದ್ಧ ಸನ್ನಿವೇಶ ಕುರಿತು ತಪ್ಪು ಮಾಹಿತಿ ಹಂಚಿಕೊಳ್ಳಬೇಡಿ ಎಂದು ಯಶ್ ಮನವಿ ಮಾಡಿದ್ದಾರೆ.

ನಮ್ಮ ಭಾರತೀಯ ಸಶಸ್ತ್ರ ಪಡೆಗಳ ಅಚಲ ಶಕ್ತಿ ಮತ್ತು ಕಾರ್ಯಕ್ಕೆ ಧನ್ಯವಾದಗಳು. ಭಾರತೀಯ ಯೋಧರ ಸೇವೆಗೆ ಧನ್ಯವಾದ ತಿಳಿಸುವುದರ ಜೊತೆಗೆ ಒಗ್ಗಟ್ಟಿನಿಂದ ನಿಂತು ಜವಾಬ್ದಾರಿಯುತವಾಗಿ ವರ್ತಿಸೋಣ. ಸಾಮಾಜಿಕ ಜಾಲತಾಣದಲ್ಲಿ ಯಾವುದಾದರೂ ವಿಚಾರ ಹಂಚಿಕೊಳ್ಳುವ ಮುನ್ನ ಮೊದಲು ಪರಿಶೀಲಿಸಿ ಎಂದಿದ್ದಾರೆ. ತಪ್ಪು ಮಾಹಿತಿಯ ವಿರುದ್ಧ ನಿಲ್ಲೋಣ. ಜೈ ಹಿಂದ್ ಎಂದು ಯಶ್ ಬರೆದುಕೊಂಡಿದ್ದಾರೆ. ಏ.22ರಂದು ಪಹಲ್ಗಾಮ್‌ನಲ್ಲಿ ನಡೆದ ಉಗ್ರರ ದಾಳಿ ಹಿನ್ನೆಲೆ ಭಾರತ ಈಗ ಪಾಕ್‌ಗೆ ತಕ್ಕ ಪಾಠ ಕಲಿಸುತ್ತಿದೆ.

# 'ಆಪರೇಷನ್ ಸಿಂಧೂರ' ಟೈಟಲ್‌ಗೆ ಬೇಡಿಕೆ

ಪಹಲ್ಗಾಮ್ ಉಗ್ರರ ದಾಳಿಗೆ ಪ್ರತೀಕಾರವಾಗಿ 'ಆಪರೇಷನ್ ಸಿಂಧೂರ' ಕಾರ್ಯಾಚರಣೆಯ ಮೂಲಕ ಪಾಕ್‌ಗೆ ಭಾರತ ತಕ್ಕ ಪಾಠ ಕಲಿಸಿದೆ. ಇದಕ್ಕೆ ಬಾಲಿವುಡ್ ತಾರೆಯರು ಮೆಚ್ಚುಗೆ ಸೂಚಿಸಿದ್ದರು. ಈ ಬೆನ್ನಲ್ಲೇ 'ಆಪರೇಷನ್ ಸಿಂಧೂರ' ಟೈಟಲ್ ನೊಂದಣಿ ಮಾಡಲು ಬೇಡಿಕೆ ಹೆಚ್ಚಾಗಿದೆ. ಬಾಲಿವುಡ್ ನಿರ್ಮಾಪಕರು ಈ ಟೈಟಲ್‌ಗಾಗಿ ಮುಗಿಬಿದ್ದಿದ್ದಾರೆ.

ಭಾರತ ಮತ್ತು ಪಾಕ್ ನಡುವೆ ಯುದ್ಧ ನಡೆಯುತ್ತಿದೆ. ಇತ್ತ 'ಆಪರೇಷನ್ ಸಿಂಧೂರ' ಟೈಟಲ್ ಪೈಪೋಟಿ ಶುರುವಾಗಿದೆ. ಈಗಾಗಲೇ ಉರಿ, ಬಾರ್ಡರ್ ಸೇರಿದಂತೆ ಭಾರತ ಸೇನೆಗೆ ಸಂಬಂಧಿಸಿದ ಅನೇಕ ಸಿನಿಮಾಗಳು ಬಂದಿವೆ. ಅದಂತೆಯೇ ನೈಜ ಕಥೆ 'ಆಪರೇಷನ್ ಸಿಂಧೂರ'ದ ಕುರಿತು ಸಿನಿಮಾ ಮಾಡಲು ನಿರ್ಮಾಪಕರು ಮುಂದಾಗಿದ್ದಾರೆ.

ವರದಿಗಳ ಪ್ರಕಾರ, 15ಕ್ಕೂ ಹೆಚ್ಚು ಖ್ಯಾತ ನಿರ್ಮಾಣ ಸಂಸ್ಥೆಗಳು ಆಪರೇಷನ್ ಸಿಂಧೂರ ಟೈಟಲ್ ಅನ್ನು ರಿಜಿಸ್ಟರ್ ಮಾಡಲು ಮುಂದಾಗಿದೆ. ಫೆಡರೇಷನ್ ಆಫ್ ವೆಸ್ಟರ್ನ್ ಇಂಡಿಯಾ ಸಿನಿ ಎಂಪ್ಲಾಯಿ ಅಧ್ಯಕ್ಷ ಬಿಎನ್ ತಿವಾರಿ ಈ ವಿಚಾರವನ್ನು ನಿಜವೆಂದು ಒಪ್ಪಿಕೊಂಡಿದ್ದಾರೆ. ಇಂಡಿಯನ್ ಮೋಷನ್ ಪಿಕ್ಚರ್ ಪ್ರೊಡ್ಯೂಸರ್ಸ್ ಅಸೋಸಿಯೇಷನ್ ನಲ್ಲಿ ಈ ಟೈಟಲ್‌ಗಾಗಿ ನೊಂದಣಿಯನ್ನು ಮಾಡಿಸಿವೆ. ಆದರೆ, ಟೈಟಲ್ ಯಾರ ಪಾಲಾಗುತ್ತೆ ಅನ್ನೋದು ಮುಂದಿನ ದಿನಗಳಲ್ಲಿ ಗೊತ್ತಾಗಲಿದೆ.

ಅಂದಹಾಗೆ, ನಿರ್ಮಾಪಕ ಅಶೋಕ ಪಂಡಿತ್, ಆದಿತ್ಯ ಧರ್, ಮಹಾವೀರ್ ಜೈನ್, ನಿರ್ಮಾಪಕ ಮಧುರ್ ಭಂಡಾರ್ಕರ್, ಜಾನ್ ಅಬ್ರಾಹಂ ನಿರ್ಮಾಣ ಸಂಸ್ಥೆ ಸೇರಿದಂತೆ ಅನೇಕರು ಆಪರೇಷನ್ ಸಿಂಧೂರ ಟೈಟಲ್ ನೊಂದಣಿ ಮಾಡಿಸಿದ್ದಾರೆ ಎನ್ನಲಾಗಿದೆ.

ಈಗಾಗಲೇ ರಿಯಲ್ ಸ್ಟೋರಿಗಳು ಸಿನಿಮಾ ರೂಪದಲ್ಲಿ ಬಂದು ಗೆದ್ದಿರೋದಿದೆ. ಹಾಗಾಗಿ 'ಆಪರೇಷನ್ ಸಿಂಧೂರ' ಟೈಟಲ್ ಸದ್ಯ ಸಂಚಲನ ಸೃಷ್ಟಿಸಿದೆ.




## ಐಪಿಎಲ್-2025 ಟೂರ್ನಿ 1 ವಾರ ಸ್ಥಗಿತ

# ಶೀಘ್ರವೇ ಪರಿಷ್ಕೃತ ವೇಳಾಪಟ್ಟಿ ಬಿಡುಗಡೆ

ಭಾರತ ಮತ್ತು ಪಾಕ್ ನಡುವಿನ ಪ್ರತೀಕಾರ ಸಮರ ಜೋರಾಗುತ್ತಿದ್ದಂತೆ ಭದ್ರತಾ ಕಾರಣಗಳಿಂದ 18ನೇ ಆವೃತ್ತಿಯ ಇಂಡಿಯನ್ ಪ್ರೀಮಿಯರ್ ಲೀಗ್ ಟೂರ್ನಿಯನ್ನು ಬಿಸಿಸಿಐ ಒಂದು ವಾರಗಳ ಕಾಲ ಸ್ಥಗಿತಗೊಳಿಸಿದೆ.

ನಿನ್ನೆ ಮಹತ್ವದ ಸಭೆಯಲ್ಲಿ ಭಾರತೀಯ ಕ್ರಿಕೆಟ್ ಮಂಡಳಿ ಈ ನಿರ್ಧಾರ ಕೈಗೊಂಡಿದೆ. ಅದರಂತೆ ಇಂದಿನಿಂದ ನಿಗದಿಯಾಗಿದ್ದ ಎಲ್ಲಾ ಪಂದ್ಯಗಳ ಒಂದು ವಾರಗಳ ಕಾಲ ಅಮಾನತುಗೊಳಿಸಿದೆ. ಸಂಬಂಧಪಟ್ಟವರೊಂದಿಗೆ ಸಮಾಲೋಚಿಸಿ ಪರಿಸ್ಥಿತಿ ನೋಡಿಕೊಂಡು ಪರಿಷ್ಕೃತ ವೇಳಾಪಟ್ಟಿಯನ್ನು ಶೀಘ್ರದಲ್ಲೇ ಪ್ರಕಟಿಸುವುದಾಗಿ ಬಿಸಿಸಿಐ ಹೇಳಿದೆ. ಆದ್ರೆ, ಕೆಲ ವರದಿಗಳು ಭಾರತ ಮತ್ತು ಇಂಗ್ಲೆಂಡ್ ಟೆಸ್ಟ್ ಸರಣಿ ಬಳಿಕ ಪಂದ್ಯ ಮುಂದುವರಿಯುವ ಸಾಧ್ಯತೆಯಿದೆ ಎಂದು ತಿಳಿಸಿವೆ.

ಪ್ರಸ್ತುತ 18ನೇ ಆವೃತ್ತಿಯ ಐಪಿಎಲ್ ಗುರುವಾರದ ಸ್ಥಗಿತಗೊಂಡ ಪಂಜಾಬ್ ಕಿಂಗ್ಸ್ ಮತ್ತು ಡೆಲ್ಲಿ ಕ್ಯಾಪಿಟಲ್ಸ್ ನಡುವಿನ ಪಂದ್ಯ ಸೇರಿ 58 ಪಂದ್ಯಗಳು ನಡೆದಿವೆ. ಇನ್ನೂ ನಾಲ್ಕು ಪ್ಲೇ ಆಫ್ಸ್ ಪಂದ್ಯಗಳೂ ಸೇರಿ 16 ಪಂದ್ಯಗಳು ಬಾಕಿ ಇವೆ. ಸದ್ಯ ಬಿಸಿಸಿಐ ಆಟಗಾರರು ಮತ್ತು ಸಾರ್ವಜನಿಕರ ಸುರಕ್ಷತೆಗೆ ಆದ್ಯತೆ ನೀಡಿದೆ. ಆಟಗಾರರನ್ನು ಮನೆಗಳಿಗೆ ಸುರಕ್ಷಿತವಾಗಿ ಕಳುಹಿಸುವ ವ್ಯವಸ್ಥೆಗಳ ಬಗ್ಗೆ ಗಮನಹರಿಸಲಿದೆ. ಉದ್ವಿಗ್ನತೆ ಶಮನವಾದ ಬಳಿಕ ದಿನಾಂಕ ಪ್ರಕಟಿಸಲಿದೆ ಎಂದು ಬಿಸಿಸಿಐ, ಐಪಿಎಲ್ ಮಂಡಳಿ ತನ್ನ ಪ್ರಕಟಣೆಯಲ್ಲಿ ತಿಳಿಸಿದೆ.



ನಿನ್ನೆ ಲಕ್ನೋದ ಏಕನಾ ಕ್ರೀಡಾಂಗಣದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಮತ್ತು ಲಕ್ನೋ ಸೂಪರ್ ಜೈಂಟ್ಸ್ ತಂಡಗಳ ನಡುವೆ ಹಣಾಹಣಿ ನಡೆಯಬೇಕಿತ್ತು. ಪ್ಲೇ ಆಫ್ ಅಧಿಕೃತ ಪ್ರವೇಶಕ್ಕೆ ಇಂದಿನ ಪಂದ್ಯದ ಗೆಲುವು ಅನಿವಾರ್ಯವಾಗಿತ್ತು. ಪಂದ್ಯ ಸ್ಥಗಿತಗೊಳಿಸಿದ್ದರಿಂದ ಟಿಕೆಟ್ ಖರೀದಿ ಮಾಡಿರುವ ಎಲ್ಲಾ ಗ್ರಾಹಕರಿಗೂ ಶೀಘ್ರದಲ್ಲೇ ಹಣ ವಾಪಸ್ ನೀಡುವುದಾಗಿ ಐಪಿಎಲ್ ಮಂಡಳಿ ತಿಳಿಸಿದೆ.

ಜಮ್ಮು ಮತ್ತು ಪಠಾಣ್‌ಕೋಟ್ ನಗರಗಳಲ್ಲಿ ದಾಳಿಯ ಎಚ್ಚರಿಕೆಗಳು ಬಂದಿದ್ದರಿಂದ ಗುರುವಾರ (ಮೇ 8) ಧರ್ಮಶಾಲಾದಲ್ಲಿ ನಡೆಯಬೇಕಿದ್ದ ಪಂದ್ಯವನ್ನು ಅರ್ಧಕ್ಕೆ ಮೊಟಕುಗೊಳಿಸಲಾಗಿತ್ತು. ಈ ವಿಚಾರವಾಗಿ ಬಿಸಿಸಿಐ ಉಪಾಧ್ಯಕ್ಷ ರಾಜೀವ್ ಶುಕ್ಲಾ ಅವರು ಖಾಸಗಿ ವಾಹಿನಿಯಲ್ಲಿ ಮಾತನಾಡಿದ್ದರು.

ಅತ್ತ ಪಾಕ್‌ನಲ್ಲಿ ನಡೆಯುತ್ತಿದ್ದ ಪಾಕಿಸ್ತಾನ್ ಸೂಪರ್ ಲೀಗ್‌ನ ಉಳಿದ ಎಲ್ಲಾ ಪಂದ್ಯಗಳನ್ನು ದುಬೈಗೆ ಸ್ಥಳಾಂತರಿಸುವಂತೆ ಪಾಕ್ ಸರ್ಕಾರ ಪಾಕಿಸ್ತಾನ ಕ್ರಿಕೆಟ್ ಬೋರ್ಡ್‌ಗೆ ಸೂಚನೆ ನೀಡಿದೆ.

## ಆಪರೇಷನ್ ಅಭ್ಯಾಸ್

# ಕೆಆರ್‌ಎಸ್‌ನಲ್ಲಿ ನಾಳೆ ಮಾಕ್ ಡ್ರಿಲ್

**ಮಂಡ್ಯ:** ತುರ್ತು ಸಂದರ್ಭಗಳಲ್ಲಿ ಅಣೆಕಟ್ಟು ರಕ್ಷಣೆ ಮಾಡುವ ಬಗ್ಗೆ ಸಾರ್ವಜನಿಕರು, ಪ್ರವಾಸಿಗರಿಗೆ ಜಾಗೃತಿ ಮೂಡಿಸಲು ಮೇ 11ರಂದು ಕೆಆರ್‌ಎಸ್ ಬೃಂದಾವನ ಉದ್ಯಾನವನದಲ್ಲಿ 'ಆಪರೇಷನ್ ಅಭ್ಯಾಸ್' ಅಡಿಯಲ್ಲಿ ಅಣಕು ಪ್ರದರ್ಶನ ಹಮ್ಮಿಕೊಳ್ಳಲಾಗಿದೆ.

ನಾಳೆ ಅಂಜೆ ಸಂಜೆ 4 ಗಂಟೆಯಿಂದ 7 ಗಂಟೆ ವರೆಗೆ ಅಣಕು ಪ್ರದರ್ಶನ ಹಮ್ಮಿಕೊಳ್ಳಲಾಗಿದೆ. ಇದು ಜಾಗೃತಿ ಉದ್ದೇಶದಿಂದ ಮಾಡಲಾಗುತ್ತಿದ್ದು, ಸಾರ್ವಜನಿಕರು, ಪ್ರವಾಸಿಗರು ಆತಂಕ ಪಡುವ ಅಗತ್ಯವಿಲ್ಲ ಎಂದು ಜಿಲ್ಲಾಧಿಕಾರಿ ಡಾ.ಕುಮಾರ ಅವರು ತಿಳಿಸಿದ್ದಾರೆ. ಇಂದು ಮಂಡ್ಯ ಜಿಲ್ಲಾ ಪಂಚಾಯಿತಿ ಕಾವೇರಿ ಸಭಾಂಗಣದಲ್ಲಿ ನಡೆದ ಪೂರ್ವಭಾವಿ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಬೆಂಕಿ ಅನಾಹುತಗಳು, ತುರ್ತು ಸಂದರ್ಭದಲ್ಲಿ ಜನರು ಗಾಬರಿ ಅಥವಾ ಆತಂಕಕ್ಕೆ ಒಳಗಾಗದಂತೆ ಆತ್ಮ ವಿಶ್ವಾಸ ತುಂಬಿ, ಅರಿವು ಮೂಡಿಸುವ ಉದ್ದೇಶದಿಂದ ಅಣುಕು ಪ್ರದರ್ಶನ ಆಯೋಜಿಸಲಾಗುತ್ತಿದೆ. ಅಲ್ಲದೇ ತುರ್ತು ಕಾರ್ಯಾಚರಣೆ ವೇಳೆ ನಾಗರಿಕರ ರಕ್ಷಣೆ, ಜನರನ್ನು ಸುರಕ್ಷಿತ ಸ್ಥಳಕ್ಕೆ ಸ್ಥಳಾಂತರಿಸುವಿಕೆ, ಗಾಯಗೊಂಡವರಿಗೆ ಆಸ್ಪತ್ರೆಗೆ ಸ್ಥಳಾಂತರಿಸುವ ಕುರಿತು ಹಾಗೂ ಬ್ಲಾಕ್ ಔಟ್ ಚಟುವಟಿಕೆಗಳ ಬಗ್ಗೆ ಅಣುಕು ಪ್ರದರ್ಶನ ಮಾಡಲಾಗುತ್ತದೆ. ಜನರು ಜನತೆ ಯಾವುದೇ ರೀತಿಯ ಗಾಬರಿ, ಆತಂಕಕ್ಕೆ ಒಳಗಾಗದೇ ಜಿಲ್ಲಾಡಳಿತದೊಂದಿಗೆ ಸಹಕಾರ ನೀಡಬೇಕು ಎಂದು ಮನವಿ ಮಾಡಿದ್ದಾರೆ.



ಇದೇ ವೇಳೆ ಅಣುಕು ಕಾರ್ಯಾಚರಣೆಗೆ ವಾರ್ನಿಂಗ್ ಟೀಂ, ಕಂಟ್ರೋಲ್ ರೂಂ, ಇವ್ಯಾಕುಯೇಷನ್ ಟೀಂ (ಸ್ಥಳಾಂತರಿಸುವ ರಕ್ಷಣಾ ತಂಡ), ಅಗ್ನಿ ಶಾಮಕ ದಳ, ಎನ್‌ಸಿಸಿ ತಂಡ, ಹೋಂ ಗಾರ್ಡ್ಸ್, ಪೊಲೀಸ್ ಇಲಾಖೆ, ಪ್ರಥಮ ಚಿಕಿತ್ಸೆ ತಂಡ, ವೈದ್ಯಕೀಯ ತಂಡ, ಸಾರಿಗೆ ತಂಡ, ಸಂವಹನ ತಂಡಗಳನ್ನು ರಚಿಸಿ ಅಧಿಕಾರಿಗಳಿಗೆ ಜವಾಬ್ದಾರಿಗಳನ್ನು ವಹಿಸಿದರು.

# ಮಂಗಳೂರಿನ ಹೈ-ಫ್ಲೈಯರ್ಸ್ ಸ್ಕೇಟಿಂಗ್ ಕ್ಲಬ್‌ಗೆ 29 ಪದಕಗಳು



ಮಂಗಳೂರಿನ ಫ್ರಾನ್ಸಿಸ್ ಡೋರಿಸ್ ಸ್ಕೇಟ್ ಸಿಟಿಯಲ್ಲಿ ಇತ್ತೀಚೆಗೆ ನಡೆದ 1ನೇ ಕರ್ನಾಟಕ ರಾಜ್ಯ ರ್‍ಯಾಂಕಿಂಗ್ ಸ್ಪೀಡ್ ಸ್ಕೇಟಿಂಗ್ ಚಾಂಪಿಯನ್ ಶಿಪ್‌ನಲ್ಲಿ ಮಂಗಳೂರಿನ ಹೈಫ್ಲೈಯರ್ಸ್ ಸ್ಕೇಟಿಂಗ್ ಕ್ಲಬ್‌ನ ಸ್ಕೇಟರ್ಸ್ 19 ಚಿನ್ನ, 5 ಬೆಳ್ಳಿ ಮತ್ತು 5 ಕಂಚಿನ ಪದಕಗಳನ್ನು ಗೆದ್ದಿದ್ದಾರೆ.

ಸ್ಕೇಟರ್‌ಗಳಾದ ಮುಹಮ್ಮದ್ ಅಯಾನ್ 3 ಚಿನ್ನ, ಹಿಮಾನಿ ಕೆ.ವಿ 3 ಚಿನ್ನ, ತನ್ಮಯ್ ಎಂ ಕೊಟ್ಟಾರಿ 3 ಚಿನ್ನ, ಡ್ಯಾಶಿಯೆಲ್ ಅಮಂಡಾ ಕಾನ್ಸೆಸ್ಸಾವೊ 3 ಚಿನ್ನ, ಶಾಲೋಮ್ ಕ್ರಿಶ್ಚಿಯನ್ 2 ಚಿನ್ನ ಮತ್ತು 1 ಬೆಳ್ಳಿ, ಪಿ.ಜೆನಿಶಾ 2 ಚಿನ್ನ ಮತ್ತು 1 ಬೆಳ್ಳಿ, ಡೇನಿಯಲ್ ಸಾಲ್ವಡಾರ್ ಕಾನ್ಸೆಸ್ಸಾವೊ 2 ಚಿನ್ನ ಮತ್ತು 1 ಬೆಳ್ಳಿ ಪದಕ ಗೆದ್ದಿದ್ದಾರೆ.

ಕೇಟ್ ಅರ್ವಿ ವಾಜ್‌ಗೆ 1 ಚಿನ್ನ, ಶೀಹಾನ್ .ಎ.ಆರ್ 1 ಬೆಳ್ಳಿ ಮತ್ತು 2 ಕಂಚಿನ ಪದಕ ಗೆದ್ದರು. ಡೇವಿನ್ ಮಹೇಶ್‌ಗೆ 1 ಬೆಳ್ಳಿ ಪದಕ, ಲಕ್ಷ್ ಡಿ.ಎಸ್. ಗೌಡ 3 ಕಂಚಿನ ಪದಕ ಗೆದ್ದಿದ್ದಾರೆ. ಪ್ರತಿಭಾನ್ವಿತ ಸ್ಕೇಟರ್‌ಗಳಿಗೆ ಹೈ-ಫ್ಲೈಯರ್ಸ್ ಸ್ಕೇಟಿಂಗ್ ಕ್ಲಬ್ ನಲ್ಲಿ ಮೋಹನ್ ದಾಸ್ ಕೆ, ಜಯರಾಜ್, ರಮಾನಂದ ಕೆ.ವಿ ಮತ್ತು ಓಂಕಾರ್ ತರಬೇತಿ ನೀಡುತ್ತಿದ್ದಾರೆ.

# ದೇಶಕ್ಕಾಗಿ ನಾನು ಪ್ರಾಣ ಕೊಡಲು ಸಿದ್ಧ

**ಬೆಂಗಳೂರು:** ದೇಶಕ್ಕಾಗಿ ನಾನು ಪ್ರಾಣ ಕೊಡಲು ಸಿದ್ಧ ಎಂದು ಸಚಿವ ಜಮೀರ್ ಅಹ್ಮದ್ ಪುನರುಚ್ಚರಿಸಿದರು.

ವಿಧಾನಸೌಧದಲ್ಲಿ ಮಾತನಾಡಿದ ಅವರು, ಎಲ್ಲಾ ಮಸೀದಿಗಳಲ್ಲಿ ಪ್ರಾರ್ಥನೆ ಮಾಡಲು ಹೇಳಿದ್ದೇವೆ. ನಾನು ಕೂಡಾ ಗಾಂಧಿ ನಗರದಲ್ಲಿ ಪ್ರಾರ್ಥನೆ ಮಾಡಿದ್ದೇನೆ. ಸೈನಿಕರಿಗೆ ಹೆಚ್ಚು ಶಕ್ತಿ ಕೊಡಲು ಇಡೀ ದೇಶದಲ್ಲಿ ಮಸೀದಿಯಲ್ಲಿ ಪ್ರಾರ್ಥನೆ ಮಾಡ್ತಿದ್ದೇವೆ. ಸೈನಿಕರು ಯಶಸ್ವಿಯಾಗಬೇಕು ಅಂತ ನಾವು ಈ ಪ್ರಾರ್ಥನೆ ಮಾಡ್ತಿದ್ದೇವೆ ಎಂದು ಹೇಳಿದರು.

ಸೂಸೈಡ್ ಬಾಂಬರ್‌ಗೆ ಬಿಜೆಪಿ ಟೀಕೆ ವಿಚಾರವಾಗಿ ಪ್ರತಿಕ್ರಿಯಿಸಿ, ಬಿಜೆಪಿ ಅವರಿಗೆ ಟೀಕೆ ಬಿಟ್ಟು ಇನ್ನೋನೂ ಗೊತ್ತಿಲ್ಲ. ನಾನು ದೇಶಕೋಸ್ಕರ ಬಲಿ ಆಗೋಕೆ ಸಿದ್ಧ ಅಂತ ಹೇಳಿದ್ದೇನೆ. ಈಗಲೂ ನನ್ನ ಮಾತಿಗೆ ನಾನು ಬದ್ಧ. ಈಗಲೂ ಹೇಳ್ತೀನಿ ದೇಶಕ್ಕಾಗಿ ನಾನು ಪ್ರಾಣ ಕೊಡಲು ಸಿದ್ಧ. ಮೋದಿ, ಅಮಿತ್ ಶಾ ಅವರು ಅನುಮತಿ ಕೊಟ್ರೆ ಸೂಸೈಡ್ ಬಾಂಬರ್ ಆಗಿ ಹೋಗೋಕೆ ಸಿದ್ಧ. ನಮ್ಮ ದೇಶಕ್ಕಾಗಿ ಈಗಲೂ ನಾನು ಸೂಸೈಡ್ ಬಾಂಬರ್ ಆಗಿ ಹೋಗ್ತೀನಿ. ಸೈನಿಕರಿಗೆ ಹೆಚ್ಚು ಶಕ್ತಿ ಕೊಡಲಿ ಅಂತ ಅಲ್ಲಾ ಬಳಿ ಬೇಡಿ ಕೊಳ್ತೀನಿ ಎಂದು ತಿಳಿಸಿದರು.



ತಿರಂಗಾ ಯಾತ್ರೆಗೆ ಬಾರದ ಬಗ್ಗೆ ಮಾತನಾಡಿ, ನಾನು ತಿರಂಗಾ ಯಾತ್ರೆಗೆ ಬರಬೇಕಿತ್ತು. ಸ್ಲಂ ಬೋರ್ಡ್ ಕಾರ್ಯಕ್ರಮ ಹಿನ್ನೆಲೆಯಲ್ಲಿ ಬರಲು ಆಗಲಿಲ್ಲ ಎಂದು ಸ್ಪಷ್ಟಪಡಿಸಿದರು.

ಸಚಿವ ಸಂತೋಷ್ ಲಾಡ್ ಮಾತನಾಡಿ, 140 ಕೋಟಿ ಜನರಿಗೆ ಯಾರಿಗೆ ಅವಕಾಶ ಸಿಕ್ಕರೂ ಹೋಗ್ತಾರೆ. ಜಮೀರ್ ಅದೇ ಮನೋಭಾವದಲ್ಲಿ ಹೇಳ್ತಿದ್ದಾರೆ ಅಷ್ಟೆ ಎಂದರು. ಸೋಶಿಯಲ್ ಮೀಡಿಯಾದಲ್ಲಿ ಫೇಕ್ ವಿಡಿಯೋ ಹರಿದಾಡುತ್ತಿರೋ ಬಗ್ಗೆ ಪ್ರತಿಕ್ರಿಯಿಸಿ, ನೆಗೆಟಿವ್ ವಿಡಿಯೋಗಳನ್ನ ಯಾರೂ ಹಾಕಬೇಡಿ. ಸೇನೆ ಉತ್ತಮ ಕೆಲಸ ಮಾಡ್ತಿದೆ. ನಾವು ಸ್ವಲ್ಪ ಸಮಾಧಾನದಿಂದ ಇರಬೇಕು. ಇಂತಹ ಸುಳ್ಳು ವಿಡಿಯೋಗಳನ್ನ ಯಾರೂ ಹಂಚಿಕೊಳ್ಳಬೇಡಿ ಎಂದು ಮನವಿ ಮಾಡಿದರು.

Printed, Published & Owned by N.Venugopal Krishna, Printed at Dashapramathi Mudranalaya, No.45, 4th Cross, Srigandhadakaval, Bengaluru-560079.
Published at No.45, 4th Cross, Srigandhadakaval, Bengaluru-560079. Editor: N.Venugopal Krishna, Mobile No.+91 94835 89085,
email: sanjemugilu@gmail.com, RNI No.KARKAN/2002/08054